ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 21, ಸಂಚಿಕೆ: 268, ಪುಟಗಳು: 8, ಶನಿವಾರ, 6 ಜುಲೈ 2024 RNI NO. KARKAN/2002/08054
epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3




**ಸುಭಾಷಿತ**

ನೀವು ಒಬ್ಬರೇ ಇದ್ದಾಗ ಆಲೋಚನೆಗಳ ಮೇಲೆ ನಿಗಾ ಇರಲಿ. ಗುಂಪಿನಲ್ಲಿ ಇದ್ದಾಗ ಮಾತುಗಳ ಮೇಲೆ ನಿಗಾ ಇರಲಿ.

। ಅನಾಮಿಕ

**ಪಂಚಾಂಗ**

(ಶನಿವಾರ 6, ಜುಲೈ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಆಷಾಢ ಮಾಸ, ಶುಕ್ಲ ಪಕ್ಷ,
- ಪ್ರಥಮಿ, ಶನಿವಾರ,
- ಪುನರ್ವಸು ನಕ್ಷತ್ರ
- ರಾಹುಕಾಲ 09:16 ರಿಂದ 10:52
- ಗುಳಿಕಕಾಲ 06:03 ರಿಂದ 07:40
- ಯಮಗಂಡಕಾಲ 02:04 ರಿಂದ 03:40




# ರಾಜ್ಯಕ್ಕೆ ಹೊಸ ಉಸ್ತುವಾರಿ!

## ಕರ್ನಾಟಕಕ್ಕೆ ರಾಧ ಮೋಹನ್ ದಾಸ್ ಅಗರ್ವಾಲ್ ನೇಮಿಸಿದ ಬಿಜೆಪಿ

**ಬೆಂಗಳೂರು:** ಲೋಕಸಭಾ ಚುನಾವಣೆ ನಂತರ ಬಿಜೆಪಿ ಹೈಕಮಾಂಡ್ ರಾಜ್ಯ ಬಿಜೆಪಿಗೆ ನೂತನ ಉಸ್ತುವಾರಿಗಳ ನೇಮಕ ಮಾಡಲಾಗಿದೆ. ಈ ಮೊದಲು ಅರುಣ್ ಸಿಂಗ್ ರಾಜ್ಯದ ಬಿಜೆಪಿ ಉಸ್ತುವಾರಿಯಾಗಿದ್ದರು. ಇದೀಗ ಅವರ ಸ್ಥಾನಕ್ಕೆ ಉಸ್ತುವಾರಿಯಾಗಿ ರಾಧ ಮೋಹನ್ ದಾಸ್ ಅಗರ್ವಾಲ್‌ರನ್ನ ನೇಮಕ ಮಾಡಲಾಗಿದೆ. ಸಹ ಉಸ್ತುವಾರಿಯಾಗಿ ಸುಧಾಕರ್ ರೆಡ್ಡಿಯನ್ನ ನೇಮಕ ಮಾಡಲಾಗಿದೆ.

ಅರುಣ್ ಸಿಂಗ್ ವಿಧಾನಸಭಾ ಚುನಾವಣೆಯ ವೇಳೆ ರಾಜ್ಯದಲ್ಲಿ ಉಸ್ತುವಾರಿ ವಹಿಸಿಕೊಂಡಿದ್ದರು. ಆದರೆ ಬಿಜೆಪಿ ಹೀನಾಯ ಪ್ರದರ್ಶನ ತೋರಿ ಅಧಿಕಾರ ಕಳೆದುಕೊಂಡಿತ್ತು. ಆದರೆ ಲೋಕಸಭಾ ಚುನಾವಣೆ ವೇಳೆ ಚುನಾವಣಾ ಉಸ್ತುವಾರಿಯಾಗಿ ಬಿಜೆಪಿ ರಾಧಾ ಮೋಹನ್ ದಾಸ್ ಅಗರ್ವಾಲ್‌ರನ್ನ ನೇಮಕ ಮಾಡಿತ್ತು. ಚುನಾವಣೆಯಲ್ಲಿ ಉತ್ತಮ ರೀತಿ ಕೆಲಸ ಮಾಡಿದ್ದ ರಾಧಾಮೋಹನ್‌ರನ್ನ ಇದೀಗ ಕರ್ನಾಟಕದ ಬಿಜೆಪಿ ಉಸ್ತುವಾರಿಯಾಗಿ ನೇಮಕ ಮಾಡಲಾಗಿದೆ. ರಾಜ್ಯದ ನಿರ್ಮಲ್ ಕುಮಾರ್ ಸುರಾನಾಗೆ ಪುದುಚೇರಿ ಜವಾಬ್ದಾರಿ ನೀಡಲಾಗಿದೆ.

**23 ರಾಜ್ಯಗಳಿಗೆ ನೂತನ ಉಸ್ತುವಾರಿ:** ಇಷ್ಟೇ ಅಲ್ಲದೆ ಹರಿಯಾಣ, ಉತ್ತರಾಖಂಡ, ಮಧ್ಯಪ್ರದೇಶ ಮತ್ತು ಒಡಿಶಾದಂತಹ ದೊಡ್ಡ ರಾಜ್ಯಗಳು ಸೇರಿದಂತೆ ದೇಶದಾದ್ಯಂತ 23 ರಾಜ್ಯಗಳು ಮತ್ತು ಕೇಂದ್ರಾಡಳಿತ



ಪ್ರದೇಶಗಳಲ್ಲಿ ಬಿಜೆಪಿ ತನ್ನ ಉಸ್ತುವಾರಿ ಮತ್ತು ಸಹ-ಪ್ರಭಾರಿಗಳನ್ನು ಘೋಷಿಸಿದೆ. ಇತ್ತೀಚೆಗಷ್ಟೇ ಸಂಸದರಾದ ಸಂಬಿತ್ ಪಾತ್ರ ಅವರಿಗೂ ಇದರಲ್ಲಿ ದೊಡ್ಡ ಜವಾಬ್ದಾರಿ ಸಿಕ್ಕಿದ್ದು, ಈಶಾನ್ಯ ರಾಜ್ಯಗಳ ಸಂಯೋಜಕರನ್ನಾಗಿ ಮಾಡಲಾಗಿದೆ. ಬಿಜೆಪಿ ಉಸ್ತುವಾರಿ ಘೋಷಿಸಿರುವ ಪ್ರಮುಖ ರಾಜ್ಯಗಳ ಪೈಕಿ ಬಿಹಾರದಲ್ಲಿ ವಿನೋದ್ ತಾವ್ಡೆ ಅವರಿಗೆ ಜವಾಬ್ದಾರಿ ನೀಡಲಾಗಿದೆ. ಇವರೊಂದಿಗೆ ಸಂಸದರೂ ಆಗಿರುವ ದೀಪಕ್ ಪ್ರಕಾಶ್ ಸಹ ಪ್ರಭಾರಿಯಾಗಿ ಇರುತ್ತಾರೆ.

**ಕೇಂದ್ರಾಡಳಿತ ಪ್ರದೇಶಗಳ ಜವಾಬ್ದಾರಿ ಯಾರಿಗೆ?:** ವಿನೋದ್ ತಾವ್ಡೆ ಪ್ರಸ್ತುತ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿದ್ದಾರೆ. ಶಾಸಕ ಅಶೋಕ್ ಸಿಂಘಾಲ್ ಅವರನ್ನು ಅರುಣಾಚಲ ಪ್ರದೇಶದ ಉಸ್ತುವಾರಿಯನ್ನಾಗಿ ಮಾಡಲಾಗಿದೆ. ಇದಲ್ಲದೆ ರಘುನಾಥ್ ಕುಲಕರ್ಣಿ ಅವರನ್ನು ಅಂಡಮಾನ್ ಮತ್ತು ನಿಕೋಬಾರ್ ಉಸ್ತುವಾರಿಯನ್ನಾಗಿ ಮಾಡಲಾಗಿದೆ. ಶಾಸಕ ನಿತಿನ್ ನಬಿನ್ ಅವರನ್ನು ಛತ್ತೀಸ್‌ಗಢ ಉಸ್ತುವಾರಿಯನ್ನಾಗಿ ಮಾಡಲಾಗಿದೆ. ದುಷ್ಯಂತ್ ಪಟೇಲ್ ಅವರನ್ನು ದಾದ್ರಾ ಮತ್ತು ನಗರ ಹವೇಲಿಯ ಉಸ್ತುವಾರಿಯನ್ನಾಗಿ ಮಾಡಲಾಗಿದೆ. ಆಶಿಶ್ ಸೂದ್‌ಗೆ ಗೋವಾದ ಜವಾಬ್ದಾರಿ ಸಿಕ್ಕಿದೆ.

ಡಾ.ಸತೀಶ್ ಪೂನಿಯಾ ಅವರನ್ನು ಹರಿಯಾಣದಲ್ಲಿ ಉಸ್ತುವಾರಿಯನ್ನಾಗಿ ಮಾಡಲಾಗಿದೆ. ಸುರೇಂದ್ರ ಸಿಂಗ್ ನಗರ್ ಸಹ ಉಸ್ತುವಾರಿಯಾಗಿ ಜವಾಬ್ದಾರಿ ವಹಿಸಿಕೊಂಡಿದ್ದಾರೆ. ಅವರು ರಾಜ್ಯಸಭಾ ಸಂಸದರೂ ಆಗಿದ್ದಾರೆ. ಶ್ರೀಕಾಂತ್ ಶರ್ಮಾ ಅವರನ್ನು ಹಿಮಾಚಲ ಪ್ರದೇಶದ ಉಸ್ತುವಾರಿಯನ್ನಾಗಿ ಮಾಡಲಾಗಿದ್ದು, ಸಂಜಯ್ ಟಂಡನ್ ಅವರೊಂದಿಗೆ ಸಹ-ಪ್ರಭಾರಿಯಾಗಿ ಇರಲಿದ್ದಾರೆ. ತರುಣ್ ಚುಗ್ ಜಮ್ಮು ಮತ್ತು ಕಾಶ್ಮೀರದಲ್ಲಿ ಉಸ್ತುವಾರಿ ವಹಿಸಲಿದ್ದು, ಆಶಿಶ್ ಸೂದ್ ಅವರೊಂದಿಗೆ ಸಹ-ಪ್ರಭಾರಿಯಾಗಿದ್ದಾರೆ.

## ರಾಹುಲ್ ಗಾಂಧಿ ಇಂದು ಗುಜರಾತ್‌ಗೆ ಪ್ರವಾಸ

**ನವದೆಹಲಿ:** ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಸಂಸದ ರಾಹುಲ್ ಗಾಂಧಿ ಇಂದು (ಶನಿವಾರ) ಗುಜರಾತ್‌ನ ಅಹಮದಾಬಾದ್‌ಗೆ ಭೇಟಿ ನೀಡಲಿದ್ದಾರೆ. ಅಲ್ಲಿ ಅವರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಲಿದ್ದು, ಗುಜರಾತ್‌ನಲ್ಲಿ ಇತ್ತೀಚಿನ ದುರಂತಗಳಿಂದ ಸಂತ್ರಸ್ತರ ಕುಟುಂಬಗಳನ್ನು ಭೇಟಿ ಮಾಡಲಿದ್ದಾರೆ.

ಗುಜರಾತ್ ಪ್ರವಾಸದ ಸಮಯದಲ್ಲಿ ರಾಹುಲ್ ಗಾಂಧಿ ರಾಜ್‌ಕೋಟ್ ಗೇಮ್ ಝೋನ್ ಬೆಂಕಿ ದುರಂತ, ವಡೋದರಾದ ದೋಣಿ ಮುಳುಗುವಿಕೆ ಮತ್ತು ಮೋರ್ಬಿ ಸೇತುವೆ ಕುಸಿತ ಸೇರಿದಂತೆ ವಿವಿಧ ಘಟನೆಗಳಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ಸಂತಾಪ ಸೂಚಿಸಲಿದ್ದಾರೆ.



ಗುಜರಾತ್ ಕಾಂಗ್ರೆಸ್ ಅಧ್ಯಕ್ಷ ಶಕ್ತಿಸಿನ್ಹ್ ಗೋಹಿಲ್ ಅವರು ರಾಹುಲ್ ಗಾಂಧಿಯ ಪ್ರವಾಸವನ್ನು ದೃಢಪಡಿಸಿದ್ದಾರೆ. "ರಾಹುಲ್ ಗಾಂಧಿಯವರು ಶನಿವಾರ ಮಧ್ಯಾಹ್ನ 12.30ರ ಸುಮಾರಿಗೆ ಜಿಪಿಸಿಸಿ ಕಚೇರಿಗೆ ಆಗಮಿಸುತ್ತಾರೆ.

ಪುಟ 2

**ಸಂಕ್ಷಿಪ್ತ ಸುದ್ದಿ**

## ರಾಜಕಾಲುವೆಗೆ ಬಿದ್ದು ಕೊಚ್ಚಿಕೊಂಡು ಹೋದ ಬೈಕ್ ಸವಾರ




**ಬೆಂಗಳೂರು:** ವೇಗವಾಗಿ ಬೈಕ್ ಚಲಾಯಿಸಿದ ಸವಾರರೊಬ್ಬರು ರಾಜಕಾಲುವೆ ಪಾಲಾದ ಘಟನೆ ಕೆಂಗೇರಿಯಲ್ಲಿ ನಡೆದಿದೆ. ಮೋರಿಗೆ ಬಿದ್ದು ನಾಪತ್ತೆಯಾಗಿರುವ ಬೈಕ್ ಸವಾರನನ್ನು ಬ್ಯಾಟರಾಯನಪುರದ ಹೇಮಂತ ಕುಮಾರ್ (27) ಎಂದು ಗುರುತಿಸಲಾಗಿದೆ. ಕೆಲಸ ಮುಗಿಸಿ ಮನೆಗೆ ತೆರಳುತ್ತಿದ್ದಾಗ ರಾತ್ರಿ ಸುಮಾರು 10:30ಕ್ಕೆ ಈ ದುರ್ಘಟನೆ ನಡೆದಿದೆ. ಜ್ಞಾನ ಭಾರತಿ ಮೆಟ್ರೋ ಸ್ಟೇಷನ್ ಬಳಿ ವೇಗವಾಗಿ ಬೈಕ್ ಚಲಾಯಿಸಿದ್ದರಿಂದ, ಬೈಕ್ ಡಿವೈಡರ್‌ಗೆ ಗುದ್ದಿದ ಪರಿಣಾಮ ಸವಾರ ಚಿಮ್ಮಿ ರಾಜಕಾಲುವೆ ಒಳಗೆ ಬಿದ್ದಿದ್ದಾರೆ. ಸಣ್ಣದಾಗಿ ಮಳೆ ಬರುತ್ತಿದ್ದುದರಿಂದ ಡಿವೈಡರ್ ಗುರುತಿಸಲು ಸಾಧ್ಯವಾಗಿರಲಿಕ್ಕಿಲ್ಲ.

ಪುಟ 2

## ಸ್ಪೈಸ್ ಜೆಟ್ ಏರ್ ಲೈನ್ಸ್ ಎಡವಟ್ಟು ಪ್ರಯಾಣಿಕರು 12 ಗಂಟೆ ವಿಮಾನದಲ್ಲೇ ಲಾಕ್



**ಬೆಂಗಳೂರು:** ಸ್ಪೈಸ್ ಜೆಟ್ ಏರ್‌ಲೈನ್ಸ್ ಸಿಬ್ಬಂದಿಯ ಎಡವಟ್ಟಿನಿಂದಾಗಿ ಟೇಕಾಫ್ ಆಗದ ವಿಮಾನದಲ್ಲೇ ಪ್ರಯಾಣಿಕರು ಲಾಕ್ ಆದ ಪ್ರಸಂಗ ನಡೆದಿದೆ. ಫ್ಲೈಟ್‌ನಲ್ಲೇ 100ಕ್ಕೂ ಹೆಚ್ಚು ಪ್ರಯಾಣಿಕರು ಲಾಕ್ ಆಗಿದ್ದಾರೆ. ಹೀಗಾಗಿ ಪ್ರಯಾಣಿಕರು ಆತಂಕಗೊಂಡಿದ್ದು, ಹೈಜಾಕ್ ಮಾಡಿ ಕೂರಿಸಿದ್ದಾರೆಂದು ಆರೋಪಿಸಿದರು. ಶುಕ್ರವಾರ ಸಂಜೆ 7

ಪುಟ 2

### ಕೋಟಿ ಮೌಲ್ಯದ ಕಾರಿಗಾಗಿ ಪವಿತ್ರಾ ಮುನಿಸು

## ಕೋಪ ಶಮನಕ್ಕೆ ಆಯ್ತಾ ಸ್ವಾಮಿ ಮರ್ಡರ್?

**ಬೆಂಗಳೂರು:** ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕಿಡ್ನಾಪ್ ಹಾಗೂ ಕೊಲೆ ಪ್ರಕರಣಕ್ಕೆ ದಿನಕ್ಕೊಂದು ಟ್ವಿಸ್ಟ್ ಸಿಗುತ್ತಿದೆ. ಇದೀಗ ಆಪ್ತೆ ಪವಿತ್ರಾ ಗೌಡ ಅವರ ಮುನಿಸು ಶಮನ ಮಾಡಲು ರೇಣುಕಾಸ್ವಾಮಿ ಹತ್ಯೆ ನಡೆಯಿತಾ ಎಂಬ ಅನುಮಾನವೊಂದು ಎದ್ದಿದೆ.

ಸಣ್ಣ ವಿಚಾರವೊಂದಕ್ಕೆ ನಟ ದರ್ಶನ್ ಜೊತೆ ಆರೋಪಿ ಪವಿತ್ರಾ ಗೌಡ ಇತ್ತೀಚೆಗೆ ಮುನಿಸಿಕೊಂಡಿದ್ದರಂತೆ. ಕೋಟಿ ಮೌಲ್ಯದ ಕಾರು ಕೊಡಿಸುವ ವಿಚಾರವಾಗಿ ದರ್ಶನ್ ಹಾಗೂ ಪವಿತ್ರಾ ಗೌಡ ನಡುವೆ ಮನಸ್ತಾಪವಾಗಿದ್ದ ವಿಚಾರವೊಂದು ಬಯಲಾಗಿದೆ.

ಪುಟ 2



### ಚಾರ್ಮಾಡಿ ಘಾಟ್‌ನ ಐದಾರು ಕಡೆ ಭೂಮಿ ಬಿರುಕು

## ಆತಂಕದಲ್ಲಿ ಚಿಕ್ಕಮಗಳೂರು ಜನತೆ

**ಚಿಕ್ಕಮಗಳೂರು:** ಜಿಲ್ಲೆಯ ಮೂಡಿಗೆರೆ ತಾಲೂಕಿನ ಚಾರ್ಮಾಡಿ ಘಾಟಿಗೆ ಆಯಸ್ಸು ಇದೆಯೋ ಅಥವಾ ಇಲ್ಲವೋ ಎಂಬ ಅನುಮಾನ ದಟ್ಟವಾಗಿ ಕಾಡುತ್ತಿದೆ. ಯಾಕೆಂದರೆ ಮುಂಗಾರು ಮಳೆ ಇಡೀ ಮಲೆನಾಡಿಗೆ ಕೈಕೊಟ್ಟಿದ್ದರು ಕೂಡ ಚಾರ್ಮಾಡಿ ಘಾಟಿಯಲ್ಲಿ ಮಳೆಗೆ ಕೊರತೆ ಉಂಟಾಗಿರಲಿಲ್ಲ. ಅದರಲ್ಲೂ ಕಳೆದ 15 ದಿನಗಳಿಂದ ಚಾರ್ಮಾಡಿ ಘಾಟಿಯಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಚಾರ್ಮಾಡಿ ಘಾಟಿಯಲ್ಲಿ ಐದಾರು ಕಡೆ ಭೂಮಿ



ಬಾಯ್ಬಿಟ್ಟಿದ್ದು ರಸ್ತೆಯ ತಡೆಗೋಡೆಗಳು ಕೂಡ ಬಿರುಕು ಬಿಟ್ಟಿವೆ.

ಪುಟ 2

# ಮಹದಾಯಿ ಯೋಜನೆಗೆ ಗೋವಾ ಸರ್ಕಾರದಿಂದ ಮತ್ತೆ ಕ್ಯಾತೆ

**ಬೆಳಗಾವಿ:** ಕರ್ನಾಟಕ, ಗೋವಾ, ಮಹಾರಾಷ್ಟ್ರ ರಾಜ್ಯಗಳ ಮಧ್ಯೆ ಇರುವ ಜಲ ವಿವಾದ ಮಹದಾಯಿ ಯೋಜನೆ. ಸದ್ಯ ಈಗ ಮಹದಾಯಿ ಯೋಜನೆಗೆ ಗೋವಾ ಸರ್ಕಾರ ಮತ್ತೆ ಕ್ಯಾತೆ ತೆಗೆದಿದೆ. ಕೇಂದ್ರ ಸರ್ಕಾರದ ಮೇಲೆ ಗೋವಾ ಸಿಎಂ ಪ್ರಮೋದ್ ಸಾವಂತ ಒತ್ತಡ ಹಾಕಿದ್ದಾರೆ. ಗೋವಾ ಸರ್ಕಾರದ ಒತ್ತಡಕ್ಕೆ ಮಣಿದು ಕೇಂದ್ರ ಸರ್ಕಾರ 'ಮಹದಾಯಿ ಪ್ರವಾಹ' ತಂಡ ರಚಿಸಿದ್ದು ಈ ಬಗ್ಗೆ ಗೋವಾ ಸಿಎಂ ಪ್ರಮೋದ್ ಸಾವಂತ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

ಗೋವಾ ಸರ್ಕಾರದ ಒತ್ತಡದಿಂದ ಮಹದಾಯಿ ಪ್ರವಾಹ ತಂಡ ಕಣಕುಂಬಿಗೆ ಭೇಟಿ ಕೊಡ್ತಿದೆ ಎಂದು ಗೋವಾ ಸಿಎಂ ಪೋಸ್ಟ್ ಹಾಕಿದ್ದಾರೆ. ನಾಳೆ ಬೆಳಗಾವಿ ಜಿಲ್ಲೆ ಖಾನಾಪುರ ತಾಲೂಕಿನ ಕಣಕುಂಬಿಯ ಮಹದಾಯಿ ಜಲನಯನ ಪ್ರದೇಶಕ್ಕೆ ಕೇಂದ್ರದ



ಅಧಿಕಾರಿಗಳ ತಂಡ ಭೇಟಿ ನೀಡಲಿದೆ. ಸದ್ಯದ ವಸ್ತು ಸ್ಥಿತಿ, ನೀರು ಹರಿದು ಎಲ್ಲಿಗೆ ಹೋಗ್ತಿದೆ ಎಂದು ಪರಿಶೀಲನೆ ನಡೆಸಲಿದೆ.

ಮಹದಾಯಿ ಯೋಜನೆ ಅನುಷ್ಠಾನಕ್ಕಾಗಿ ಸಿಎಂ ಸಿದ್ದರಾಮಯ್ಯ, ಸಚಿವರು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕಿದ್ದರು. ಆದಷ್ಟು ಬೇಗ ಪರಿಸರ ಇಲಾಖೆಯಿಂದ ಅನುಮತಿ ಕೊಡಿಸುವಂತೆ ಒತ್ತಾಯಿಸಿದ್ದು.

ಪುಟ 2



## ನೀಟ್–ಪಿಜಿ ಪರೀಕ್ಷೆಗೆ ದಿನಾಂಕ ನಿಗದಿ

**ನವದೆಹಲಿ:** ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಅಕ್ರಮ ಆರೋಪ ವಿವಾದದ ಕಾರಣ ಮುಂದೂಡಲ್ಪಟ್ಟಿದ್ದ ನೀಟ್–ಪಿಜಿ ಪರೀಕ್ಷೆಗೆ ಕೊನೆಗೂ ದಿನಾಂಕ ನಿಗದಿಪಡಿಸಲಾಗಿದೆ.

ಮುಂದಿನ ತಿಂಗಳು ಆಗಸ್ಟ್ 11 ರಂದು ಪರೀಕ್ಷೆ ನಡೆಯಲಿದೆ. ಎರಡು ಹಂತದಲ್ಲಿ ಪರೀಕ್ಷೆಯನ್ನು ಆಯೋಜಿಸಲಾಗಿದೆ. ಈ ಮೊದಲು ಜೂ.23 ರಂದು ಪರೀಕ್ಷೆ ನಡೆಯಬೇಕಿತ್ತು. ಅಕ್ರಮದ ಮುನ್ಸೂಚನೆ ಸಿಕ್ಕ ಹಿನ್ನೆಲೆ ಮುಂದೂಡಲಾಗಿತ್ತು. ನ್ಯಾಷನಲ್ ಬೋರ್ಡ್ ಆಫ್ ಎಕ್ಸಾಮಿನೇಷನ್ಸ್ ಶುಕ್ರವಾರ ಹೊಸ ದಿನಾಂಕವನ್ನು ಪ್ರಕಟಿಸಿದೆ. ಪರೀಕ್ಷಾ ಅಕ್ರಮಗಳ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವಾಲಯದ ಅಧಿಕಾರಿಗಳು, ಸರ್ಕಾರದ ಸೈಬರ್ ಅಪರಾಧ ವಿರೋಧಿ ಸಂಸ್ಥೆಯನ್ನು ಭೇಟಿ ಮಾಡಿದ ಕೆಲವು ದಿನಗಳ ನಂತರ ಹೊಸ ದಿನಾಂಕದ ಘೋಷಣೆ ಬಂದಿದೆ.




ನೀಟ್–ಪಿಜಿ ಪ್ರಕ್ರಿಯೆಯ ದೃಢತೆಯ ಸಂಪೂರ್ಣ ಮೌಲ್ಯಮಾಪನವನ್ನು ಕೈಗೊಳ್ಳುವುದಾಗಿ ಸರ್ಕಾರ ಹೇಳಿತ್ತು. ಪರೀಕ್ಷೆಗೆ ಎರಡು ಗಂಟೆಗಳ ಮೊದಲು ಪ್ರಶ್ನೆ ಪತ್ರಿಕೆ ಸಿದ್ಧಪಡಿಸುವುದು ಎಂದು ಸಭೆ ನಡೆಸಿ ಸೂಚಿಸಲಾಗಿತ್ತು.

ದೇಶಾದ್ಯಂತ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಾತಿಗಾಗಿ ಎಂಬಿಬಿಎಸ್ ಪದವಿ ಹೊಂದಿರುವವರ ಅರ್ಹತೆಯನ್ನು ನಿರ್ಣಯಿಸಲು NEET-PG ಅನ್ನು ನಡೆಸಲಾಗುತ್ತದೆ.

## ಎಲ್ಲೆಂದರಲ್ಲಿ ಕಸ ಬಿಸಾಡಿದ್ರೆ 500ರೂ. ದಂಡ

**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಡೆಂಗ್ಯೂ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಗ್ಯಾರಂಟಿ ಸರ್ಕಾರದಿಂದ ಮತ್ತೊಂದು ದಂಡ ಪ್ರಯೋಗ ಮಾಡಲಾಗಿದೆ. ಈ ಸಂಬಂಧ ಸುದ್ದಿಗಾರರೊಂದಿಗೆ ಮಾತನಾಡಿದ ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್, ಎಲ್ಲೆಂದರಲ್ಲಿ ಕಸ ಬಿಸಾಡುವವರಿಗೆ ದಂಡ ಪ್ರಯೋಗ ಮಾಡಲಾಗುತ್ತದೆ. ಎಲ್ಲೆಂದರಲ್ಲಿ ಕಸ ಮತ್ತು ಸ್ವಚ್ಛತೆ ಕಾಪಾಡದವರಿಗೆ ದಂಡದ ಮೊತ್ತ 50 ರೂ. ನಿಂದ 500 ರೂ. ವರೆಗೆ ಏರಿಕೆ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು. ಈ ಕುರಿತು ಆರೋಗ್ಯ ಇಲಾಖೆ ಸದ್ಯದಲ್ಲೇ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳಿಗೂ ಆದೇಶ ಹೊರಡಿಸಲಿದೆ. ನಿನ್ನೆ ಆರೋಗ್ಯ ಸಚಿವರ ಸಮ್ಮುಖದಲ್ಲಿ ನಡೆದ ಸಭೆಯಲ್ಲಿ ನಿರ್ಧಾರ ಮಾಡಲಾಗಿದೆ ಎಂದರು. ಸ್ವಚ್ಛತೆ ಬಗ್ಗೆ ಅರಿವು ಮೂಡಿಸಲಾಗಿದೆ. ನಾಲ್ಕೈದು ದಿನಗಳಿಗೆ ನೀರು ಬದಲಾಯಿಸಬೇಕು. ರೈಟ್ ಅಪ್ ಕೊಡಿ ಅಂದಿದ್ದಾರೆ. ಆರ್‌ಡಬ್ಲ್ಯೂಎಸ್‌ಗೆ ಸಾಫ್ಟ್ ಕಾಪಿ ಕಳುಹಿಸಿದ್ದೀವಿ. ಆಶಾ ಕಾರ್ಯಕರ್ತರು ಬಂದಾಗ ಆರ್ ಡಬ್ಲ್ಯೂಡಿ ಅಂದರೆ ಅಪಾರ್ಟ್‌ಮೆಂಟ್ ನಿವಾಸಿಗಳು ಸ್ಪಂದಿಸಬೇಕು ಎಂದು ಹೇಳಿದರು.



# ವಿಶ್ವನಾಥ್, ಪುತ್ರ ನನ್ನ ಮನೆಗೆ ಸೈಟ್ ಕೇಳೋಕೆ ಬಂದಿದ್ದ ಫೋಟೋ ಇದೆ

**ಚಾಮರಾಜನಗರ:** ಯಾರ್ರೀ ಅವನು ವಿಶ್ವನಾಥ್, ರಿಯಲ್ ಎಸ್ಟೇಟ್ ಒಂದು ಉದ್ಯಮ ಅಲ್ವಾ? ಅವ್ನು, ಅವನ ಮಗ ನನ್ನ ಮನೆಗೆ ಸೈಟು ಕೇಳಿಕೊಂಡು ಬಂದಿದ್ದ ಫೋಟೋ ಇದೆ. ಅವನು ಏಕವಚನ ಬಳಸಿದ್ರೆ, ನನಗೂ ಅದರಪ್ಪನಂಗೆ ಮಾತಾಡೋಕೆ ಬರುತ್ತೆ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ವಿಧಾನ ಪರಿಷತ್ ಸದಸ್ಯ ಹೆಚ್. ವಿಶ್ವನಾಥ್ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ.

ಚಾಮರಾಜನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭೈರತಿ ಸುರೇಶ್ ಒಬ್ಬ ರಿಯಲ್ ಎಸ್ಟೇಟ್ ಗಿರಾಕಿ ಎಂಬ ವಿಶ್ವನಾಥ್ ಹೇಳಿಕೆಗೆ ತಿರುಗೇಟು ನೀಡಿದ್ದಾರೆ. ಯಾರ್ರೀ ಅವನು ವಿಶ್ವನಾಥ್, ರಿಯಲ್ ಎಸ್ಟೇಟ್ ಒಂದು ಉದ್ಯಮ ಅಲ್ವಾ? ಅವನು ಮತ್ತು ಅವನ ಮಗ ನನ್ನ ಮನೆಗೆ ಸೈಟ್ ಕೇಳೋಕೆ ಬಂದಿದ್ದ ಫೋಟೊ ಇದೆ. ಅವನು ಏಕವಚನ ಬಳಸಿದ್ರೆ ನಾನೂ ಅದಕ್ಕಿಂತ ಹೆಚ್ಚಿಗೆ ಮಾತನಾಡೋಕೆ ಬರುತ್ತೆ. ನಾನು ಹಳ್ಳಿಯಲ್ಲೇ ಹುಟ್ಟಿ ಬೆಳೆದಿರೋದು, ಅದರಪ್ಪನಂಗೆ ಮಾತಾಡ್ತಾನಿ. ಮೊದಲು ಮರ್ಯಾದೆ ಕೊಟ್ಟು, ಮರ್ಯಾದೆ ತೆಗೆದುಕೊಳ್ಳಲಿ. ವಿಶ್ವನಾಥ್ ತರ ನಾನು ರೋಲ್ ಕಾಲ್ ಗಿರಾಕಿ ಅಲ್ಲ. ವಯಸ್ಸಾಗಿದೆ ಅಂತ ಅಷ್ಟೇ ಬೆಲೆ ಕೊಡ್ತೀವಿ ಅದನ್ನ ಉಳಿಸಿ ಕೊಳ್ಳಲಿ ಎಂದು ಎಚ್ಚರಿಕೆ ನೀಡಿದ್ದಾರೆ.



ಮೈಸೂರು ಮುಡಾ ಹಗರಣ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಹಗರಣ ಇದ್ದರೆ ತಾನೇ ಆಚೆಗೆ ಬರೋದು. ಯಾವ ಹಗರಣವೂ ನಡೆದಿಲ್ಲ. ಇನ್ನೂ ಹಗರಣ ಅಂತ ಸಾಬೀತಾಗಿಲ್ಲ. ಸೈಟ್‌ಗಳನ್ನು ಏಜೆಂಟ್, ರೈತರು, ಮಧ್ಯವರ್ತಿಗಳಿಗೆ ಕೊಟ್ಟಿದ್ದಾರಾ ಅಂತ ಗೊತ್ತಾಗಿಲ್ಲ ಎಂದು ಹೇಳಿದ್ದಾರೆ.

ಇನ್ನೂ ಮುಡಾ ಹಗರಣ ಸಿಬಿಐ ತನಿಖೆಗೆ ಒತ್ತಾಯ ವಿಚಾರಕ್ಕೆ ಪ್ರತಿಕ್ರಿಯಿಸಿ, ನಮ್ಮ ರಾಜ್ಯದಲ್ಲಿ ಪೊಲೀಸ್ ಇಲ್ವಾ? ನಮ್ಮಲ್ಲಿ ಅಧಿಕಾರಿಗಳಿಲ್ವಾ? ಹಗರಣ ನಡೆದಿದ್ರೆ ತಾನೇ ಸಿಬಿಐಗೆ ಕೊಡೋದು. ಬಿಜೆಪಿಯವರು ಏನ್ ಮಹಾ, ಎಷ್ಟು ತನಿಖೆಯನ್ನ ಸಿಬಿಐಗೆ ಕೊಟ್ಟಿದ್ದಾರೆ? ನಮ್ಮಲ್ಲೇ ಅಧಿಕಾರಿಗಳಿಲ್ವಾ? ಇಬ್ಬರು ಐಎಎಸ್ ಅಧಿಕಾರಿಗಳು ತನಿಖೆ ಮಾಡ್ತಿದ್ದಾರೆ. ತನಿಖೆ ಬಳಿಕ ಸತ್ಯಾಂಶ ಹೊರಬರಲಿದೆ. ಬಿಜೆಪಿ, ಜೆಡಿಎಸ್ ನವರು ಹೇಳ್ತಾರೆ ಅಂತ ಎಲ್ಲವನ್ನೂ ಸಿಬಿಐ ತನಿಖೆಗೆ ಕೊಡೋಕಾಗುತ್ತಾ? ಎಂದು ಪ್ರಶ್ನೆ ಮಾಡಿದ್ದಾರೆ.

## ಮಠಕ್ಕೆ ನುಗ್ಗಿ ಶ್ರೀಗಳಿಗೆ ಬೆದರಿಕೆ: ದರೋಡೆ



**ರಾಯಚೂರು:** ಲಿಂಗಸುಗೂರು ಪಟ್ಟಣದ ಶ್ರೀ ವಿಜಯ ಮಹಾಂತೇಶ್ವರ ಶಾಖಾ ಮಠದ ಪೀಠಾದಿಪತಿಗಳನ್ನು ಹೆದರಿಸಿ, ದರೋಡೆ ಮಾಡಲಾಗಿದೆ. ಗುರುವಾರ ಮಧ್ಯರಾತ್ರಿ ಡಕಾಯಿತಿರ ಗ್ಯಾಂಗ್ ಭಕ್ತರ ಸೋಗಿನಲ್ಲಿ ಮಠಕ್ಕೆ ಬಂದಿದೆ. ಮಠದಲ್ಲಿದ್ದ ಒಬ್ಬರೇ ಇದ್ದ ಸಿದ್ದಲಿಂಗ ಸ್ವಾಮೀಜಿಯವರನ್ನು ದುಷ್ಕರ್ಮಿಗಳು ಎಬ್ಬಿಸಿದ್ದಾರೆ. ಬಳಿಕ ಸಿದ್ದಲಿಂಗ ಸ್ವಾಮೀಜಿಯವರಿಗೆ ದುಷ್ಕರ್ಮಿಗಳು ಬೆದರಿಕೆ ಹಾಕಿದ್ದಾರೆ.

ನಂತರ ಮಠದಲ್ಲಿದ್ದ ಸುಮಾರು 80 ಗ್ರಾಂ ತೂಕದ ಚಿನ್ನ ಹಾಗೂ 7 ಕೆಜಿ ಬೆಳ್ಳಿ ಆಭರಣಗಳು, ಸುಮಾರು 20 ಲಕ್ಷ ನಗದು ಸೇರಿದಂತೆ 35 ಲಕ್ಷ ಮೌಲ್ಯದ ಬೆಲೆ ಬಾಳುವ ವಸ್ತುಗಳನ್ನು ದೋಚಿ ಪರಾರಿಯಾಗಿದ್ದಾರೆ. ಸಿದ್ದಲಿಂಗ ಸ್ವಾಮೀಜಿ ಪೊಲೀಸರಿಗೆ ದೂರು ನೀಡಿದ್ದಾರೆ.

ಪೊಲೀಸ್ ಇನ್‌ಸ್ಪೆಕ್ಟರ್ ಪುಂಡಲಿಕ್ ಪಟತ್ತರ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ್ದಾರೆ. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹರೀಶಬಾಬು, ಡಿವೈಎಸ್‌ಪಿ ದತ್ತಾತ್ರೇಯ ಕಾರ್ನಾಡ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

## ಭೈರತಿ ಸುರೇಶ್ ಒಬ್ಬ ರಿಯಲ್ ಎಸ್ಟೇಟ್ ಗಿರಾಕಿ, ಬರೀ ಬೊಗಳೆ ಬಿಡ್ತಾನೆ

**ಮೈಸೂರು:** ಭೈರತಿ ಸುರೇಶ್ ಒಬ್ಬ ರಿಯಲ್ ಎಸ್ಟೇಟ್ ಗಿರಾಕಿ ಎಂದು ವಿಧಾನ ಪರಿಷತ್ ಸದಸ್ಯ ಹೆಚ್ ವಿಶ್ವನಾಥ್ ಗಂಭೀರ ಆರೋಪ ಮಾಡಿದ್ದಾರೆ.



ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಸೈಟ್ ಹಗರಣಕ್ಕೆಸಂಬಂಧಿಸಿದಂತೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಹೆಲಿಕಾಪ್ಟರ್‌ನಲ್ಲಿ ಬಂದು ಪೊಲೀಸ್ ಭದ್ರತೆಯಲ್ಲಿ ಸಭೆ ಮಾಡಿ ಹೋಗ್ತಾನೆ. ಸಭೆಯ ಬಳಿಕ ಅದು ಕ್ಯಾನ್ಸಲ್ ಮಾಡಿದ್ದೀನಿ. ಅದು ಮಾಡಿದ್ದೀನಿ, ಇದು ಮಾಡಿದ್ದೀನಿ ಎಂದು ಹೇಳ್ತಾನೆ. ಒಂದಕ್ಕಾದ್ರೂ ಆದೇಶ ಬಂದಿದ್ಯಾ? ಬರಿ ಬೊಗಳೆ ಬಿಡ್ತಾನೆ ಎಂದು ಏಕವಚನದಲ್ಲೇ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ವಿರುದ್ಧ ವಾಗ್ದಾಳಿ ನಡೆಸಿದರು.

ಹೇ ನೀನು ಯಾವನಲೇ? ನೀನು ದಡ್ಡನೋ ಬುದ್ದಿವಂತನಾ? ನಾನು ಏಳು ಸೈಟ್ ಕೇಳಿದ್ದೇನೆ ಅಂತೀಯಲ್ಲ. ಇವ್ನುಯಾವನ್ರೀ ಭೈರತಿ ಎಂದು ಆಕ್ರೋಶ ಹೊರ ಹಾಕಿದರು.

ನಾನು ಪ್ರಾಮಾಣಿಕ ಅಂತಾ ವಿಧಾನಸೌಧದ ಒಳಗೆ ಹೇಳಿದ್ದಿನಿ. ಚೇಂಜ್ ಆಫ್ ಲ್ಯಾಂಡ್‌ಗೆ ಐದು ಲಕ್ಷ ಫಿಕ್ಸ್ ಮಾಡಿದ್ದಾನೆ ಈ ಭೈರತಿ ಸುರೇಶ್ ಎಂದು ಕಿಡಿಕಾರಿದರು.

ಹೆಚ್ ವಿಶ್ವನಾಥ್ ಮೈಸೂರಿನ ಪ್ರಜೆಯಾಗಿದ್ದಾರೆ ಜೊತೆ ಪರಿಷತ್ ಸದಸ್ಯರೂ ಆಗಿದ್ದಾರೆ. ಹೀಗಾಗಿ ಅವರು ಮುಡಾದಲ್ಲಿ ಸದಸ್ಯರಾಗಿದ್ದಾರೆ. ಈ ಮುಡಾದ ಸದಸ್ಯರೇ ಸಿಎಂ ಸಿದ್ದರಾಮಯ್ಯ ಮತ್ತು ಸಚಿವ ಭೈರತಿ ವಿರುದ್ಧ ಆರೋಪ ಮಾಡಿರುವುದು ಸಂಚಲನ ಮೂಡಿಸಿದೆ.

## ರೇಣುಕಾಸ್ವಾಮಿ ಕೊಲೆ ಪ್ರಕರಣ

# ದರ್ಶನ್‌ಗೆ 40 ಲಕ್ಷ ಕೊಟ್ಟ ಮೋಹನ್ ರಾಜ್‌ಗೆ ನೋಟಿಸ್



**ಬೆಂಗಳೂರು:** ಸ್ಯಾಂಡಲ್‌ವುಡ್ ನಟ, ಚಾಲೆಂಜಿಂಗ್ ಸ್ಟಾರ್ ದರ್ಶನ್ ಹಾಗೂ ಗ್ಯಾಂಗ್‌ನಿಂದ ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಮತ್ತೆ ಟ್ವಿಸ್ಟ್ ಸಿಗುತ್ತಿದೆ.

ರೇಣುಕಾಸ್ವಾಮಿ ಹತ್ಯೆ ಕೇಸ್‌ನಲ್ಲಿ ಮೂವರಿಗೆ ನೋಟಿಸ್ ಕೊಡಲಾಗಿದೆ. ಅದರಲ್ಲೂ ಮಾಜಿ ಉಪಮೇಯರ್ ಮೋಹನ್ ರಾಜ್‌ಗೆ 2ನೇ ಬಾರಿ ನೋಟಿಸ್ ನೀಡಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ.

ಪ್ರಕರಣ ಸಂಬಂಧ ವಿಚಾರಣೆಯ ವೇಳೆ ಮೋಹನ್ ರಾಜ್ ರಿಂದ 40 ಲಕ್ಷ ಹಣ ಪಡೆದಿದ್ದ ಬಗ್ಗೆ ದರ್ಶನ್ ಬಾಯ್ಬಿಟ್ಟಿದ್ದಾರೆ. ಹೀಗಾಗಿ ಯಾವ ಉದ್ದೇಶಕ್ಕಾಗಿ ದರ್ಶನ್ ಗೆ ಹಣ ನೀಡಿದ್ದಾರೆಂದು ತಿಳಿಸಲು ನೋಟಿಸ್ ನೀಡಲಾಗಿದೆ. ಬಸವೇಶ್ವರನಗರ ಪೊಲೀಸ್ ಠಾಣೆಗೆ ಖುದ್ದು ಹಾಜರಾಗುವಂತೆ ನೋಟಿಸ್‌ನಲ್ಲಿ ತಿಳಿಸಲಾಗಿದೆ.

ಪ್ರಕರಣ ಸಂಬಂಧ ಪವಿತ್ರಾಗೌಡ ಸ್ನೇಹಿತೆ ಸಮತಗೂ ನೋಟಿಸ್ ನೀಡಲಾಗಿದೆ. ಆರೋಪಿಯೊಬ್ಬನಿಗೆ ಹಣಕಾಸಿನ ಸಹಾಯ ಮಾಡಿರೋ ಆರೋಪ ಈಕೆಯ ಮೇಲಿದೆ. ಇನ್ನು ಬೆಂಗಳೂರಿನ ಬಿಜೆಪಿ ಶಾಸಕನ ಕಾರು ಚಾಲಕ ಕಾರ್ತಿಕ್ ಪುರೋಹಿತ್‌ಗೂ ನೋಟಿಸ್ ಕೊಡಲಾಗಿದೆ. ಆದರೆ ನೋಟಿಸ್ ತಲುಪುತ್ತಿದ್ದಂತೆಯೇ ಈತ ಎಸ್ಕೇಪ್ ಆಗಿದ್ದಾನೆ ಎನ್ನಲಾಗಿದೆ. ರೇಣುಕಾಸ್ವಾಮಿ ಹತ್ಯೆ ಕೇಸ್ ಆರೋಪಿ ಪ್ರದೋಷ್‌ಗೆ ಕಾರ್ತಿಕ್ ಪುರೋಹಿತ್ ಆಪ್ತ ಎಂಬ ಮಾಹಿತಿ ಲಭಿಸಿದೆ.

# ಚನ್ನಪಟ್ಟಣ ಉಪಚುನಾವಣೆಗೆ ಎನ್‌ಡಿಎ ಅಭ್ಯರ್ಥಿ ಫೈನಲ್

**ರಾಮನಗರ:** ಚನ್ನಪಟ್ಟಣ ಉಪಚುನಾವಣೆಗೆ ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿ ಆಯ್ಕೆ ಗೊಂದಲ ಕ್ಲೈಮ್ಯಾಕ್ಸ್ ಹಂತಕ್ಕೆ ಬಂದಂತಿದೆ. ಹೌದು ಇದಕ್ಕೆ ಪೂರಕವೆಂಬಂತೆ ಬಿಜೆಪಿ ನಾಯಕ ಸಿಪಿ ಯೋಗೇಶ್ವರ್ ಅವರು ತಾವೇ ಎನ್‌ಡಿಎ ಅಭ್ಯರ್ಥಿ ಎಂದು ಹೇಳಿಕೊಂಡಿದ್ದಾರೆ. ಈ ಬಗ್ಗೆ ಚನ್ನಪಟ್ಟಣದಲ್ಲಿ ಮಾತನಾಡಿರುವ ಯೋಗೇಶ್ವರ್, ಎಚ್‌ಡಿ ಕುಮಾರಸ್ವಾಮಿ ಅವರು ನನ್ನನ್ನೇ ನಿಲ್ಲುವಂತೆ ಹೇಳಿದ್ದಾರೆ. ಅದಕ್ಕೆ ಅಧಿಕೃತ ಅನುಮೋದನೆ ಅವರೇ ಕೊಡಬೇಕು. ಮೈತ್ರಿ ಪಕ್ಷದ ವರಿಷ್ಠರು ಅಧಿಕೃತ ಘೋಷಣೆ ಮಾಡಬೇಕು. ಹಾಗಾಗಿ ನೀವೇ ಬಂದು ಹೆಸರು ಘೋಷಣೆ ಮಾಡಿ ಎಂದು ಅವರನ್ನೇ ಕೇಳಿದ್ದೇನೆ ಎಂದು ಹೇಳಿದರು.



ಕಳೆದ ವಾರ ನಾನು ಕುಮಾರಸ್ವಾಮಿ ಭೇಟಿ ಮಾಡಿ ಚರ್ಚೆ ಮಾಡಿದೆ. ಆದಷ್ಟು ಬೇಗ ಅಭ್ಯರ್ಥಿ ಹೆಸರು ಸೂಚಿಸುವಂತೆ ಕೇಳಿದ್ದೇನೆ. ಈಗಾಗಲೇ ಕಾಂಗ್ರೆಸ್ ಚುನಾವಣೆಗೆ ಹೋಗುತ್ತಿದ್ದಾರೆ. ಹಾಗಾಗಿ ಮೈತ್ರಿ ಅಭ್ಯರ್ಥಿ ಆಯ್ಕೆ ಮಾಡಿ ಎಂದು ಮನವಿ ಮಾಡಿದ್ದೇನೆ. ಆದ್ರೆ, ಎಚ್‌ಡಿ ಕುಮಾರಸ್ವಾಮಿ ಅವರು ನನ್ನನ್ನೇ ನಿಲ್ಲುವಂತೆ ಹೇಳಿದ್ದಾರೆ ಎಂದು ಸ್ಪಷ್ಟಪಡಿಸಿದರು.

ಕಳೆದ ವಾರದಲ್ಲಿ ಡಿಸಿಎಂ ಡಿಕೆಶಿ ಮೂರು ದಿನ ಜನಸ್ಪಂದನಾ ಕಾರ್ಯಕ್ರಮ ಮಾಡಿದ್ದಾರೆ. ಉಪಚುನಾವಣೆ ದೃಷ್ಟಿಯಲ್ಲಿ ಮಾಡಿರೋ ಸರ್ಕಾರಿ ಸಂತೆ. ಯಾವುದೇ ಗುರಿ ಇಲ್ಲದೇ, ಯೋಜನೆ ಇಲ್ಲದೇ ಮಾಡಿರೋ ಕಾರ್ಯಕ್ರಮ. ಅಧಿಕಾರಿಗಳನ್ನ ಚನ್ನಪಟ್ಟಣಕ್ಕೆ ಕರೆತಂದು ಹೆದರಿಸಿ ಜನರಿಗೆ ಆಸೆ ತೋರಿಸುವ ಕೆಲಸ. ಕಳೆದ ಒಂದು ಕಾಲು ವರ್ಷದ ಅವಧಿಯಲ್ಲಿ ಸರ್ಕಾರ ಸಾರ್ವಜನಿಕರಿಗೆ ಯಾವುದೇ ಕಾರ್ಯಕ್ರಮ ಹಮ್ಮಿಕೊಂಡಿಲ್ಲ. ಸರ್ಕಾರ ಬಂದಾಗಿನಿಂದಲೂ ಚನ್ನಪಟ್ಟಣಕ್ಕೆ ಬಂದಿರಲಿಲ್ಲ. ಈಗ ಚನ್ನಪಟ್ಟಣ ಖಾಲಿ ಇದೆ, ಬಂದಿದ್ದೇನೆ ಅಂತ ಸುಳ್ಳು ಹೇಳ್ತಿದ್ದಾರೆ ಎಂದು ಟಾಂಗ್ ನೀಡಿದರು.

ಜನರಿಗೆ ಮನೆ ಕೊಡುತ್ತೇನೆ, ಸೈಟ್ ಕೊಡುತ್ತೇನೆ ಎಂದು ಸುಳ್ಳು ಭರವಸೆ ನೀಡುತ್ತಿದ್ದಾರೆ. ಟೌನ್ ವ್ಯಾಪ್ತಿ ಬಿಟ್ಟರೆ ಬಹುತೇಕ ತಾಲೂಕಿನ ಜನತೆಗೆ ಮನೆ ಸಮಸ್ಯೆ ಇಲ್ಲ. ಚುನಾವಣೆಗೆ ಟೈಂ ನಲ್ಲಿ ಮನೆ ಕೊಡ್ತೀವಿ ಅನ್ನೋದು ಸುಳ್ಳು. ಸರ್ಕಾರದ ನಿಯಮಗಳನ್ನ ಗಾಳಿಗೆ ತೂರಿ ಒನ್ ಮ್ಯಾನ್ ಶೋ ಮಾಡಿದ್ದಾರೆ. ಎಂಪಿಗೆ ಆಹ್ವಾನ ನೀಡಿಲ್ಲ, ನನಗೆ ಆಹ್ವಾನ ನೀಡಿಲ್ಲ. ಸರ್ಕಾರದ ಪ್ರೋಟೋಕಾಲ್ ಸರಿಯಾಗಿ ಫಾಲೋ ಮಾಡದೇ ಕಾರ್ಯಕ್ರಮ ಮಾಡಿದ್ದಾರೆ. ಕೇವಲ ಚುನಾವಣಾ ತಂತ್ರಕ್ಕೆ ಜನ ಸೇರಿಸಿ ಜಾತ್ರೆ ಮಾಡಿದ್ದಾರೆ ಎಂದು ಡಿಕೆ ಶಿವಕುಮಾರ್ ವಿರುದ್ಧ ಕಿಡಿಕಾರಿದ್ದಾರೆ. ಕ್ಷೇತ್ರದಲ್ಲಿ ಡಿಕೆಶಿ ಅವರ ಸಾಕ್ಷಿ ಗುಡ್ಡೆ, ಕೊಡುಗೆ ಏನೂ ಇಲ್ಲ. ಚನ್ನಪಟ್ಟಣದಿಂದಲೇ ರಾಜಕೀಯ ಜೀವನ ಆರಂಭಿಸಿದ್ರೂ ಅವರ 40 ವರ್ಷದ ಅವಧಿಯಲ್ಲಿ ಅವರ ಕೊಡುಗೆ ಶೂನ್ಯ. ಕೇವಲ ಚುನಾವಣೆ ಸಂದರ್ಭದಲ್ಲಿ ಬಂದು ಜಾತ್ರೆ ಮಾಡ್ತಿದ್ದಾರೆ. ಪ್ರೋಟೋಕಾಲ್ ಫಾಲೋ ಮಾಡಲಿಲ್ಲ ಅಂದ್ರೆ ಮೈತ್ರಿ ಪಕ್ಷದ ನಾಯಕರು ತಡೆ ಮಾಡ್ತಿವಿ. ಮುಂದಿನ ಕಾರ್ಯಕ್ರಮಗಳಿಗೆ ಪ್ರತಿಭಟನೆ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

## ರಾಜ್ಯಕ್ಕೆ ಹೊಸ ಉಸ್ತುವಾರಿ!

ಉತ್ತರ ಪ್ರದೇಶದ ಬಿಜೆಪಿ ಹಿರಿಯ ನಾಯಕ ಲಕ್ಷ್ಮೀಕಾಂತ್ ವಾಜಪೇಯಿ ಅವರನ್ನು ಜಾರ್ಖಂಡ್ ಉಸ್ತುವಾರಿಯನ್ನಾಗಿ ಮಾಡಲಾಗಿದೆ. ಪ್ರಕಾಶ್ ಜಾವಡೇಕರ್ ಅವರನ್ನು ಕೇರಳದ ಉಸ್ತುವಾರಿಯನ್ನಾಗಿ ಮಾಡಲಾಗಿದೆ. ಅಪರಾಜಿತಾ ಸಾರಂಗಿ ಅವರೊಂದಿಗೆ ಸಹ ಪ್ರಭಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

**ಯುಪಿಯ, ಮಧ್ಯಪ್ರದೇಶ, ದೆಹಲಿ ಉಸ್ತುವಾರಿ ಯಾರು?:** ಇನ್ನು ಮಧ್ಯಪ್ರದೇಶಕ್ಕೆ ಉತ್ತರ ಪ್ರದೇಶದ ವಿಧಾನ ಪರಿಷತ್ ಸದಸ್ಯ ಮಹೇಂದ್ರ ಸಿಂಗ್ ಅವರಿಗೆ ಜವಾಬ್ದಾರಿ ಸಿಕ್ಕಿದೆ. ಇವರೊಂದಿಗೆ ದೆಹಲಿಯ ಮಾಜಿ ಅಧ್ಯಕ್ಷ ಸತೀಶ್ ಉಪಾಧ್ಯಾಯ ಕೂಡ ಇರಲಿದ್ದಾರೆ. ಸಂಸದರಾದ ಅಜಿತ್ ಗೋಪ್ಚಾಡೆಗೆ ಮಣಿಪುರದ ಜವಾಬ್ದಾರಿ ನೀಡಲಾಗಿದೆ. ಇದಲ್ಲದೇ ಮಿಜೋರಾಂ ಉಸ್ತುವಾರಿಯನ್ನು ದೇವೇಶ್ ಕುಮಾರ್ ಪಡೆದುಕೊಂಡಿದ್ದಾರೆ. ನಾಗಾಲ್ಯಾಂಡ್ ಉಸ್ತುವಾರಿಯನ್ನು ಅನಿಲ್ ಆಂಟೋನಿಗೆ ನೀಡಲಾಗಿದೆ. ವಿಜಯಪಾಲ್ ಸಿಂಗ್ ತೋಮರ್ ಮತ್ತು ಲತಾ ಉಸೇಂಡಿ ಒಡಿಶಾದಲ್ಲಿ ಅಧಿಕಾರ ಸ್ವೀಕರಿಸಿದ್ದಾರೆ. ನಿರ್ಮಲ ಕುಮಾರ್ ಸುರಾನಾ ಪುದುಚೇರಿಯಲ್ಲಿ ಉಸ್ತುವಾರಿ ವಹಿಸಲಿದ್ದಾರೆ. ಗುಜರಾತ್ ಮಾಜಿ ಸಿಎಂ ವಿಜಯ್ ರೂಪಾನಿ ಪಂಜಾಬ್ ಉಸ್ತುವಾರಿ ವಹಿಸಲಿದ್ದು, ನರೇಂದ್ರ ಸಿಂಗ್ ಅವರ ಜೊತೆ ಇರಲಿದ್ದಾರೆ.

ದಿಲೀಪ್ ಜೈಸ್ವಾಲ್ ಅವರನ್ನು ಸಿಕ್ಕಿಂ ಉಸ್ತುವಾರಿಯನ್ನಾಗಿ ಮಾಡಲಾಗಿದೆ. ದುಷ್ಯಂತ್ ಕುಮಾರ್ ಗೌತಮ್ ಮತ್ತು ರೇಖಾ ವರ್ಮಾ ಅವರು ಉತ್ತರಾಖಂಡದ ಉಸ್ತುವಾರಿ ವಹಿಸಲಿದ್ದಾರೆ. ಎಲ್ಲಕ್ಕಿಂತ ಮುಖ್ಯವಾಗಿ ಈಶಾನ್ಯ ರಾಜ್ಯಗಳಿಗೂ ಬಿಜೆಪಿ ಸಂಯೋಜಕರನ್ನು ಘೋಷಿಸಿದೆ. ಈ ಜವಾಬ್ದಾರಿಯನ್ನು ಸಂಬಿತ್ ಪಾತ್ರ ಅವರಿಗೆ ನೀಡಲಾಗಿದ್ದು, ವಿ.ಮುರಳೀಧರನ್ ಸಹ ಸಂಚಾಲಕರಾಗಿರುತ್ತಾರೆ.

## ಗುಜರಾತ್‌ಗೆ ಪ್ರವಾಸ

ಅವರು ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮತ್ತು ರಾಜ್‌ಕೋಟ್ ಗೇಮ್ ಝೋನ್ ಬೆಂಕಿ ಮತ್ತು ಇತರ ದುರಂತಗಳಲ್ಲಿ ಸಾವನ್ನಪ್ಪಿದ ಸಂತ್ರಸ್ತರ ಸಂಬಂಧಿಕರನ್ನು ಭೇಟಿ ಮಾಡುತ್ತಾರೆ'' ಎಂದಿದ್ದಾರೆ.

ಗಮನಾರ್ಹ ಸಂಗತಿಯೆಂದರೆ, ರಾಹುಲ್ ಗಾಂಧಿಯವರು ತಮ್ಮ ಗುಜರಾತ್ ಭೇಟಿಯ ಸಂದರ್ಭದಲ್ಲಿ ಗುಜರಾತ್ ಪ್ರದೇಶ ಕಾಂಗ್ರೆಸ್ ಸಮಿತಿ ಕಚೇರಿಯ ಹೊರಗೆ ಬಿಜೆಪಿ ಮತ್ತು ಕಾಂಗ್ರೆಸ್ ಕಾರ್ಯಕರ್ತರ ನಡುವೆ ಘರ್ಷಣೆ ಸಂಭವಿಸಿದ ನಂತರ ಬಂಧಿತರಾಗಿರುವ ಐವರು ಕಾಂಗ್ರೆಸ್ ಕಾರ್ಯಕರ್ತರ ಕುಟುಂಬಗಳನ್ನು ಭೇಟಿಯಾಗಲಿರುವುದು ವಿಶೇಷ. ಲೋಕಸಭೆಯಲ್ಲಿ ರಾಹುಲ್ ಗಾಂಧಿಯವರು ಮಾಡಿದ್ದ ಹಿಂದೂ ವಿರೋಧಿ ಹೇಳಿಕೆಗಳಿಂದ ಉಂಟಾದ ಘರ್ಷಣೆಯು ಕಲ್ಲು ತೂರಾಟಕ್ಕೆ ಕಾರಣವಾಗಿತ್ತು. ಈ ಘಟನೆಯಲ್ಲಿ ಸಹಾಯಕ ಪೊಲೀಸ್ ಕಮಿಷನರ್ ಸೇರಿದಂತೆ ಐವರು ಪೊಲೀಸರಿಗೆ ಗಾಯವಾಗಿತ್ತು.

ಇದಲ್ಲದೆ, ಈ ಘಟನಾ ಸ್ಥಳದ ದೃಶ್ಯಗಳು ವೈರಲ್ ಆಗಿದ್ದು, ಕಾಂಗ್ರೆಸ್‌ನ ಗುಜರಾತ್ ಪ್ರಧಾನ ಕಛೇರಿ ರಾಜೀವ್ ಗಾಂಧಿ ಭವನದ ಹೊರಗೆ ಎರಡೂ ಕಡೆಯ ಪಕ್ಷದ ಕಾರ್ಯಕರ್ತರು ಪರಸ್ಪರ ಹೊಡೆದಾಡಿಕೊಳ್ಳುವುದನ್ನು ನೋಡಬಹುದು. ಪೊಲೀಸರು ಮಧ್ಯಪ್ರವೇಶಿಸಲು ಯತ್ನಿಸಿದಾಗಲೂ ಕೆಲವು ವ್ಯಕ್ತಿಗಳು ಪರಸ್ಪರ ಕಲ್ಲು ತೂರಾಟ ನಡೆಸುತ್ತಿರುವುದು ಕಂಡುಬಂದಿತ್ತು.

## ಸ್ವಾಮಿ ಮರ್ಡರ್?

ದರ್ಶನ್ ದುಬೈ ಟ್ರಿಪ್ ಮುಗಿಸುಕೊಂಡು ಬರುತ್ತಿದ್ದಂತೆ ಪವಿತ್ರಾ ಗೌಡ ಕೋಟಿ ಮೌಲ್ಯದ ಕಾರಿಗೆ ಬೇಡಿಕೆ ಇಟ್ಟಿದ್ದರಂತೆ. ಈ ವೇಳೆ ದರ್ಶನ್ ಕೋಟಿ ಕಾರು ಕೊಡಿಸುವುದಕ್ಕೆ ನಿರಾಕರಿಸಿದ್ದರು. ಸದ್ಯ ದೊಡ್ಡ ಅಮೌಂಟ್ ಇಲ್ಲ ಎಂದು ಕಾರಣ ನೀಡಿ ಪವಿತ್ರಾ ಗೌಡಗೆ ಕೋಟಿ ಕಾರು ಕೊಡಿಸೊದಕ್ಕೆ ಬ್ರೇಕ್ ಹಾಕಿದ್ದರು ಎನ್ನಲಾಗಿದೆ.

ಇಷ್ಟಪಟ್ಟ ಕೋಟಿ ರೂ. ಮೌಲ್ಯದ ಕೊಡಿಸಲಿಲ್ಲ ಅನ್ನೋ ಕಾರಣಕ್ಕೆ ಹಂತಕಿ ಪವಿತ್ರಾ ಗೌಡ ಆರೋಪಿ ದರ್ಶನ್ ಜೊತೆ ಮಾತು ಬಿಟ್ಟಿದ್ದರು. ಸುಮಾರು ಒಂದು ತಿಂಗಳುಗಳ ಕಾಲ ಪವಿತ್ರಾ ಗೌಡ ದರ್ಶನ್ ಜೊತೆ ಮಾತನಾಡುವುದಕ್ಕೆ ಬ್ರೇಕ್ ಹಾಕಿದ್ದರು. ಮಾತು ಬಿಟ್ಟಿದ್ದರ ನಡುವೆ ರೇಣುಕಾಸ್ವಾಮಿ ಮೆಸೇಜ್ ಕಹಾನಿ ನಡೆದಿರುತ್ತದೆ. ಮೆಸೇಜ್ ಕಥೆ ತಿಳಿದ ಬಳಿಕ ಈ ಸಮಸ್ಯೆಯನ್ನು ಸರಿಪಡಿಸಿದರೆ ನಾವಿಬ್ಬರು ಹತ್ತಿರ ಆಗಬಹುದು ಎಂದು ನಂಬಿ ಕಿಡ್ನಾಪ್ ಪ್ರಹಸನ ನಡೆಸಿ ತಗ್ಲಾಕಿಕೊಂಡಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಆತಂಕದಲ್ಲಿ ಚಿಕ್ಕಮಗಳೂರು ಜನತೆ

ಚಾರ್ಮಾಡಿ ಘಾಟಿ ಬದುಕಿನ ದಾರಿಯಾಗಿದೆ. ಈ ಮಾರ್ಗದಲ್ಲಿ

ಮೊದಲನೇ ಪುಟದಿಂದ...

ನಿತ್ಯ ಹತ್ತಾರು ಅಂಬುಲೆನ್ಸ್ ಗಳು ರೋಗಿಗಳನ್ನ ಹೊತ್ತು ಉಡುಪಿ ಹಾಗೂ ಮಂಗಳೂರಿಗೆ ಹೋಗುತ್ತವೆ. ಹಣ್ಣು–ತರಕಾರಿಗಳು ಗಾಡಿಗಳು, ಓದಲು ಸಲುವಾಗಿ ಮಕ್ಕಳು ಕೂಡ ಈ ಮಾರ್ಗವನ್ನೇ ಆಶ್ರಯಿಸಿದ್ದಾರೆ. ಆದರೆ ವರ್ಷದಿಂದ ವರ್ಷಕ್ಕೆ ಚಾರ್ಮಾಡಿ ತನ್ನ ಸಾಮರ್ಥ್ಯವನ್ನು ಕಳೆದುಕೊಳ್ಳುತ್ತಿದೆಯಾ ಎಂಬ ಅನುಮಾನ ದಟ್ಟವಾಗಿ ಕಾಡುತ್ತಿದೆ. 15 ದಿನಗಳ ನಿರಂತರ ಮಳೆಗೆ ಚಾರ್ಮಾಡಿ ಘಾಟಿಯಲ್ಲಿ ಭೂಮಿ ಬಾಯ್ಬಿಟ್ಟಿದ್ದು ತಡೆಗೋಡೆಗಳು ಕೂಡ ಬಿರುಕು ಬಿಟ್ಟಿವೆ. ಇದರಿಂದ ಈ ಮಾರ್ಗದಲ್ಲಿ ಸಂಚಾರ ಮಾಡುವ ಪ್ರಯಾಣಿಕರು ಆತಂಕದಲ್ಲಿ ಪ್ರಯಾಣ ಮಾಡುವಂತಾಗಿದೆ.

2019 ರಲ್ಲಿ ಸುರಿದ ಭಾರೀ ಮಳೆಯಿಂದಾಗಿ ಚಾರ್ಮಾಡಿ ಘಾಟಿಯ ರಸ್ತೆ ಸುಮಾರು 200–300 ಅಡಿ ಆಳಕ್ಕೆ ಕುಸಿದಿತ್ತು. ಅಷ್ಟು ಆಳದಿಂದಲೂ ಕೂಡ ಕಾಂಕ್ರೀಟ್ ವಾಲ್ ನಿರ್ಮಿಸಿ ರಸ್ತೆಗೆ ಬಂದೋಬಸ್ತ್ ಮಾಡಿದ್ದರು. ಆದರೆ ಆ ಕಾಂಕ್ರೀಟ್ ವಾಲ್ ಕೂಡ ಜರುಗಿದ್ದು ರಸ್ತೆ ಕೂಡ ಬಾಯ್ಬಿಟ್ಟಿದೆ. ಇದರಿಂದ ಚಾರ್ಮಾಡಿ ಘಾಟ್ ವರ್ಷದಿಂದ ವರ್ಷಕ್ಕೆ ಕ್ರಮೇಣ ತನ್ನ ಸಾಮರ್ಥ್ಯ ಕಳೆದುಕೊಳ್ಳುತ್ತಿದ್ದ ಎಂಬ ಅನುಮಾನ ಬಲವಾಗಿ ಕಾಡುತ್ತಿದೆ.

2019ರಲ್ಲಿ 8 ತಿಂಗಳು ಚಾರ್ಮಾಡಿ ಘಾಟಿಯನ್ನು ಬಂದ್ ಮಾಡಿ ಕೋಟ್ಯಂತರ ರೂಪಾಯಿ ಖರ್ಚು ಮಾಡಿ ಮಾಡಿದ್ದ ಕಾಮಗಾರಿ ಕಳಪೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಇದೀಗ ಚಾರ್ಮಾಡಿ ಘಾಟಿಯಲ್ಲಿ ಮೂರ್ನಾಲ್ಕು ಕಡೆ ಭೂಮಿ ಬಾಯ್ಬಿಟ್ಟಿದ್ದು ಸ್ಥಳೀಯರು ಹಾಗೂ ಪ್ರಯಾಣಿಕರು ಈ ಮಾರ್ಗದಲ್ಲಿ 10 ಚಕ್ರದ ಲಾರಿಗಳು, ಅದಕ್ಕಿಂತ ದೊಡ್ಡ ವಾಹನಗಳು ಹಾಗೂ ಭಾರೀ ಗಾತ್ರದ ವಾಹನಗಳಿಗೆ ಸಂಪೂರ್ಣ ಬ್ರೇಕ್ ಬೇಕೆಂದು ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

## ಮತ್ತೆ ಕ್ಯಾತೆ

ಇದರ ಬೆನ್ನಲ್ಲೇ ಕೇಂದ್ರ ಸರ್ಕಾರದಿಂದ ಮಹದಾಯಿ ಪ್ರವಾಹ ತಂಡ ಭೇಟಿ ಕೊಡ್ತಿದೆ. ನಾಳೆ 9 ಗಂಟೆಗೆ ಕಳಸಾ ಮತ್ತು ಬಂಡೂರಿ ನಾಲೆಗೆ ಕೇಂದ್ರ ತಂಡ ಭೇಟಿ ನೀಡಲಿದೆ. ನಾಡಿದ್ದು ಬೆಂಗಳೂರಿನಲ್ಲಿ ಕೆಎನ್‌ಎಲ್ ಎಲ್ ಅಧಿಕಾರಿಗಳ ಜೊತೆಗೆ ಸಭೆ ನಡೆಯಲಿದೆ. ಆ ಬಳಿಕ ತನ್ನದೇ ಆದ ವರದಿಯನ್ನ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುತ್ತೆ. ಪಶ್ಚಿಮ ಘಟ್ಟ ಪ್ರದೇಶದಲ್ಲಿ ಭಾರಿ ಮಳೆ ಹಿನ್ನೆಲೆ ಕಳಸಾ, ಬಂಡೂರಿ ನಾಲೆ ತುಂಬಿ ಹರಿಯುತ್ತಿದೆ.

2018ರಲ್ಲಿಯೇ ಕರ್ನಾಟಕ ರಾಜ್ಯಕ್ಕೆ 13 ಟಿಎಂಸಿ ನೀರು ಹಂಚಿಕೆ ಸಂಬಂಧ ಮಹದಾಯಿ ನ್ಯಾಯಾಧೀಕರಣದಿಂದ ತೀರ್ಪು ಹೊರ ಬಿದ್ದಿತ್ತು. ಇದರಲ್ಲಿ ಕಳಸಾದಿಂದ 1.72 ಟಿಎಂಸಿ, ಬಂಡೂರಿಯಿಂದ 2.18 ಟಿಎಂಸಿ ನೀರು ಹಂಚಿಕೆ ಇದೆ. ಮಹದಾಯಿ ತೀರ್ಪು ಬಂದು 6 ವರ್ಷ ಕಳೆದರೂ ಇದುವರೆಗೂ ಒಂದೇ ಒಂದು ಹನಿ ನೀರು ಸಹ ಕರ್ನಾಟಕಕ್ಕೆ ಸಿಕ್ಕಿಲ್ಲ. ನಾಲ್ಕು ಜಿಲ್ಲೆಯ 13 ತಾಲೂಕಿನ ಜನತೆಗೆ ಕುಡಿಯುವ ನೀರು ಪೂರೈಸುವ ಯೋಜನೆ ಇದಾಗಿದೆ. ಇನ್ನು ಪರಿಸರ ಇಲಾಖೆ ಅನುಮತಿ ಕರ್ನಾಟಕಕ್ಕೆ ಸಿಗದಂತೆ ತಡೆಯಲು ಗೋವಾ ಸರ್ಕಾರ ಹುನ್ನಾರ ಮಾಡುತ್ತಿದೆ. ಇದೇ ಕಾರಣಕ್ಕೆ ಮಹದಾಯಿ ತೀರ್ಪು ಬಂದರೂ ಪ್ರವಾಹ ತಂಡದ ನೆಪದಲ್ಲಿ ಯೋಜನೆಗೆ ಮತ್ತೆ ಅಡ್ಡಗಾಲು ಹಾಕಲಾಗುತ್ತಿದೆ.

## ಸವಾರ

ಕೂಡಲೇ ಅಗ್ನಿಶಾಮಕದಳದ ಸಿಬ್ಬಂದಿಯನ್ನು ಕರೆಸಿ ಕಾರ್ಯಾಚರಣೆ ನಡೆಸಲಾಯಿತಾದರೂ, ಸವಾರನ ಪತ್ತೆಯಾಗಲಿಲ್ಲ. ರಾಜಕಾಲುವೆಯಲ್ಲಿ ಸುಮಾರು 4 ಅಡಿ ನೀರು ತುಂಬಿದ್ದು, ಈ ನೀರಿನಲ್ಲಿ ವ್ಯಕ್ತಿ ಕೊಚ್ಚಿ ಹೋಗಲು ಸಾಧ್ಯವೇ ಎಂಬ ಅನುಮಾನವೂ ಮೂಡಿದೆ. ಕಾರ್ಯಾಚರಣೆ ನೋಡಲು ಜನ ನಿಂತ ಪರಿಣಾಮ ರಾತ್ರಿ ಮೈಸೂರು ರೋಡ್‌ನಲ್ಲಿ ಟ್ರಾಫಿಕ್ ಜಾಮ್ ಉಂಟಾಯಿತು. ರಾತ್ರಿ ಶೋಧ ಸ್ಥಗಿತಗೊಂಡಿದ್ದು, ಬೆಳಗ್ಗೆ ಮತ್ತೆ ಪುನರಾರಂಭಗೊಂಡಿದೆ.

## ಲಾಕ್

ಗಂಟೆಯಿಂದ ಪ್ರಯಾಣಿಕರು ಫ್ಲೈಟ್‌ನಲ್ಲೇ ಕುಳಿತಿದ್ದರು. ವಿಮಾನದಲ್ಲಿ ಊಟ, ನಿದ್ದೆ ಇಲ್ಲದೇ ಪ್ರಯಾಣಿಕರ ಪರದಾಟ ಅನುಭವಿಸಿದರು.

ಎಸ್‌ಜಿ 8151 ಸ್ಪೈಸ್ ಜೆಟ್ ದೆಹಲಿಯಿಂದ ಬೆಂಗಳೂರಿಗೆ ಬರಬೇಕಿತ್ತು. ಟರ್ಮಿನಲ್ 3 ರಿಂದ ರಾತ್ರಿ 7.40 ಕ್ಕೆ ಟೇಕಾಫ್ ಅಗಬೇಕಿತ್ತು. ಆದರೆ ವಿಮಾನ ಟೇಕಾಫ್ ಆಗದೇ ರನ್ ವೇ ನಲ್ಲೇ ನಿಲ್ಲಿಸಿಕೊಳ್ಳಲಾಗಿತ್ತು. ಇದಕ್ಕೆ ಸ್ಪೈಸ್ ಜೆಟ್ ಕಾರಣ ಕೂಡ ಕೊಡದೇ ಇರುವುದರಿಂದ ಪ್ರಯಾಣಿಕರು ವಿಮಾನದೊಳಗೆ ಕುಳಿತು ಪ್ರತಿಭಟನೆ ನಡೆಸಿದರು.

ಕೊನೆಗೂ ಇಂದು 9:10ಕ್ಕೆ ವಿಮಾನ ಬೆಂಗಳೂರಿಗೆ ಬರಲಿದೆ. ಈ ಹಿನ್ನೆಲೆಯಲ್ಲಿ ಪ್ರಯಾಣಿಕರು ನಿಟ್ಟುಸಿರು ಬಿಟ್ಟಿದ್ದಾರೆ. ತಾಂತ್ರಿಕ ದೋಷದಿಂದ ವಿಮಾನ ನಿಂತಿರುವುದಾಗಿ ಮಾಹಿತಿ ಲಭಿಸಿದೆ.

# ವಿಶ್ವ ಕನ್ನಡ ಹಬ್ಬದ ಕುರಿತು ಒಪ್ಪಂದಕ್ಕೆ ಸಹಿ

**ಬೆಂಗಳೂರು:** ಸಿಂಗಾಪುರದಲ್ಲಿ ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್ ಆಯೋಜಿಸಲಿರುವ ವಿಶ್ವ ಕನ್ನಡ ಹಬ್ಬದ ಪೂರ್ವಬಾವಿ ಸಿದ್ಧತೆ ಹಾಗೂ ಪತ್ರಿಕಾಗೋಷ್ಠಿ ನಡೆಸಲು ಅಧ್ಯಕ್ಷರಾದ ಶಿವಕುಮಾರ್ ನಾಗರ ನವಿಲೆಯವರು ಸಿಂಗಾಪುರಕ್ಕೆ ಭೇಟಿ ನೀಡಿ ಅಲ್ಲಿನ ಸಿಂಗಪುರ ಕನ್ನಡ ಸಂಘದ ಅಧ್ಯಕ್ಷ ವೆಂಕಟರತ್ನಯ್ಯ ಹಾಗೂ ಉಪಾಧ್ಯಕ್ಷ ಶಿವಕುಮಾರ್‌ರವರೊಂದಿಗೆ ವಿಶ್ವ ಕನ್ನಡ ಹಬ್ಬದ ಕುರಿತು ಸುದೀರ್ಘ ಚರ್ಚೆ ನಡೆಸಿ ಮಹತ್ತರ ತೀರ್ಮಾನಗಳನ್ನು ಕೈಗೊಳ್ಳಲಾಯಿತು. ಕನ್ನಡ ನಾಡು ನುಡಿಗಾಗಿ ಸೇವೆ ಸಲ್ಲಿಸಿರುವ ಸಾಧಕರಿಗೆ 'ವಿಶ್ವಮಾನ್ಯ ಪ್ರಶಸ್ತಿ' ನೀಡುವ ಕುರಿತು ತಿಳಿಸಲಾಯಿತು.



ಇದೇ ಸಂದರ್ಭದಲ್ಲಿ ಕಾರ್ಯಕ್ರಮದ ಸಂಪೂರ್ಣ ಯಶಸ್ವಿಗೆ ಸಿಂಗಪುರ ಕನ್ನಡ ಸಂಘದೊಂದಿಗೆ ಒಪ್ಪಂದದ ಮೂಲಕ ಕಾರ್ಯಕ್ರಮ ಸಂಪೂರ್ಣ ಯಶಸ್ವಿಗೆ ಅಧ್ಯಕ್ಷರಿಬ್ಬರೂ ಸಹಿ ಮಾಡಿದರು. ಸಭೆಯಲ್ಲಿ ಭಾಗವಹಿಸಿದ ಕನ್ನಡ ಸಂಘದ ಪದಾಧಿಕಾರಿಗಳು ಕನ್ನಡ ಭಾವುಟವನ್ನು ಹಿಡಿದು ಬೆಂಬಲ ಸೂಚಿಸಿದರು.

ಹಾಗೆಯೇ ಕಾರ್ಯಕ್ರಮಕ್ಕೆ ನಾವೆಲ್ಲರೂ ಕನ್ನಡ ತಾಯಿಯ ಸೇವೆಗೆ ತನು ಮನ ಅರ್ಪಿಸಿ ದುಡಿಯುವುದಾಗಿ ಅಧ್ಯಕ್ಷರಿಗೆ ತಿಳಿಸಿದರು. ನಂತರ ಸ್ಥಳ ವೀಕ್ಷಣೆ ಹಾಗೂ ಸಭಾಂಗಣ ವೀಕ್ಷಿಸಿ ಕಾರ್ಯಕ್ರಮದ ಸ್ಥಳ ನಿಗಧಿ ಮಾಡಲಾಯಿತು.

ಅಧ್ಯಕ್ಷರು ಸಿಂಗಾಪುರದಲ್ಲಿ ಪತ್ರಿಕಾ ಗೋಷ್ಠಿಯನ್ನು ಏರ್ಪಡಿಸಿ ಕಾರ್ಯಕ್ರಮದ ಉದ್ದೇಶ ಹಾಗೂ ರೂಪುರೇಶೆಗಳನ್ನು ತಿಳಿಸಿದರು. ವಿಶ್ವ ಕನ್ನಡ ಹಬ್ಬದ ಮೂಲ ಧ್ಯೇಯ ಅನಿವಾಸಿ ಕನ್ನಡಿಗರ ಹಾಗೂ ಮೂಲ ಕನ್ನಡಿಗರ ಹೃದಯ ಬೆಸೆಯುವುದು ಹಾಗೂ ನಾಡಿನ ಭಾಷಾ ಪರಂಪರೆಯನ್ನು ವಿಶ್ವಕ್ಕೆ ತಿಳಿಸುವುದಾಗಿದೆ.

ಈ ಕಾರ್ಯಕ್ರಮಕ್ಕೆ ಸಿಂಗಪುರದ ಕನ್ನಡಿಗರ ಸಹಕಾರ ಅಗತ್ಯವಾಗಿದ್ದು, ಕನ್ನಡ ಹಬ್ಬಕ್ಕೆ ಎಲ್ಲರೂ ಕೈ ಜೋಡಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿಶ್ವ ಕನ್ನಡ ಹಬ್ಬದ ಪದಾಧಿಕಾರಿಗಳಾದ ಸುನೀಲ್, ರಜತ್ ಹಾಗೂ ಸಿಂಗಾಪುರ ಕನ್ನಡ ಸಂಘದ ಪದಾಧಿಕಾರಿಗಳಾದ ಸುದೀಪ್ ಪೆರ್ಡೂರ್, ಲಕ್ಷ್ಮಿ ಶ್ರೀ, ರಮ್ಯಾ ಎಸ್.ವೈ, ಶ್ರೀನಿವಾಸ್ ಕೆ.ಜೆ, ಶ್ರೀಕಾಂತ್ ಪುರುಷೋತ್ತಮ, ನಿಖಿತಾ ಪ್ರಸಾದ್ ಮುಂತಾದವರು ಉಪಸ್ಥಿತರಿದ್ದರು.

# ಶೀಘ್ರದಲ್ಲೇ ರಸ್ತೆಗೆ ಇಳಿಯಲಿದೆ ಕೆಎಸ್‌ಆರ್‌ಟಿಸಿ ಹೊಸ ವೋಲ್ವೋ ಬಸ್

**ಬೆಂಗಳೂರು:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಹೊಸ 9600 ವೋಲ್ವೋ ಮಲ್ಟಿಆಕ್ಸಲ್ ಸೀಟರ್ ಪ್ರೋಟೋಟೈಪ್ ಬಸ್ಸನ್ನು ಸಾರಿಗೆ ಹಾಗೂ ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ಅವರು ಪರಿವೀಕ್ಷಣೆ ನಡೆಸಿದರು.



**ಬಸ್ಸಿನ ವಿಶೇಷತೆಗಳು:** ಶಕ್ತಿಶಾಲಿ ಹ್ಯಾಲೊಜೆನ್ ಹೆಡ್ ಲೈಟ್‌ಗಳು ಮತ್ತು ಡೇ ರನ್ನಿಂಗ್ ಲೈಟ್‌ಗಳೊಂದಿಗೆ ಹೊಸ ಪ್ಲಶ್ ಇಂಟೀರಿಯರ್ಸ್ ಮತ್ತು ಬಾಹ್ಯ ಸ್ಕ್ಯಾಂಡಿನೇವಿಯನ್ ವಿನ್ಯಾಸ ಹೊಂದಿರುವುದರಿಂದ ಕಣ್ ತಣಿಸುವ ಸೌಂದರ್ಯ. ಏರೋಡೈನಾಮಿಕ್ ವಿನ್ಯಾಸದಿಂದ ಉತ್ತಮ ಇಂಧನ ದಕ್ಷತೆ ಹೊಂದಿದೆ. ನವೀನ ತಂತ್ರಜ್ಞಾನ/ತಾಂತ್ರಿಕತೆಯಿಂದ ಸುಧಾರಿತ ಇಂಜಿನ್ ಹೊಂದಿದ್ದು ಅತ್ಯುತ್ತಮ ಕಾರ್ಯಕ್ಷಮತೆ ಹಾಗೂ ಸುಧಾರಿತ ಇಂಜಿನ್ ಕೆಎಂಪಿಎಲ್ ನೀಡುತ್ತದೆ.

ಒಟ್ಟಾರೆ ಬಸ್ಸಿನ ಉದ್ದದಲ್ಲಿ ಶೇ3.5 ಹೆಚ್ಚಳ ಇರುವುದರಿಂದ ಸಲೂನ್‌ನಲ್ಲಿ ಪ್ರಯಾಣಿಕರ ಆಸನಗಳ ನಡುವಿನ ಅಂತರ ಹೆಚ್ಚಾಗಿದೆ. ಒಟ್ಟಾರೆ ಬಸ್ಸಿನ ಎತ್ತರದಲ್ಲಿ ಶೇ 5.6 ರಷ್ಟು ಹೆಚ್ಚಳ ಇರುವುದರಿಂದ ಹೆಚ್ಚಿನ ಹೆಡ್ ರೂಂ ಇರುತ್ತದೆ.

ವಿಂಡ್‌ಶೀಲ್ಡ್ ಗಾಜು ಶೇ 9.5 ರಷ್ಟು ವಿಸ್ತಾರವಾಗಿದ್ದು, ಚಾಲಕನಿಗೆ ಗೋಚರತೆಯನ್ನು ಹೆಚ್ಚಿಸಿ ಬ್ಲೈಂಡ್ ಸ್ಪಾಟ್ ಅನ್ನು ಕಡಿಮೆ ಮಾಡುತ್ತದೆ. ವಿಶಾಲ ಲಗೇಜ್ ಸ್ಥಳಾವಕಾಶವಿದ್ದು ಶೇ 20% ರಷ್ಟು ಹೆಚ್ಚಿನ ಲಗ್ಗೇಜ್ ಇಡುವ ಸೌಲಭ್ಯವಿರುತ್ತದೆ.

USB + C ಟೈಪ್ ನಂತಹ ಹೊಸ ಜನರೇಷನ್ ಮೊಬೈಲ್ ಚಾರ್ಜಿಂಗ್ ಪಾಯಿಂಟ್ ಗಳನ್ನು ಒಳಗೊಂಡಿದೆ. ವಿಶಾಲವಾದ ಎಸಿ ಡಕ್ಟ್ ಹೊಂದಿರುವುದರಿಂದ ವಾಹನದ ಒಳಗೆ ಉತ್ತಮ ಹವಾನಿಯಂತ್ರಣಾ ವ್ಯವಸ್ಥೆ ಇರುತ್ತದೆ.

ಉನ್ನತ ದರ್ಜೆ/ ವಿನ್ಯಾಸದ ಆಸನಗಳು ಮತ್ತು ಸಾಮಗ್ರಿಗಳ ಬಳಕೆಯಿಂದ ಪ್ರಯಾಣಿಕರಿಗೆ ಪ್ರೀಮಿಯಂ ಅನುಭವ ಮತ್ತು ಸೌಕರ್ಯ. ವಿಶಾಲವಾದ ಪ್ಯಾಂಟೋಗ್ರಾಫಿಕ್ ವಿನ್ಯಾಸದಿಂದ ವಾಹನದ ನಿರ್ವಹಣೆ ಕೈಗೊಳ್ಳಲು ಸುಲಭವಾಗಿರುತ್ತದೆ.

ಹಿಂಭಾಗದಲ್ಲಿ fog light ಅನ್ನು ಒಳಗೊಂಡಿರುವುದಿರಂದ ರಾತ್ರಿ ವೇಳೆಯಲ್ಲಿ ಹೆಚ್ಚಿನ ಸುರಕ್ಷತೆ ಇರುತ್ತದೆ. ಸುಲಭವಾಗಿ ಕೈಗೆಟುಕುವ ಚಾಲಕ ನಿಯಂತ್ರಣಗಳು ಮತ್ತು ಸ್ವಿಚ್‌ಗಳನ್ನು ಹೊಂದಿದ್ದು ಚಾಲಕರಿಗೆ ಹೆಚ್ಚು ಅನುಕೂಲಕರವಾಗಿರುತ್ತದೆ.

ಫೈರ್ ಅಲಾರ್ಮ್ ಮತ್ತು ಪ್ರೊಟೆಕ್ಷನ್ ಸಿಸ್ಟಮ್ ಅಳವಡಿಸಿದ್ದು ತುರ್ತು ಸಂದರ್ಭದಲ್ಲಿ ಪ್ರಯಾಣಿಕರಿಗೆ ಹೆಚ್ಚಿನ ಸುರಕ್ಷತೆ ಇರುತ್ತದೆ. ಬಸ್ಸಿನ ಒಳಗೆ ಪ್ರಯಾಣಿಕರ ಆಸನದ ಎರಡೂ ಬದಿಯಲ್ಲಿ ನೀರಿನ ಪೈಪುಗಳಿದ್ದು 30 ನಾಜಲ್ ಗಳಿಂದ ನೀರು ಸರಬರಾಜು ಆಗಿ ಬೆಂಕಿ ಅವಘಡದ ಸಂದರ್ಭದಲ್ಲಿ ನೀರು ಸಿಂಪಡಿಸಲು ಪ್ರಾರಂಭವಾಗುತ್ತದೆ. ಚಾಲಕರು ಪಾದಚಾರಿಯನ್ನು ಪ್ರಯಾಣಿಕರ ಬಾಗಿಲಿನಿಂದ ಸುಲಭವಾಗಿ ನೋಡಬಹುದಾಗಿದ್ದು ಪಾದಾಚಾರಿಗಳಿಗೆ ಹೆಚ್ಚಿನ ಸುರಕ್ಷತೆ ಇರುತ್ತದೆ.

ಸಚಿವ ರಾಮಲಿಂಗಾರೆಡ್ಡಿ ಬಸ್ಸನ್ನು ವೀಕ್ಷಿಸಿ ಬಹುಮೆಚ್ಚುಗೆ ಸೂಚಿಸಿ, ಕರ್ನಾಟಕವು ವಿವಿಧ ಮಾದರಿಯ ಅತ್ಯಾಧುನಿಕ ಬಸ್ಸುಗಳನ್ನು ಪ್ರಯಾಣಿಕರ ಬೇಡಿಕೆಗನುಣವಾಗಿ ಸೇರ್ಪಡೆ ಗೊಳಿಸುತ್ತಿರುವುದರಲ್ಲಿ ದೇಶದಲ್ಲಿಯೇ ಮುಂಚೂಣಿಯಲ್ಲಿದೆ ಎಂದು ಹರ್ಷ ವ್ಯಕ್ತಪಡಿಸಿದರು.

# ಗುಜರಾತ್ ಕರಕುಶಲ ಉತ್ಸವ

**ಮೈಸೂರು:** ಜೆಎಸ್‌ಎಸ್ ಮಹಾ ವಿದ್ಯಾಪೀಠದ ಜೆಎಸ್‌ಎಸ್ ಅರ್ಬನ್‌ಹಾತ್‌ನಲ್ಲಿ ಜು.5ರಿಂದ 14ರವರೆಗೆ ಗುಜರಾತ್ ಕರಕುಶಲ ಉತ್ಸವ ಆಯೋಜಿಸಿದ್ದು, ಆ ರಾಜ್ಯದ ವಿಶಿಷ್ಟ ಕರಕುಶಲ ಕಲೆ ಬಗ್ಗೆ ಆಸಕ್ತಿ ಹೊಂದಿರುವವರು ಭೇಟಿ ನೀಡಿ ವೀಕ್ಷಿಸುವ ಅಥವಾ ಖರೀದಿಸುವ ಅವಕಾಶ ಕಲ್ಪಿಸಲಾಗಿದೆ ಎಂದು ಗುಜರಾತ್ ಇಂಡೆಕ್ಸ್-ಸಿ ವ್ಯವಸ್ಥಾಪಕ ಆರ್.ಎಸ್.ಶಾ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇಳವನ್ನು ಜು.5ರ ಸಂಜೆ ನಾಲ್ಕಕ್ಕೆ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದ ನಿರ್ದೇಶಕಿ ಪಿ.ಐ.ಶ್ರೀವಿದ್ಯಾ ಉದ್ಘಾಟಿಸುವರು. ಮೇಳದಲ್ಲಿ ರಾಷ್ಟ್ರ ಮಟ್ಟದ ಪ್ರಶಸ್ತಿ ಪಡೆದಿರುವ ಕಲಾವಿದರು ಒಂದೇ ಸೂರಿನಡಿ ತಾವು ತಯಾರಿಸಿದ ಪಟೋಲಾ ಸೀರೆ, ಬಾಂದಿನಿ ಸೀರೆ, ಕಸೂತಿ ಮಾಡಿದ ಬೆಡ್‌ಶೀಟ್, ಟವಲೆ, ಕುಶನ್ ಕವರ್, ಪರಿಸರ ಸ್ನೇಹಿ ಆಭರಣ, ಚನಿಯಾ ಚೋಲಿ, ಇನ್ನಿತರ ಆಕರ್ಷಣೀಯ ಕರಕುಶಲ ಹಾಗೂ ಕೈಮಗ್ಗ ಉತ್ಪನ್ನಗಳನ್ನು ಪ್ರದರ್ಶಿಸಿ ಮಾರಾಟ ಮಾಡಲಿದ್ದಾರೆ. ಜು.5ರಿಂದ 7ರವರೆಗೆ ನಿತ್ಯ ಸಂಜೆ 6ರಿಂದ 8ರವರೆಗೆ ಗುಜರಾತ್‌ನ ಪ್ರಸಿದ್ಧ ಸಾಂಸ್ಕೃತಿಕ ಕಲಾ ತಂಡಗಳಿಂದ ಗರ್ಭಾ ನೃತ್ಯ ಪ್ರದರ್ಶನಗೊಳ್ಳಲಿದೆ. ಇದರೊಡನೆ ಶಾಲಾ ಮಕ್ಕಳಿಗೆ ಮತ್ತು ಕಾರ್ಪೊರೇಟ್‌ಗಳಲ್ಲಿ ಕೆಲಸ ಮಾಡುವವರು, ಮಹಿಳೆಯರಿಗೆ ಗುಜರಾತ್‌ನ ಪಾರಂಪರಿಕ ಕಲೆ ತರಬೇತಿ ಸಹಾ ಆಯೋಜಿಸಲಾಗಿದೆ ಎಂದರು.



# ಬಿಜೆಪಿ ಕಾರ್ಯಕರ್ತರಿಂದ ಮುಡಾ ಮುತ್ತಿಗೆ ಯತ್ನ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) ನಡೆದಿರುವ ಬಹುಕೋಟಿ ಹಗರಣ ಖಂಡಿಸಿ, ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಬೇಕೆಂದು ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ಮುಡಾ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು.



ನಗರದ ಬಿಜೆಪಿ ಕಚೇರಿ ಬಳಿ ಸಮಾವೇಶಗೊಂಡ ಬಳಿಕ ಮುಡಾ ಕಚೇರಿಗೆ ಕಾಲ್ನಡಿಗೆಯಲ್ಲಿ ಸಾಗಿದ ನೂರಾರು ಬಿಜೆಪಿ ಕಾರ್ಯಕರ್ತರನ್ನು ರಾಮಸ್ವಾಮಿ ವೃತ್ತದ ಸಮೀಪವಿರುವ ಮಹಾರಾಜ ಹೋಟೆಲ್ ಬಳಿ ಪೊಲೀಸರು ತಡೆದರು. ಈ ವೇಳೆ ಕಾರ್ಯಕರ್ತರು ಪೊಲೀಸರ ನಡುವೆ ಮಾತಿನ ಚಕಮಕಿ ಉಂಟಾಯಿತು. ಮುಡಾ ಕಚೇರಿವರೆಗೆ ಕಾಲ್ನಡಿಗೆಯಲ್ಲಿ ತೆರಳಲು ಅವಕಾಶ ಕೊಡಿ ಎಂದು ಕೇಳಿದರೂ ಪೊಲೀಸರು ಅವಕಾಶ ನೀಡಲಿಲ್ಲ. ಈ ವೇಳೆ ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಪ್ರತಿಭಟನಾಕಾರರನ್ನು ವಶಕ್ಕೆ ಪಡೆದ ಪೊಲೀಸರು ವಾಹನದಲ್ಲಿ ಕರೆದೊಯ್ದರು.

ಈ ವೇಳೆ ಮಾತನಾಡಿದ ಮಾಜಿ ಮೇಯರ್ ಶಿವಕುಮಾರ್, ಮುಡಾದಲ್ಲಿ ನಿವೇಶನಗಳ ಹಂಚಿಕೆಯಲ್ಲಿ ಭಾರೀ ಅಕ್ರಮವೆಸಗಲಾಗಿದೆ. ಬಡವರ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಬಡವರಿಗೆ ಸೇರಬೇಕಾದ ನಿವೇಶಗಳನ್ನು ಬಲಾಡ್ಯರಿಗೆ ನೀಡಿದೆ. 50:50 ನಿವೇಶನ ಹಂಚಿಕೆಯಲ್ಲಿ ಭಾರೀ ಅಕ್ರಮವೆಸಗಿದ್ದು, ಕಾನೂನುಬಾಹಿರವಾಗಿ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ. ಇದರಿಂದಾಗಿ ಪ್ರಾಧಿಕಾರಕ್ಕೆ 4 ಸಾವಿರ ಕೋಟಿಗೂ ಅಧಿಕ ಹಣ ನಷ್ಟವಾಗಿದೆ. ಸರ್ಕಾರ ಹಗರಣದಲ್ಲಿ ಭಾಗಿಯಾದವರನ್ನು ರಕ್ಷಿಸಲು ಹೊರಟಿದ್ದು, ಕೂಡಲೇ ಸಂಬಂಧಿಸಿದ ಎಲ್ಲಾ ಅಧಿಕಾರಿಗಳನ್ನು ಅಮಾನತು ಮಾಡಿ ಜೈಲಿಗೆ ಕಳುಹಿಸಬೇಕು. ನಗರಾಭಿವೃದ್ಧಿ ಸಚಿವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ದಲಿತರ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ದಲಿತ ವಿರೋಧಿ ಕೆಲಸ ಮಾಡುತ್ತಿದೆ. ಸಂವಿಧಾನದ ವಿಚಾರವಿಟ್ಟುಕೊಂಡು ಬಿಜೆಪಿ ಮೇಲೆ ಗೂಬೆ ಕೂರಿಸಲು ಯತ್ನಿಸುತ್ತಿದೆ. ಹಾಲು, ಇಂಧನ ಸೇರಿದಂತೆ ಅಗತ್ಯವಸ್ತುಗಳ ಬೆಲೆ ಏರಿಕೆ ಮಾಡಿ ಜನರನ್ನು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿಸುತ್ತಿದೆ ಎಂದು ಕಿಡಿ ಕಾರಿದರು.

ಪ್ರತಿಭಟನೆಯಲ್ಲಿ ಪಾಲಿಕೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್, ಮುಖಂಡರಾದ ಮಿರ್ಲೆ ಶ್ರೀನಿವಾಸಗೌಡ, ಜೋಗಿ ಮಂಜು, ಬಿ.ಎಂ. ರಘು, ಮಹೇಶ್‌ರಾಜೇ ಅರಸ್ ರಾಕೇಶ್‌ಗೌಡ, ಕಿರಣ್‌ಕುಮಾರ್‌ಗೌಡ, ನಿಶಾಂತ್, ಸೇರಿದಂತೆ ಹಲವರು ಭಾಗವಹಿಸಿದ್ದರು.

ಪ್ರತಿಭಟನೆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ರಾಮಸ್ವಾಮಿ ವೃತ್ತದಿಂದ ಮುಡಾ ಕಚೇರಿಗೆ ಸಾಗುವ ರಸ್ತೆಯುದ್ದಕ್ಕೂ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

# ಶಿಕ್ಷಕರ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಾಮರಾಜನಗರ:** 2024ನೇ ಸಾಲಿನ ರಾಷ್ಟ್ರಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿಗೆ ಅರ್ಹ ಶಿಕ್ಷಕರಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಸಲ್ಲಿಸಲುಜುಲೈ 15 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಯನ್ನು ವೆಬ್ ಸೈಟ್http://nationalawardstoteachers.edutation.gov.in/Login.aspx , http://nationalawardstoteachers.edutation.gov.in/welcome.aspx http://www/schooleducation.kar.nic.inನಲ್ಲಿ ಪರಿಶೀಲಿಸಬಹುದು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# ರಾಷ್ಟ್ರೀಯ ಲೋಕ್ ಅದಾಲತ್

**ಕೋಲಾರ:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಜುಲೈ 13 ರಂದು ರಾಷ್ಟ್ರೀಯ ಲೋಕ್ ಅದಾಲತನ್ನು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದೆ. ಸದರಿ ದಿವಸ ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್ ಅಂಗವಾಗಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ರಾಜ್ಯದ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಪಾವತಿಯನ್ನು ಪರಿಣಾಮಕಾರಿಯಾಗಿ ಹೆಚ್ಚಿಸಲು ಹಾಗೂ ಸ್ವಯಂ ತೆರಿಗೆ ಪಾವತಿ ಉತ್ತೇಜಿಸುವ ನಿಟ್ಟನಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿಮಾಡಿದಲ್ಲಿ ಶೇಕಡ 5ರಷ್ಟು ರಿಯಾಯಿತಿ ನೀಡಲು ಆದೇಶಿಸಲಾಗಿರುತ್ತದೆ. ಆದ್ದರಿಂದ ಸಾರ್ವಜನಿಕರು ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಾಕಿ ಇರುವ ತಮ್ಮ ಆಸ್ತಿ ತೆರಿಗೆಯನ್ನು ಪೂರ್ಣ ಪ್ರಮಾಣದಲ್ಲಿ ಪಾವತಿ ಮಾಡಿದರೆ ಶೇಕಡ 5ರಷ್ಟು ರಿಯಾಯಿತಿ ಪಡೆಯಬಹುದು. ಈ ಸೌಲಭ್ಯವನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ವ್ಯತ್ಯಯ

**ಕೋಲಾರ:** ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್ ಹೈವೇ ಮಾರ್ಗದಲ್ಲಿ ಕಮ್ಮಸಂದ್ರ ಗ್ರಾಮದ ಬಳಿ 66 ಕೆ.ವಿ. ವಿದ್ಯುತ್ ಮಾರ್ಗ ಹಾಗೂ ರಸ್ತೆಯ ನಡುವಿನ ಅಂತರವನ್ನು ಹೆಚ್ಚಿಸಬೇಕಾಗಿರುವುದರಿಂದ ಸದರಿ ದಿನಾಂಕಗಳಂದು ಕೆ.ಜಿ.ಎಫ್. ತಾಲ್ಲೂಕಿನ ಅಂಡರ್‌ಸನ್‌ಪೇಟೆ, ಕ್ಯಾಸಂಬಳ್ಳಿ ಮತ್ತು ದೊಡ್ಡಕಾರಿ 66/11 ಕೆವಿ ವಿದ್ಯುತ್ ಉಪಕೇಂದ್ರದ 11 ಕೆವಿ ಫೀಡರುಗಳಿಂದ ವಿದ್ಯುತ್ ಸರಬರಾಜು ಆಗುವ ಸುತ್ತಮುತ್ತಲ ಗ್ರಾಮಗಳಿಗೆ ಜುಲೈ 07 ಮತ್ತು ಜುಲೈ 09ರ ವರೆಗೆ ಬೆಳಿಗ್ಗೆ 9:00 ಗಂಟೆಯಿಂದ ಸಂಜೆ 06:00 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ. ಆದುದರಿಂದ ಗ್ರಾಹಕರು ಸಹಕರಿಸಬೇಕೆಂದು ಬೆ.ವಿ.ಕಂ. ಕೆ.ಜಿ.ಎಫ್. ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 7ರಂದು ದೈವಿಕ ರಥಯಾತ್ರೆ

**ಮೈಸೂರು:** ಜು.7ರಂದು ನಗರದ ವಿಶ್ವೇಶ್ವರ ನಗರದಲ್ಲಿರುವ ಜಗನ್ನಾಥ ಸ್ವಾಮಿ ದೇವಾಲಯದಿಂದ ವಿದ್ಯಾರಣ್ಯಪುರಂ ಉದ್ಯಾನದವರೆಗೆ ಪುರಿ ಜಗನ್ನಾಥ ಸಾಂಸ್ಕೃತಿಕ ಮತ್ತು ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ದೈವಿಕ ರಥಯಾತ್ರೆ, ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಆಡಳಿತಾಧಿಕಾರಿ ಘನಶ್ಯಾಂ ಪ್ರಧಾನ್ ತಿಳಿಸಿದರು. ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಧ್ಯಾಹ್ನ ಎರಡಕ್ಕೆ ರಥಯಾತ್ರೆ, ಆರಂಭವಾಗಲಿದೆ. ಇದಕ್ಕೂ ಮೊದಲು ಮಧ್ಯಾಹ್ನ 12ಕ್ಕೆ ವಿವಿಧ ಧಾರ್ಮಿಕ ಕಾರ್ಯಗಳು ನಡೆಯಲಿವೆ. ಈ ವೇಳೆ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ, ಪಾಲಿಕೆ ಮಾಜಿ ಸದಸ್ಯೆ ಶೋಭಾ ಸುನೀಲ್ ಅತಿಥಿಗಳಾಗಿರುವರೆಂದರು. ಗೋಷ್ಠಿಯಲ್ಲಿ ಜಿ.ಎಂ.ಗೋಪಾಲಕೃಷ್ಣ, ಜಯಶಂಕರ್, ಮೋತಿಲಾಲ್ ಹಾಗೂ ಇನ್ನಿತರರು ಹಾಜರಿದ್ದರು.

# 7ರಂದು ಕೃತಿ ಬಿಡುಗಡೆ

**ಮೈಸೂರು:** ಕವಿತಾ ಪ್ರಕಾಶನ ಹೊರ ತಂದಿರುವ ನಿವೃತ್ತ ಬ್ಯಾಂಕ್ ಅಧಿಕಾರಿ ರಘುಪತಿ ತಾಮ್ಹನ್‌ಕರ್ ಅವರ ಬ್ಯಾಂಕ್ ಸೇವಾವಧಿಯ ಸ್ವಾರಸ್ಯಕರ ಸಂಗತಿಯನ್ನೊಳಗೊಂಡ ನೋಟಿನ ನಂಟು ಎಂಬ ಕೃತಿ ಬಿಡುಗಡೆ ಸಮಾರಂಭ ಜು.7ರಂದು ಬೆಳಗ್ಗೆ 10.30ಕ್ಕೆ ಜೆಎಲ್‌ಬಿ ರಸ್ತೆಯ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರ್ಸ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಪ್ರಕಾಶನ ಸಂಸ್ಥೆಯ ಗಣೇಶ ಅಮೀನಗಡ ತಿಳಿಸಿದರು. ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆನರಾ ಬ್ಯಾಂಕ್ ವಿಭಾಗೀಯ ಪ್ರಬಂಧಕ ಕೆ.ಗೋಪಾಲ, ಬ್ಯಾಂಕ್ ಉದ್ಯೋಗಿ ಡಾ.ಶುಭಶ್ರೀ ಪ್ರಸಾದ್ ಅತಿಥಿಗಳಾಗಿರುವರು. ಹಿರಿಯ ಸಾಹಿತಿ ಡಾ.ಸಿಪಿಕೆ ಅಧ್ಯಕ್ಷತೆ ವಹಿಸುವರು. ಸುಮಾರು 40 ವರ್ಷಗಳ ಬ್ಯಾಂಕ್ ಅನುಭವವನ್ನು ಇವರು ಸ್ವಾರಸ್ಯಕರವಾಗಿ ಪುಸ್ತಕದಲ್ಲಿ ವಿವರಿಸಿದ್ದಾರೆ. ಅನೇಕ ಹಾಸ್ಯ ಘಟನೆಗಳು ಸಹಾ ಇವೆ ಎಂದರು.

# ಬೆಳೆ ಸಮೀಕ್ಷೆ ದಾಖಲಿಸಲು ಸಲಹೆ

**ಗುಂಡ್ಲುಪೇಟೆ:** ತಾಲ್ಲೂಕಿನ ರೈತರು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ಸೇರಿದಂತೆ ಇತರೆ ಮಾಹಿತಿ ದಾಖಲಿಸಲು ರೈತರ ಮೊಬೈಲ್ ಆಪ್ ಮೂಲಕ ಮುಂಗಾರು ರೈತರ ಬೆಳೆ ಸಮೀಕ್ಷೆ 2024-25 ನೇ ಸಾಲಿನಲ್ಲಿ ಬಿಡುಗಡೆ ಮಾಡಿದೆ ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೃಷಿ ಅಧಿಕಾರಿ ಶಶಿಧರ್ ತಿಳಿಸಿದ್ದಾರೆ. ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾದ ಸಮೀಕ್ಷೆಯ ರೈತರ ಹಾಗೂ ಖಾಸಗಿ ನಿವಾಸಿಗಳ( ಪಿಆರ್) ಮೊಬೈಲ್ ಆಪ್ ಬಿಡುಗಡೆಯಾಗಿದ್ದು ತಾಲೂಕಿನ ರೈತರು ತಮ್ಮ ಮೊಬೈಲ್ ಬಳಸಿ ತಾವೇ ಬೆಳೆ ಮಾಹಿತಿ ದಾಖಲಿಸುವುದರಿಂದ ಮಾಹಿತಿ ನಿಖರವಾಗಿರುತ್ತದೆ. ತಪ್ಪುಗಳಾಗುವ ಸಾಧ್ಯತೆ ಇರುವುದಿಲ್ಲ, ಸರ್ವೇ ನಂಬರ್ ಹಿಸ್ಸಾವಾರು ಬೆಳೆ ಸರಿಯಾಗಿ ದಾಖಲಾಗುತ್ತದೆ. ಎಂದು ಮಾಹಿತಿ ನೀಡಿರುವ ಅವರು ವಿವಿಧ ಯೋಜನೆಗಳಿಗೆ ಸರ್ಕಾರದಿಂದ ಬೆಳೆ ಸಮೀಕ್ಷೆ ಮಾಹಿತಿ ಬಳಸುತ್ತಿರುವುದರಿಂದ ರೈತರಿಗೆ ಅಲೆದಾಟ ತಪ್ಪುತ್ತದೆ.

# ಸ್ಥಳೀಯರ ಕನಸಿಗೆ ಮಣ್ಣೆರಚಿದ ಮೆಗಾ ಫುಡ್ ಪಾರ್ಕ್

**ಕೆ.ಆರ್.ಪೇಟೆ:** ನಿರುದ್ಯೋಗ ನಿವಾರಣೆ ಹಾಗೂ ಗ್ರಾಮೀಣ ಪ್ರದೇಶದಗಳ ಅಭಿವೃದ್ಧಿಯ ಹೆಸರಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಸಹಭಾಗಿತ್ವದಲ್ಲಿ ಬೂಕನಕೆರೆ ಹೋಬಳಿಯ ಬಣ್ಣೇನಹಳ್ಳಿಯ ಬಳಿ ಸುಮಾರು ನೂರು ಎಕರೆಗೂ ಹೆಚ್ಚು ಪ್ರದೇಶದಲ್ಲಿ ಪ್ರಾರಂಭಗೊಂಡ ಫೇವರಿಚ್ ಇನ್ಫ್ರಾ ಮೆಗಾ ಫುಡ್ ಪಾರ್ಕ್ ಸ್ಥಾಪನೆಯಾಗಿ ಕೆಲವೇ ವರ್ಷಗಳಲ್ಲಿ ಸುತ್ತಮುತ್ತಲ ಗ್ರಾಮಸ್ಥರಿಗೆ ಭ್ರಮ ನಿರಸನವಾದಂತಾಗಿದೆ.



2014ರಲ್ಲಿ ಆಗಿನ ಪ್ರಸ್ತುತ ಮುಖ್ಯಮಂತ್ರಿಗಳು ಶಂಕುಸ್ಥಾಪನೆ ನೆರವೇರಿಸಿ, ಪ್ರಾರಂಭಗೊಂಡ ಮೆಗಾ ಫುಡ್ ಪಾರ್ಕ್ ತನ್ನ ವ್ಯಾಪ್ತಿಗೆ ಬರುವ ಐಚನಹಳ್ಳಿ, ಬಣ್ಣೇನಹಳ್ಳಿ, ತಗಡೂರು, ವೆಂಕಟರಾಜಪುರ, ಅಶೋಕನಗರ, ಚಿಕನಹಳ್ಳಿ ಗ್ರಾಮಗಳ ವ್ಯಾಪ್ತಿಯ ಜನರ ಬದುಕಿನ ಜೊತೆ ತನ್ನ ಕಾರ್ಖಾನೆಗಳ ತ್ಯಾಜ್ಯ ನೀರು ಹಾಗೂ ಘನ ತ್ಯಾಜ್ಯವನ್ನು ಸಂಸ್ಕರಣೆ ಮಾಡದೇ, ರೈತರ ಜಮೀನಿಗೆ ಹಾಗೂ ಸಮೀಪವಿರುವ ಕೆರೆ ಕಟ್ಟೆಗಳಿಗೆ ನೇರವಾಗಿ ಬಿಡಲಾಗುತ್ತಿದೆ ಎಂಬ ಆರೋಪಗಳು ಕೇಳಿ ಬರುತ್ತಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ನಿರ್ಮಾಣಗೊಂಡ ಬೃಹತ್ ಫುಡ್ ಪಾರ್ಕ್‌ನಲಿ ಕೆಲಸ ನಿರ್ವಹಿಸಬಲ್ಲ ಹಾಗೂ ಹೆಚ್ಚಿನ ವಿದ್ಯಾವಂತರಿದ್ದರೂ ಸ್ಥಳೀಯರಿಗೆ ಉದ್ಯೋಗದಲ್ಲಿ ಮೊದಲ ಆದ್ಯತೆ ನೀಡಬೇಕೆಂಬ ನಿಯಮವಿದ್ದರೂ, ಆದೇಶ ಗಾಳಿಗೆ ತೂರಿ ಹೊರ ರಾಜ್ಯದ ವಲಸಿಗರಿಗೆ ಮೊದಲ ಆದ್ಯತೆ ನೀಡಿ, ಬೆರಳೆಣಿಕೆಯಷ್ಟು ಸ್ಥಳಿಯ ಯುವ ಜನರಿಗೆ ಮಾತ್ರ ಕೆಲಸ ನೀಡಿ, ಅರ್ಹ ನಿರುದ್ಯೋಗಿ ಯುವಕರು ಮೆಗಾ ಫುಡ್ ಪಾರ್ಕ್ ಆಡಳಿತ ಮಂಡಳಿಯ ವ್ಯವಸ್ಥೆ ಬಗ್ಗೆ ಹಿಡಿ ಶಾಪಹಾಕುವಂತಾಗಿದೆ. ತ್ಯಾಜ್ಯ ನೀರಿನಿಂದ ರೈತರ ಬದುಕು ನರಕ: ಒಂದು ಸಣ್ಣ ಪುಟ್ಟ ಕಾರ್ಖಾನೆಗಳು ನಿರ್ಮಾಣವಾದರೆ ರೈತರ ಬದುಕು ಹಸನಾಗುತ್ತದೆ ಎಂದು ಹಗಲು ಇರುಳು ಕನಸು ಕಾಣುವ ದೇಶದ ಬೆನ್ನೆಲುಬು ರೈತಾಪಿ ವರ್ಗ ತನ್ನ ವ್ಯಾಪ್ತಿಯಲ್ಲಿ ಬೃಹತ್ ಕೈಗಾರಿಕೆ ಘಟಕ ನಿರ್ಮಾಣವಾದರೆ ನಮ್ಮ ಬದುಕು ಉಜ್ವಲವಾಗುವುದು ಕಟ್ಟಿಟ್ಟ ಬುತ್ತಿ ಎಂದು ಜಪ ಮಾಡುತ್ತಾ ಕುಳಿತಿದ್ದ ಮುಗ್ಧ ಜನರು ಯಾವುದೇ ಕಾರ್ಖಾನೆಗಳು ತನ್ನ ತ್ಯಾಜ್ಯ ನೀರು ಹಾಗೂ ಘನ ತ್ಯಾಜ್ಯವನ್ನು ಸಂಸ್ಕರಿಸಿ ಶುದ್ಧಿಕರಿಸಿ ಮತ್ತೆ ಮರುಬಳಕೆ ಮಾಡಬೇಕೆಂಬ ಕಟ್ಟುನಿಟ್ಟಿನ ನಿಯಮವಿದ್ದರೂ, ಸಮೀಪವಿರುವ ಐಚನಹಳ್ಳಿ ಏತನೀರಾವರಿ ಯೋಜನೆಯ ಮೂಲಕ ಪ್ರಸ್ತುತ ದಿನಗಳಲ್ಲಿ ತುಂಬಿಕೊಳ್ಳುವ ಹನಾರ್ ಕಟ್ಟೆಗೆ ಮೆಗಾ ಫುಡ್ ಪಾರ್ಕ್ ತ್ಯಾಜ್ಯ ನೀರನ್ನು ಹರಿಸುತ್ತಿರುವ ಪರಿಣಾಮ ಆ ಕಟ್ಟೆಯ ನೀರು ಕೃಷಿ ಚಟುವಟಿಕೆಗೆ ಇರಲಿ ಅನ್ನ ನೀಡುವ ಭೂಮಿ ತಾಯಿ ಮಡಿಲಿಗೆ ಈ ತ್ಯಾಜ್ಯದ ನೀರು ತಾಗದಿರಲಿ ಎಂದು ಸುತ್ತಮುತ್ತಲಿನ ಗ್ರಾಮಸ್ಥರು ದೇವರಲ್ಲಿ ಪ್ರಾರ್ಥಿಸುತ್ತಿದ್ದಾರೆ. ದುರದೃಷ್ಟಕರ ಎಂದರೆ ಮಳೆಗಾಲದಲ್ಲಿ ಈ ಕಟ್ಟೆ ತುಂಬಿ ಪಕ್ಕದಲ್ಲಿರುವ ಐಚನಹಳ್ಳಿ ಗ್ರಾಮದ ಕೆರೆಗೆ ಹರಿಯುತ್ತದೆ. ಆ ಭಾಗದ ಜನರು ದಿನನಿತ್ಯ ಆ ಕೆರೆಯ ನೀರನ್ನು ಕೃಷಿ ಚಟುವಟಿಕೆ ದಿನ ಬಳಕೆಗೆ ಬಳಸುತ್ತಾರೆ ಇದರಿಂದಾಗಿ ಆ ಭಾಗದ ವಯೋವೃದ್ಧರಿಗೆ ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ ಎಂದು ಆರೋಪಿಸಿ ಈ ನರಕದಿಂದ ನಮಗೆ ಮುಕ್ತಿಕೊಡಿ ಎಂದು ಸುತ್ತಮುತ್ತಲಿನ ಗ್ರಾಮಸರ ಮನವಿಯಾಗಿದೆ. ಕಣ್ಮುಚ್ಚಿ ಕುಳಿತ ಅಧಿಕಾರಿಗಳು: ಮೆಗಾ ಫುಡ್ ಪಾರ್ಕ್ ತನ್ನ ತ್ಯಾಜ್ಯ ನೀರನ್ನು ಸುತ್ತಮುತ್ತಲ ಕೆರೆ-ಕಟ್ಟೆ ಗಳಿಗೆ ಹಾಗೂ ರೈತರ ಜಮೀನುಗಳಿಗೆ ಯಾವುದೇ ಪರಿಸರ ನಿಯಮಗಳ ಪಾಲನೆ ಮಾಡದೆ ಬಿಡುತ್ತಿದ್ದಾರೆ. ಜ್ಯೂಸ್ ತಯಾರಿಸುತ್ತಿರುವ ಕಾರ್ಖಾನೆಯಲ್ಲಿ ಕೇವಲ ಹಣ್ಣಿನಿಂದ ಬಂದಂತಹ ಕುಡಿಯುವ ತಂಪಿನ ಪಾನೀಯ ತಯಾರಿಸಬೇಕು ಆದರೆ ನಿಯಮಗಳನ್ನ ಗಾಳಿಗೆ ತೂರಿ ಕೆಮಿಕಲ್ ಜ್ಯೂಸನ್ನು ಮೆಗಾ ಫುಡ್ ಪಾರ್ಕ್‌ನ ಮಾಲೀಕ ತಯಾರಿಸುತ್ತಿದ್ದಾರೆ ಎಂದು ಸ್ಥಳೀಯ ಸಾಮಾಜಿಕ ಹೋರಾಟಗಾರರು ಮಾನವ ಹಕ್ಕು ಆಯೋಗಕ್ಕೆ ಮನವಿಯ ಮೇರೆಗೆ ಮಾನವ ಹಕ್ಕು ಆಯೋಗ ಪರಿಸರ ಕೇಂದ್ರೀಯ ಇಲಾಖೆ ಅಧಿಕಾರಿಗಳ ಸಮ್ಮುಖದಲ್ಲಿ ಸೂಕ್ತ ಕ್ರಮ ವಹಿಸಬೇಕೆಂದು ಲಿಖಿತವಾಗಿ ಮನವಿ ಸಲ್ಲಿಸಿದ ಪರಿಣಾಮ ಕೆಲ ದಿನಗಳ ಹಿಂದಷ್ಟೇ ಹಿರಿಯ ಅಧಿಕಾರಿಗಳು ಪರಿವೀಕ್ಷಣೆ ಮಾಡಿದ ಸಂದರ್ಭದಲ್ಲೂ ಕೆರೆಗೆ ತ್ಯಾಜ್ಯ ನೀರನ್ನು ಬಿಟ್ಟಿರುವುದು ಕಂಡ ನಂತರ ಸ್ಥಳೀಯ ಸಾರ್ವಜನಿಕರು ತ್ಯಾಜ್ಯ ನೀರನ್ನ ಕೆರೆಕಟ್ಟೆಗೆ ಹರಿಸುತ್ತಿರುವ ಮೆಗಾ ಫುಡ್ ಪಾರ್ಕ್ ವಿರುದ್ಧ ಸ್ಥಳದಲ್ಲಿಯೇ ಶಿಸ್ತು ಕ್ರಮ ಜರುಗಿಸಬೇಕು ಎಂದು ಪಟ್ಟು ಹಿಡಿದರು ಸೂಕ್ತ ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿ ಹೊರಟ ಅಧಿಕಾರಿಗಳು ಈ ದಿನದವರೆಗೂ ಯಾವುದೇ ಶಿಸ್ತು ಕ್ರಮವಹಿಸಿಲ್ಲ ಎಂದು ಸ್ಥಳೀಯ ಸಾರ್ವಜನಿಕರು ಗಂಭೀರವಾಗಿ ಆರೋಪಿಸುತ್ತಿದ್ದಾರೆ.

## ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ನಿರ್ದೇಶನ

# ಮಳೆ ಅನಾಹುತ ತಡೆಗೆ ಸನ್ನದ್ಧರಾಗಿ

**ಮಡಿಕೇರಿ:** ಕೊಡಗು ಜಿಲ್ಲೆಯಲ್ಲಿ ವಾಡಿಕೆಯಂತೆ ಸರಾಸರಿ ಮಳೆಯಾಗುತ್ತಿದ್ದು, ಆ ನಿಟ್ಟಿನಲ್ಲಿ ಅತಿವೃಷ್ಟಿಯಿಂದ ಪ್ರಾಕೃತಿಕ ಅವಘಡಗಳು ಸಂಭವಿಸಿದಲ್ಲಿ ಸಮರ್ಥವಾಗಿ ಎದುರಿಸಲು ಅಧಿಕಾರಿಗಳು ಸದಾ ಸನ್ನದ್ಧರಾಗಿರಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ನಿರ್ದೇಶನ ನೀಡಿದ್ದಾರೆ.



ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪ್ರಾಕೃತಿಕ ವಿಕೋಪ ನಿರ್ವಹಣೆ ಸಂಬಂಧ ಗುರುವಾರ ನಡೆದ ಸಭೆಯಲ್ಲಿ ಮಾತನಾಡಿದರು.

ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ ಉತ್ತಮ ಮಳೆಯಾಗುತ್ತಿದ್ದು, ಕೆರೆಕಟ್ಟೆ, ತೊರೆ ಹಾಗೂ ಹಳ್ಳಕೊಳ್ಳಗಳು ತುಂಬಿ ಹರಿಯುತ್ತಿವೆ. ಆ ದಿಸೆಯಲ್ಲಿ ಮುಂದಿನ ದಿನಗಳಲ್ಲಿ ಮತ್ತಷ್ಟು ಹೆಚ್ಚಿನ ಮಳೆಯಾಗುವ ಸಾಧ್ಯತೆ ಇರುವುದರಿಂದ ಪ್ರಾಕೃತಿಕ ವಿಕೋಪ ನಿರ್ವಹಣೆಯ ಕಡೆ ಹೆಚ್ಚಿನ ಗಮನಹರಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಪ್ರಾಕೃತಿಕ ವಿಕೋಪ ಎದುರಿಸುವಲ್ಲಿ ಈಗಾಗಲೇ ಹೋಬಳಿವಾರು ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದ್ದು, ವಾರಕ್ಕೊಮ್ಮೆಯಾದರೂ ತಮ್ಮ ಹೋಬಳಿ ವ್ಯಾಪ್ತಿಗೆ ಭೇಟಿ ನೀಡಿ ಪ್ರಾಕೃತಿಕ ವಿಕೋಪ ಸಂಬಂಧ ಮಾಹಿತಿ ಪಡೆಯುವುದರ ಜೊತೆಗೆ, ಹೆಚ್ಚಿನ ಮಳೆಯಾದಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡುವಂತಾಗಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ತಹಶೀಲ್ದಾರರು ತಮ್ಮ ತಾಲ್ಲೂಕು ವ್ಯಾಪ್ತಿಯಲ್ಲಿ ಮಳೆ ಸಂಬಂಧಿಸಿದಂತೆ ಸ್ಥಳೀಯ ಮಟ್ಟದಲ್ಲಿ ಹವಾಮಾನ ಮುನ್ಸೂಚನೆ ಬಗ್ಗೆ ಕಾಲ ಕಾಲಕ್ಕೆ ಮಾಹಿತಿ ಹಂಚಿಕೊಳ್ಳಬೇಕು. ತಮ್ಮ ಹಾಗೂ ತಾಪಂ.ಇಒ ಹಂತದಲ್ಲಿ ತಾಲ್ಲೂಕು ಮಟ್ಟದಲ್ಲಿ ಸಭೆ ನಡೆಸಬೇಕು. ಹಾಗೆಯೇ ಗ್ರಾಮ ಪಂಚಾಯತ್ ಮಟ್ಟದಲ್ಲಿಯೂ ಸಹ ಸಭೆಗಳನ್ನು ಮಾಡಿ ಪ್ರಾಕೃತಿಕ ವಿಕೋಪ ಎದುರಿಸಲು ಸನ್ನದ್ಧರಾಗಬೇಕು ಎಂದರು.

ಹೆಚ್ಚಿನ ಮಳೆಯಾದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ರಜೆಗೆ ಸಂಬಂಧಿಸಿದಂತೆ ಡಿಡಿಪಿಐ ಅವರಿಗೆ ಮಾಹಿತಿ ನೀಡಬೇಕು. ಡಿಡಿಪಿಐ ಅವರು ರಜೆ ಘೋಷಣೆ ಸಂಬಂಧ ಜಿಲ್ಲಾ ಮಟ್ಟದಲ್ಲಿ ಅಗತ್ಯ ಕ್ರಮವಹಿಸಬೇಕು ಎಂದರು.

ಪ್ರಾಕೃತಿಕ ವಿಕೋಪ ಎದುರಿಸುವ ಸಂಬಂಧ ಎನ್‌ಡಿಆರ್‌ಎಫ್, ಪೊಲೀಸ್, ಅಗ್ನಿಶಾಮಕ ಇತರರ ಜೊತೆಗೂಡಿ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳುವ ಬಗ್ಗೆ 'ಪ್ರಾತ್ಯಕ್ಷಿಕೆ' ಏರ್ಪಡಿಸುವ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಬೇಕು. ಅತಿವೃಷ್ಟಿ ಉಂಟಾದ ಸಂದರ್ಭದಲ್ಲಿ ಎಚ್ಚರವಹಿಸಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಬೇಕು. ಅತೀವೃಷ್ಟಿ ಉಂಟಾಗದಲ್ಲಿ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳುವ ಸಂಬಂಧ ಅಗತ್ಯ ಕ್ರಮಕೈಗೊಳ್ಳಬೇಕು ಎಂದರು.

ಅತಿವೃಷ್ಟಿ ಪರಿಸ್ಥಿತಿಯನ್ನು ಎದುರಿಸಲು ಎಲ್ಲಾ ರೀತಿಯ ಮುನ್ನೆಚ್ಚರ ಕ್ರಮಗಳನ್ನು ಕೈಗೊಳ್ಳಬೇಕು. ತುರ್ತು ಸಂದರ್ಭದಲ್ಲಿ ಯಾವ ರೀತಿ ಕ್ರಮಕೈಗೊಳ್ಳಬೇಕು ಎಂದು ಮಾಹಿತಿ ಇರಬೇಕು. ಅಂತಹ ಸಮಯದಲ್ಲಿ ಹೆಚ್ಚಿನ ಅರಿವು ಪ್ರತಿಯೊಬ್ಬರಲ್ಲಿಯೂ ಇರಬೇಕು ಎಂದು ಜಿಲ್ಲಾಧಿಕಾರಿ ಅವರು ಹೇಳಿದರು.

ಪ್ರಾಕೃತಿಕ ವಿಕೋಪ ಸಂದರ್ಭದಲ್ಲಿ ಯಾವುದೇ ರೀತಿಯ ಜೀವ ಹಾನಿಯಾಗದಂತೆ ಎಚ್ಚರವಹಿಸಬೇಕು. ಯಾವುದೇ ರೀತಿಯ ಅವಘಡಗಳು ಸಂಭವಿಸದಂತೆ ಸದಾ ಎಚ್ಚರವಹಿಸಬೇಕು. ಈ ಬಗ್ಗೆ ಜಲಾಶಯಗಳು, ನದಿಗಳಿಗೆ ಯಾರೂ ಸಹ ತೆರಳದಂತೆ ನೋಡಿಕೊಳ್ಳಬೇಕು ಎಂದರು.

ಜಿಲ್ಲೆಯ ಪ್ರವಾಸಿ ಸ್ಥಳಗಳಿಗೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುತ್ತಾರೆ. ಅಂತಹ ಸಂದರ್ಭದಲ್ಲಿ ಯಾವುದೇ ರೀತಿಯ ಅವಘಡಗಳು ಸಂಭವಿಸಿದಂತೆ ಎಚ್ಚರ ವಹಿಸಬೇಕು. ಮಾಹಿತಿ ಫಲಕ ಅಳವಡಿಸಬೇಕು ಎಂದು ವೆಂಕಟ್ ರಾಜಾ ಅವರು ಹೇಳಿದರು.

ಕಳೆದ 2018 ರಿಂದ ಮೂರು ವರ್ಷದ ಅವಧಿಯಲ್ಲಿ ಆಗಸ್ಟ್ ತಿಂಗಳಲ್ಲಿಯೇ ಹೆಚ್ಚಿನ ಮಳೆಯಾಗಿದೆ. ಆದ್ದರಿಂದ ಜುಲೈ ಮತ್ತು ಆಗಸ್ಟ್ ತಿಂಗಳಲ್ಲಿ ಹೆಚ್ಚಿನ ಎಚ್ಚರವಹಿಸಬೇಕು. ಕರೆ ಮಾಡಿದಾಗ ಸ್ವೀಕರಿಸಬೇಕು. ಸಾರ್ವಜನಿಕರಿಗೆ ಅಧಿಕಾರಿಗಳು ಸ್ಪಂದಿಸಬೇಕು. ಜೊತೆಗೆ ತಹಶೀಲ್ದಾರರು ಕಾಲ ಕಾಲಕ್ಕೆ ಮಾಹಿತಿ ನೀಡುವುದು ಸಹ ಅತೀ ಮುಖ್ಯವಾಗಿದೆ ಎಂದರು.

ರಸ್ತೆ ಬದಿಗೆ ಮರ ಹಾಗೂ ವಿದ್ಯುತ್ ಕಂಬ ಬಿದ್ದಲ್ಲಿ ಸಕಾಲದಲ್ಲಿ ತೆರವುಗೊಳಿಸುತ್ತಿದ್ದಾರೆ. ಹಾಗೆಯೇ ಬರೆ ಕುಸಿತ ಉಂಟಾದಲ್ಲಿ ಮಣ್ಣು ತೆರವುಗೊಳಿಸುವ ಕಾರ್ಯವನ್ನು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ನಿರ್ವಹಿಸುತ್ತಿದ್ದು, ಮುಂದಿನ ದಿನಗಳಲ್ಲಿಯೂ ಹೆಚ್ಚಿನ ಮಳೆಯಾದಲ್ಲಿ ಸಾರಿಗೆ ಸಂಪರ್ಕ ಮತ್ತಿತರ ವ್ಯತ್ಯಯಗಳು ಉಂಟಾದಲ್ಲಿ ಕೂಡಲೇ ಸ್ಪಂದಿಸುವ ಕಾರ್ಯವಾಗಬೇಕು. ಸಾರ್ವಜನಿಕರಿಂದ ದೂರು ಬರದಂತೆ ಎಚ್ಚರವಹಿಸಬೇಕು ಎಂದು ಜಿಲ್ಲಾಧಿಕಾರಿ ಅವರು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಉತ್ತಮ ಮಳೆ ಆಗುತ್ತಿರುವ ಹಿನ್ನೆಲೆ ಜುಲೈ ಅಂತ್ಯದೊಳಗೆ ಕಂದಾಯ ಸಚಿವರು ಕೊಡಗು ಜಿಲ್ಲೆಗೆ ಭೇಟಿ ನೀಡುವ ಸಾಧ್ಯತೆ ಇದೆ ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಇದೇ ಸಂದರ್ಭದಲ್ಲಿ ತಿಳಿಸಿದರು.

ಜಿ.ಪಂ.ಸಿಇಒ ವರ್ಣಿತ್ ನೇಗಿ ಅವರು ಕೆಡಿಪಿ ಸಭೆಗೆ ಸಿದ್ಧತೆ ಕೈಗೊಂಡಿರುವ ಸಂಬಂಧ ಅಧಿಕಾರಿಗಳಿಂದ ಮಾಹಿತಿ ಪಡೆದರು. ಉಪ ವಿಭಾಗಾಧಿಕಾರಿ ವಿನಾಯಕ ನರ್ವಾಡೆ, ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಎನ್.ವೀಣಾ, ವಿವಿಧ ಇಲಾಖೆ ಅಧಿಕಾರಿಗಳು ಇತರರು ಇದ್ದರು.

# ನೀಟ್ ಹಗರಣದ ತನಿಖೆಗೆ ಒತ್ತಾಯ

**ಮೈಸೂರು:** ನೀಟ್ ಹಗರಣದ ಕುರಿತು ಉನ್ನತ ಮಟ್ಟದ ನ್ಯಾಯಾಂಗ ತನಿಖೆ ನಡೆಸಿ ಹಗರಣದಲ್ಲಿ ಭಾಗಿಯಾಗಿರುವವರಿಗೆ ಕಠಿಣ ಶಿಕ್ಷೆ ನೀಡಬೇಕೆಂದು ಒತ್ತಾಯಿಸಿ ಎಐಡಿಎಸ್‌ಒ ವತಿಯಿಂದ ಮಾನಸ ಗಂಗೋತ್ರಿಯ ಕ್ಲಾಕ್ ಟವರ್ ಬಳಿ ಪ್ರತಿಭಟನೆ ನಡೆಸಲಾಯಿತು.




ನೀಟ್-2024ರ ಫಲಿತಾಂಶದಲ್ಲಿ ದೊಡ್ಡ ಮಟ್ಟದ ಭ್ರಷ್ಟಾಚಾರ ನಡೆದಿರುವುದರ ಬೆನ್ನಲ್ಲೇ ಇದೀಗ ಕೇಂದ್ರ ಸರ್ಕಾರದ ನಿರ್ಲಕ್ಷ್ಯ ಧೋರಣೆಯಿಂದ ಯುಜಿಸಿ ನೆಟ್ ಪರೀಕ್ಷೆಯನ್ನು ಪರೀಕ್ಷೆ ಮುಗಿದ 24 ಗಂಟೆಗಳ ನಂತರ ರದ್ದುಗೊಳಿಸಲಾಗಿದೆ. ಸಿಎಸ್‌ಐಆರ್ ನೆಟ್ ಪರೀಕ್ಷೆಯನ್ನೂ ಮುಂದೂಡಲಾಗಿದೆ. ಈ ಎಲ್ಲಾ ಘಟನೆಗಳು ನೀಟ್ ಹಗರಣದ ಹಿನ್ನೆಲೆಯಲ್ಲಿ ಸಂಭವಿಸಿದ್ದು ದೇಶ ಶಿಕ್ಷಣ ಕ್ಷೇತ್ರದಲ್ಲಿನ ಅತಿದೊಡ್ಡ ಹಗರಣ ಎಂದು ಕಿಡಿ ಕಾರಿದರು. ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಕುರಿತು ಕಿಂಚಿತ್ತೂ ಕಾಳಜಿ ವಹಿಸದೇ ನಿರ್ಲಕ್ಷ್ಯ ತೋರಿಸುತ್ತಿರುವುದು ಕೇಂದ್ರ ಸರ್ಕಾರದ ವಿದ್ಯಾರ್ಥಿ ವಿರೋಧಿ ಧೋರಣೆ ತೋರಿಸುತ್ತದೆ. ಇದರ ವಿರುದ್ಧ ದೇಶದೆಲ್ಲೆಡೆ ಹೋರಾಟಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರ ಒತ್ತಡಕ್ಕೆ ಮಣಿದು ಎನ್‌ಟಿಎಯ ಮಹಾನಿರ್ದೇಶಕರನ್ನು ತೆಗೆದುಹಾಕಿ ಹಗರಣದ ಆರೋಪಗಳನ್ನು ಮರೆಮಾಡಲು ಪ್ರಯತ್ನಿಸುತ್ತಿದೆ. ಆದರೆ, ಎನ್‌ಟಿಎ ರದ್ದುಗೊಳಿಸುವ ಮತ್ತು ಉನ್ನತ ಮಟ್ಟದ ನ್ಯಾಯಾಂಗ ತನಿಖೆಯ ಬೇಡಿಕೆಗಳು ಇನ್ನೂ ಈಡೇರಿಲ್ಲ. ಹೀಗಾಗಿ ಪ್ರಕರಣದ ಕುರಿತು ನ್ಯಾಯಾಂಗ ತನಿಖೆ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಬೇಕೆಂದು ಒತ್ತಾಯಿಸಿದರು.

# ಗ್ರಾಪಂ ಅಧ್ಯಕ್ಷರಿಂದ ಪಠ್ಯ ಸಾಮಗ್ರಿ ವಿತರಣೆ

**ಮಂಡ್ಯ:** ತಾಲೂಕಿನ ಕರಡಿ ಕೊಪ್ಪಲು ಗ್ರಾಮದಲ್ಲಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಉಪ್ಪರಕನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ. ಸಿ. ಕರೀಗೌಡ ಸ್ಕೂಲ್ ಬ್ಯಾಗ್ ಮತ್ತು ಲೇಖನಿ ಸಾಮಗ್ರಿಗಳನ್ನು ವಿತರಿಸಿದರು,ಬಳಿಕ ಮಾತನಾಡಿದ ಅವರು ನನ್ನ ಹುಟ್ಟು ಹಬ್ಬದಲ್ಲಿ ಸರ್ಕಾರಿ ಶಾಲೆಗೆ ಅಗತ್ಯವಿರುವ ಪರಿಕರಗಳನ್ನು ನೀಡುತ್ತಾ ಬಂದಿದ್ದೇನೆ ಈ ವರ್ಷವೂ ಸಹ ಉಪ್ಪರಕನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಂಪಾಪುರ, ಗಂಟ, ಗೌಡನಹಳ್ಳಿ, ಮಲ್ಲಘಟ್ಟ ಗ್ರಾಮಗಳ ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ಬ್ಯಾಗ್ ಮತ್ತು ನೋಟ್ ಬುಕ್ ಗಳನ್ನು ನೀಡಿದ್ದೇನೆ. ಕಳೆದ ಮೂರು ವರ್ಷಗಳಿಂದಲೂ ಶಾಲೆಗಳಿಗೆ ಅಗತ್ಯವಿರುವ ನೀರಿನ ಫಿಲ್ಟರ್. ಕಂಪ್ಯೂಟರ್‌ಗಳನ್ನು ಕೊಡುಗೆಯಾಗಿ ನೀಡಿದ್ದೇನೆ. ಮುಂದೆಯೂ ಸಹ ಇದೇ ರೀತಿ ಸಮಾಜಮುಖಿ ಕಾರ್ಯಗಳಲ್ಲಿ ಕೈಜೋಡಿಸುತ್ತೇನೆ ಎಂದ ಅವರು ಖಾಸಗಿ ಶಾಲೆಯ ವ್ಯಾಮೋಹ ಬಿಟ್ಟು ನಿಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸಿ ನನ್ನ ಮಗನನ್ನು ಕೂಡ ಸರ್ಕಾರಿ ಶಾಲೆಯಲ್ಲಿ ಓದಿಸುತ್ತಿದ್ದೇನೆ ನನಗೆ ಸರ್ಕಾರಿ ಶಾಲೆಯ ಬಗ್ಗೆ ಹೆಮ್ಮೆಯಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಉಪ್ಪರಕನಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಹೆಚ್. ಎಂ. ನಾಗೇಶ್ ಮಾತನಾಡಿ, ಕೆ. ಸಿ. ಕರೀಗೌಡರು ಆಡಂಬರದ ಹುಟ್ಟುಹಬ್ಬ ಆಚರಣೆಯಲ್ಲಿ ತೊಡಗದೆ ಮತ್ತೊಬ್ಬರಿಗೆ ಮಾದರಿಯಾಗುವಂತಹ ಕೆಲಸದಲ್ಲಿ ತೊಡಗಿದ್ದಾರೆ.ಇವರಿಗೆ ದೇವರು ಆಯಸ್ಸು ಆರೋಗ್ಯ ಕೊಟ್ಟು ಕಾಪಾಡಲಿ ಇವರ ರಾಜಕೀಯ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು.

# ಮಹಿಳಾ ಸಬಲೀಕರಣಕ್ಕೆ ಎಸ್‌ಡಿಎಂ ಕೊಡುಗೆ ಅಪಾರ

**ಪಿರಿಯಾಪಟ್ಟಣ:** ಮಹಿಳೆಯರು ಆರ್ಥಿಕವಾಗಿ ಸಬಲರಾಗಲು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕೊಡುಗೆ ಅಪಾರ ಎಂದು ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಘಟಕ ನಿಕಟ ಪೂರ್ವ ಅಧ್ಯಕ್ಷ ಗೊರಹಳ್ಳಿ ಜಗದೀಶ್ ತಿಳಿಸಿದರು.



ತಾಲೂಕಿನ ಬೆಟ್ಟದಪುರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಚೇರಿ ವತಿಯಿಂದ ಬೆಕ್ಕರೆ ಗ್ರಾಮದಲ್ಲಿ ಶ್ರೀ ದುರ್ಗಾ ಜ್ಞಾನವಿಕಾಸ ಕೇಂದ್ರ ವತಿಯಿಂದ ಸದಸ್ಯರಿಗೆ ಹಮ್ಮಿಕೊಂಡಿರುವ ಟೈಲರಿಂಗ್ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕುಟುಂಬ ನಿರ್ವಹಣೆಯಲ್ಲಿ ಪುರುಷರಷ್ಟೇ ಪ್ರಧಾನ ಪಾತ್ರ ಮಹಿಳೆಯರದ್ದು ಇದೆ, ಸತಿ ಪತಿ ಒಂದೇ ನಾಣ್ಯದ ಎರಡು ಮುಖಗಳಂತೆ ಪರಸ್ಪರ ಅನ್ಯೂನತೆಯಿಂದ ಇದ್ದರೆ ಕುಟುಂಬದ ಅಭಿವೃದ್ಧಿ ಸಾಧ್ಯ, ಮಹಿಳೆಯರು ಸಹ ಸ್ವಾವಲಂಬಿ ಉದ್ಯೋಗಗಳ ತರಬೇತಿ ಪಡೆದು ಆರ್ಥಿಕವಾಗಿ ಸಬಲರಾಗುವಂತೆ ತಿಳಿಸಿದರು.

ಸಂಸ್ಥೆಯ ಬೆಟ್ಟದಪುರ ಯೋಜನಾಧಿಕಾರಿ ಸಂತೋಷ್ ಕುಮಾರ್ ಜೈನ್ ಅವರು ಮಾತನಾಡಿ, ಮಹಿಳೆಯರು ಸ್ವ ಸಹಾಯ ಸಂಘಗಳನ್ನು ರಚಿಸಿ ಸಂಸ್ಥೆಯ ಯೋಜನೆಗಳನ್ನು ಸದ್ಬಳಕೆ ಮಾಡಿಕೊಳ್ಳುವ ಜೊತೆಗೆ ಸಂಸ್ಥೆಯ ವತಿಯಿಂದ ಸ್ವಾವಲಂಬಿ ಉದ್ಯೋಗಗಳ ಉಚಿತ ತರಬೇತಿ ನೀಡಲಾಗುತ್ತಿದೆ ಎಂದರು.

ಮುಖಂಡರಾದ ಕೆ.ಎಸ್ ಷಣ್ಮುಖಾರಾಧ್ಯ ಅವರು ಮಾತನಾಡಿ, ಸಮಾಜದ ಅಭಿವೃದ್ಧಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕೊಡುಗೆ ಅಪಾರವಾಗಿದೆ, ಮಹಿಳೆಯರು ಸಹ ಪುರುಷರಷ್ಟೇ ಸರಿ ಸಮಾನರು ಎಂಬುದನ್ನು ನಿರೂಪಿಸಲು ಸಂಸ್ಥೆಯ ಹಲವು ನೂತನ ಯೋಜನೆಗಳು ಸಹಕಾರಿಯಾಗಿವೆ, ಸರ್ಕಾರೇತರ ಸಂಸ್ಥೆಯಾಗಿ ಸಮಾಜದ ಬದಲಾವಣೆಗೆ ಶ್ರಮಿಸುತ್ತಿರುವುದು ಶ್ಲಾಘನೀಯ ಎಂದರು.

ಕೊಡಗು ಜಿಲ್ಲೆಯ ಸಿರಿಧಾನ್ಯ ಉತ್ಪನ್ನಗಳ ಮೇಲ್ವಿಚಾರಕಿ ರಜನಿ ಅವರು ಮಾತನಾಡಿ ಸಿರಿಧಾನ್ಯಗಳ ಬಳಕೆಯಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದರು.

ಟೈಲರಿಂಗ್ ತರಬೇತಿ ಶಿಕ್ಷಕಿ ಸಾಹೇರ ಅವರು ಮಾತನಾಡಿ ಮಹಿಳೆಯರು ಕುಟುಂಬ ನಿರ್ವಹಣೆಗಾಗಿ ಬಿಡುವಿನ ವೇಳೆಯಲ್ಲಿ ಟೈಲರಿಂಗ್ ಮಾಡುವ ಮೂಲಕ ಅದರಿಂದ ಬರುವ ಆದಾಯದಲ್ಲಿ ಆರ್ಥಿಕವಾಗಿ ಸಬಲರಾಗಬಹುದು ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಭವಾನಿ ಷಣ್ಮುಖಾರಾಧ್ಯ ವಹಿಸಿದ್ದರು, ಜ್ಞಾನ ವಿಕಾಸ ಯೋಜನೆ ಸಮನ್ವಯದಿಕಾರಿ ಮಮಿತಾ ಕಾರ್ಯಕ್ರಮ ಕುರಿತು ಮಾತನಾಡಿದರು, ಗ್ರಾಮ ಪಂಚಾಯತಿ ಸದಸ್ಯೆ ಜ್ಯೋತಿ ರವಿಕುಮಾರ್, ಒಕ್ಕೂಟ ಅಧ್ಯಕ್ಷೆ ರೂಪ, ಮುಖಂಡರಾದ ಚಂದ್ರಶೇಖರ್ ನಂಜಪ್ಪ ಹಾಗೂ ಒಕ್ಕೂಟದ ಪದಾಧಿಕಾರಿಗಳು ಸದಸ್ಯರು ಇದ್ದರು.

# ಮಿನಿ ವಿಧಾನಸೌಧದಲ್ಲಿ ಲಿಫ್ಟ್ ಹಾಗೂ ರ್‍ಯಾಂಪ್ ಅಳವಡಿಸುವಂತೆ ಹಿರಿಯ ನಾಗರಿಕರ ಪ್ರತಿಭಟನೆ

**ಕೋಲಾರ:** ನಗರದ ಮಿನಿ ವಿಧಾನಸೌಧದಲ್ಲಿ ವಯೋವೃದ್ಧರು, ಅಂಗವಿಕಲರಿಗಾಗಿ ಲಿಫ್ಟ್ ಹಾಗೂ ರ್‍ಯಾಂಪ್ ಅಳವಡಿಸುವಂತೆ ಒತ್ತಾಯಿಸಿ ತಹಶೀಲ್ದಾರ್ ಕಚೇರಿ ಮುಂದೆ ಶುಕ್ರವಾರ ನಿವೃತ್ತ ಸರ್ಕಾರಿ ನೌಕರರ ಸಂಘ ಹಾಗೂ ಹಿರಿಯ ನಾಗರಿಕರ ವೇದಿಕೆ ವತಿಯಿಂದ ಪ್ರತಿಭಟನೆ ನಡೆಸಿ ಗ್ರೇಟ್ 2 ತಹಶೀಲ್ದಾರ್ ಹನ್ನಾ ಮರಿಯಾಗೆ ಮನವಿ ಸಲ್ಲಿಸಲಾಯಿತು.

ಜಿಲ್ಲೆಯಲ್ಲಿ ಅತಿ ಹೆಚ್ಚು ನೋಂದಣಿ ಪ್ರಕ್ರಿಯೆ ನಡೆಯುವ ಹಾಗೂ ರಾಜ್ಯ ಸರ್ಕಾರಕ್ಕೆ ಅತಿ ಹೆಚ್ಚು ತೆರಿಗೆ ಸಂಗ್ರಹಿಸುವ ಮೂಲಕ ಆದಾಯದ ಮೂಲವಾಗಿರುವ ಉಪನೋಂದಣಿ ಕಚೇರಿಗೆ ಹೋಗಲು ವೃದ್ಧರು, ಮಹಿಳೆಯರು ಹಾಗೂ ಅಂಗವಿಕಲರಿಗೆ ಸೂಕ್ತ ಸೌಲಭ್ಯಗಳಿಲ್ಲ. ಲಿಫ್ಟ್, ರ್‍ಯಾಂಪ್, ಶುದ್ಧ ಕುಡಿಯುವ ನೀರು ಹಾಗೂ ಶೌಚಾಲಯ ನಿರ್ಮಿಸುವಂತೆ ಸಾರ್ವಜನಿಕರ ಜೊತೆಗೆ ಕೆಲ ಸಂಘಟನೆಯ ಮುಖಂಡರೂ ಹಲವು ಬಾರಿ ಪ್ರತಿಭಟನೆ, ಹೋರಾಟ ಮಾಡಿದ್ದಾರೆ. ಆದರೆ ಯಾವ ಹೋರಾಟ, ಪ್ರತಿಭಟನೆಗಳೂ ಸಮಸ್ಯೆಯನ್ನು ಬಗೆಹರಿಸಿಲ್ಲ ಎಂದು ಪ್ರತಿಭಟನಾಕಾರರು ಕಿಡಿಕಾರಿದರು.

ಜನಪ್ರತಿನಿಧಿಗಳು, ಜಿಲ್ಲಾಡಳಿತಕ್ಕೆ ಮಿನಿ ವಿಧಾನಸೌಧದಲ್ಲಿರುವ ಸಮಸ್ಯೆಗಳ ಬಗ್ಗೆ ಗೊತ್ತಿದ್ದರೂ, ಕುರುಡರಂತೆ, ಕಿವುಡರಂತೆ ವರ್ತಿಸುತ್ತಿದ್ದಾರೆ. ಹಲವು ಬಾರಿ ಸಮಸ್ಯೆಗಳನ್ನು ಬಗೆಹರಿಸುವಂತೆ ಮನವಿ ಮಾಡಿದ್ದರೂ ಪ್ರಯೋಜನವಾಗಿಲ್ಲ. ಜನರು ವಿಧಿಯಿಲ್ಲದೆ ಇಲ್ಲಿಗೆ ರಿಜಿಸ್ಟರ್‌ಗೆ ಬರುತ್ತಾರೆ. ಮಹಡಿ ಮೇಲಿರುವ ಕಚೇರಿಗೆ ಹೋಗಲು ಮೆಟ್ಟಲುಗಳು ಹತ್ತಬೇಕಾಗಿದೆ. ದೈಹಿಕವಾಗಿ ಅಶಕ್ತರು ಮತ್ತು ವೃದ್ಧರು ಹರಸಹಾಸ ಪಡಬೇಕಾಗಿದೆ. ಪ್ರತಿದಿನ ಲಕ್ಷಾಂತರ ರೂಪಾಯಿ ಟ್ಯಾಕ್ಸ್ ಹೋಗುತ್ತದೆ. ಜನರಿಗೆ ಅನುಕೂಲಕರವಾಗಿ ಇರುವಂತೆ ಮೂಲಸೌಕರ್ಯಗಳನ್ನು ಕಲ್ಪಿಸಿ ಎಂದು ಒತ್ತಾಯಿಸಿದರು.

ಮಿನಿವಿಧಾನಸೌಧ ಕಟ್ಟಡ ಬೃಹತ್ತಾಗಿವೆ. ಅಗತ್ಯ ತಕ್ಕಂತೆ ಸೌಲಭ್ಯ, ಜನರಿಗೆ ಸಿಗಬೇಕಾದ ಸ್ಪಂದನೆ ಇಲ್ಲ. ಇನ್ನು 60 ದಿನಗಳ ಒಳಗಾಗಿ ನಮ್ಮ ಬೇಡಿಕೆಯನ್ನು ಈಡೇರಿಸಬೇಕು. ಇಲ್ಲವಾದಲ್ಲಿ ತಹಸೀಲ್ದಾರ್ ಕಚೇರಿ ಮುಂದೆ ಉಗ್ರವಾದ ಪ್ರತಿಭಟನೆ ನಡೆಸಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಸಿದರು.


## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯಪಾಲಕ ಅಭಿಯಂತರರವರ ಕಛೇರಿ, ಬಸವನಗುಡಿ ವಿಭಾಗ, ವಿದ್ಯಾಪೀಠ, ಚೆನ್ನಮ್ಮನಕೆರೆ ಅಚ್ಚುಕಟ್ಟು, ಶ್ರೀಕಂಠೇಶ್ವರ ಪಾರ್ಕ್, ಬನಶಂಕರಿ 3ನೇ ಹಂತ, ವಿದ್ಯಾಪೀಠ, ಬೆಂಗಳೂರು - 560085 ದೂ: 080-26792218 ಇ-ಮೇಲ್ : eesouthbg@gmail.com

ಸಂ. ಕಾಅ(ಬಿಜಿ)/ಟೆಂಡರ್/01/2024-25 ದಿನಾಂಕ : 04-07-2024

### ಅಲ್ಪಾವಧಿ ಟೆಂಡರ್ ಪ್ರಕಟಣೆ

(ಕರ್ನಾಟಕ ಸರ್ಕಾರದ ಕೆಪಿಪಿ ಪೋರ್ಟಲ್ ಮೂಲಕ ಮಾತ್ರ)

ಕೆಳಸಹಿದಾರರು ಕೆಳಕಂಡ ಕಾಮಗಾರಿಗಳಿಗಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ನೋಂದಣಿಯಾದ ಗುತ್ತಿಗೆದಾರರು ಅಥವಾ ಸಿಪಿಡಬ್ಲ್ಯುಡಿ / ಕೆಪಿಡಬ್ಲ್ಯುಡಿ / ರೈಲ್ವೆ / ಎಂಇಎಸ್ ಅಥವಾ ರಾಜ್ಯ ಸರ್ಕಾರದ ಯಾವುದೇ ಸಂಸ್ಥೆಯಲ್ಲಿ ಸಮಾನ ನೋಂದಣಿ ಹೊಂದಿರುವ ಹೆಸರಾಂತ ಏಜೆನ್ಸಿಗಳಿಂದ ಐಟಂ ದರ ಆಧಾರದ ಮೇಲೆ ಕೆಳಕಂಡ ಸರಕುಗಳಿಗೆ ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

| ಕ್ರ. | ಕಾಮಗಾರಿಯ ಹೆಸರು |
|---|---|
| 1 | ವಿದ್ಯಾಪೀಠ ಉಪ ವಿಭಾಗದಲ್ಲಿ 2024ನೇ ವರ್ಷದ ಮಳೆಗಾಲದ ಅವಧಿಗಾಗಿ ತಾತ್ಕಾಲಿಕ ನಿಯಂತ್ರಣಾ ಕೊಠಡಿಯ ಸ್ಥಾಪನೆ. **ಕಾಮಗಾರಿಯ ಅಂದಾಜು ಮೌಲ್ಯ** : ರೂ.15.00 ಲಕ್ಷಗಳು. **ಇಎಂಡಿ** : ರೂ.37,500/-. **ವರ್ಗ** : ಇತರೆ |
| 2 | ದೊಡ್ಡಗಣಪತಿ ಉಪ ವಿಭಾಗದಲ್ಲಿ 2024ನೇ ವರ್ಷದ ಮಳೆಗಾಲದ ಅವಧಿಗಾಗಿ ತಾತ್ಕಾಲಿಕ ನಿಯಂತ್ರಣಾ ಕೊಠಡಿಯ ಸ್ಥಾಪನೆ. **ಕಾಮಗಾರಿಯ ಅಂದಾಜು ಮೌಲ್ಯ** : ರೂ.15.00 ಲಕ್ಷಗಳು. **ಇಎಂಡಿ** : ರೂ.37,500/-. **ವರ್ಗ** : ಇತರೆ |

(1) ಟೆಂಡರ್ ದಾಖಲೆಯನ್ನು ಕರ್ನಾಟಕ ಸರ್ಕಾರದ ಕೆಪಿಪಿ ಪೋರ್ಟಲ್ (https://kppp.karnataka.gov.in) ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಬಹುದು. (2) ಭರ್ತಿ ಮಾಡಿದ ಟೆಂಡರ್ ದಾಖಲೆಯನ್ನು ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ : **11-07-2024 ರಂದು ಸಂಜೆ 5.30 ಗಂಟೆಯವರೆಗೆ** (3) ಟೆಂಡರ್ ದಾಖಲೆಯನ್ನು ತೆರೆಯುವ ದಿನಾಂಕ : **19-07-2024 ರಂದು ಸಂಜೆ 5.30 ಗಂಟೆಗೆ**

ಸಹಿ/- ಕಾರ್ಯಪಾಲಕ ಅಭಿಯಂತರರು, ಬಸವನಗುಡಿ ವಿಭಾಗ

## ಯುವನಿಧಿಗೆ 1130 ಮಂದಿ ನೋಂದಣಿ

**ಮಡಿಕೇರಿ:** ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಗೆ ಡಿಸೆಂಬರ್ 26 ರಿಂದ ನೋಂದಣಿ ಪ್ರಕ್ರಿಯೆ ಚಾಲನೆಗೊಂಡಿದ್ದು, ಯೋಜನೆಗೆ ಇದುವರೆಗೆ 1134 ಮಂದಿ ಹೆಸರು ನೋಂದಣಿ ಮಾಡಿಸಿದ್ದಾರೆ ಎಂದು ಜಿಲ್ಲಾ ಉದ್ಯೋಗ ವಿನಿಯಮಾಯಾಧಿಕಾರಿ ರೇಖಾ ಗಣಪತಿ ತಿಳಿಸಿದ್ದಾರೆ.

ಪ್ರತೀ ತಿಂಗಳು 3,000 ಮತ್ತು 1500 ರೂ. ನಿರುದ್ಯೋಗ ಭತ್ಯೆಯನ್ನು ನೀಡುವ ಗ್ಯಾರಂಟಿ ಯೋಜನೆ ಇದಾಗಿದ್ದು, ಜನವರಿ 12 ರಿಂದ ಅರ್ಹ ಫಲಾನುಭವಿಗಳ ಖಾತೆಗೆ ನೇರ ನಗದು ವರ್ಗಾವಣೆ ಆರಂಭವಾಗಿದೆ. ಜಿಲ್ಲೆಯಲ್ಲಿ ಯುವನಿಧಿ ಯೋಜನೆಗೆ ಇದುವರೆಗೆ 1134 ಮಂದಿ ಹೆಸರು ನೋಂದಣಿ ಮಾಡಿದ್ದು, 562 ಮಂದಿಗೆ ಯುವನಿಧಿ ಯೋಜನೆ ತಲುಪುತ್ತಿದೆ. ಯುವನಿಧಿ ಯೋಜನೆ ಪಡೆಯುತ್ತಿರುವವರು ಪ್ರತಿ ತಿಂಗಳು ಸ್ವಯಂ ದೃಢೀಕರಣವನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕಿದೆ ಎಂದು ಜಿಲ್ಲಾ ಉದ್ಯೋಗವಿನಿಯಮಾಯಾಧಿಕಾರಿ ರೇಖಾ ಗಣಪತಿ ತಿಳಿಸಿದ್ದಾರೆ.

ಕುಶಾಲನಗರ ತಾಲ್ಲೂಕಿನಲ್ಲಿ 177, ಮಡಿಕೇರಿ ತಾಲ್ಲೂಕಿನಲ್ಲಿ 304, ಪೊನ್ನಂಪೇಟೆ ತಾಲ್ಲೂಕಿನಲ್ಲಿ 133,




ಸೋಮವಾರಪೇಟೆ ತಾಲ್ಲೂಕಿನಲ್ಲಿ 317, ವಿರಾಜಪೇಟೆ ತಾಲ್ಲೂಕಿನಲ್ಲಿ 203 ಮಂದಿ ಹೆಸರು ನೋಂದಾಯಿಸಿದ್ದಾರೆ.

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಮುಖಾಂತರ ಸರ್ಕಾರದ ಮಹತ್ತರ ಯೋಜನೆಯಾದ ಯುವಜನತೆಯ ಉಜ್ವಲ ಭವಿಷ್ಯಕ್ಕಾಗಿ ಸರ್ಕಾರದ ಗ್ಯಾರಂಟಿ ಯೋಜನೆಗೆ ಚಾಲನೆ ನೀಡಲಾಗಿದೆ.

ಯುವನಿಧಿ ಯೋಜನೆಯಡಿ ಸೇವಾಸಿಂಧು ಪೋರ್ಟಲ್‌ನಲ್ಲಿ ನೋಂದಾಯಿಸಿರುವ ಕೊಡಗು ಜಿಲ್ಲೆಗೆ ಸಂಬಂಧಿಸಿದ ಅರ್ಹ ಫಲಾನುಭವಿಗಳು ತಮ್ಮ ವಿದ್ಯಾರ್ಹತೆಗೆ ಸಂಬಂಧಿಸಿದ ಮೂಲ ಅಂಕಪತ್ರಗಳು, ಆಧಾರ್ ಕಾರ್ಡ್ ಹಾಗೂ ಇತರ ದಾಖಲಾತಿಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ, (ರೂಂ ನಂ-22, ಎರಡನೇ ಮಹಡಿ, ಜಿಲ್ಲಾಡಳಿತ ಭವನ ಕಟ್ಟಡ ಕೊಡಗು ಜಿಲ್ಲೆ, ಮಡಿಕೇರಿ) ಇಲ್ಲಿಗೆ ಪರಿಶೀಲನೆಗೆ ಹಾಜರಾಗಬೇಕು.

ಹಾಗೆಯೇ ಯುವನಿಧಿ ಯೋಜನೆಗೆ ಅರ್ಹರಾದ ಎಲ್ಲಾ ಫಲಾನುಭವಿಗಳು ಪ್ರತಿ ಮಾಹೆಯ 25 ನೇ ತಾರೀಖಿನ ಒಳಗಾಗಿ ಉನ್ನತ ವ್ಯಾಸಂಗ ಮುಂದುವರೆಸದಿರುವ ಕುರಿತು ಹಾಗೂ ಯಾವುದೇ ಉದ್ಯೋಗ ಹೊಂದಿಲ್ಲದಿರುವ ಕುರಿತು ಸ್ವಯಂ ಘೋಷಣೆ ನೀಡಬೇಕಾಗಿರುತ್ತದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ರೇಖಾ ಗಣಪತಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗೆ ಸಹಾಯವಾಣಿ ಸಂಖ್ಯೆ 1800 599 9918 ಗೆ ಕರೆ ಮಾಡುವ ಮೂಲಕ ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಮಡಿಕೇರಿ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಅವರು ತಿಳಿಸಿದ್ದಾರೆ.

## ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಆಯೋಜಿಸಲಾಗಿರುವ ದ್ವಿಚಕ್ರ ವಾಹನ ರಿಪೇರಿ ಮತ್ತು ಸೇವೆ ಕುರಿತ 30 ದಿನಗಳ ಉಚಿತ ತರಬೇತಿಯನ್ನು ಆಗಸ್ಟ್ 21 ರಿಂದ ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾಡ್ ‌ನ್ನು ಕಡ್ಡಾಯವಾಗಿ ಹೊಂದಿರಬೇಕು. ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9740982585, 9380162042 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ತಿಳಿಸಿದ್ದಾರೆ.

## ಸ್ವಚ್ಛತೆಗೆ ಒತ್ತು ನೀಡಲು ಗೋದಾಮು ಮಾಲೀಕರಿಗೆ ಮನವಿ

**ಮಡಿಕೇರಿ:** ಮಡಿಕೇರಿ ನಗರಸಭೆ ವ್ಯಾಪ್ತಿಯಲ್ಲಿ ಈಗಾಗಲೇ ಡೆಂಗ್ಯೂ, ಚಿಕನ್ ಗುನ್ಯಾ, ಮಲೇರಿಯಾ ಪ್ರಕರಣಗಳು ದಿನದಿಂದ ದಿನಕ್ಕೆ ಗುರುತಿಸಲ್ಪಡುತ್ತಿದ್ದು, ಈ ಸಾಂಕ್ರಾಮಿಕ ಖಾಯಿಲೆಗಳು ಸೊಳ್ಳೆಗಳಿಂದ ಬರುವುದಾಗಿದೆ. ಮುಖ್ಯವಾಗಿ ಮಳೆಗಾಲದ ಸಂದರ್ಭದಲ್ಲಿ ಮಳೆ ನೀರು ಅಲ್ಲಲ್ಲಿ ಶೇಖರಣೆಗೊಂಡು ಸೊಳ್ಳೆಗಳು ಮೊಟ್ಟೆಯಿಟ್ಟು ಸಂತಾನೋತ್ಪತ್ತಿಗೆ ಕಾರಣವಾಗುತ್ತದೆ. ಆದ್ದರಿಂದ ನಗರಸಭೆ ವ್ಯಾಪ್ತಿಯ ಎಲ್ಲಾ ಗುಜರಿ ಮತ್ತು ಪಂಚರ್ ಶಾಪ್ ಹಾಗೂ ಹಳೆ ಟಯರ್ ದಾಸ್ತಾನು, ಎಳನೀರು ವ್ಯಾಪಾರಗಳ ವ್ಯಾಪಾರಸ್ಥರು ನಿಮ್ಮ-ನಿಮ್ಮ ಅಂಗಡಿ/ಗೋದಾಮುಗಳ ಕಟ್ಟಡದ ಹೊರಗೆ ರಸ್ತೆ ಬದಿಗಳಲ್ಲಿ ಅಂಗಡಿಗಳಲ್ಲಿ ಶೇಖರಿಸಲ್ಪಡುವ ಪ್ಲಾಸ್ಟಿಕ್ ವಸ್ತುಗಳು, ಡ್ರಂಗಳು, ಟಯರ್‌ಗಳು, ವಾಹನದ ಬಿಡಿಭಾಗಗಳು ಹಾಗೂ ಇತರೆ ವಸ್ತುಗಳಲ್ಲಿ ನೀರು ಶೇಖರಣೆಗೊಳ್ಳದಂತೆ ಜಾಗ್ರತೆ ವಹಿಸುವುದು. ನಿಯಮ ಉಲ್ಲಂಘಿಸಿದರೆ ಕಾನೂನು ರೀತಿಯಲ್ಲಿ ಕ್ರಮಕೈಗೊಳ್ಳಲಾಗುವುದೆಂದು ಈ ಮೂಲಕ ಪ್ರಕಟಪಡಿಸಲಾಗಿದೆ ಎಂದು ನಗರಸಭೆ ಪೌರಾಯುಕ್ತರಾದ ವಿಜಯ್ ಅವರು ತಿಳಿಸಿದ್ದಾರೆ.

## ಪುಸ್ತಕ ಬಹುಮಾನಕ್ಕೆ ಅರ್ಜಿ

**ಮಡಿಕೇರಿ:** ಕರ್ನಾಟಕ ಯಕ್ಷಗಾನ ಅಕಾಡೆಮಿಯು ಯಕ್ಷಗಾನ (ತೆಂಕು, ಬಡಗು ಬಡಾಬಡಗು, ಯಕ್ಷಗಾನ ಗೊಂಬೆಯಾಟ), ಮೂಡಲಪಾಯ ಯಕ್ಷಗಾನ, ಕೇಳಿಕೆ, ಘಟ್ಟದಕೋರೆ ಮತ್ತು ತಾಳಮದ್ದಲೆ, ಇತ್ಯಾದಿ ಕಲಾಪ್ರಕಾರಗಳಲ್ಲಿ 2022 ಹಾಗೂ 2023ನೇ ಸಾಲಿನ ಕ್ಯಾಲೆಂಡರ್ ವರ್ಷದಲ್ಲಿ (ದಿನಾಂಕ:01.01.2022 ರಿಂದ 31.12.2022 ಹಾಗೂ ದಿನಾಂಕ:01.01.2023 ರಿಂದ 31.12.2023ರ ಒಳಗೆ) ಪ್ರಕಟಿಸಿರುವ ಪುಸ್ತಕಗಳನ್ನು ಬಹುಮಾನಕ್ಕೆ ಆಯ್ಕೆ ಮಾಡಲು ಲೇಖಕರಿಂದ/ಪ್ರಕಾಶಕರಿಂದ ಅರ್ಜಿ ಆಹ್ವಾನಿಸಲಾಗಿದೆ.ಆಯ್ಕೆಯಾದ ಪುಸ್ತಕಕ್ಕೆ ರೂ.25 ಸಾವಿರ ಗಳ ಬಹುಮಾನವನ್ನು ನೀಡಲಾಗುವುದು. ಯಕ್ಷಗಾನದ ವಿವಿಧ ಆಯಾಮಗಳ ಬಗ್ಗೆ ಸಂಗೀತ, ಆಹಾರ್ಯ, ಅಭಿನಯ, ಸಂಶೋಧನೆ, ವಿಮರ್ಶೆ, ಜೀವನಚರಿತ್ರೆ, ಪ್ರಸಂಗ ಪುಸ್ತಕ ಮತ್ತಿತರ ಪ್ರಕಾರಗಳನ್ನು ಒಳಗೊಂಡ ಪುಸ್ತಕಗಳನ್ನು ಬಹುಮಾನಕ್ಕಾಗಿ ಆಹ್ವಾನಿಸಿದೆ. ಪುಸ್ತಕ ಬಹುಮಾನಕ್ಕೆ ಸಲ್ಲಿಸುವ ಪುಸ್ತಕವನ್ನು ಪಠ್ಯಕ್ಕಾಗಿ ಸಿದ್ಧಪಡಿಸಿರಬಾರದು ಹಾಗೂ ಸಂಪಾದಿತ ಕೃತಿ ಅಥವಾ ಅಭಿನಂದನ ಕೃತಿಯಾಗಿರಬಾರದು, ಸ್ವರಚಿತವಾಗಿರಬೇಕು. ಪ್ರಥಮ ಮುದ್ರಣ ಆವೃತ್ತಿಯಾಗಿರಬೇಕು. ಬಹುಮಾನಕ್ಕೆ ಪುಸ್ತಕಗಳನ್ನು ಕಳುಹಿಸುವವರು ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಅಕಾಡೆಮಿ, ಕನ್ನಡ ಭವನ, ಎರಡನೇ ಮಹಡಿ, ಚಾಲುಕ್ಯ ವಿಭಾಗ, ಜೆ.ಸಿ.ರಸ್ತೆ, ಬೆಂಗಳೂರು 560002, ಕೂಡಲೇ ಅರ್ಜಿಯೊಂದಿಗೆ ಪುಸ್ತಕದ ನಾಲ್ಕು ಪ್ರತಿಗಳನ್ನು ಕಡ್ಡಾಯವಾಗಿ ಕಳುಹಿಸುವುದು. ಯಾವುದೇ ಕಾರಣಕ್ಕೂ ಪುಸ್ತಕಗಳನ್ನು ಹಿಂದಿರುಗಿಸಲಾಗುವುದಿಲ್ಲ. ಹೆಚ್ಚಿನ ವಿವರಗಳನ್ನು ಹಾಗೂ ಅರ್ಜಿಯನ್ನು ಕಚೇರಿಯ ವೇಳೆಯಲ್ಲಿ ಅಕಾಡೆಮಿಯಿಂದ (ದೂ:080-22113146) ಪಡೆಯಬಹುದು ಹಾಗೂ ಅರ್ಜಿಯನ್ನು ಆಯಾಯ ಜಿಲ್ಲೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದಾಗಿದೆ.

## ಶ್ರೀನಿವಾಸಯ್ಯಗೆ ಚಿನ್ನದ ಪದಕ

**ಮಂಡ್ಯ:** ಮಂಡ್ಯ ಜಿಲ್ಲಾ ಗೃಹರಕ್ಷಕದಳ, ಮಂಡ್ಯ ಘಟಕದಲ್ಲಿ ಸಾಫ್ಟ್ ಆಫೀಸರ್ (ಪಬ್ಲಿಸಿಟಿ) ಆಗಿ ಸೇವೆ ಸಲ್ಲಿಸುತ್ತಿರುವ ಸಿ. ಶ್ರೀನಿವಾಸಯ್ಯ ಅವರು 2023 ನೇ ಸಾಲಿನ ರಾಜ್ಯ ಸರ್ಕಾರದ ಆದೇಶದಂತೆ ಜೂನ್ 11 ರಂದು ಮುಖ್ಯಮಂತ್ರಿಗಳ ಚಿನ್ನದ ಪದಕ ಪ್ರದಾನವಾಗಿರುತ್ತದೆ. ಮಂಡ್ಯ ಜಿಲ್ಲಾ ಗೃಹರಕ್ಷಕದಳದ ವತಿಯಿಂದ ಅಧಿಕಾರಿಗಳಾದ ಡಿ. ವಿನೋದ್ ಖನ್ನಾ ಕಮಾಂಡೆಂಟ್ ಹಾಗೂ ಪುರುಷೋತ್ತಮ್ ರಾವ್ ಎ ಡೆಪ್ಯೂಟಿ ಕಮಾಂಡೆಂಟ್, ಬೋಧಕ ವರ್ಗದವರು ಮತ್ತು ಕಚೇರಿಯ ಸಿಬ್ಬಂದಿವರ್ಗದವರು, ಗೃಹರಕ್ಷಕ ಅಧಿಕಾರಿಗಳು ಹಾಗೂ ಗೃಹರಕ್ಷಕರು ಪದಕ ಪುರಸ್ಕೃತರನ್ನು ಪ್ರಶಂಸಿಸಿರುತ್ತಾರೆ ಎಂದು ಮಂಡ್ಯ ಜಿಲ್ಲಾ ಗೃಹರಕ್ಷಕದಳದ ಸಮಾದೇಷ್ಟರು ತಿಳಿಸಿದ್ದಾರೆ.



## ಪದಾಧಿಕಾರಿಗಳ ಆಯ್ಕೆ

**ಬೆಂಗಳೂರು:** ಇಲ್ಲಿನ ದಿನಪತ್ರಿಕೆ ವಿತರಕರ ಪತ್ತಿನ ಸಹಕಾರ ಸಂಘಕ್ಕೆ 2024-2029 ಸಾಲಿನ ಚುನಾವಣೆ ನಡೆದು ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಅಚುನಾವಣೆಯಲ್ಲಿ ಅಧ್ಯಕ್ಷರಾಗಿ ಎಲ್. ಜೀವನ್ ಹಾಗೂ ಮಹೇಶ್, ನರಸಿಂಹ ರೆಡ್ಡಿ ಕೆ. ಎಲ್, ಶ್ರೀನಿವಾಸ್ ಟಿ, ಮೋಹನ್ ಕುಮಾರ್ ಆರ್, ಹೇಮಂತ್ ಕುಮಾರ್ ಎಸ್, ಚಂದ್ರಕುಮಾರ್ ಯು, ಜಗದೀಶ್ ಆರ್, ಶ್ವೇತ ಬಿ.ಕೆ. ಪದಾಧಿಕಾರಿಗಳಾಗಿ ಅವಿರೋಧವಾಗಿ ಆಯ್ಕೆಯಾಗಿರುತ್ತಾರೆ. ಎಲ್. ಜೀವನ್ ಬೆಂಗಳೂರಿನ ಬ್ಯಾಂಕ್ ಕಾಲೋನಿಯಲ್ಲಿ ಕಳೆದ 23 ವರ್ಷಗಳಿಂದ ಪತ್ರಿಕಾ ವಿತರಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.



## ಹೆಬ್ಬಾಳು ಗ್ರಾಪಂ ಕಚೇರಿಗೆ ಬೀಗ

**ಬೇಲೂರು:** ತಾಲೂಕಿನ ಹೆಬ್ಬಾಳು ಗ್ರಾಮ ಪಂಚಾಯತಿಯಲ್ಲಿ ಇತ್ತೀಚಿನ ದಿನದಂದು ಸಾರ್ವಜನಿಕರಿಗೆ ಯಾವುದೇ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಲ್ಲಿ ಆಡಳಿತ ತೀವ್ರ ನಿರಾಸಕ್ತಿ ಹೊಂದಿದೆ, ಕಚೇರಿಗೆ ಬೇಕಾಬಿಟ್ಟಿ ಬರುತ್ತಾರೆ. ಇಲ್ಲಿನ ಪಿಡಿಒ ಸೇರಿದಂತೆ ನೌಕರರು ಜನತೆಯೊಂದಿಗೆ ಉಡಾಫೆಯಿಂದ ವರ್ತಿಸುತ್ತಾರೆ. ಪಂಚಾಯತಿ ಆಡಳಿತ ನೆಪಮಾತ್ರಕ್ಕೆ ನಡೆಯುತ್ತಿದೆ ಎಂದು ಹೆಬ್ಬಾಳು ಗ್ರಾಮಸ್ಥರು ಕಚೇರಿಗೆ ಬೀಗ ಜಡಿದು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.



ಹೆಬ್ಬಾಳು ಗ್ರಾಮಸ್ಥರು ಕಚೇರಿಗೆ ಬೀಗ ಹಾಕಿದ ಸಂದರ್ಭದಲ್ಲಿ ಸಿಬ್ಬಂದಿ ಬೀಗ ಹಾಕುವುದನ್ನು ತಡೆಯಲು ಯತ್ನಿಸಿದರು. ಈ ಸಂದರ್ಭದಲ್ಲಿ ಸಿಬ್ಬಂದಿ ಮತ್ತು ಗ್ರಾಮಸ್ಥರ ನಡುವೆ ಮಾತಿನ ಚಕಮಕಿಗೆ ಕಾರಣವಾಗಿತ್ತು. ಬಳಿಕ ಸ್ಥಳಕ್ಕೆ ಆಗಮಿಸಿ ಹೆಬ್ಬಾಳು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅವಿನಾಶ್ ಗೆ ಕಚೇರಿ ಒಳಗೆ ಪ್ರವೇಶಿಸಲು ಮುಂದಾದ ಸಂದರ್ಭದಲ್ಲಿ ಪ್ರತಿಭಟನಾಕಾರರು ಮೊದಲು ಸಮಸ್ಯೆ ಇರುವ ಸ್ಥಳಕ್ಕೆ ಬನ್ನಿ ಎಂದು ಕಚೇರಿಗೆ ಪುನಃ ಬೀಗ ಹಾಕಿ ಕರೆದುಕೊಂಡು ಹೋದರು. ಸುಮಾರು 10 ಗಂಟೆಗೆ ಗ್ರಾಮ ಪಂಚಾಯತಿಗೆ ಬೀಗ ಹಾಕಿದ ಕಾರಣದಿಂದ ಮಧ್ಯಾಹ್ನ 3 ಗಂಟೆವರೆಗೆ ಸಾರ್ವಜನಿಕರು ತಮ್ಮ ಕೆಲಸಗಳಿಗೆ ಪರದಾಡಬೇಕಾದ ಪರಿಸ್ಥಿತಿ ಉಂಟಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ರೈತ ಸಂಘದ ಬಸವರಾಜು, ಮಲ್ಲಿಕಾರ್ಜುನ ಮತ್ತು ಚಂದ್ರಶೇಖರ, ಹೆಬ್ಬಾಳು ಗ್ರಾಮ ಪಂಚಾಯತಿ ಇತ್ತೀಚಿಗೆ ಜನತೆಗೆ ಯಾವುದೇ ಸೌಲಭ್ಯಗಳನ್ನು ನೀಡಲು ಸಂಪೂರ್ಣ ವಿಫಲವಾಗಿದೆ. ವಿದ್ಯುತ್ ದೀಪ, ಕುಡಿಯುವ ನೀರು ಸೇರಿದಂತೆ ರಸ್ತೆ ಚರಂಡಿಗಳ ನಿರ್ಮಾಣಕ್ಕೆ ನಿಧಾನ ಧೋರಣೆ ಅನುಸರಣೆ ಮಾಡುತ್ತಿದೆ. ವಿಶೇಷವಾಗಿ ಕಚೇರಿ ವೇಳೆ ಯಾವ ನೌಕರರು ಕೂಡ ಬರುತ್ತಿಲ್ಲ. ಬೇಕಾಬಿಟ್ಟಿ ಬರುತ್ತಾರೆ. ಕೇಳಿದರೆ ಉಡಾಫೆಯಿಂದ ಉತ್ತರ ನೀಡುತ್ತಾರೆ. ಈ ಕಾರಣದಿಂದಲೇ ಗ್ರಾಮಸ್ಥರು ಸೇರಿ ಗ್ರಾಮ ಪಂಚಾಯತಿ ಕಚೇರಿಗೆ ಬೀಗ ಹಾಕಲಾಗಿದೆ ಎಂದ ಅವರು ಈ ಬಗ್ಗೆ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮತ್ತು ಬೇಲೂರು ಶಾಸಕರು ಗಮನ ನೀಡಬೇಕು. ಇಲ್ಲವಾದರೆ ಮುಂದಿನ ದಿನದಂದು ಹೋರಾಟ ಉಗ್ರ ಸ್ವರೂಪ ಪಡೆಯುತ್ತದೆ ಎಂದು ಎಚ್ಚರಿಕೆ ನೀಡಿದರು.

ಗ್ರಾಮಸ್ಥರಾದ ಅನಂದಕುಮಾರ್ ಮತ್ತು ಅಂಗಡಿ ಮೂರ್ತಿ ಮಾತನಾಡಿ, ಹೆಬ್ಬಾಳು ಗ್ರಾಮದ ಇಡೀ ಕೊಳಚೆ ನೀರು ರಸ್ತೆಯ ಮೇಲೆ ಹರಿಯುತ್ತದೆ. ಕಳೆದ ಹತ್ತು ವರ್ಷದಿಂದ ಹತ್ತಾರು ಮನೆಗಳಿರುವ ಹಿರೆಕೊರೆ ಕೊಡಿ ರಸ್ತೆಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜವಾಗಿಲ್ಲ. ಶಾಸಕರಿಗೂ ಕೂಡ ಮನವಿ ನೀಡಲಾಗಿದೆ ಎಂದ ಅವರು ಗ್ರಾಮ ಪಂಚಾಯತಿಯಿಂದ ಜನತೆಗೆ ಸಿಗುವ ಸೌಲಭ್ಯಗಳ ನೀಡುತ್ತಿಲ್ಲ. ಮಹಿಳೆಯರು, ಬಡವರು, ಅಂಗವಿಕಲರು. ವಯೋವೃದ್ದರು ನಿತ್ಯ ಅಲೆಬೇಕಾಗಿದೆ. ಗ್ರಾಮದಲ್ಲಿ ಅಸ್ವಚ್ಚತೆ ತಾಣವಾದ ಹಿನ್ನೆಲೆಯಲ್ಲಿ ಅನಾರೋಗ್ಯ ಕಾಡಾತ್ತಿದೆ. ಈಗಾಗಲೇ ಹೆಬ್ಬಾಳು ಗ್ರಾಮದಲ್ಲಿ ಬಹುತೇಕರಿಗೆ ಡೆಂಗ್ಯೂ ಕಾಯಿಲೆಯಿಂದ ನರಳುತ್ತಿದ್ದಾರೆ. ನಮಗೆ ಕೆಲಸ ಮಾಡದ ಅಧಿಕಾರಿಗಳು ಬೇಡ, ಇಲ್ಲಿನ ಅಭಿವೃದ್ಧಿ ಅಧಿಕಾರಿಯನ್ನು ಕೂಡಲೆ ಸ್ಥಳಾಂತರ ಮಾಡಬೇಕು ಇಲ್ಲವಾದರೆ ಹೋರಾಟ ಅನಿವಾರ್ಯ ಎಂದರು.

ಈ ವೇಳೆ ಮಾತನಾಡಿದ ಗ್ರಾಮಸ್ಥರಾದ ಸಾವಿತ್ರಿ ನಾವುಗಳು ನಿತ್ಯ ಸಂಚರಿಸುವ ರಸ್ತೆ ಮಳೆಗಾಲದಲ್ಲಿ ಕೆಸರಿನಿಂದ ತುಂಬಿ ಹೋಗಿ ಸಂಚಾರ ಕಷ್ಟವಾಗಿದೆ. ವಿದ್ಯಾರ್ಥಿಗಳು ಕೆಸರಿನಲ್ಲಿಯೇ ತಿರುಗಾಡಬೇಕಿದೆ ಮೊದಲು ನಮಗೆ ರಸ್ತೆ ನಿರ್ಮಿಸಿಕೊಡಿ ಎಂದು ಒತ್ತಾಯಿಸಿದರು.

## ಜಾನಪದ ಕಲಾವಿದ ಚನ್ನಪ್ಪ ಕುಟುಂಬಕ್ಕೆ ಲಯನ್ಸ್ ನೆರವು




**ಬೇಲೂರು:** ಕರ್ನಾಟಕ ಜಾನಪದ ಆಕಾಡೆಮಿ ಪ್ರಶಸ್ತಿ ಪುರಸ್ಕೃತರು ಮತ್ತು ಹಿರಿಯ ಜಾನಪದ ಕಲಾವಿದರಾದ ಇಬ್ಬೀಡು ಚನ್ನಪ್ಪ ಕುಟುಂಬ ಇತ್ತೀಚಿನ ದಿನಗಳಲ್ಲಿ ತೀವ್ರ ಸಂಕಷ್ಟ ಬದುಕಿನಲ್ಲಿರುವುದನ್ನು ಗಮನಿಸಿದ ಬೇಲೂರು ಲಯನ್ಸ್ ಕ್ಲಬ್ ಮತ್ತು ನಿಸ್ವಾರ್ಥ ಗೆಳೆಯರ ಬಳಗ ಇವರ ಸಂಯುಕ್ತಾಶ್ರಯದಲ್ಲಿ ಜಾನಪದ ಕಲಾವಿದ ಚನ್ನಪ್ಪ ಕುಟುಂಬ ವರ್ಗಕ್ಕೆ ಒಂದು ತಿಂಗಳಿಗೆ ಅನಗತ್ಯವಾದ ಆಹಾರ ಪದಾರ್ಥಗಳನ್ನು ವಿತರಣೆ ಮಾಡುವ ಮೂಲಕ ಮಾನವೀಯತೆ ಮರೆದರು.

ಈ ಸಂದರ್ಭದಲ್ಲಿ ಮಾತನಾಡಿದ ಬೇಲೂರು ಲಯನ್ಸ್ ಕ್ಲಬ್ ಅಧ್ಯಕ್ಷ ಡಾ.ಚಂದ್ರಮೌಳಿ, ಜಾನಪದ ಕಲೆ ನಮ್ಮ ನಾಡಿನ ಜೀವ ನಾಡಿ, ಎಲ್ಲಾ ಸಾಹಿತ್ಯಕ್ಕೆ ತಾಯಿಬೇರು ಇಂತಹ ಜಾನಪದ ಕಲೆಯನ್ನು ಇಡೀ ನಾಡಿನಾದ್ಯಂತ ಪ್ರದರ್ಶನ ಮಾಡುವ ಮೂಲಕ ಶಿಲ್ಪಕಲಾ ನಾಡು ಬೇಲೂರಿಗೆ ಕೀರ್ತಿ ತಂದ ತಾಲ್ಲೂಕಿನ ಇಬ್ಬೀಡು ಗ್ರಾಮದ ಚನ್ನಪ್ಪ ಇವರು ತುಂಬ ಕುಟುಂಬ ಹೊಂದಿದ್ದರು ಚನ್ನಪ್ಪ ಮತ್ತು ಅವರ ಪತ್ನಿ ಇಂದಿಗೂ ಹಳೆಯ ಮನೆಯಲ್ಲಿ ಅನಾಥರಂತೆ ಬದುಕು ಸಾಗಿಸುತ್ತಾ ತೀವ್ರ ಸಂಕಷ್ಟದಲ್ಲಿದ್ದಾರೆ. ಇಂದಿಗೂ ಮನೆಯಲ್ಲಿ ಆಹಾರ ಪದಾರ್ಥಗಳನ್ನು ಕೊರತೆಯನ್ನು ಕಂಡ ನಿಸ್ವಾರ್ಥ ಸಂಘ ಗೆಳೆಯರಾದ ಹೇಮಂತ್ ಕಡೆಯಿಂದ ತಿಳಿದ ಬಳಿಕ ನಮ್ಮ ಲಯನ್ಸ್ ಕ್ಲಬ್ ಸದಸ್ಯರು ಸಹಕಾರ ನೀಡಿದ ಕಾರಣದಿಂದ ಲಯನ್ಸ್ ಕ್ಲಬ್ ಮತ್ತು ನಿಸ್ವಾರ್ಥ ಗೆಳೆಯರ ಬಳಗದಿಂದ ಮ ಆಹಾರ ಪದಾರ್ಥಗಳನ್ನು ಯಾವುದೇ ಫಲಾಪೇಕ್ಷೆ ಇಲ್ಲದೆ ಮ ನೀಡಲಾಗಿದೆ. ಮುಂದಿನ ದಿನದಂದು ಕೂಡ ಅವರಿಗೆ ಸಹಾಯಹಸ್ತ ನೀಡಲಾಗುತ್ತದೆ ಎಂದ ಅವರು ಒಂದು ಕಾಲಘಟ್ಟಕ್ಕೆ ಜಾನಪದ ಕಲಾವಿದ ಚನ್ನಪ್ಪ ನವರು ಮೈಸೂರು ಮಾನಸ ಗಂಗೋತ್ರಿಯಲ್ಲಿ ಆರು ತಿಂಗಳು ಸುದೀರ್ಘ ಜಾನಪದ ಬಗ್ಗೆ ಉಪನ್ಯಾಸ ನೀಡಿದ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ ಇಂತಹ ಕಲಾವಿದರಿಗೆ ನಮ್ಮ ಕೈಲಾದ ಸಹಾಯ ಮಾಡಿದೆ ಎಂಬ ತೃಪ್ತಿ ನಮ್ಮದಾಗಿದೆ ಎಂದರು.

ಲಯನ್ಸ್ ಮಾಜಿ ಅಧ್ಯಕ್ಷ ಎಂ.ಪಿ.ಪೂವಯ್ಯ ಮಾತನಾಡಿ, ಜಾನಪದ ಸಾಹಿತ್ಯವನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವಲ್ಲಿ ಇಂತಹ ಕಲಾವಿದರ ಸಾರ್ಥಕ ಬದುಕು ನಿಜಕ್ಕೂ ಅಗಮ್ಯ, ಸರ್ಕಾರ ಕೇವಲ ಮಾಸಿಕ ಗೌರವವನ್ನು ಹೆಚ್ಚಿಸುವ ಮೂಲಕ ಕಲಾವಿದರು ಬದುಕಿಗೆ ಪೂರಕವಾಗಬೇಕಿದೆ ಎಂದ ಅವರು ಸುಮಾರು 220 ರಾಷ್ಟ್ರಗಳಲ್ಲಿ ಅಂತರಾಷ್ಟ್ರೀಯ ಲಯನ್ಸ್ ಕ್ಲಬ್ ಸೇವಾ ಚಟುವಟಿಕೆಗಳನ್ನು ನಡೆಸುತ್ತಾ ಆರೋಗ್ಯ, ಶಿಕ್ಷಣ ಮತ್ತು ಪರಿಸರ ಕ್ಷೇತ್ರದಲ್ಲಿ ಅದ್ವಿತೀಯ ಕೆಲಸ ಮಾಡುತ್ತಿದೆ. ವಿಶೇಷವಾಗಿ ಸಮಾಜದಲ್ಲಿನ ನಿರ್ಗತಿಕರು, ಬಡವರು ಮತ್ತು ಅಂಗವಿಕಲರಿಗೆ ಆಸರೆಯ ಕೆಲಸಗಳನ್ನು ಮಾಡುವ ಬಗ್ಗೆ ತಿಳಿಸಿದರು.

ಈ ಸಂದರ್ಭದಲ್ಲಿ ಬೇಲೂರು ಲಯನ್ಸ್ ಭವನ ಟ್ರಸ್ಟ್ ಅಧ್ಯಕ್ಷ ದೊಡ್ಡಮನೆ ಪ್ರಭಾಕರ್, ಕಾರ್ಯದರ್ಶಿ ಮುಕ್ತಿಯಾರ್ ಅಹಮದ್, ಖಜಾಂಚಿ ಪ್ರಶಾಂತ್, ಸಂತೋಷ, ನಿಸ್ವಾರ್ಥ ಗೆಳೆಯರ ಬಳಗದ ಅಧ್ಯಕ್ಷ ಹೇಮಂತ್ ಮತ್ತು ವಿನಯ್ ಹಾಜರಿದ್ದರು.

## ಯೋಗೇಂದ್ರ ಅವರಿಗೆ ಬೀಳ್ಕೊಡುಗೆ

**ಮೈಸೂರು:** ಸ್ವಾರ್ಥ, ಅಹಂಕಾರ ದೂರವಿಟ್ಟು ಕರ್ತವ್ಯ ನಿಷ್ಠೆ, ಮಾನವೀಯತೆ ರೂಢಿಸಿಕೊಂಡಾಗ ಮಾತ್ರ ಸರ್ಕಾರಿ ಸೇವೆ ಸಾರ್ಥಕವಾಗಲಿದೆ ಎಂದು ಒಳ್ಳೆಯ ಆಯುಕ್ತ ನಂಜುಂಡಯ್ಯ ತಿಳಿಸಿದರು. ಮೈಸೂರು ನಗರ ಪಾಲಿಕೆ ವಲಯ ಕಚೇರಿ 7ರಲ್ಲಿ ಮ್ಯಾನೇಜರ್ ಆಗಿ ಸೇವೆ ಸಲ್ಲಿಸಿ ಯೋಗೇಂದ್ರ ನಿವೃತ್ತ ಗೊಂಡಿದ್ದು ಅವರಿಗೆ ಮೈಸೂರು ಯುವ ಬಳಗ ವತಿಯಿಂದ ಬೀಳ್ಕೊಡುಗೆ ಸಮಾರಂಭದಲ್ಲಿ ಸನ್ಮಾನಿಸಿ ಮಾತನಾಡಿದ ಅವರು ಪ್ರತಿ ಸರ್ಕಾರಿ ನೌಕರರಿಗೆ ನಿವೃತ್ತಿ ಅನಿವಾರ್ಯ. ಯಾವುದೇ ಇಲಾಖೆಯಲ್ಲಿ ತಮ್ಮ ಕೆಲಸವನ್ನು ಯಶಸ್ವಿಯಾಗಬೇಕಾದರೆ ಮಾನವೀಯತೆ ಮತ್ತು ಸರಳತೆಯಿರಬೇಕು ಎಂದರು. ಇದೇ ಸಂದರ್ಭದಲ್ಲಿ ವಲಯ ಕಚೇರಿ 7ರ ವಲಯ ಆಯುಕ್ತರಾದ ನಂಜುಂಡಯ್ಯ, ಕಂದಾಯ ಅಧಿಕಾರಿ ಲೋಕೇಶ್, ಜಾವಿದ್, ಮುಖಂಡರುಗಳಾದ ರವಿಚಂದ್ರ, ನಂಜುಂಡಸ್ವಾಮಿ ಶುಭ ಹಾರೈಸಿದರು.




## ಸ್ವ-ಉದ್ಯೋಗ ಪ್ರೇರಣಾ ಮಾಹಿತಿ

**ಹೊಸೂರು:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ತಾಲೂಕಿನ ಸ್ವ -ಸಹಾಯ ಸಂಘದ ಸದಸ್ಯರಿಗೆ ಸ್ವ-ಉದ್ಯೋಗ ಪ್ರೇರಣಾ ಮಾಹಿತಿ ಕಾರ್ಯಕ್ರಮ ನಡೆಯಿತು.

ಜಿಲ್ಲಾ ನಿರ್ದೇಶಕರಾದ ಎಚ್.ಎಲ್. ಮುರಳಿಧರ್ ದೀಪ ಬೆಳಗುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಫಲಾನುಭವಿ ಬಂಧುಗಳಲ್ಲಿ ಸ್ವಉದ್ಯೋಗದಿಂದ ಸ್ವಾವಲಂಬಿ ಜೀವನ ನಡೆಸಲು ಶ್ರೀ ವಿರೇಂದ್ರ ಹೆಗ್ಗಡೆಯವರು ನಬಾರ್ಡ್ ಬ್ಯಾಂಕಿನ ಮೂಲಕ ಸಾಲದ ವ್ಯವಸ್ಥೆಯನ್ನು ಮಾಡಲು ಅನುಕೂಲ ಮಾಡಿಕೊಟ್ಟಿದ್ದಾರೆ. ಈ ನಿಟ್ಟಿನಲ್ಲಿ ತಾವು ಮಾಡುವ ಉದ್ಯೋಗವನ್ನು ಉತ್ತಮ ರೀತಿಯಲ್ಲಿ ಮಾಡಿ ತಮ್ಮ ಕುಟುಂಬವನ್ನು ಅಭಿವೃದ್ಧಿಪಡಿಸಲು ದಾರಿ ದೀಪವಾಗಿದೆ ಎಂದರು. ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ ಮೈಸೂರು ಪ್ರಾದೇಶಿಕ ವಿಭಾಗದ ಯೋಜನಾಧಿಕಾರಿ ವರುಣ್ ಸಾಲದ ಪಡೆಯಲು ಬೇಕಾದ ದಾಖಲಾತಿಗಳು ಮತ್ತು ಇದಕ್ಕೆ ವಿಧಿಸುವ ಬಡ್ಡಿದರದ ಬಗ್ಗೆ ಸಮಗ್ರ ಮಾಹಿತಿ ನೀಡಿದರು.



ತಾಲೂಕು ಯೋಜನಾಧಿಕಾರಿಗಳಾದ ಉಮೇಶ್ ಪೂಜಾರಿ ಅರ್ಜಿ ಸಲ್ಲಿಸುವ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಅರ್ಜುನ್, ಸೇವಾಪ್ರತಿನಿಧಿ ಮಮತಾ ಮಣಿ ಹಾಜರಿದ್ದರು.

ಸುವರ್ಣ ಪ್ರಾರ್ಥನೆ ಮಾಡಿದರು ಧರಣಪ್ಪ ಕಾರ್ಯಕ್ರಮ ನಿರೂಪಿಸಿ, ಸುಜಾತ ಜ್ಞಾನ ವಿಕಾಸ ಸಮನ್ವಯಧಿಕಾರಿ ಸ್ವಾಗತಿಸಿದರು.

## ಕುಂಭಾಭಿಷೇಕ ಮಹೋತ್ಸವ

**ಕೋಲಾರ:** ಪ್ರಧಾನ ಅರ್ಚಕರಾದ ಅಘೋರಿ ಚಂದ್ರನಾಥ್ ಮತ್ತು ಅಘೋರಿ ತವಮಣಿ ರವರ ಮತ್ತು ಗ್ರಾಮಸ್ಥರ ನೇತೃತ್ವದಲ್ಲಿ 7-724ವರೆಗೆ ಪೂಜೆ ನಡೆಯಲಿದೆ ಗಂಗಾಪುರ ಮುಖ್ಯ ರಸ್ತೆಯಲ್ಲಿ ಶ್ರೀಬೇತಾಳ ಮಹಾಶಕ್ತಿ ಪೀಠಂ 108 ಅಡಿಗಳ ಬೇತಾಳ ವಿಗ್ರಹ , ಶ್ರೀಭದ್ರಕಾಳಿ, ಶ್ರೀ ಕಾಲಭೈರವ, ಶ್ರೀ ಪ್ರತಿಂಗೀರ ಶ್ರೀ ಕಾಟೇರಮ್ಮ ಶ್ರೀ ಪಾರ್ವತಿದೇವಿ ಶ್ರೀನಾಗಮ್ಮ ಶ್ರೀವಿಷ್ಣುಮಾಯ ಶ್ರೀ ಕರಿಕುಟ್ಟಿ ಚಾಟ ದೇವರುಗಳ ಪ್ರತಿಷ್ಠಾಪನಾ ಮತ್ತು ಕುಂಭಾಭಿಷೇಕ ಮಹೋತ್ಸವವನ್ನು ಹಮ್ಮಿಕೊಳ್ಳಲಾಗಿದೆ .7-724ವರೆಗೆಗಣಪತಿಹೋಮ ಹೋಮ, ನವಗ್ರಹ ಹೋಮ ,ದಿಕ್ಪಾಲಕರ ಹೋಮ ,ಶನೈಶ್ವರ ಸ್ವಾಮಿ ಪ್ರಧಾನಹೋಮಗಳು ನಡೆಯಲಿದ್ದು ಜಿಲ್ಲೆಯ ಭಕ್ತಾದಿಗಳೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗಬೇಕೆಂದು ಅರ್ಚಕರು ಕೋರಿದರು . ಗ್ರಾಮಸ್ಥರು ಮಾತನಾಡಿ ಪ್ರಪಂಚದಲ್ಲೇ ನೂರೆಂಟು ಅಡಿಗಳ ಶ್ರೀ ಬೇತಾಳ ವಿಗ್ರಹವು ಕಾಣಸಿಗುವುದಿಲ್ಲ ಮತ್ತು ಉತ್ತರ ಭಾರತದಿಂದ ಅಘೋರಿ ಬಾಬಾಗಳು ಆಗಮಿಸುತ್ತಿದ್ದು ವಿಶೇಷವಾಗಿದ್ದು ಅವರ ಪೂಜಾ ವಿದಿವಿದಾನಗಳು ವಿಶಿಷ್ಟವಾಗಿರುತ್ತದೆ ಎಂದರು. ಈ ಸಂದರ್ಭದಲ್ಲಿ ಅಘೋರಿ ತವಮಣಿ ,ಅಘೋರಿ ಚಂದ್ರನಾಥ್ , ನಾಗಭೂಷಣರೆಡ್ಡಿ ,ಕೃಷ್ಣಮೂರ್ತಿ ,ವಿನೋದ್ ,ಹರೀಶ್ ,ವೆಂಕಟರಾಮಗೌಡ ,ಅರುಣ್ ,ರಮೇಶ್ ,ನಾರಾಣಪ್ಪ ,ಭಾಸ್ಕರ್ ,ಕೃಷ್ಣಮೂರ್ತಿ ,ರಾಮಚಂದ್ರಪ್ಪ ,ಶಿವ ,ಆರ್ ಹರೀಶ್ ,ಶ್ರೀನಿವಾಸ್, ವೇಣುಗೋಪಾಲ್ ,ಶಿವ,ಶಿವಾನಂದ್,ಚಂದ್ರಾರೆಡ್ಡಿ , ಪ್ರಭಾಕರ್ ಮುಂತಾದವರಿದ್ದರು .



## ಅಭಿವೃದ್ಧಿ ಬಗ್ಗೆ ಮಾಹಿತಿ ಪಡೆದು ಮಾತನಾಡಲಿ

**ಮಂಡ್ಯ:** ರಾಜ್ಯ ಸರ್ಕಾರದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ. ಗ್ಯಾರೆಂಟಿ ಯೋಜನೆಗೆ ಹಣ ಹೊಂದಿಸಲು ಪರದಾಡುತ್ತಿರುವ ರಾಜ್ಯ ಸರ್ಕಾರದಿಂದ ಅಭಿವೃದ್ಧಿ ಕಾರ್ಯಗಳಿಗೆ ಹಣವಿಲ್ಲ ಎಂದು ಹೇಳಿಕೆ ನೀಡಿರುವ ಬಿಜೆಪಿ ರೈತಮೋರ್ಚಾ ಜಿಲ್ಲಾಧ್ಯಕ್ಷ ಅಶೋಕ್ ಜಯರಾಂ ಅವರು ನಿಖರ ಮಾಹಿತಿ ಪಡೆದು ಮಾತನಾಡಬೇಕು ಎಂದು ಕಾಂಗ್ರೆಸ್ ಕಿಸಾನ್ ಘಟಕದ ಮೇಲುಕೋಟೆ ಅಧ್ಯಕ್ಷ ಸಿ.ಆರ್.ರಮೇಶ್ ತಿರುಗೇಟು ನೀಡಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಚುನಾವಣೆಯಲ್ಲಿ ಜನತೆಗೆ ನೀಡಿದ ಭರವಸೆಯನ್ನು ಈಡೇರಿಸಿದೆ. ಜತೆಗೆ ಮಂಡ್ಯ ಜಿಲ್ಲೆ ಅಭಿವೃದ್ಧಿಗಾಗಿ ಮೈಶುಗರ್ ಕಾರ್ಖಾನೆ ಹೊಸದಾಗಿ ಸ್ಥಾಪಿಸಲು ಮುಂದಾಗಿದೆ. ಅಲ್ಲದೇ ವಿ.ಸಿ.ಫಾರಂ ಬಳಿ ಕೃಷಿ ವಿಶ್ವವಿದ್ಯಾಲಯ ಸ್ಥಾಪನೆ ಹಾಗೂ ವಿ.ಸಿ ನಾಲೆ ಕೊನೆ ಭಾಗದ ರೈತರಿಗೆ ನೀರೊದಗಿಸಲು ನಾಲೆ ಆಧುನೀಕರಣ ಇವೆಲ್ಲವೂ ಅಭಿವೃದ್ಧಿ ಕೆಲಸವಲ್ಲದೇ ಮತ್ತೇನು ಎಂದು ಪ್ರಶ್ನಿಸಿದರು.

ಜಿಲ್ಲೆಯ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಲಾಭ ನಿರೀಕ್ಷಿಸದೇ. ಮೈಶುಗರ್ ಪ್ರಾರಂಭಿಸಿ ರೈತರಿಗೆ ನಿರ್ದಿಷ್ಟ ಅವಧಿಯಲ್ಲಿ ಹಣ ನೀಡಿದ್ದು, ಈ ಸಾಲಿನಲ್ಲೂ ಕಬ್ಬು ನುರಿಸಲು ಬಾಯ್ಲರ್ ಪೂಜೆ ಮಾಡಲಾಗಿದೆ ಎಂದರು.

ಕೆಲವು ಬಿಜೆಪಿ ನಾಯಕರು ಗ್ಯಾರಂಟಿ ಯೋಜನೆಗಳ ಬಗ್ಗೆ ವೃಥಾ ಟೀಕೆ ಮಾಡುತ್ತಿದ್ದಾರೆ. ಆದರೆ ಈ ಯೋಜನೆಯಿಂದ ರಾಜ್ಯದಲ್ಲಿ ಲಕ್ಷಾಂತರ ಬಡ ಕುಟುಂಬಗಳು ನೆಮ್ಮದಿಯಿಂದ ಜೀವನ ನಡೆಸುತ್ತಿವೆ. ಇಡೀ ದೇಶವೇ ಗ್ಯಾರಂಟಿ ಯೋಜನೆಗಳನ್ನು ಕೊಂಡಾಡುತ್ತಿವೆ. ಇದು ಬಿಜೆಪಿ ನಾಯಕರಿಗೆ ತಿಳಿದಿದೆಯೇ, ಗ್ಯಾರಂಟಿ ಯೋಜನೆಗಳು ಬೇಡವೆನ್ನುವ ಬಿಜೆಪಿ ಮುಖಂಡರು ಈ ಯೋಜನೆ ಪಡೆಯದೇ ದೂರ ಉಳಿದಿದ್ದಾರೆಯೇ ಎಂದು ತಿರುಗೇಟು ನೀಡಿದರು.

ಕಳೆದ ಲೋಕಸಭಾ ಚುನಾವಣೆಯಲ್ಲಿ ಮತದಾರರಿಗೆ ನೀಡಿದಂತಹ ಮೋದಿ ಗ್ಯಾರಂಟಿಗಳಾದ ದುಡಿಯುವ ವರ್ಗಕ್ಕೆ ವಿಶ್ವಕರ್ಮ ಯೋಜನೆ 1ಲಕ್ಷ ರೂ.,ಆಯುಷ್ಮಾನ್ ಭಾರತ್ ಯೋಜನೆಯಡಿ ಪ್ರತಿ ಕುಟುಂಬಕ್ಕೆ 5 ಲಕ್ಷ, ಯುವ ಉದ್ಯಮಿಗಳಿಗೆ ಮುದ್ರಾ ಯೋಜನೆಯ 2 ಲಕ್ಷ ಬೀದಿ ಮಹಿಳೆಯರಿಗೆ 1ಲಕ್ಷ, ಪ್ರತಿ ವ್ಯಕ್ತಿಗೂ ವಿಮೆ ಸೌಲಭ್ಯ, 2 ಲಕ್ಷದ ಗ್ಯಾರಂಟಿ ಕಾರ್ಡ್ ಇನ್ನೂ ದೆಹಲಿಯಲ್ಲೇ ಇದೆಯಲ್ಲ, ಎಷ್ಟು ಫಲಾನುಭವಿಗಳಿಗೆ ನೀಡಲಾಗಿದೆ ಎಂಬ ನಿಖರ ಮಾಹಿತಿ ತಿಳಿಸಿ ಎಂದು ಆಗ್ರಹಿಸಿದರು.

**ಕಾಂಗ್ರೆಸ್ ಸರ್ಕಾರ ಬೀಳದು:** ಬಿಜೆಪಿ-ಜೆಡಿಎಸ್ ಮೈತ್ರಿ ನಾಯಕರು ರಾಜ್ಯ ಸರ್ಕಾರ ಬೀಳಲಿದೆ ಎಂಬ ಹಗಲು ಕನಸು ಕಾಣುತ್ತಿದ್ದಾರೆ. ಇದು ಅವರ ಭ್ರಮೆಯಷ್ಟೇ. ರಾಜ್ಯದ ಜನತೆ ಸ್ಪಷ್ಟ ಬಹುಮತ ನೀಡಿ 136 ಶಾಸಕರನ್ನು ಆಯ್ಕೆ ಮಾಡಿ ಕಳುಹಿಸಿದ್ದಾರೆ. ಹೀಗಾಗಿ 5 ವರ್ಷ ಸರ್ಕಾರ ಸುಭದ್ರವಾಗಿರಲಿದೆ. ಹಿಂದಿನ ಬಿಜೆಪಿ ಸರ್ಕಾರದಲ್ಲಿ 4 ಜನ ಸಿಎಂಗಳನ್ನು ಹಾಗೂ ಸರ್ಕಾರ ನೀಡಿದ ಸುಳ್ಳು ಕೊಡುಗೆಗಳನ್ನು ರಾಜ್ಯದ ಜನತೆ ಮರೆತಿಲ್ಲ. ನಮ್ಮ ಪಕ್ಷದ ಆಂತರೀಕ ವಿಚಾರದಲ್ಲಿ ವಿರೋಧ ಪಕ್ಷಗಳು ತಲೆ ತೂರಿಸುವ ಬದಲು ವಿರೋಧ ಪಕ್ಷದ ಸ್ಥಾನದ ಜವಾಬ್ದಾರಿ ನಿಭಾಯಿಸಲಿ ಎಂದರು. ರಾಜ್ಯ ಸರ್ಕಾರದಲ್ಲಿ ಮುಂದಿನ ಸಿಎಂ ಯಾರಾಗಬೇಕೆಂಬುದನ್ನು ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸಲಿದೆ. ಸ್ವಾಮೀಜಿ ಅವರಿಂದ ಹೇಳಿಕೆ ಕೊಡಿಸುವ ಅವಶ್ಯಕತೆ ಇಲ್ಲ. ಮಾಜಿ ಸಿಎಂ ಯಡಿಯೂರಪ್ಪ ಮಠ ಮಾನ್ಯಗಳಿಗೆ ಅನುದಾನ ನೀಡಿದ್ದರಿಂದ ಬಹುತೇಕ ಸ್ವಾಮೀಜಿಗಳು ಬಿಜೆಪಿ ಪರ ಇದ್ದಾರೆ. ಜೋಡೆತ್ತಿನಂತೆ ಕೆಲಸ ಮಾಡುತ್ತಿರುವ ಸಿಎಂ ಸಿದ್ದರಾಮಯ್ಯ-ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಏಳಿಗೆ ಸಹಿಸದ ಬಿಜೆಪಿ ನಾಯಕರೇ ಇಂತಹ ಕೆಲಸ ಮಾಡಿರಬಹುದು. ಕಾಂಗ್ರೆಸ್ ಕಾರ್ಯಕರ್ತರು ಕೈ ಕಟ್ಟಿ ಕೂರುವುದಿಲ್ಲ. ಮೋದಿ ಗ್ಯಾರಂಟಿ ಕಾರ್ಡ್ ಹಿಡಿದು ಜಾರಿಗೆ ಒತ್ತಾಯಿಸಿ ಬೀದಿಗಿಳಿದು ರಾಜ್ಯದದ್ಯಾಂತ ಹೋರಾಟ ನಡೆಸಬೇಕಾದ ಪರಿಸ್ಥಿತಿ ಉದ್ಭವಿಸಲಿದೆ ಎಂದು ಎಚ್ಚರಿಸಿದರು. ಗೋಷ್ಠಿಯಲ್ಲಿದ್ದ ಎಪಿಸಿಎಸ್ ಮಾಜಿ ಅಧ್ಯಕ್ಷ ಎಚ್.ಎಂ.ಉದಯಕುಮಾರ್ ಇತರರಿದ್ದರು.

## ಸಮಾಜದಲ್ಲಿ ವೈದ್ಯ ವೃತ್ತಿ ಶ್ರೇಷ್ಠ

**ಪಿರಿಯಾಪಟ್ಟಣ:** ಸಮಾಜದಲ್ಲಿ ವೈದ್ಯ ವೃತ್ತಿ ಶ್ರೇಷ್ಠವಾದದ್ದು ಎಂದು ಪಿರಿಯಾಪಟ್ಟಣ ಒಕ್ಕಲಿಗರ ಸಂಘದ ಅಧ್ಯಕ್ಷ ಬಸಲಾಪುರ ಆನಂದ್ ತಿಳಿಸಿದರು.

ಪಟ್ಟಣದ ಒಕ್ಕಲಿಗರ ಸಂಘದ ಕಚೇರಿಯಲ್ಲಿ ನಡೆದ ವೈದ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು, ಸಮಾಜದಲ್ಲಿ ಹಲವು ಬಗೆಯ ವೃತ್ತಿಗಳಿವೆ ಆದರೆ ಜನಸಾಮಾನ್ಯರ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ಅವರಿಗೆ ಮರು ಜೀವನ ನೀಡಬಲ್ಲ ಕೆಲಸ ಮಾಡುವಂತಹ ವೈದ್ಯರ ವೃತ್ತಿ ಎಲ್ಲಕ್ಕಿಂತ ಮಿಗಿಲಾದದ್ದು ಎಂದರು.

ಸಂಘದ ಉಪಾಧ್ಯಕ್ಷ ಹುಣಸೆಕುಪ್ಪೆ ಚಂದ್ರೇಗೌಡ ಮಾತನಾಡಿ ಕೊರೋನಾ ಸಂದರ್ಭ ಜನಸಾಮಾನ್ಯರ ಪ್ರಾಣ ಉಳಿಸಲು ವೈದ್ಯರು ನಿರ್ವಹಿಸಿದ ಕಾರ್ಯ ಅನನ್ಯವಾದದ್ದು ಅಂತಹ ವೃತ್ತಿಯನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ತಾಲೂಕು ಸಾರ್ವಜನಿಕ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಅನಿಲ್ ಕುಮಾರ್ ವೈದ್ಯರ ಮಾನವೀಯ ಸೇವೆ ಸ್ಮರಿಸುವ ಉದ್ದೇಶದಿಂದ ಪ್ರತಿವರ್ಷ ಜುಲೈ 1ರಂದು ರಾಷ್ಟ್ರೀಯ ವೈದ್ಯರ ದಿನವನ್ನು ಆಚರಿಸಲಾಗುತ್ತದೆ ಈ ವಿಶೇಷ ದಿನ ಖ್ಯಾತ ವೈದ್ಯ ಹಾಗೂ ಪಶ್ಚಿಮ ಬಂಗಾಳದ ಎರಡನೇ ಮುಖ್ಯಮಂತ್ರಿ ಡಾ.ಬಿದನ್ ಚಂದ್ರರಾಯ್ ಅವರ ಗೌರವಾರ್ಥವಾಗಿ ಭಾರತ ರಾಷ್ಟ್ರೀಯ ವೈದ್ಯರ ದಿನವನ್ನು ಆಚರಿಸುತ್ತದೆ ಇದು ಮಾನವೀಯತೆಯದಣಿವರಿಯಿಲ್ಲದೆಸೇವೆಸಲ್ಲಿಸುವ ಎಲ್ಲಾ ವೈದ್ಯರಿಗೆ ಸಮರ್ಪಿತವಾದ ದಿನವಾಗಿದೆ ಎಂದರು. ಕಾರ್ಯಕ್ರಮದಲ್ಲಿ ವೈದ್ಯರಾದ ಡಾ.ಪ್ರಕಾಶ್ ಬಾಬು ರಾವ್, ಡಾ.ಪ್ರೇಮನಾಥ್, ಡಾ.ಮಹದೇವಸ್ವಾಮಿ, ಡಾ.ರೇಖಾ ಸಂದೀಪ್, ರವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭ ತಾಲೂಕು ಒಕ್ಕಲಿಗರ ಸಂಘದ ಕಾನೂನು ಸಲಹೆಗಾರ ಸಂದೀಪ್, ಕಾರ್ಯದರ್ಶಿ ಮೋಹನ್, ಖಜಾಂಚಿ ಮನು, ನಿರ್ದೇಶಕರಾದ ರವಿ, ಅರುಣ್ ಇದ್ದರು.



# ಬಹುಸಂಖ್ಯಾತರು ಅಲ್ಪಸಂಖ್ಯಾತರಾಗುವ ಆತಂಕ

**ಅಲಹಬಾದ್:** ಸಭೆ ಸಮಾರಂಭಗಳಲ್ಲಿ ಹೆಚ್ಚುತ್ತಿರುವ ಧಾರ್ಮಿಕ ಮತಾಂತರಗಳ ಬಗ್ಗೆ ಅಲಹಾಬಾದ್ ಹೈಕೋರ್ಟ್ ತೀವ್ರ ಕಳವಳ ವ್ಯಕ್ತಪಡಿಸಿದ್ದು, ಇಂತಹ ಪ್ರವೃತ್ತಿ ಮುಂದುವರೆದರೆ, ದೇಶದ ಬಹುಸಂಖ್ಯಾತ ಜನಸಂಖ್ಯೆಯು ಮುಂದೊಂದು ದಿನ ಅಲ್ಪಸಂಖ್ಯಾತವಾಗಲಿದೆ ಎಂದು ಎಚ್ಚರಿಸಿದೆ.




ಗ್ರಾಮವೊಂದರಲ್ಲಿ ಹಿಂದೂಗಳ ಗುಂಪನ್ನು ಕ್ರಿಶ್ಚಿಯನ್ ಧರ್ಮಕ್ಕೆ ಪರಿವರ್ತಿಸಿದ ಆರೋಪದ ಮೇಲೆ ಕೈಲಾಶ್ ಎಂಬಾತನ ಜಾಮೀನು ಅರ್ಜಿಯನ್ನು ವಜಾಗೊಳಿಸುವಾಗ ನ್ಯಾಯಮೂರ್ತಿ ರೋಹಿತ್ ರಂಜನ್ ಅಗರ್ವಾಲ್ ಈ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ.

ಈ ಪ್ರಕ್ರಿಯೆಗೆ ಅವಕಾಶ ನೀಡಿದರೆ ಮುಂದೊಂದು ದಿನ ಈ ದೇಶದ ಬಹುಸಂಖ್ಯಾತರು ಅಲ್ಪಸಂಖ್ಯಾತರಾಗುತ್ತಾರೆ, ಮತಾಂತರ ನಡೆಯುತ್ತಿದ್ದು, ಭಾರತದ ಪ್ರಜೆಗಳ ಧರ್ಮವನ್ನು ಬದಲಾಯಿಸುವ ಇಂತಹ ಧಾರ್ಮಿಕ ಸಭೆಗಳನ್ನು ತಕ್ಷಣವೇ ನಿಲ್ಲಿಸಬೇಕು ಎಂದು ನ್ಯಾಯಾಲಯ ಸೂಚನೆ ನೀಡಿದೆ.

ವ್ಯಕ್ತಿಗಳ ಸಂಭಾಷಣೆಗಳು ನಡೆಯುವ ಧಾರ್ಮಿಕ ಸಭೆಗಳನ್ನು ತಕ್ಷಣವೇ ನಿಷೇಧಿಸುವಂತೆ ಹೈಕೋರ್ಟ್ ಆದೇಶಿಸಿದ್ದು, ಅಂತಹ ಚಟುವಟಿಕೆಗಳು ಸಂವಿಧಾನದ 25 ನೇ ವಿಧಿಯಲ್ಲಿ ಪ್ರತಿಪಾದಿಸಿರುವ ಧಾರ್ಮಿಕ ಸ್ವಾತಂತ್ರ್ಯದ ಹಕ್ಕನ್ನು ನೇರವಾಗಿ ಉಲ್ಲಂಘಿಸುತ್ತದೆ ಎಂದು ಆತಂಕ ಹೊರಹಾಕಿದೆ.

25ನೇ ವಿಧಿಯು ವ್ಯಕ್ತಿಗಳು ಯಾವುದೇ ಧರ್ಮವನ್ನು ನಂಬಲು ಸ್ವತಂತ್ರರು ಎಂದು ಹೇಳುತ್ತದೆ, ಕೆಲವು ನಿರ್ಬಂಧಗಳಿಗೆ ಒಳಪಟ್ಟು ಅವರ ಧರ್ಮವನ್ನು ಪೂಜಿಸಲು ಮತ್ತು ಪ್ರಚಾರ ಮಾಡಲು ಅವಕಾಶವಿದೆ. ಪ್ರಚಾರ ಎಂದರೆ ಧರ್ಮವನ್ನು ಉತ್ತೇಜಿಸುವುದು ಮತ್ತು ಯಾವುದೇ ವ್ಯಕ್ತಿಯನ್ನು ಅವರ ಧರ್ಮದಿಂದ ಇನ್ನೊಬ್ಬರಿಗೆ ಪರಿವರ್ತಿಸುವುದು ಎಂದಲ್ಲ. ಉತ್ತರ ಪ್ರದೇಶದ ವಿವಿಧ ಭಾಗಗಳಲ್ಲಿ ಬಡವರನ್ನು ದಾರಿತಪ್ಪಿಸಿ ಅನೇಕ ಆಮಿಷಗಳನ್ನು ಒಡ್ಡಿ ಕ್ರೈಸ್ತ ಧರ್ಮಕ್ಕೆ ಮತಾಂತರಗೊಳಿಸಿದ ನಿದರ್ಶನಗಳನ್ನು ಗಮನಿಸಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖ ಮಾಡಿದೆ.

ಇದೇ ವೇಳೆ ಸಂಭಾಷಣೆಯ ಆರೋಪಗಳ ಗಂಭೀರತೆಯನ್ನು ಪರಿಗಣಿಸಿ, ಹಮೀರ್ಪುರ ಜಿಲ್ಲೆಯ ಮೌದಾಹಾಗೆ ಸೇರಿದ ಕೈಲಾಶ್‌ಗೆ ಜಾಮೀನು ನೀಡಲು ನ್ಯಾಯಾಲಯ ನಿರಾಕರಿಸಿದೆ. ಒಬ್ಬ ತನ್ನ ಮಾನಸಿಕ ಅಸ್ವಸ್ಥ ಸಹೋದರನನ್ನು ಒಂದು ವಾರ ದೆಹಲಿಗೆ ಕರೆದೊಯ್ದ ನಂತರ ಕೈಲಾಶ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿತ್ತು. ಸಹೋದರನಿಗೆ ಚಿಕಿತ್ಸೆ ಕೊಡಿಸಿ ಗ್ರಾಮಕ್ಕೆ ವಾಪಸ್ ಕಳುಹಿಸುವುದಾಗಿ ಹೇಳಿದ್ದರೂ ಆರೋಪಿ ವಾಪಸ್ ಬಂದಿಲ್ಲ ಎಂದು ಎಫ್ ಐಆರ್ ನಲ್ಲಿ ಹೇಳಲಾಗಿದೆ.

ಕೈಲಾಶ್ ಹಿಂದಿರುಗಿದಾಗ, ಅವರು ಹಳ್ಳಿಯ ಎಲ್ಲ ಜನರನ್ನು ದೆಹಲಿಯಲ್ಲಿ ಆಯೋಜಿಸಲಾದ ಕಾರ್ಯಕ್ರಮಕ್ಕೆ ಕರೆದೊಯ್ದರು. ಅಲ್ಲಿ ಎಲ್ಲರೂ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಂಡರು. ಎಫ್‌ಐಆರ್ ಪ್ರಕಾರ, ಪ್ರಜಾಪತಿ ಅವರ ಸಹೋದರನಿಗೆ ಮತಾಂತರಕ್ಕೆ ಬದಲಾಗಿ ಹಣವನ್ನು ನೀಡಲಾಗಿತ್ತು.

# ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಚಾಮರಾಜನಗರ ತಾಲೂಕಿನಲ್ಲಿ ನಿರ್ವಹಣೆಯಾಗುತ್ತಿರುವ ಮೆಟ್ರಿಕ್ ನಂತರದ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ 2024-25ನೇ ಸಾಲಿಗೆ ಪ್ರವೇಶ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪಿ.ಯು.ಸಿ ಮತ್ತು ಪಿ.ಯು.ಸಿ ಸಮಾನಾಂತರ ಕೋರ್ಸಿನಲ್ಲಿ ವ್ಯಾಸಾಂಗ ಮಾಡುತ್ತಿರುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಬಹುದು. ಚಾಮರಾಜನಗರ ಪಟ್ಟಣದ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ವೃತ್ತಿಪರ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಮರಿಯಾಲದಹುಂಡಿಯ ವೃತ್ತಿಪರ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಸಾರ್ವಜನಿಕ ಮಾದರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಚಾಮರಾಜನಗರ ತಾಲೂಕಿನ ಕುದೇರಿನಲ್ಲಿರುವ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಹರವೆಯಲ್ಲಿರುವ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಹೊಸ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಬಹುದು. ತಾಲ್ಲೂಕು ಮಟ್ಟದ ಆಯ್ಕೆ ಸಮಿತಿಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ಹಾಗೂ ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆ. ವಿದ್ಯಾರ್ಥಿನಿಲಯಗಳು ಇರುವ ಸ್ಥಳಗಳ ಕಾಲೇಜುಗಳಿಂದ 5ಕಿಲೋ ಮೀಟರ್‌ಗಿಂತ ದೂರದ ಸ್ಥಳಗಳಿಂದ ಬರುವ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಕಲ್ಪಿಸಲಾಗುವುದು. ಪ್ರವರ್ಗ-1, ಪರಿಶಿ?ಟ ಜಾತಿ ಹಾಗೂ ಪರಿಶಿ?ಟ ಪಂಗಡಗಳಿಗೆ ಸೇರಿದ ವಿದ್ಯಾರ್ಥಿ ಕುಟುಂಬದ ವಾರ್ಷಿಕ ಆದಾಯ ಮಿತಿ 2.5 ಲಕ್ಷ ರೂ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳಿಗೆ ಕುಟುಂಬದ ವಾರ್ಷಿಕ ಆದಾಯ ಮಿತಿ 1 ಲಕ್ಷ ರೂ ಒಳಗಿರಬೇಕು. ವಿದ್ಯಾರ್ಥಿನಿಲಯದಲ್ಲಿ ಪ್ರವರ್ಗವಾರು ತೆರವಾದ ಸ್ಥಾನಗಳಿಗೆ ಮಾತ್ರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ವಿದ್ಯಾರ್ಥಿಗಳು ವೆಬ್‌ಸೈಟ್ https://shp.karnataka.gov.in/bcwd ಸಂಪರ್ಕಿಸಿ ಜುಲೈ 20ರೊಳಗೆ ಅರ್ಜಿ ಸಲ್ಲಿಸಬೇಕು.

# ಪೇಪರ್ ಬಸವಣ್ಣಗೆ ಸನ್ಮಾನ

**ಗುಂಡ್ಲುಪೇಟೆ:** ಹಲವಾರು ವರ್ಷಗಳಿಂದ ದಿನ ಪತ್ರಿಕೆ ಮಾರಾಟ ಮಾಡಿ ಜೀವನ ಸಾಗಿಸುತ್ತಿರುವ ಬಸವಣ್ಣನವರಿಗೆ ಸಂಘಟನೆ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕರ್ನಾಟಕ ಕಾವಲು ಪಡೆಯ ವತಿಯಿಂದ ಪತ್ರಿಕಾ ದಿನಾಚರಣೆಯ ಅಂಗವಾಗಿ ಪಟ್ಟಣದಲ್ಲಿ ಪೇಪರ್ ಬಸವಣ್ಣ ಎಂದೇ ಖ್ಯಾತಿ ಪಡೆದಿರುವುದರಿಂದ ಸನ್ಮಾನಿಸಿ ಗೌರವಿಸುವ ಮೂಲಕ ಪತ್ರಿಕಾ ದಿನ ಆಚರಿಸಲಾಯಿತು. ಕಾವಲು ಪಡೆಯ ತಾಲೂಕು ಅಧ್ಯಕ್ಷರಾದ ಎ.ಅಬ್ದುಲ್ ಮಾಲಿಕ್ ಮಾತನಾಡಿ ಹಲವಾರು ವರ್ಷಗಳಿಂದ ದಿನ ಪತ್ರಿಕೆ ಮಾರಾಟ ಮಾಡಿ ಜೀವನ ಸಾಗಿಸುತ್ತಿರುವುದು ಹೆಮ್ಮೆಯ ವಿಚಾರವಾಗಿದೆ ಇಂಥವರನ್ನು ಗುರುತಿಸಿ ಗೌರವಿಸುವ ಕೆಲಸ ಎಲ್ಲರಿಂದ ನಡೆಯಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ಕಾಳಿಂಗಸ್ವಾಮಿ, ತಾಲ್ಲೂಕು ಕಾರ್ಯದರ್ಶಿ ಎಸ್.ಮುಬಾರಕ್, ಟೌನ್ ಉಪಾಧ್ಯಕ್ಷ ಸಾದಿಕ್ ಪಾಷ, ಕಸಬಾ ಹೋಬಳಿ ಘಟಕದ ಅಧ್ಯಕ್ಷ ಹೆಚ್. ರಾಜು, ಸಂಚಾಲಕ ಮಿಮಿಕ್ರಿರಾಜು, ರಾಮೇಗೌಡರು ಸೇರಿದಂತೆ ಇತರರಿದ್ದರು.



# ವಚನ ಸಂರಕ್ಷಣಾ ದಿನಾಚರಣೆ



**ಮಡಿಕೇರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಡಾ.ಫಕೀರಪ್ಪ ಗುರುಬಸಪ್ಪ ಹಳಕಟ್ಟಿ ಅವರ ಜನ್ಮದಿನದ ಅಂಗವಾಗಿ ವಚನ ಸಂರಕ್ಷಣಾ ದಿನಾಚರಣೆಯು ಕುಶಾಲನಗರ ತಾಲ್ಲೂಕಿನ ಹೆಬ್ಬಾಲೆ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಮಂಗಳವಾರ ನಡೆಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಉಪನ್ಯಾಸಕರಾದ ಎಚ್. ಎಲ್.ರಮೇಶ್ ಡಾ.ಫ.ಗು.ಹಳಕಟ್ಟಿಯವರು ವಚನ ಪುಸ್ತಕಗಳು ಹಾಗೂ ಪುಸ್ತಕ ಬಂಡಾರವನ್ನು ಕನ್ನಡ ಸಾಹಿತ್ಯಕ್ಕೆ ನೀಡಿದ್ದಾರೆ ಎಂದು ತಿಳಿಸಿದರು.

ಉಪನ್ಯಾಸಕರಾದ ವೆಂಕಟ್ ನಾಯಕ್ ಮಾತನಾಡಿ, ಫ.ಗು.ಹಳಕಟ್ಟಿ ಅವರು ವಚನ ಸಾಹಿತ್ಯ ಸಂಗ್ರಹಣೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದರು.

ವಚನ ಸಾಹಿತ್ಯ ಸಂಗ್ರಹಣೆಯಲ್ಲಿ ಸಾವಿರ ವಚನಗಳನ್ನು ರಚಿಸಿದ್ದಾರೆ. ಜೇಡರ ದಾಸಿಮಯ್ಯ ಅವರು ಕನ್ನಡದಲ್ಲಿ ಮೊದಲ ವಚನಕಾರ ಶಿವಾನುಭವ ಸಂಗ್ರಹದ ಲೇಖಕರು ಆಗಿದ್ದಾರೆ ಎಂದರು.

# ಯೋಗಕ್ಷೇಮ ಖಾತ್ರಿ ಪಡಿಸುವಲ್ಲಿ ವೈದ್ಯರ ಪಾತ್ರ ಅಮೂಲ್ಯ

**ಚಾಮರಾಜನಗರ:** ವೈದ್ಯೋ ನಾರಾಯಣೋ ಹರಿಃ ಎಂಬ ನಾಣ್ನುಡಿ ಇದೆ. ಅಂದರೆ ವೈದ್ಯರು ದೇವರ ಸಮಾನ ಎಂದರ್ಥ. ಯಾವುದೇ ಅನಾರೋಗ್ಯದ ಸಂದರ್ಭದಲ್ಲಿ ನಮ್ಮನ್ನು ಗುಣಪಡಿಸಿ ನಮಗೆ ಮರುಜೀವ ನೀಡುವ ವೈದ್ಯರು ನಿಜಕ್ಕೂ ದೇವರ ಸಮಾನ. ನಮ್ಮ ಪಾಲಿಗೆ ದೇವರೇ ಆಗಿರುವ ವೈದ್ಯರನ್ನು ಗೌರವಿಸುವ ದಿನ ರಾಷ್ಟ್ರೀಯ ವೈದ್ಯರ ದಿನ. ಎಂದು ಡೀನ್ ಮತ್ತು ನಿರ್ದೇಶಕರಾದ ಡಾ.ಹೆಚ್.ಜಿ.ಮಂಜುನಾಥ್ ತಿಳಿಸಿದರು.



ನಗರದ ಹೊರವಲಯದ ಯಡಪುರ ಗ್ರಾಮದ ಸಮೀಪದಲ್ಲಿ ಇರುವ ಚಾಮರಾಜನಗರದ ವಿಜ್ಞಾನಗಳ ಸಂಸ್ಥೆಯ ಸಭಾಂಗಣದಲ್ಲಿ ನಡೆದ ವಿಶ್ವ ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ವೈದ್ಯಕೀಯ ಕ್ಷೇತ್ರದ ಆಶಾಕಿರಣ ಡಾ. ಬಿದನ್ ಚಂದ್ರ ರಾಯ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಹಾಗೂ ಕೇಕ್ ಕತ್ತರಿಸುವ ಮಾಡುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು. ವೈದ್ಯರು ಹಲವು ಬಾರಿ ರೋಗಿಗಳ ಪಾಲಿಗೆ ದೇವರ ರೂಪದಲ್ಲೇ ಕಾಣಿಸುತ್ತಾರೆ. ಅದೆಷ್ಟೋ ಜನರಿಗೆ ವೈದ್ಯರು ದೇವರೇ ಆಗಿರುವುದು ಅತಿಶಯೋಕ್ತಿಯಲ್ಲ. ಇವರು ಎಲ್ಲಾ ರೀತಿಯ ಕಾಯಿಲೆಗಳು, ರೋಗಗಳ ವಿರುದ್ಧ ಕೋಟೆ ಕಟ್ಟಿ, ಜನರು ಹಾಗೂ ಸಮಾಜದ ಸ್ವಾಸ್ಥ್ಯ ಕಾಪಾಡುವ ಕೆಲಸ ಮಾಡುತ್ತಾರೆ. ನಾವು ಉತ್ತಮ ಜೀವನ ನಡೆಸುವಲ್ಲಿ ವೈದ್ಯರ ಪಾತ್ರ ಮಹತ್ವದ್ದು. ಅವರು ರೋಗಿಗಳಿಗೆ ಒಲವು ತೋರುತ್ತಾರೆ, ಭರವಸೆ ನೀಡುತ್ತಾರೆ, ಅಗತ್ಯ ಔ?ಧಿಗಳನ್ನು ಒದಗಿಸುತ್ತಾರೆ ಮತ್ತು ಸಮಯಕ್ಕೆ ಸರಿಯಾಗಿ ರೋಗಿಯು ಗುಣಮುಖನಾಗುವುದನ್ನು ಖಚಿತಪಡಿಸಿಕೊಳ್ಳುತ್ತಾರೆ. ಜನರ ಯೋಗಕ್ಷೇಮವನ್ನು ಖಾತ್ರಿಪಡಿಸುವಲ್ಲಿ ಅವರು ಅಮೂಲ್ಯವಾದ ಪಾತ್ರವನ್ನು ವಹಿಸುತ್ತಾರೆ ಎಂದು ಹೇಳಿದರು. ವೈದ್ಯಕೀಯ ಕಾಲೇಜು ಶಿಕ್ಷಕರ ಸಂಘದ ಅಧ್ಯಕ್ಷರಾದ ಡಾ.ಮಾರುತಿ ಮಾತನಾಡಿ, ಹೆಸರಾಂತ ವೈದ್ಯ ಮತ್ತು ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿ ಡಾ. ಬಿಧನ್ ಚಂದ್ರ ರಾಯ್ ಅವರ ಜನ್ಮದಿನದ ನೆನಪಿಗಾಗಿ ಪ್ರತಿ ವರ್ಷ ಜುಲೈ 1 ರಂದು ಭಾರತದಲ್ಲಿ ರಾಷ್ಟ್ರೀಯ ವೈದ್ಯರ ದಿನವನ್ನು ಆಚರಿಸಲಾಗುತ್ತದೆ. ಸಮಾಜಕ್ಕೆ ವೈದ್ಯಕೀಯ ವೃತ್ತಿಪರರ ಕೊಡುಗೆಗಳನ್ನು ಗುರುತಿಸಲು ಮತ್ತು ಅವರ ಕಠಿಣ ಪರಿಶ್ರಮ ಮತ್ತು ಸಮರ್ಪಣೆಗೆ ನಮ್ಮ ಮೆಚ್ಚುಗೆಯನ್ನು ತೋರಿಸಲು ದಿನವು ಒಂದು ಅವಕಾಶವಾಗಿದೆ ಎಂದರು. ಸಮಾಜಕ್ಕೆ ಅವರ ನಿಸ್ವಾರ್ಥ ಸೇವೆಯನ್ನು ಪ್ರತಿದಿನ ಆಚರಿಸಬೇಕು ಮತ್ತು ಗೌರವಿಸಬೇಕು. ಹೀಗೆ ವೈದ್ಯರಿಗೆ ಗೌರವ ಸಲ್ಲಿಸಿ, ಸಮಾಜಕ್ಕೆ ಅವರ ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ ಪ್ರತಿ ವರ್ಷ ರಾಷ್ಟ್ರೀಯ ವೈದ್ಯರ ದಿನವನ್ನು ಆಚರಿಸಲಾಗುತ್ತದೆ ಎಂದು ತಿಳಿಸಿದರು. ಕಾಲೇಜು ಪ್ರಾಂಶುಪಾಲರಾದ ಗಿರೀಶ್ ಪಾಟೀಲ್‌ಮಾತನಾಡಿ ಚಾಮರಾಜನಗರ ಜಿಲ್ಲಾಸ್ಪತ್ರೆಯಲ್ಲಿ ರೋಗಿಗಳಿಗೆ ಅನುಕೂಲವಾಗುವ ಚಿಕಿತ್ಸೆಗಳು ಸಾರ್ವಜನಿಕರಿಗೆ ಪಲುಪಿಸುವ ನಿಟ್ಟಿನಲ್ಲಿ ವೈದ್ಯರ ಶ್ರಮ ಅನನ್ಯವಾಗಿದೆ. ಇನ್ನು ಕೆಲವರಿಗೆ ಯಾವ ಯಾವ ಚಿಕಿತ್ಸೆಗಳಿಗೆ ಚಿಕಿತ್ಸೆ ನೀಡುತ್ತಾರೆ ಎಂದು ತಿಳಿದಿಲ್ಲ ವಿಚಾರಣ ಕೊಠಡಿಯಲ್ಲಿ ತಿಳಿದು ಎಂದು ಅವರುಗಳು ಉಪಯೋಗಗಳನ್ನು ಪಡೆದುಕೊಳ್ಳಬಹುದು ಎಂದರು.

# ಡಾ. ಫ.ಗು. ಹಳಕಟ್ಟಿ ಜಯಂತಿ ಆಚರಣೆ



**ಬೆಂಗಳೂರು ಗ್ರಾಮಾಂತರ:** ದೇವನಹಳ್ಳಿ ತಾಲೂಕಿನ ಬೀರಸಂದ್ರ ಗ್ರಾಮದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ಕನ್ನಡ ಮತ್ತು ಸಂಸ್ಕೃತ ಇಲಾಖೆ ವತಿಯಿಂದ ವಚನ ಪಿತಾಮಹ ಡಾ. ಫ.ಗು ಹಳಕಟ್ಟಿ ರವರ 144ನೇ ಜಯಂತ್ಯೋತ್ಸವ ಅಂಗವಾಗಿ ಅಪರ ಜಿಲ್ಲಾಧಿಕಾರಿಗಳಾದ ಅಮರೇಶ ಹೆಚ್. ಅವರು ಡಾ. ಫ.ಗು ಹಳಕಟ್ಟಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಯವರ ಕಚೇರಿ ಸಹಾಯಕರಾದ ರಾಜೀವ್ ಸುಲೋಚನ, ಆರ್.ಹೆಚ್. ಎಂ ಗಂಗಾಧರ್, ಜೆ.ಹೆಚ್ ಎಂ ಇಂದ್ರಮ್ಮ, ಜಿಲ್ಲಾಧಿಕಾರಿಯವರ ಆಪ್ತ ಸಹಾಯಕ ಅಭಿಷೇಕ್ ಸೇರಿದಂತೆ ಜಿಲ್ಲಾಡಳಿತ ಸಿಬ್ಬಂದಿ ಉಪಸ್ಥಿತರಿದ್ದರು.

## ವಿದ್ಯಾರ್ಥಿನಿಲಯಕ್ಕೆ ಅರ್ಜಿ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ಚಾಮರಾಜನಗರ ತಾಲೂಕಿನ ಮೆಟ್ರಿಕ್ ಪೂರ್ವ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. 5 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿ?ಟ ಜಾತಿ ಹಾಗೂ ಪರಿಶಿ?ಟ ಪಂಗಡಗಳಿಗೆ ಸೇರಿದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಬಹುದು. ಉಚಿತ ಊಟ, ವಸತಿ, ಸಮವಸ್ತ್ರ, ಪಠ್ಯಪುಸ್ತಕ ಮತ್ತು ಲೇಖನ ಸಾಮಾಗ್ರಿ, ವೈದ್ಯಕೀಯ ಸೌಲಭ್ಯ, ವಿಶೇ? ಭೋಜನಾ ವ್ಯವಸ್ಥೆ ಹಾಗೂ ಸರ್ಕಾರ ಸೂಚಿಸುವ ಇನ್ನಿತರೆ ಸೌಲಭ್ಯಗಳನ್ನು ನೀಡಲಾಗುತ್ತದೆ. ಚಾಮರಾಜನಗರ ಪಟ್ಟಣದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಾಲಕಿಯರ ವಿದ್ಯಾರ್ಥಿನಿಲಯ, ಚಾಮರಾಜನಗರ ತಾಲೂಕಿನ ವೆಂಕಟಯ್ಯನಛತ್ರದ, ಅರಕಲವಾಡಿ, ಕಾಗಲವಾಡಿಯಲ್ಲಿರುವ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಬಹುದು. ವಿದ್ಯಾರ್ಥಿ ಹಿಂದಿನ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಅವಕಾಶವಿರುವುದಿಲ್ಲ. ಸರ್ಕಾರಿ ಅಥವಾ ಸರ್ಕಾರಿ ಅಂಗೀಕೃತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು. ಶೈಕ್ಷಣಿಕ ಸಂಸ್ಥೆಯಿಂದ 5ಕಿಲೋ ಮೀಟರ್ ದೂರದಲ್ಲಿ ವಾಸಿಸುವ ವಿದ್ಯಾರ್ಥಿಗಳಿಗೆ ಶೇ. 90ರಷ್ಟು ಸ್ಥಾನಗಳನ್ನು ಹಾಗೂ ಉಳಿದ ಶೇ. 10 ಸ್ಥಾನಗಳನ್ನು 5 ಕಿಲೋ ಮೀಟರ್ ನಿಂದ ಕಡಿಮೆ ಇರುವ ಸ್ಥಳೀಯ ವಿದ್ಯಾರ್ಥಿಗಳಿಗೆ ಕಾಯ್ದಿರಿಸಲಾಗಿದೆ. ವಿದ್ಯಾರ್ಥಿಗಳು ವೆಬ್‌ಸೈಟ್ https://shp.karnataka.gov.in/bcwd ಸಂಪರ್ಕಿಸಿ ಆನ್ ಲೈನ್ ಮೂಲಕ ಜುಲೈ 10ರೊಳಗೆ ಅರ್ಜಿ ಸಲ್ಲಿಸಬೇಕು.ಹೆಚ್ಚಿನ ವಿವರಗಳಿಗೆ ಚಾಮರಾಜನಗರ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಸಂಪರ್ಕಿಸುವಂತೆ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಸಲಾಗುತ್ತಿರುವ 2024-25 ನೇ ಸಾಲಿಗೆ ಡಾ. ಬಿ. ಆರ್. ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಪರಿಶಿಷ್ಟ ಜಾತಿ ಮತ್ತು ವರ್ಗದ ವಿದ್ಯಾರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತ ವಿದ್ಯಾರ್ಥಿಗಳು ಪ್ರವೇಶಾತಿ ಕೋರಿ HMIS portal ನಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದ್ದು, ಒಂದು ವೇಳೆ HMIS portal ನಲ್ಲಿ ಅರ್ಜಿ ಸಲ್ಲಿಸಲು ಅನಾನುಕೂಲ ವಾಗುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಪ್ರವೇಶ ಬಯಸುವ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿಯನ್ನು ಸಲ್ಲಿಸಿ ಪ್ರವೇಶ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಮಂಡ್ಯ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ನೇರ ಸಂದರ್ಶನ

**ಮಂಡ್ಯ:** ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಹಾಗೂ ಮೆ.ಆಕ್ಸಿಸ್ ಬ್ಯಾಂಕ್, ಮೆ. ಇ.ಎಸ್.ಎಸ್.ವಿ.ಇ.ಇ ರಿಕ್ರೂಟೆಕ್, ಮೆ.ಪೀಪಲ್ ಸೆಕ್ಯೂರಂ ಹೆಚ್.ಆರ್ ಪ್ರೈ, ಲಿ., ಮೆ. ನಿವಬುಪ ಹೆಲ್ತ್ ಇನ್ಸೂರೆನ್ಸ್ ಕಂಪನಿ ಲಿ., ಮತ್ತು ಮೆ. ಸ್ಪೆಕ್ಟ್ರಂ ಟೂಲ್ಸ್ ಸಂಸ್ಥೆಗಳ ಸಹಯೋಗದಲ್ಲಿ ನೇರ ಸಂದರ್ಶನ ನಡೆಯಲಿದೆ. ಸಂಸ್ಥೆಗಳಲ್ಲಿ ಖಾಲಿಯಿರುವ ''ಬ್ಯುಸಿನೆಸ್ ಡೆವಲಪ್‌ಮೆಂಟ್ ಎಕ್ಸಿಕ್ಯೂಟಿವ್, ಈಸಿ ಕಸ್ಟಮರ್ ಅಸೋಸಿಯೇಟ್, ಟೆಕ್ನಿಷಿಯನ್, ಮೆಷಿನ್ ವರ್ಕ್ಸ್ ಮತ್ತು ಟೆಲಿಸೇಲ್ಸ್'' ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ (ಯಾವುದೇ ಟ್ರೇಡ್), ಡಿಪ್ಲಮೊ (ಯಾವುದೇ ಟ್ರೇಡ್), ಬಿ.ಇ (ಮೆಕ್ಯಾನಿಕಲ್) ಹಾಗೂ ಯಾವುದೇ ಪದವಿ ಉತ್ತೀರ್ಣರಾದ 18 ರಿಂದ 32 ವರ್ಷದೊಳಗಿನ ಅಭ್ಯರ್ಥಿಗಳು ಜುಲೈ 05 ರಂದು ಬೆಳಿಗ್ಗೆ 10.00 ಗಂಟೆಗೆ ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗೆ ತಮ್ಮ ರೆಸ್ಯೂಮೆ/ ಬಯೋಡೇಟಾಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-295124/9164642684 ಮತ್ತು 8970646629 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಉದ್ಯೋಗಾಧಿಕಾರಿ ತಿಳಿಸಿರುತ್ತಾರೆ.

## ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ

**ಮಂಡ್ಯ:** ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಮೇ 2024 ರ ಮಾಹೆಯ ಜುಲೈ 6 ರಿಂದ ಜುಲೈ 26 ರವರೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ. ಜುಲೈ 6 ರಂದು ಕಿರುಗಾವಲು ಸರ್ಕಾರಿ ಆರೋಗ್ಯ ಕೇಂದ್ರ, 9 ರಂದು ಅರಕೆರೆ ಸರ್ಕಾರಿ ಆರೋಗ್ಯ ಕೇಂದ್ರ, 10 ರಂದು ಕೆ.ಆರ್.ಪೇಟೆ ತಾಲ್ಲೂಕು ಆಸ್ಪತ್ರೆ, 11 ರಂದು ಕೀಲಾರ ಸರ್ಕಾರಿ ಆರೋಗ್ಯ ಕೇಂದ್ರ, 12 ರಂದು ಪಾಂಡವಪುರ ಉಪ ವಿಭಾಗ ಸರ್ಕಾರಿ ಆರೋಗ್ಯ ಕೇಂದ್ರ, 16 ರಂದು ಶಿವಳ್ಳಿ ಸರ್ಕಾರಿ ಆರೋಗ್ಯ ಕೇಂದ್ರ, 18 ರಂದು ಚಿನಕುರಳಿ ಸರ್ಕಾರಿ ಆರೋಗ್ಯ ಕೇಂದ್ರ, 19 ರಂದು ಬಸರಾಳು ಪ್ರಾಥಮಿಕ ಆರೋಗ್ಯ ಕೇಂದ್ರ, 20 ರಂದು ಮಂಡ್ಯ ಮಿಮ್ಸ್, 23 ರಂದು ಮದ್ದೂರು ತಾಲ್ಲೂಕು ಆಸ್ಪತ್ರೆ, 24 ರಂದು ಬಿಂಡಿಗನವಿಲೆ ಸರ್ಕಾರಿ ಆರೋಗ್ಯ ಕೇಂದ್ರ ಹಾಗೂ ಮಧ್ಯಾಹ್ನ 1 ಗಂಟೆಗೆ ನಾಗಮಂಗಲ ಸಾರ್ವಜನಿಕ ಆಸ್ಪತ್ರೆಯಲ್ಲಿ, 25 ರಂದು ಕೆ. ಎಂ ದೊಡ್ಡಿ ಸರ್ಕಾರಿ ಆರೋಗ್ಯ ಕೇಂದ್ರ, 26 ರಂದು ಕೆರಗೋಡು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬೆಳಿಗ್ಗೆ 10 ಗಂಟೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ತಿಳಿಸಿದ್ದಾರೆ.

# ಅಂಗನವಾಡಿ ಕಾರ್ಯಕರ್ತೆಯರಿಗೆ ಮೊಬೈಲ್ ವಿತರಣೆ

**ಸಂತೇಮರಹಳ್ಳಿ:** ಸರ್ಕಾರದಿಂದ ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡಲಾಗಿರುವ ಮೊಬೈಲ್ ಗಳನ್ನು ಸದುಪಯೋಗ ಪಡಿಸಿಕೊಂಡು ಮಕ್ಕಳ ಮತ್ತು ಗರ್ಭಿಣಿ ಮಹಿಳೆಯರ ದಾಖಲಾತಿ ಮಾಡಿ ಅಗತ್ಯ ಸೌಲಭ್ಯಗಳನ್ನು ಸಕಾಲಕ್ಕೆ ನೀಡುವಂತೆ ಶಾಸಕ ಎ.ಆರ್.ಕೃಷ್ಣಮೂರ್ತಿ ತಿಳಿಸಿದರು.



ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಆವರಣದಲ್ಲಿ ನಡೆದ ಅಂಗನವಾಡಿ ಕಾರ್ಯಕರ್ತೆಯರಿಗೆ ಮೊಬೈಲ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅಂಗನವಾಡಿ ಕಾರ್ಯಕರ್ತೆಯರಿಗೆ ಕೊಟ್ಟಿರುವ ಸಾಧನ ಇದನ್ನು ಸದ್ಬಳಕೆ ಮಾಡಿಕೊಳ್ಳುವುದು ನಿಮ್ಮ ಕರ್ತವ್ಯ. ಮುಂಬರುವ ದಿನಗಳಲ್ಲಿ ವಿಧಾನಸಭೆಯಲ್ಲಿ ನಿಮ್ಮ ದ್ವನಿಯಾಗಿ ನಿಲ್ಲುವುದಾಗಿ ಹೇಳಿದರು.

ಮುಖ್ಯ ಮಂತ್ರಿ ಕೊಟ್ಟಿರುವ ಗ್ಯಾರಂಟಿ ಯೋಜನೆ ದೇಶದಲ್ಲಿ ಹೆಸರುವಾಸಿಯಾಗಿದೆ ಹಾಗೂ ದೇಶದಲ್ಲಿ 15 ಬಜೆಟ್ ಮಂಡನೆ ಮಾಡಿರುವ ಮೊಟ್ಟ ಮೊದಲು ಮುಖ್ಯ ಮಂತ್ರಿ ಸಿದ್ಧರಾಮಯ್ಯನವರಾಗಿದ್ದಾರೆ. ಅದೇ ರೀತಿ ಅಂಗನವಾಡಿ ಕಾರ್ಯಕರ್ತೆಯರು ಪರ ನಿಂತು ನಿಮ್ಮ ಕಷ್ಟಕ್ಕೆ ಸ್ಪಂದನೆ ಮಾಡುವುದರ ಜೊತೆಗೆ ಜವಾಬ್ದಾರಿ ಅರಿತು ಯಾವುದೇ ರೀತಿಯ ಕಪ್ಪು ಚುಕ್ಕಿ ಬಾರದೆ ರೀತಿ ಕೆಲಸ ಮಾಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿಗಳ ಯೋಜನಾ ಜಿಲ್ಲಾ ಅಧ್ಯಕ್ಷ ಎಚ್. ವಿ. ಚಂದ್ರು, ಜಿಲ್ಲಾ ಗ್ಯಾರಂಟಿ ಯೋಜನೆಯ ಉಪಾಧ್ಯಕ್ಷ ಪ್ರಭು ಪ್ರಸಾದ್, ಚಾಮುಲ್ ನಿರ್ದೇಶಕ ಕಮರವಾಡಿ ರೇವಣ್ಣ, ಗ್ರಾಪಂ ಅಧ್ಯಕ್ಷೆ ರಾಜಮ್ಮ, ಸದಸ್ಯರಾದ ಶಿವಕುಮಾರ್, ಎಂ. ಪಿ. ಶಂಕರಪ್ಪ, ಪಿಎಸ್‌ಐ ತಾಜುದ್ದೀನ್, ಸಿಡಿಪಿಓ ಜಯಶೀಲಾ, ಅಂಗನವಾಡಿ ಜಿಲ್ಲಾ ಅಧ್ಯಕ್ಷೆ ಸುಜಾತಾ, ತಾಲೂಕು ಅಧ್ಯಕ್ಷೆ ಪಾರ್ವತಮ್ಮ, ಸಿಬ್ಬಂದಿ ವರ್ಗ ಮತ್ತಿತರರು ಇದ್ದರು.



**ಗೋಣಿಕೊಪ್ಪಲುವಿನ ಸರಕಾರಿ ಪ್ರೌಢಶಾಲೆಯಲ್ಲಿ ವಿಶ್ವಶಾಂತಿಗಾಗಿ ಲೇಖನಿ ಅಭಿಯಾನ ಕಾರ್ಯಕ್ರಮ ಶಾಲಾ ಮುಖ್ಯೋಪಾಧ್ಯಾಯರ ನೇತೃತ್ವದಲ್ಲಿ ಇತ್ತೀಚೆಗೆ ನಡೆಯಿತು. ಶಾಲೆಯ ಶಿಕ್ಷಕಿಯರಾದ ಆಗ್ನೇಸ್, ಹರಿಣಿ, ಕಾರ್ಯಕ್ರಮದ ಸಂಚಾಲಕಿ ಕೆ.ಟಿ.ವಾತ್ಸಲ್ಯ ಭಾಗವಹಿಸಿದ್ದರು.**

# ಕನಕಪುರ-ಚಾ.ನಗರ ರೈಲು ಕಾಮಗಾರಿ ಆರಂಭಕ್ಕೆ ಒತ್ತಾಯ

**ಮಂಡ್ಯ:** ಬೆಂಗಳೂರು, ಕನಕಪುರ, ಮಳವಳ್ಳಿ, ಚಾಮರಾಜನಗರವರೆಗಿನ ರೈಲು ಮಾರ್ಗಕ್ಕೆ ಕೇಂದ್ರ ಸರ್ಕಾರ ಬಜೆಟ್‌ನಲ್ಲಿ ಅಂಗೀಕಾರ ನೀಡಿ, ಶೀಘ್ರವಾಗಿ ಕಾಮಗಾರಿ ಆರಂಭಿಸಬೇಕೆಂದು ಮಾಜಿ ಶಾಸಕ ಕೆ. ಅನ್ನದಾನಿ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಈ ಬಜೆಟ್ ನಲ್ಲಿ ರೈಲ್ವೆ ಮಾರ್ಗಕ್ಕೆ ಅಗತ್ಯವಾದ ಹಣಕಾಸು ಮಂಜೂರು ನೀಡಿ, ಕೆಲಸ ಆರಂಭಿಸಬೇಕೆಂದು ಈಗಾಗಲೇ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಪತ್ರ ಸಲ್ಲಿಸಿ ಇದರ ಅಗತ್ಯತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದೇನೆ. ನಮ್ಮ ಪಕ್ಷದ ನಾಯಕ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗೂ ಮನವಿ ಪತ್ರ ನೀಡಿದ್ದು, ಈಗಾಗಲೇ ಅವರು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರ ಜೊತೆ ಚರ್ಚೆ ಮಾಡಿದ್ದಾರೆ. ಸಚಿವ ವಿ. ಸೋಮಣ್ಣ ಕೂಡ ಯೋಜನಾ ವರದಿ ಡಿಪಿಆರ್ ಕೈಗೆತ್ತಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಎಂದರು. 1996-97 ರಲ್ಲಿ ಎಚ್.ಡಿ. ಕುಮಾರಸ್ವಾಮಿ ಅವರು ಕನಕಪುರ ಸಂಸದರಾಗಿದ್ದ ಸಂದರ್ಭದಲ್ಲಿ ಬೆಂಗಳೂರಿನಿಂದ ಚಾಮರಾಜನಗರ ರೈಲ್ವೆ ಮಾರ್ಗಕ್ಕೆ ಆಗ್ರಹಿಸಲಾಗಿತ್ತು. ಇದಾಗಿ 28 ವರ್ಷಗಳ ನಂತರ ರೈಲ್ವೆ ಮಾರ್ಗದ ಬಗ್ಗೆ ಕುಮಾರಸ್ವಾಮಿಯವರು ಚರ್ಚೆ ನಡೆಸಿದ್ದು, ಶೀಘ್ರದಲ್ಲಿ ಈ ಯೋಜನೆ ಪ್ರಾರಂಭವಾಗುವ ಆಶಾಭಾವನೆ ಮೂಡಿಸಿದೆ ಎಂದರು. ಈ ರೈಲು ಮಾರ್ಗದ ನಿರ್ಮಾಣದಿಂದ ರಾಮನಗರ, ಮಂಡ್ಯ, ಚಾಮರಾಜನಗರ ಮೂರು ಜಿಲ್ಲೆಗಳ ಜನರ ಹಲವು ದಶಕಗಳ ಕನಸು ಈಡೇರಲಿದೆ. ರೈಲು ಮಾರ್ಗ ನಿರ್ಮಾಣದಿಂದ ಈ ಭಾಗದ ಜನರು ಆರ್ಥಿಕವಾಗಿ ಶೈಕ್ಷಣಿಕವಾಗಿ ಹೆಚ್ಚು ಅಭಿವೃದ್ಧಿ ಹೊಂದುತ್ತಾರೆ.

ಈ ಯೋಜನೆಗೆ 1723 ಎಕರೆ ಜಮೀನು ಬೇಕಾಗಿದ್ದು, 142 ಕಿ.ಮೀ ಅಂತರದ ಈ ಯೋಜನೆಗೆ 2013ರಲ್ಲಿ 1382.78 ಕೋಟಿ ಹಣ ವೆಚ್ಚವಾಗಲಿದೆ ಎಂದಿದ್ದು, ಈಗ ಇನ್ನು ಹೆಚ್ಚಾಗಲಿದೆ ಎಂದರು. ಈ ರೈಲು ಮಾರ್ಗಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಲಾ ಶೇ.50ರಷ್ಟು ಹಣ ವಿನಿಯೋಗಿಸಬೇಕಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ಭಾಗದ ಜನರು ಆರ್ಥಿಕವಾಗಿ ಬಲಗೊಳ್ಳಲು ಈ ಯೋಜನೆಗೆ ಅಗತ್ಯವಾದ ಹಣಕಾಸು ಮತ್ತು ಭೂಮಿಯನ್ನು ನೀಡುವ ಮೂಲಕ ಆದಷ್ಟು ತ್ವರಿತವಾಗಿ ಈ ಕೆಲಸ ಆರಂಭವಾಗಲು ಪ್ರಯತ್ನ ಮಾಡಬೇಕು ಎಂದು ಮನವಿ ಮಾಡಿದರು. ಕೆಂಗೇರಿ-ಹೆಜ್ಜಾಲ-ಹಾರೋಹಳ್ಳಿ- ಕನಕಪುರ- ಮಳವಳ್ಳಿ- ಕೊಳ್ಳೇಗಾಲ- ಚಾಮರಾಜನಗರ ತಲುಪುವ ರೈಲು ಮಾರ್ಗ ನಿರ್ಮಾಣವಾದರೆ ಈ ಭಾಗಗಳು ಎಲ್ಲಾ ರೀತಿಯಲ್ಲೂ ಅಭಿವೃದ್ಧಿ ಹೊಂದುತ್ತದೆ.ಆದ್ದರಿಂದ ಈ ಯೋಜನೆಗೆ ಅಗತ್ಯವಿರುವ ಹಣಕಾಸನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೀಡುವ ಮೂಲಕ ಈ ಯೋಜನೆಯನ್ನು ತ್ವರಿತವಾಗಿ ಆರಂಭಿಸಿ, ಜನರಿಗೆ ತಲುಪಿಸುವ ವ್ಯವಸ್ಥೆ ಮಾಡಬೇಕು ಎಂದರು. ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಎಸ್ಸಿ,ಎಸ್ಟಿ ವರ್ಗಕ್ಕೆ ಮೀಸಲಾಗಿದ್ದ 11 ಸಾವಿರ ಕೋಟಿ ಹಣವನ್ನು ವರ್ಗಾವಣೆ ಮಾಡಿರುವುದು, ಈ ವರ್ಗದ ಜನರಿಗೆ ಮಾಡಿರುವ ಮಹಾದ್ರೋಹ. ನಮ್ಮ ಸಮುದಾಯಕ್ಕೆ ಮೀಸಲಾಗಿದ್ದ ಈ ಹಣ ಎಲ್ಲಿಗೆ ಹೋಯಿತು. ಈ 11,000 ಕೋಟಿ ರೂ.ಗಳ ಬಗ್ಗೆ ಸದನ ಸಮಿತಿಯ ಸದಸ್ಯರಾದ ಶಾಸಕ ನರೇಂದ್ರಸ್ವಾಮಿ ಅವರು ಏಕೆ ಮಾತನಾಡುತ್ತಿಲ್ಲ.ಅವರಿಗೆ ಇದರಲ್ಲಿ ಪಾಲುದಾರಿಕೆ ಇದೆಯಾ ಅವರ ನಡೆ ಅನುಮಾನ ಮೂಡಿಸುತ್ತಿದೆ ಎಂದರು.

# ತೋಟಗಾರಿಕೆ ಮಿಷನ್‌ನಿಂದ ಸಹಾಯಧನ

**ಚಾಮರಾಜನಗರ:** ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯ ಪ್ರದೇಶ ವಿಸ್ತರಣೆ ಕಾರ್ಯಕ್ರಮದಡಿ ಅಂಗಾಂಶ ಕೃಷಿ ಬಾಳೆ ಹೈಬ್ರಿಡ್ ತರಕಾರಿ ಹಾಗೂ ಬಿಡಿ ಹೂ ಗಳಾದ ಚೆಂಡು ಹೂ, ಸೇವಂತಿಗೆ ಕನಕಾಂಬರ ಬೆಳೆಗಳಿಗೆ ತೋಟಗಾರಿಕೆ ಇಲಾಖೆಯಿಂದ ಸಹಾಯಧನ ನೀಡಲಾಗುವುದು.



2024-25ನೇ ಸಾಲಿಗೆ ನೀರು ಸಂಗ್ರಹಣಾ ಘಟಕಕ್ಕೆ ಶೇ. 50 ರಂತೆ 20X20X3 ಮೀ ಅಳತೆಯ ಘಟಕಕ್ಕೆ 75 ಸಾವಿರ ರೂ. ಸಹಾಯಧನ ಹಾಗೂ ಸಂರಕ್ಷಿತ ಬೇಸಾಯ ಕಾರ್ಯಕ್ರಮದಡಿ ತೋಟಗಾರಿಕೆ ಬೆಳೆಗಳಿಗೆ ಹೊದಿಕೆ ಅಳವಡಿಸುವುದಕ್ಕೆ ಪ್ರತಿ ಹೆಕ್ಟೇರ್‌ಗೆ ಶೇ. 50 ರಂತೆ 16 ಸಾವಿರ ರೂ. ಸಹಾಯಧನ ನೀಡಲಾಗುವುದು. ತೋಟಗಾರಿಕೆ ಯಾಂತ್ರೀಕರಣ ಕಾರ್ಯಕ್ರಮದಡಿ 20 ಹೆಚ್.ಪಿ ಮಿನಿ ಟ್ರಾಕ್ಟರ್ ಗೆ ಸಾಮಾನ್ಯ ವರ್ಗದ ರೈತರಿಗೆ 75 ಸಾವಿರ ರೂ. ಹಾಗೂ ಪರಿಶಿಷ್ಟ ಜಾತಿ, ಪರಿಶಿಷ ಪಂಗಡ ರೈತರಿಗೆ 1 ಲಕ್ಷ ರೂ. ವರೆಗೆ ಸಹಾಯಧನ ಮತ್ತು ಕೊಯ್ಲೋತ್ತರ ನಿರ್ವಹಣೆ ಕಾರ್ಯಕ್ರಮದಡಿ ಈರುಳ್ಳಿ ಶೇಖರಣಾ ಘಟಕ 12X3.60X1.80 ಮೀ ಅಳತೆಗೆ 87,500 ರೂ. ಹಾಗೂ ಪ್ಯಾಕ್ ಹೌಸ್ ಘಟಕ 9X6X3 ಮೀ ಅಳತೆಗೆ 2ಲಕ್ಷ ರೂ. ಸಹಾಯಧನ ನೀಡಲಾಗುವುದು. ರಾಜ್ಯ ವಲಯದ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಸಹಾಯಧನ ನೀಡಲಾಗುತ್ತಿದ್ದು, ವಿನೂತನ ತಂತ್ರಜ್ಞಾನ ಕಾರ್ಯಕ್ರಮದಡಿ ಸೋಲಾರ್ ಪಂಪ್ ಸೆಟ್ ಮತ್ತು ಯಾಂತ್ರೀಕರಣ ಕಾರ್ಯಕ್ರಮದಡಿ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ, ಪಂಗಡದ ರೈತರಿಗೆ ಶೇ. 50ರಂತೆ 1,50,000 ರೂ. ಸಹಾಯಧನ ಹಾಗೂ ಎಸ್‌ಎಂಎಎಂ ಯೋಜನೆಯಡಿ ತೋಟಗಾರಿಕೆ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ. 40ರ ಸಹಾಯಧನ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮಹಿಳೆಯರಿಗೆ ಶೇ. 50ರಂತೆ ಸಹಾಯಧನ ನೀಡಲಾಗುವುದು. ತಾಳೆ ಬೆಳೆ ಯೋಜನೆಯಡಿ ತಾಳೆ ಸಸಿಗಳಿಗೆ ಹೆಕ್ಟೇರ್ ಗೆ 20 ಸಾವಿರ ರೂ. ಹಾಗೂ ಅಂತರ ಬೆಳೆ, ಡೀಸೆಲ್ ಪಂಪ್ ಸೆಟ್, ಕೊಳವೆ ಬಾವಿ, ನೀರು ಸಂಗ್ರಹಣಾ ಘಟಕ, ಎರೆಹುಳು ಘಟಕ, ತಾಳೆ ಹಣ್ಣು ಕಟಾವು ಯಂತ್ರ, ಮೊಟೊರೈಸ್ಡ್ ಚೆಸೆಲ್, ತಾಳೆ ಹಣ್ಣು, ಕಟಾವು ಏಣಿ, ಚಾಫ್ ಕಟ್ಟರ್, ಟ್ರಾಕ್ಟರ್ ಟ್ರೋಲಿಗಳಿಗೆ ಸಹಾಯಧನ ನೀಡಲಾಗುತ್ತದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಪದ್ಧತಿ ಅಳವಡಿಕೊಳ್ಳಲು ಸಾಮಾನ್ಯ ವರ್ಗದ ರೈತರಿಗೆ ಶೇ. 55 ಮತ್ತು ಪರಿಶಿ?ಟ ಜಾತಿ, ಪರಿಶಿ?ಟ ಪಂಗಡದ ರೈತರಿಗೆ ಶೇ. 90 ರಂತೆ ಪ್ರತಿ ಫಲಾನುಭವಿಗೆ ಗರಿಷ್ಟ 5 ಹೆಕ್ಟೇರ್ ವರೆಗೆ ಸಹಾಯಧನ ನೀಡಲಾಗುವುದು. ಆಸಕ್ತ ರೈತರು ಸೂಕ್ತ ದಾಖಲಾತಿಗಳಾದ ಆಧಾರ್ ಕಾರ್ಡ್, ಪಹಣಿ, ಪೋಟೋ, ಬ್ಯಾಂಕ್ ಪಾಸ್ ಬುಕ್ ಜೆರಾಕ್ಸ್ ಪ್ರತಿಗಳೊಂದಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಕೊಳ್ಳೇಗಾಲ ಇವರಿಗೆ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

# ಸಂಜೆ ಟಿಪ್ಸ್



## ಗ್ಲೀನ್ ಟೆಕ್ನಾಲಜೀಸ್ ಲಾಂಚ್

ಕ್ಯಾಲಿಫೋರ್ನಿಯಾದ ಪಾಲೊ ಆಲ್ಟೊ ಮೂಲದ, ಉದ್ಯಮದ ಪ್ರಮುಖ ಎಂಟರ್ಪ್ರೈಸ್ ಎಐ ಪ್ಲಾಟ್ಫಾರ್ಮ್ ಆಗಿರುವ ಗ್ಲೀನ್, ಭಾರತದಲ್ಲಿ ತನ್ನ ಮೊದಲ ಕಚೇರಿಯನ್ನು ಬೆಂಗಳೂರಿನಲ್ಲಿ ಪ್ರಾರಂಭಿಸುವುದಾಗಿ ಘೋಷಿಸಿದೆ. ಬೆಂಗಳೂರಿನ ಕಛೇರಿಯು ಭಾರತದ ಕಾರ್ಯಾಚರಣೆಯ ಕೇಂದ್ರವಾಗಿದ್ದು, ಹಣಕಾಸು, ಮಾರಾಟ, ಸಂಶೋಧನೆ amp ಅಭಿವೃದ್ಧಿ ಮತ್ತು ವ್ಯಾಪಾರ ಕಾರ್ಯಾಚರಣೆಗಳನ್ನು ನಿರ್ವಹಿಸಲಿದೆ. ಜಾಗತಿಕ ಮಟ್ಟದಲ್ಲಿ ಗ್ಲೀನ್ನ ಗ್ರಾಹಕರಿಗೆ GenAI ಅಸಿಸ್ಟಂಟ್ಸ್ ಮತ್ತು ಅಪ್ಲಿಕೇಶನ್ಗಳನ್ನು ನಿಯೋಜಿಸಲು, ಈ ನವೀನ ಕೇಂದ್ರ ಪ್ರಮುಖ ಪಾತ್ರ ವಹಿಸಲಿದೆ. ಮಾಧ್ಯಮವನ್ನು ಉದ್ದೇಶಿಸಿ ಮಾತನಾಡಿದ ಗ್ಲೀನ್ ಟೆಕ್ನಾಲಜೀಸ್ ಇಂಟರ್ನ್ಯಾಷನಲ್‌ನ ಸಂಸ್ಥಾಪಕ ಮತ್ತು ಸಿಇಒ ಅರವಿಂದ್ ಜೈನ್, ''ಭಾರತದಲ್ಲಿ, ಅದರಲ್ಲೂ ವಿಶೇಷವಾಗಿ, ಅಪಾರ ಮಾರುಕಟ್ಟೆ ಸಾಮರ್ಥ್ಯವಿರುವ ಮತ್ತು ಸುಧಾರಿತ AI ಪರಿಹಾರಗಳಿಗೆ ಬೆಳೆಯುತ್ತಿರುವ ಬೇಡಿಕೆ ಹೊಂದಿರುವ ದೇಶದ ಐಟಿ ಕೇಂದ್ರವಾದ ಬೆಂಗಳೂರಿನಲ್ಲಿ ನಮ್ಮ ಕಂಪನಿಯನ್ನು ಸ್ಥಾಪಿಸಲು ನಾವು ರೋಮಾಂಚನಗೊಂಡಿದ್ದೇವೆ. ನಮ್ಮ ಬೆಂಗಳೂರು ಕಛೇರಿಯು ಭಾರತೀಯ ಉದ್ಯಮಗಳೊಂದಿಗೆ ನಿಕಟವಾಗಿ ಸಹಯೋಗಿಸಲು ನಮಗೆ ಅನುವು ಮಾಡಿಕೊಡಲಿದ್ದು, ನಮ್ಮ ಅತ್ಯಾಧುನಿಕ AI ಪ್ಲಾಟ್ಫಾರ್ಮ್ ಮೂಲಕ, ಅವರ ಜ್ಞಾನದ ಸಂಪೂರ್ಣ ಸಾಮರ್ಥ್ಯವನ್ನು ಉಪಯೋಗಿಸಿಕೊಳ್ಳಲು ಸಹಾಯ ಮಾಡುತ್ತದೆ. ಹೆಚ್ಚುವರಿಯಾಗಿ, ಈ ಕಚೇರಿಯು ನಮ್ಮ ಜಾಗತಿಕ ಕಾರ್ಯಾಚರಣೆಗಳಿಗೆ ನಿರ್ಣಾಯಕ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತಾ, ನಮ್ಮ ಅಂತರರಾಷ್ಟ್ರೀಯ ಗಮನಾರ್ಹ ಯೋಜನೆಗಳಿಗೆ ಚಾಲನೆ ನೀಡಲಿದೆ. ವಾಸ್ತವವಾಗಿ ನೋಡುವುದಾದರೆ, ಇದು ಯುಎಸ್ ಹೊರಗಿನ ನಮ್ಮ ಅತಿದೊಡ್ಡ ಹೂಡಿಕೆಯಾಗಿದೆ.

## ಸಿಹಿ ಪೇಡ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಹಾಲಿನ ಪುಡಿ– 1 ಬಟ್ಟಲು, ಸಕ್ಕರೆ ಪುಡಿ– 3/4 ಬಚ್ಚಲು, ತುಪ್ಪ– 2 ಚಮಚ, ಹಾಲು – 1/2 ಬಟ್ಟಲು, ಏಲಕ್ಕಿ ಪುಡಿ– ಸ್ವಲ್ಪ

### ಮಾಡುವ ವಿಧಾನ

ಮೊದಲು ಒಂದು ಪ್ಯಾನ್ ನಲ್ಲಿ 1 ಚಮಚ ತುಪ್ಪ ಹಾಕಿ ಕರಗಿಸಿ ನಂತರ ಹಾಲು ಸಕ್ಕರೆ ಪುಡಿ ಹಾಕಿ. ಸಕ್ಕರೆ ಕರಗಿದ ಮೇಲೆ ಹಾಲಿನ ಪುಡಿ, ಏಲಕ್ಕಿ ಪುಡಿ ಉದುರಿಸಿ ಚೆನ್ನಾಗಿ ಗಂಟಾಗದ ಹಾಗೆ ಕೈಯಾಡಿಸಿ.ಮತ್ತೊಂದು ಚಮಚ ತುಪ್ಪ ಹಾಕಿ ತಳ ಬಿಡುವವರೆಗೂ ಮಿಶ್ರಣ ಮಾಡುತ್ತಲೇ ಇರಿ. ನಂತರ ಗ್ಯಾಸ್ ಆಫ್ ಮಾಡಿ ತಣ್ಣಗಾಗಲು ಬಿಡಿ. ಕೈಗೆ ತುಪ್ಪ ಸವರಿಕೊಂಡು ಚಿಕ್ಕ ಚಿಕ್ಕ ಉಂಡೆ ಮಾಡಿ ಪೇಡ ಬೇಕಾದ ಆಕಾರದಲ್ಲಿ ಸಿದ್ಧ ಪಡಿಸಿದರೆ ರುಚಿಯಾದ ಪೇಡ ಸವಿಯಲು ಸಿದ್ಧ.

# ಈಗಲೂ ನಟಿ ಅನುಷ್ಕಾ ಶೆಟ್ಟಿ ಬ್ಯೂಟಿಗೆ ಅಭಿಮಾನಿಗಳು ಫಿದಾ



ದಕ್ಷಿಣ ಭಾರತದ ಖ್ಯಾತ ನಟಿ ಅನುಷ್ಕಾ ಶೆಟ್ಟಿ ಯಾರಿಗೆ ಗೊತ್ತಿಲ್ಲ ಹೇಳಿ! ಅಂದಹಾಗೆ ಇವರ ನಿಜ ಹೆಸರು ಸ್ವೀಟಿ ಶೆಟ್ಟಿ. ಸಿನಿಮಾ ಜಗತ್ತಿಗೆ ಕಾಲಿಟ್ಟ ಬಳಿಕ ಅನುಷ್ಕಾ ಶೆಟ್ಟಿ ಆಗಿ ಮರುನಾಮಕರಣ ಮಾಡಿಕೊಂಡರು. 7 ನವೆಂಬರ್ 1981ರಲ್ಲಿ ಜನಿಸಿದ ಅನುಷ್ಕಾ ಶೆಟ್ಟಿ ತೆಲುಗು ಮತ್ತು ತಮಿಳು ಚಿತ್ರರಂಗದಲ್ಲಿ ಫೇಮಸ್ ನಟಿ.

ಮೂರುಫಿಲ್ಮ್‌ಫೇರ್ಸೌತ್ ಅವಾರ್ಡ್, ಎರಡು ನಂದಿ ಅವಾರ್ಡ್, ಎರಡು ಖಋಖಂ ಅವಾರ್ಡ್ ಮತ್ತು ಒಂದು ತಮಿಳುನಾಡು ರಾಜ್ಯ ಚಲನಚಿತ್ರ ಪ್ರಶಸ್ತಿಯನ್ನು ಪಡೆದಿದ್ದಾರೆ. 50 ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ವಿವಿಧ ಪಾತ್ರಗಳಲ್ಲಿ ಕಾಣಿಸಿಕೊಂಡಿರುವ ಅನುಷ್ಕಾ ದಕ್ಷಿಣ ಭಾರತದ ಅತಿ ಹೆಚ್ಚು ಸಂಭಾವನೆ ಪಡೆಯುವ ನಟಿಯರಲ್ಲಿ ಒಬ್ಬರು. ಇನ್ನು 2010 ರಲ್ಲಿ ತಮಿಳುನಾಡು ಸರ್ಕಾರ ಕಲೈಮಾಮಣಿ ನೀಡಿ ಗೌರವಿಸಿದೆ.

2005ರ ತೆಲುಗು ಚಲನಚಿತ್ರ 'ಸೂಪರ್' ಮೂಲಕ ಸಿನಿ ಜಗತ್ತಿಗೆ ಕಾಲಿಟ್ಟರು. ಇದು ಅವರಿಗೆ ಫಿಲ್ಮ್‌ಫೇರ್ ಅತ್ಯುತ್ತಮ ಪೋಷಕ ನಟಿ – ತೆಲುಗು ನಾಮನಿರ್ದೇಶನಗೊಳ್ಳುವಂತೆ ಮಾಡಿತು. ಅದಾದ ಬಳಿಕ ರಾಜಮೌಳಿ ಅವರ ಬ್ಲಾಕ್ ಬಸ್ಟರ್ ಹಿಟ್ ವಿಕ್ರಮಾರ್ಕುಡು ಚಿತ್ರದಲ್ಲಿ ನಟಿಸಿದರು. ಅದರ ನಂತರ ನಟಿಸಿದ ಲಕ್ಷ್ಯಂ (2007), ಶೌರ್ಯಂ (2008), ಮತ್ತು ಚಿಂತಕಾಯಲ ರವಿ (2008) ಕೂಡ ಗಲ್ಲಾಪೆಟ್ಟಿಗೆಯಲ್ಲಿ ಯಶಸ್ಸನ್ನು ಕಂಡವು.

2009 ರಲ್ಲಿ, ಶೆಟ್ಟಿ ಅವರು ತೆಲುಗು ಫ್ಯಾಂಟಸಿ ಚಲನಚಿತ್ರ 'ಅರುಂಧತಿ'ಯಲ್ಲಿ ದ್ವಿಪಾತ್ರಗಳನ್ನು ನಿರ್ವಹಿಸಿದರು, ಇದು ಅವರ ಮೊದಲ ಫಿಲ್ಮ್‌ಫೇರ್ ಅತ್ಯುತ್ತಮ ನಟಿ ಪ್ರಶಸ್ತಿಗೆ ಕಾರಣವಾಯಿತು. ಅಷ್ಟೇ ಅಲ್ಲದೆ, ಈ ಸಿನಿಮಾಗೆ ನಂದಿ ಪ್ರಶಸ್ತಿ ಕೂಡ ಬಂದಿತ್ತು.

ಇನ್ನು ಅನೇಕರಿಗೆ ಅನುಷ್ಕಾ ತೆಲುಗು ಮತ್ತು ತಮಿಳು ಸಿನಿಮಾಗಳಲ್ಲಿ ನಟಿಸಿರುವುದಷ್ಟೇ ತಿಳಿದಿದೆ. ಆದರೆ ಈಕೆ ಮೊದಲು ಅಭಿನಯಿಸಿರುವುದು ಕನ್ನಡದ ಧಾರವಾಹಿಯೊಂದರಲ್ಲಿ ಎಂಬುದು ಕೆಲವರಿಗಷ್ಟೇ ಗೊತ್ತು. ಆ ಧಾರವಾಹಿ ಹೆಸರು 'ಬಣ್ಣ'

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನ ಬೆಳ್ಳಿಪಾಡಿ ಗ್ರಾಮದ ತುಳು ಮಾತನಾಡುವ ಬಂಟ ಕುಟುಂಬದಿಂದ ಬಂದ ಅನುಷ್ಕಾ ತಾಯಿ ಹೆಸರು ಪ್ರಫುಲ್ಲ ಮತ್ತು ತಂದೆದ ಎ.ಎನ್. ವಿಠಲ್ ಶೆಟ್ಟಿ. ಇವರಿಗೆ ಗುಣರಂಜನ್ ಶೆಟ್ಟಿ ಮತ್ತು ಸಾಯಿ ರಮೇಶ್ ಶೆಟ್ಟಿ ಎಂಬ ಇಬ್ಬರು ಅಣ್ಣಂದಿರಿದ್ದಾರೆ.

ಅನುಷ್ಕಾ ಬೆಂಗಳೂರಿನ ಮೌಂಟ್ ಕಾರ್ಮೆಲ್ ಕಾಲೇಜ್'ನಲ್ಲಿ ಕಂಪ್ಯೂಟರ್ ಅಪ್ಲಿಕೇಷನ್ಸ್ ಪದವಿ ಪಡೆದರು.

# ತುಂಬೆ ಗಿಡದಲ್ಲಿ ಔಷಧಿ ಗುಣ



### ಹೆಲ್ತ್ ಟಿಪ್ಸ್

ನಮ್ಮ ದೈನಂದಿನ ಜೀವನದಲ್ಲಿ ಎಷ್ಟು ಗಿಡಗಳು, ಹೂವುಗಳ ನಾವು ನೋಡುತ್ತೇವೆ. ಆದರೆ ಕೆಲವು ಗಿಡಗಳಿಂದ ಇರುವ ಆರೋಗ್ಯಕರ ಪ್ರಯೋಜನಗಳು ನಮಗೆ ಗೊತ್ತೇ ಇರುವುದಿಲ್ಲ. ಅದರಲ್ಲೂ ಕಾಲ ಬುಡದಲ್ಲಿಯೇ ನಾವು ಆರೋಗ್ಯ ಅಂಶ ಹೊಂದಿರುವ ಗಿಡಗಳ ಹೊಂದಿದ್ದರೂ ಆ ಬಗ್ಗೆ ಅರಿವಿರುವುದಿಲ್ಲ.

ಇಂತಹ ಗಿಡಗಳ ಸಾಲಿನಲ್ಲಿ ತುಂಬೆ ಗಿಡವೂ ಒಂದು. ತುಂಬೆ ಹೂವು ಶಿವನಿಗೆ ಅತ್ಯಂತ ಪ್ರಿಯವಾದ ಹೂವು ಎಂದು ಹೇಳಲಾಗುತ್ತದೆ. ತುಂಬೆ ಗಿಡಕ್ಕೂ ಸಹ ಆಯುರ್ವೇದದಲ್ಲಿ ಪ್ರಮುಖ ಸ್ಥಾನವಿದೆ. ಹಲವು ರೀತಿಯ ಆರೋಗ್ಯಕರ ಅಂಶಗಳ ಈ ತುಂಬೆ ಗಿಡ ಹೊಂದಿದೆ.

ಮೊದಲು ಈ ತುಂಬೆ ಗಿಡಗಳು ಎಲ್ಲಿ ಬೆಳೆಯುತ್ತವೆ ಎಂಬುದನ್ನು ನೋಡೋಣ. ಇದು ತುಂಬಾನೆ ತಂಪಾಗಿರುವ ಪ್ರದೇಶದಲ್ಲಿ ಕಾಣಸಿಗುತ್ತವೆ. ಅದರಲ್ಲೂ ತೋಟ, ಹೊಲ, ಗದ್ದೆಯಲ್ಲಿ ಹೆಚ್ಚಾಗಿ ಕಂಡುಬರುತ್ತವೆ. ಇವುಗಳ ಹೂವು ಬಿಳಿ, ಹಾಗೂ ನೀಲಿ ಬಣ್ಣದಲ್ಲೂ ಇದರ ಹೂವು ಕಾಣಸಿಗುತ್ತದೆ. ಇದನ್ನು ದ್ರೋಣ ಪುಷ್ಪ ಅಂತಲೂ ಕರೆಯಲಾಗುತ್ತದೆ.

ನಿಮಗೆ ಕಾಲೋಚಿತವಾಗಿ ಶೀತ, ಕೆಮ್ಮು, ತಲೆ ನೋವು ಕಾಣಿಸಿಕೊಳ್ಳುತ್ತಿರಬಹುದು. ಏಕೆಂದರೆ ಹವಾಮಾನದಲ್ಲಿ ಸ್ವಲ್ಪ ಬದಲಾವಣೆಯಾದರು ಈ ಶೀತ ಕೆಮ್ಮು ಬರುವುದು ಸಾಮಾನ್ಯ. ಈ ಸಣ್ಣ ಪುಟ್ಟ ಕಾಯಿಲೆಗಳಿಗೆ ಎಂದಿಗೂ ಮಾತ್ರೆ ಸೇವಿಸುವ ಅಭ್ಯಾಸ ಇಟ್ಟುಕೊಳ್ಳಬೇಡಿ. ಅದಕ್ಕಿಂತ ಈ ತುಂಬೆ ಗಿಡದ ಒಂದು ಮದ್ದು ಪರಿಹಾರ ನೀಡಲಿದೆ.

10ರಿಂದ 15 ಹನಿಗಳಷ್ಟು ತುಂಬೆ ಹೂವಿನ ರಸವನ್ನು ತೆಗೆದು ಅದಕ್ಕೆ 30 ಹನಿ ಜೇನು ತುಪ್ಪ ಬೆರೆಸಿ ಚೆನ್ನಾಗಿ ಕರಡಬೇಕು. ಬಳಿಕ ಇದನ್ನು ಆಹಾರ ಸೇವನೆಗೂ ಮೊದಲು ಕುಡಿಯಬೇಕು. ಹೀಗೆ ಮಾಡುವುದರಿಂದ ಶೀತ ಕಡಿಮೆಯಾಗುತ್ತದೆ. ಇನ್ನೊಂದೆಡೆ ಈ ಗಿಡದ ಹೂವು, ಕಾಂಡ, ಎಲೆಯನ್ನು ತಂದು ಬಿಸಿ ನೀರಿನಲ್ಲಿ ಹಾಕಿ ಹಬೆ ತೆಗೆದುಕೊಳ್ಳುವುದರಿಂದ ಕ್ಷಣದಲ್ಲಿ ತಲೆ ನೋವು ಮಾಯವಾಗುತ್ತದೆ.

# ಬೆಂಗಳೂರು ಇಂಡಿಯಾ ನ್ಯಾನೊ ಸಮ್ಮೇಳನ




ನ್ಯಾನೊ ತಂತ್ರಜ್ಞಾನ ಕ್ಷೇತ್ರದಲ್ಲಿನ ಭಾರತದ ಅತ್ಯಂತ ಪ್ರಮುಖ ಕಾರ್ಯಕ್ರಮವಾದ ''ಬೆಂಗಳೂರು ಇಂಡಿಯಾ ನ್ಯಾನೊದ 13 ನೇ ಆವೃತ್ತಿ''ಯನ್ನು ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಬೋಸರಾಜು ಅವರು ಬೆಂಗಳೂರಿನಲ್ಲಿ ಇಂದು ನಡೆದ ಮುನ್ನೋಟ ಕಾರ್ಯಕ್ರಮದಲ್ಲಿ ಅಧಿಕೃತವಾಗಿ ಘೋಷಣೆ ಮಾಡಿದರು.

ಮೂರು ದಿನಗಳ ಈ ಕಾರ್ಯಕ್ರಮವು 2024 ರ ಆಗಸ್ಟ್ 1 ರಿಂದ 3 ರವರೆಗೆ ಬೆಂಗಳೂರಿನ ದಿ ಲಲಿತ್ ಹೊಟೇಲ್‌ನಲ್ಲಿ ನಡೆಯಲಿದೆ. ಈ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದ ವಿಜ್ಞಾನ ತಂತ್ರಜ್ಞಾನ ಇಲಾಖೆ, ಕರ್ನಾಟಕ ಸೈನ್ಸ್ ಟೆಕ್ನಾಲಾಜಿ ಪ್ರಮೋಶನ್ ಸೊಸೈಟಿ ಹಾಗೂ ಜವಾಹರ್‌ಲಾಲ್ ನೆಹರೂ ಸೆಂಟರ್ ಫಾರ್ ಅಡ್ವಾನ್ಸ್ಡ್ ಸೈಂಟಿಫಿಕ್ ರೀಸರ್ಚ್ ಸಂಸ್ಥೆಗಳು ಆಯೋಜಿಸಿವೆ.

ಈ ಮುನ್ನೋಟ ಕಾರ್ಯಕ್ರಮ ಅಂದರೆ ಕರ್ಟೈನ್ ರೈಸರ್ ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ನ್ಯಾನೊಟೆಕ್ನಾಲಾಜಿಯ ವಿಷನ್ ಗ್ರೂಪ್‌ನ ಅಧ್ಯಕ್ಷರು ಹಾಗೂ ಬೆಂಗಳೂರಿನ ಐಐಎಸ್‌ಸಿಯ ಸಿಇಎನ್‌ಎಸ್‌ಇ ಪ್ರೊಫೆಸರ್, ಇಂಟರ್‌ಡಿಸಿಪ್ಲಿನರಿ ಸೈನ್ಸ್ ವಿಭಾಗದ ಡೀನ್ ಪ್ರೊಫೆಸರ್ ನವಕಾಂತ ಭಟ್; ಬೆಂಗಳೂರಿನ ಐಐಎಸ್ ಸಿಯ ಭೌತಶಾಸ್ತ್ರ ವಿಭಾಗದ ಪ್ರೊಫೆಸರ್, ಆಡಳಿತ ಹಣಕಾಸು ವಿಭಾಗದ ಡೀನ್, ಬೆಂಗಳೂರು ಇಂಡಿಯಾ ನ್ಯಾನೊ 2024– ಸಿಇಸಿ ಅಧ್ಯಕ್ಷರು ಪ್ರೊಫೆಸರ್ ಪಿ.ಎಸ್. ಅನಿಲ್‌ಕುಮಾರ್, ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿ ಡಾ.ಏಕರೂಪ್ ಕೌರ್, ಐಎಎಸ್; ಕರ್ನಾಟಕ ಸರ್ಕಾರದ ವಿಜ್ಞಾನ ತಂತ್ರಜ್ಞಾನ ಇಲಾಖೆ ನಿರ್ದೇಶಕ ಮತ್ತು ಕೆಎಸ್ ಟಿಇಪಿಎಸ್‌ನ ವ್ಯವಸ್ಥಾಪಕ ನಿರ್ದೇಶಕ ಪವನ್ ಕುಮಾರ್ ಮಾಲಪತಿ, ಐಎಎಸ್ ಹಾಗೂ ಎಂಎಂ ಆಕ್ಟೀವ್ ಸೈ–ಟೆಕ್ ಕಮ್ಯುನಿಕೇಷನ್ಸ್‌ನ ಕಾರ್ಯಕಾರಿ ಅಧ್ಯಕ್ಷ ಮತ್ತು ಬೆಂಗಳೂರು ಇಂಡಿಯಾ ನ್ಯಾನೊದ ಈವೆಂಟ್ ಕ್ಯುರೇಟರ್ ಜಗದೀಶ್ ಪಟಾಣ್‌ಕರ್ ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು.

ನ್ಯಾನೊ ಟೆಕ್ನಾಲಾಜಿಯ ವಿಷನ್ ಗ್ರೂಪ್ ನೀಡಿದ ಶಿಫಾರಸುಗಳ ಆಧಾರದಲ್ಲಿ ಸುದೀರ್ಘ ಚರ್ಚೆ ಮತ್ತು ಅಭಿಪ್ರಾಯಗಳ ನಂತರ ಈ ಕಾರ್ಯಕ್ರಮದ ವಿಷಯವನ್ನು ನಿರ್ಧರಿಸಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಬೋಸರಾಜು ಅವರು, ''ಪ್ರಸ್ತುತ ಮಾನವ ಎದುರಿಸುತ್ತಿರುವ ಅತಿ ದೊಡ್ಡ ಸವಾಲುಗಳನ್ನು ಗುರುತಿಸಲು ಹೊರಟರೆ ಆ ಪಟ್ಟಿಯಲ್ಲಿ ಹವಾಮಾನ ಬದಲಾವಣೆ, ಕ್ಷೀಣವಾಗುತ್ತಿರುವ ಇಂಧನ ಮೂಲ ಮತ್ತು ಆರೋಗ್ಯ ಸಮಸ್ಯೆಗಳು ಮೊದಲ ಸ್ಥಾನಗಳಲ್ಲಿ ನಿಲ್ಲುತ್ತವೆ. ಸುಸ್ಥಿರತೆ ಎಂಬುದು ಕೇವಲ ಬಜ್ ವರ್ಡ್ ಇದ್ದಂತೆ ಅಲ್ಲ. ಆದರೆ, ಪ್ರಸ್ತುತ ಅದು ಅನಿವಾರ್ಯವಾಗಿದೆ. ಹವಾಮಾನ ಬದಲಾವಣೆಯಿಂದ ಆಗುತ್ತಿರುವ ಪರಿಣಾಮಗಳು ನಮಗೆ ಹೆಚ್ಚಾಗಿ ಕಾಣತೊಡಗಿವೆ. ಹೆಚ್ಚಳವಾಗುತ್ತಿರುವ ತಾಪಮಾನ, ನೈಸರ್ಗಿಕ ವಿಕೋಪಗಳು ಮತ್ತು ವ್ಯಾಪಕವಾಗಿ ನಡೆಯುತ್ತಿರುವ ಸ್ಥಳಾಂತರಗಳು ಕಾಣಿಸುತ್ತಿವೆ. ಏಕಕಾಲದಲ್ಲಿ ಇಂಧನ ಬಿಕ್ಕಟ್ಟಿನಿಂದಾಗಿ ತೀವ್ರವಾಗಿ ಆರ್ಥಿಕ ಮತ್ತು ಪರಿಸರದ ಮೇಲಿನ ಪರಿಣಾಮಗಳನ್ನು ಜಗತ್ತು ಎದುರಿಸುವಂತಾಗಿದೆ. ಕೈಗಾರಿಕೆಗಳು ಹಸಿರು ಮತ್ತು ಶುದ್ಧ ಇಂಧನ ಪರಿಹಾರಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಶ್ರಮಿಸುತ್ತಿರುವಾಗ್ಯೂ ನೈಜವಾದ ಸಮರ್ಥನೀಯತೆಯನ್ನು ಸಾಧಿಸಲು ಈ ಪ್ರಯತ್ನಗಳು ಸಾಕಾಗುವುದಿಲ್ಲ. ಕೋವಿಡ್–19 ಸಾಂಕ್ರಾಮಿಕ ರೋಗದಿಂದ ಎದುರಾದ ಆರೋಗ್ಯ ಸವಾಲುಗಳು ಜಾಗತಿಕವಾಗಿ ಆರೋಗ್ಯ ವ್ಯವಸ್ಥೆಗಳಲ್ಲಿನ ನಿರ್ಣಾಯಕವಾದ ದೋಷಗಳನ್ನು ಹೊರಹಾಕಿವೆ. ಈ ಸಾಂಕ್ರಾಮಿಕ ರೋಗವೇನೂ ಮೊದಲನೆಯದೂ ಅಲ್ಲ ಅಥವಾ ಕೊನೆಯದೂ ಅಲ್ಲ. ಈ ಹಿನ್ನಲೆಯಲ್ಲಿ ನಮ್ಮ ಸನ್ನದ್ಧತೆ ಮತ್ತು ಸ್ಥಿತಿಸ್ಥಾಪಕತ್ವವನ್ನು ಕಾಯ್ದುಕೊಳ್ಳುವುದು ಅತ್ಯಂತ ಮಹತ್ವದ್ದಾಗಿದೆ'' ಎಂದರು.

''ಈ ನ್ಯಾನೊ ತಂತ್ರಜ್ಞಾನವು ಗಾತ್ರದಲ್ಲಿ ಸಣ್ಣದಾಗಿದ್ದರೂ, ಹೆಚ್ಚಿನಪರಿಣಾಮಕಾರಿಪರಿಹಾರಗಳನ್ನು ನೀಡುವ ಭರವಸೆಯನ್ನು ಹೊಂದಿದೆ. ಇದು ಈ ಜಾಗತಿಕ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ನಾವು ಕೈಗೊಳ್ಳುತ್ತಿರುವ ವಿಧಾನಗಳನ್ನು ಸಮರ್ಥವಾಗಿ ಕ್ರಾಂತಿಕಾರಕಗೊಳಿಸಬಹುದು. ಈ ಹಿನ್ನಲೆಯಲ್ಲಿ ಬೆಂಗಳೂರು ಇಂಡಿಯಾ ನ್ಯಾನೊ– 2024 ರ ಈ ಆವೃತ್ತಿಯ ವಿಷಯ 'ಸುಸ್ಥಿರತೆಗಾಗಿ ನ್ಯಾನೊ ತಂತ್ರಜ್ಞಾನ: ಹವಾಮಾನ, ಇಂಧನ ಮತ್ತು ಆರೋಗ್ಯ ರಕ್ಷಣೆ' ಯಾಗಿದೆ'' ಎಂದು ತಿಳಿಸಿದರು.

ಬೆಂಗಳೂರು ಇಂಡಿಯಾ ನ್ಯಾನೊದ 13 ನೇ ಆವೃತ್ತಿಯು ಸಂಶೋಧಕರು ಮತ್ತು ವಿಜ್ಞಾನಿಗಳು, ಶಿಕ್ಷಣ ತಜ್ಞರು, ಉದ್ಯಮದ ನಾಯಕರು, ನೀತಿ ನಿರೂಪಕರು, ಉದ್ಯಮಿಗಳು ಹಾಗೂ ವಿದ್ಯಾರ್ಥಿಗಳು ಸೇರಿದಂತೆ ವಿವಿಧ ಕ್ಷೇತ್ರಗಳ ನಾಯಕರನ್ನು ಒಗ್ಗೂಡಿಸುವ ಒಂದು ಅತ್ಯುತ್ತಮ ವೇದಿಕೆಯಾಗಲಿದೆ ಎಂಬ ಭರವಸೆ ನೀಡಿದೆ.

# ಹೀಗಿರಲಿ ತ್ವಚೆಯ ಆರೈಕೆ

### ಬ್ಯೂಟಿ ಟಿಪ್ಸ್



ವಿಶೇಷ ಸಂದರ್ಭಗಳಲ್ಲಿ ಸ್ವಲ್ಪ ಹೆಚ್ಚಾಗಿ ಚಂದ ಕಾಣಬೇಕೆಂದು ಎಲ್ಲರೂ ಆಸೆ ಪಡುತ್ತಾರೆ. ಪಾರ್ಲರ್ ಗೆ ಹೋಗಲು ಇಷ್ಟಪಡದೆ ಇರುವವರು ಮನೆಯಲ್ಲಿ ಸಣ್ಣ ಸಣ್ಣ ಸಲಹೆಗಳನ್ನು ಪಾಲಿಸಿದರೆ ತ್ವಚೆಯ ಹೊಳಪು ಹೆಚ್ಚಾಗುತ್ತದೆ. ಹೇಗೆ ಗೊತ್ತಾ.

ಹಸಿ ಹಾಲಿನಲ್ಲಿ ಕೆಲವು ಓಟ್ಸ್ ಅನ್ನು ನೆನೆಸಿಡಬೇಕು. ಆನಂತರ ಅದಕ್ಕೆ ಅರ್ಧ ಚಮಚ ಜೇನು, 2 ಚಮಚ ಕಪ್ಪು ದ್ರಾಕ್ಷಿ ರಸ, ಎರಡು ಹನಿ ಆಲೀವ್ ಆಯಿಲ್ ಬೆರೆಸಿ ಆ ಮಿಶ್ರಣವನ್ನು ಮುಖಕ್ಕೆ ಹಚ್ಚಿ ತಿಕ್ಕಬೇಕು. ಅರ್ಧ ಗಂಟೆ ಬಿಟ್ಟು ಉಗುರು ಬೆಚ್ಚಗಿನ ನೀರಿನಲ್ಲಿ ಶುಭ್ರವಾಗಿ ತೊಳೆಯಬೇಕು.

ಈ ಪ್ಯಾಕ್ ಮುಖದ ಮೇಲಿರುವ ಮಲಿನವನ್ನೆಲ್ಲಾ ಶುಭ್ರಗೊಳಿಸಿ ತ್ವಚೆಯನ್ನು ಕಾಂತಿಯುತವಾಗಿಸುತ್ತದೆ.

ಹಾಲಿನ ಕೆನೆಗೆ ಚಿಟಿಕೆ ಅರಿಶಿಣ, ಸ್ವಲ್ಪ ಸಕ್ಕರೆ ಬೆರೆಸಿ ಮುಖಕ್ಕೆ ಹಾಕಿ ಸ್ಕಬ್ ಮಾಡಬೇಕು. ಹೀಗೆ ಮಾಡುವುದರಿಂದ ಚರ್ಮದ ಮೇಲಿರುವ ಮೃತ ಕಣಗಳು ತೊಲಗಿ ತ್ವಚೆಯು ಮೃದುವಾಗುತ್ತದೆ.

ಕಣ್ಣಿನ ಕೆಳಗೆ ಕಪ್ಪಾಗಿದ್ದರೆ ಟೊಮೇಟೊ ರಸಕ್ಕೆ ಎರಡು ಹನಿ ಗುಲಾಬಿ ನೀರು, ಒಂದು ಚಮಚ ಹಾಲು ಬೆರೆಸಿ ಮಿಶ್ರಣವನ್ನು ಸ್ವಲ್ಪ ಸಮಯ ಫ್ರಿಡ್ಜ್ ನಲ್ಲಿ ಇರಿಸಬೇಕು. ಅದರೊಳಗೆ ಹತ್ತಿಯನ್ನು ಅದ್ದಿ ಕಣ್ಣುಗಳ ಕೆಳಗಿನ ಕಪ್ಪು ಗೆರೆಗಳಿಗೆ ಹಚ್ಚಿ ಮಸಾಜ್ ಮಾಡಬೇಕು.

ಟ್ಯಾನ್ ಹೋಗಲಾಡಿಸಲು ಸವತೆಕಾಯಿ ರಸಕ್ಕೆ ಸ್ವಲ್ಪ ಹಾಲು, ಬಾದಾಮಿ ಪುಡಿ, ನಿಂಬೆರಸ ಸ್ವಲ್ಪ, ಕಡಲೆ ಹಿಟ್ಟು ಬೆರೆಸಿ ದೇಹಕ್ಕೆಲ್ಲಾ ಹಚ್ಚಿ ತಿಕ್ಕಿ ಕೊಳ್ಳಬೇಕು. ನಂತರ ಉಗುರು ಬೆಚ್ಚಗಿನ ನೀರಿನಲ್ಲಿ ಸ್ನಾನ ಮಾಡಿದರೆ ಸೌಂದರ್ಯ ಹೆಚ್ಚಾಗುತ್ತದೆ.

# ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಆರ್ಥಿಕ ಬೆಳವಣಿಗೆ, ಪ್ರಯಾಣದಲ್ಲಿ ವಿಘ್ನ, ಕೌಟುಂಬಿಕ ಸಹಕಾರ, ಅಧಿಕಾರಿಗಳಿಂದ ಸಹಕಾರ.

**ವೃಷಭ:** ಆರ್ಥಿಕ ಮುಗ್ಗಟ್ಟು, ಕೌಟುಂಬಿಕ ಅಸಹಕಾರ, ಮಾತಿನಿಂದ ತೊಂದರೆ, ಮಾನಸಿಕ ಒತ್ತಡ.

**ಮಿಥುನ:** ಅಧಿಕ ಖರ್ಚು, ಯತ್ನ ಕಾರ್ಯದಲ್ಲಿ ಹಿನ್ನಡೆ, ಕೌಟುಂಬಿಕ ಅಸಮಾಧಾನ, ವಸ್ತ್ರಾಭರಣ ಖರೀದಿ.

**ಕಟಕ:** ಯತ್ನ ಕಾರ್ಯ ಜಯ, ಹೆಸರು ಗೌರವ ಪ್ರಾಪ್ತಿ, ಆರ್ಥಿಕ ಹಿನ್ನಡೆ, ಅವಕಾಶ ವಂಚಿತರಾಗುವಿರಿ.

**ಸಿಂಹ:** ಅಧಿಕಾರಿಗಳಿಂದ ನಿಂದನೆ, ಸ್ನೇಹಿತರಿಂದ ಅಂತರ, ಉದ್ಯೋಗ ಬದಲಾವಣೆ ಯೋಚನೆ, ಗೌರವಕ್ಕೆ ಧಕ್ಕೆ.

**ಕನ್ಯಾ:** ತಂದೆಯಿಂದ ಸಹಕಾರ, ಸಂಗಾತಿಯಿಂದ ಲಾಭ, ಭೂಮಿ ಮತ್ತು ವಾಹನ ಅನುಕೂಲ, ಪ್ರಯತ್ನದಲ್ಲಿ ಯಶಸ್ಸು.

**ತುಲಾ:** ಮಾನಸಿಕ ಕಿರಿಕಿರಿ, ಉದ್ಯೋಗದಲ್ಲಿ ಒತ್ತಡ, ಅಧಿಕಾರಿಗಳಿಂದ ದಂಡನೆ, ಅವಮಾನ ಅಪವಾದ.

**ವೃಶ್ಚಿಕ:** ಮಾನಸಿಕ ಒತ್ತಡ, ಭವಿಷ್ಯದ ಚಿಂತೆ, ಯತ್ನ ಕಾರ್ಯಗಳಲ್ಲಿ ಜಯ, ಆರ್ಥಿಕ ಬೆಳವಣಿಗೆ.

**ಧನಸು:** ಆರೋಗ್ಯದಲ್ಲಿ ಏರುಪೇರು, ಮಾನಸಿಕ ಚಂಚಲತೆ, ಸಾಲದ ಚಿಂತೆ, ಶತ್ರು ಉಪಟಳ, ಉದ್ಯೋಗ ಸ್ಥಳದಲ್ಲಿ ಒತ್ತಡ.

**ಮಕರ:** ಪಾಲುದಾರಿಕೆಯಲ್ಲಿ ನಷ್ಟ, ದಾಂಪತ್ಯದಲ್ಲಿ ಮನಸ್ತಾಪ, ವಿದ್ಯಾಭ್ಯಾಸಕ್ಕೆ ಅನುಕೂಲ, ಮಾನಸಿಕ ಚಂಚಲತೆ.

**ಕುಂಭ:** ಸಾಲ ಭಾದೆಯಿಂದ ಮುಕ್ತಿ, ಸ್ಥಿರಾಸ್ತಿ ಅನುಕೂಲ, ಮಕ್ಕಳೊಂದಿಗೆ ಉತ್ತಮ ಬಾಂಧವ್ಯ, ವಿದ್ಯಾಭ್ಯಾಸ ಪ್ರಗತಿ.

**ಮೀನ:** ಆರ್ಥಿಕ ಹಿನ್ನಡೆ, ಮಕ್ಕಳ ಸಹಕಾರ, ಉದ್ಯೋಗ ನಷ್ಟ, ಪ್ರೀತಿ ಪ್ರೇಮ ಭಾವನೆಗೆ ಪೆಟ್ಟು.

# ಅಂತರಾಷ್ಟ್ರೀಯ ಚುಂಬನ ದಿನ




ಅಂತರರಾಷ್ಟ್ರೀಯ ಚುಂಬನ ದಿನವನ್ನು ಪ್ರತಿ ವರ್ಷ ಜುಲೈ 6 ರಂದು ಆಚರಿಸಲಾಗುತ್ತದೆ. ಈ ದಿನವನ್ನು ದಂಪತಿಗಳಿಗೆ ವಿಶೇಷವೆಂದು ಪರಿಗಣಿಸಲಾಗುತ್ತದೆ. ಈ ದಿನವನ್ನು ಮೊದಲು ಯುನೈಟೆಡ್ ಕಿಂಗ್ಡಂನಲ್ಲಿ ಪ್ರಾರಂಭಿಸಲಾಯಿತು. ಕ್ರಮೇಣ ಜನರು ಅನೇಕ ದೇಶಗಳಲ್ಲಿ ಆಚರಿಸಲು ಪ್ರಾರಂಭಿಸಿದರು.

ಯುನೈಟೆಡ್ ಕಿಂಗ್ಡಂನಲ್ಲಿ ರಾಷ್ಟ್ರೀಯ ಚುಂಬನ ದಿನವಾಗಿ ಪ್ರಾರಂಭವಾಯಿತು, ಪ್ರತಿಯೊಬ್ಬರೂ ತಮ್ಮ ಪ್ರೀತಿಪಾತ್ರರ ಜೊತೆ ಹೆಚ್ಚಾಗಿ ಈ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಲು ಪ್ರೋತ್ಸಾಹಿಸಲು ಪ್ರತಿ ವರ್ಷ ಜುಲೈ 6 ರಂದು ಜಗತ್ತಿನಾದ್ಯಂತ ಆಚರಿಸಲಾಗುವ ಅಂತರರಾಷ್ಟ್ರೀಯ ಚುಂಬನ ದಿನವಾಗಿ ವಿಕಸನಗೊಂಡಿದೆ. ಚುಂಬನವು ಸಾರ್ವತ್ರಿಕ ಭಾಷೆಯಾಗಿದೆ ಮತ್ತು ನಿಮ್ಮ ಸಂಗಾತಿಯು ಸಂಬಂಧದಲ್ಲಿ ಅಗತ್ಯವಿದೆ ಎಂದು ಸಕ್ರಿಯವಾಗಿ ಭರವಸೆ ನೀಡುವ ಪ್ರಮುಖ ಮಾರ್ಗವಾಗಿದೆ. ಚುಂಬನವು ನಿಮ್ಮ ಜೀವನದಲ್ಲಿ ವ್ಯಕ್ತಿಯನ್ನು ಶ್ಲಾಘಿಸುವ ನಿಜವಾದ ಮತ್ತು ನಿಕಟ ಮಾರ್ಗವಾಗಿದೆ, ಏಕೆಂದರೆ ಈ ಕ್ರಿಯೆಯು ನಿಮ್ಮ ಬಾಯಿಯನ್ನು ಬಳಸಬೇಕಾಗುತ್ತದೆ, ಅದನ್ನು ನಾವು ತಿನ್ನಲು ಮತ್ತು ಮಾತನಾಡಲು ಬಳಸುತ್ತೇವೆ – ಮನುಷ್ಯರಾಗಿ ಬದುಕಲು ಅಗತ್ಯವಿರುವ ಎರಡು ಪ್ರಮುಖ ಚಟುವಟಿಕೆಗಳು.

ಚುಂಬನದ ಕ್ರಿಯೆಯು ರೋಮನ್ ಇತಿಹಾಸಕ್ಕೆ ಹಿಂದಿನದು, ಪ್ರಾಚೀನ ರೋಮನ್ನರು ಮೂರು ರೀತಿಯ ಚುಂಬನದ ಮೂಲಕ ತಮ್ಮನ್ನು ತಾವು ವ್ಯಕ್ತಪಡಿಸುತ್ತಿದ್ದರು – ಆಸ್ಕುಲಮ್ (ಕೆನ್ನೆಯ ಮೇಲೆ ಪೆಕ್), ಸೇವಿಯಮ್ (ಉತ್ಸಾಹದಿಂದ ಬಾಯಿ ಮುತ್ತು) ಮತ್ತು ಬೇಸಿಯಮ್ (ತುಟಿಗಳ ಮೇಲೆ ಮುತ್ತು) ) ಅಲ್ಲದೆ, ಮೊದಲ ಮಹಾಯುದ್ಧದ ಸಮಯದಲ್ಲಿ ಫ್ರೆಂಚರು 'ಫ್ರೆಂಚ್ ಕಿಸ್' ಅನ್ನು ಜನಪ್ರಿಯಗೊಳಿಸಿದರು.

**ಚುಂಬನದ ಪ್ರಯೋಜನಗಳು:** ಚುಂಬನದಿಂದ ಹಲವಾರು ಪ್ರಯೋಜನಗಳಿವೆ. ಪರಸ್ಪರ ಚುಂಬಿಸಿದಾಗ ದೇಹದಲ್ಲಿ ಅನೇಕ ಹಾರ್ಮೋನುಗಳು ಉತ್ಪತ್ತಿಯಾಗುತ್ತವೆ. ಇದು ನಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಒಳ್ಳೆಯದು. ಸಂಗಾತಿಯನ್ನು ತಬ್ಬಿಕೊಂಡು ಮುತ್ತಿಟ್ಟು ಪ್ರೀತಿ ವ್ಯಕ್ತಪಡಿಸಿದರೆ ಅದು ಮಾನಸಿಕ ಪ್ರಕ್ರಿಯೆಗೆ ತುಂಬಾ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ.

**ರೋಗಗಳ ಅಪಾಯ ದೂರ:** ಚುಂಬನದಿಂದ ರಕ್ತದ ಹರಿವು ಹೆಚ್ಚಾಗುತ್ತದೆ. ಇದು ಅನೇಕ ರೋಗಗಳ ಅಪಾಯವನ್ನು ತಪ್ಪಿಸುತ್ತದೆ. ಚುಂಬನವು ಕಾರ್ಟಿಸೋಲ್ ಮಟ್ಟವನ್ನು ಕಡಿಮೆ ಮಾಡುತ್ತದೆ, ಇದರಿಂದಾಗಿ ವ್ಯಕ್ತಿಯು ಒತ್ತಡದಿಂದ ಮುಕ್ತನಾಗಿರುತ್ತಾನೆ. ಇಷ್ಟೇ ಅಲ್ಲ ಆಕ್ಸಿಟೋಸಿನ್ ಎಂಬ ರಾಸಾಯನಿಕ ಕೂಡ ಚುಂಬನದ ಬಳಿಕ ಬಿಡುಗಡೆಯಾಗುತ್ತದೆ.

# ಅಗ್ನಿವೀರ್ ಅಜಯ್ ಕುಟುಂಬಕ್ಕಿನ್ನೂ ಪರಿಹಾರ ಸಿಕ್ಕಿಲ್ಲ: ರಾಹುಲ್ ಗಾಂಧಿ



**ದೆಹಲಿ:** ಕರ್ತವ್ಯದಲ್ಲಿದ್ದಾಗ ಹುತಾತ್ಮರಾಗಿರುವ ಯೋಧ ಅಗ್ನಿವೀರ್ ಅಜಯ್ ಕುಮಾರ್ ಕುಟುಂಬಕ್ಕೆ ಇದುವರೆಗೂ ಸರ್ಕಾರದಿಂದ ಯಾವುದೇ ಪರಿಹಾರ ಸಿಕ್ಕಿಲ್ಲ. ದೇಶಕ್ಕಾಗಿ ಪ್ರಾಣ ತ್ಯಾಗ ಮಾಡುವ ಪ್ರತಿಯೊಬ್ಬ ಹುತಾತ್ಮರ ಕುಟುಂಬವನ್ನು ಗೌರವಿಸಬೇಕು. ಆದರೆ ಮೋದಿ ಸರ್ಕಾರ ಅವರ ವಿರುದ್ಧ ತಾರತಮ್ಯ ಮಾಡುತ್ತಿದೆ ಎಂದು ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಮಾಧ್ಯಮ ಘಿ ನಲ್ಲಿ ವಿಡಿಯೋ ಪೋಸ್ಟ್ ಮಾಡಿರುವ ಅವರು, ಪರಿಹಾರ ಮತ್ತು ವಿಮೆ ನಡುವೆ ವ್ಯತ್ಯಾಸವಿದೆ. ವಿಮಾ ಕಂಪನಿಯಿಂದ ಮಾತ್ರ ಹುತಾತ್ಮರ ಕುಟುಂಬಕ್ಕೆ ಮೊತ್ತ ಪಾವತಿಯಾಗಿದೆ. ಹುತಾತ್ಮ ಯೋಧ ಅಜಯ್ ಕುಮಾರ್ ಕುಟುಂಬಕ್ಕೆ ಸರ್ಕಾರದಿಂದ ಸಿಗಬೇಕಾದ ನೆರವು ಸಿಕ್ಕಿಲ್ಲ ಎಂದಿದ್ದಾರೆ.

ವಿಪಕ್ಷವನ್ನು ದುರ್ಬಲಗೊಳಿಸಲು ಭಾರತ ಎಂದಿಗೂ ಬಿಡುವುದಿಲ್ಲ. ಸರ್ಕಾರ ಏನೇ ಹೇಳಲಿ, ಇದು ರಾಷ್ಟ್ರೀಯ ಭದ್ರತೆಯ ವಿಷಯವಾಗಿದ್ದು, ನಾನು ಅದನ್ನು ಎತ್ತಿ ಹಿಡಿಯುತ್ತೇನೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

ತಮ್ಮ ಕುಟುಂಬಕ್ಕೆ ಕೇಂದ್ರ ಸರ್ಕಾರದಿಂದ ಯಾವುದೇ ಪರಿಹಾರ ಬಂದಿಲ್ಲ ಎಂದು ಅಜಯ್ ಕುಮಾರ್ ಅವರ ತಂದೆ ಹೇಳಿದ್ದು, ಕುಟುಂಬಕ್ಕೆ 98 ಲಕ್ಷ ರೂ. ನೀಡಿರುವುದಾಗಿ ಸೇನೆ ಹೇಳಿದೆ. ಜುಲೈ 3 ರಂದು, ಘಿ ನಲ್ಲಿ ಪೋಸ್ಟ್ ಮಾಡಿದ ವಿಡಿಯೋದಲ್ಲಿ, ಹತ್ಯೆಯಾದ ಅಗ್ನಿವೀರ್‌ಗಳ ಕುಟುಂಬಗಳಿಗೆ ಪರಿಹಾರದ ವಿಷಯದ ಬಗ್ಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಂಸತ್ತಿನಲ್ಲಿ ಸುಳ್ಳು ಹೇಳಿದ್ದಾರೆ ಎಂದು ರಾಹುಲ್ ಗಾಂಧಿ ಆರೋಪಿಸಿದ್ದರು.

# ಪಾಕಿಸ್ತಾನದಲ್ಲಿ ಪೆಟ್ರೋಲ್‌ಗಿಂತ ದುಬಾರಿಯಾದ ಹಾಲು



**ಪಾಕಿಸ್ತಾನ:** ಪಾಕಿಸ್ತಾನದ ಪರಿಸ್ಥಿತಿ ಬಿಡಿಸಿ ಹೇಳಬೇಕಿಲ್ಲ. ಕಳೆದ ಒಂದು ವರ್ಷದಿಂದ ಪಾಕಿಸ್ತಾನ ಆರ್ಥಿಕವಾಗಿ ಜರ್ಝರಿತವಾಗಿದೆ. ಖಜಾನೆ ಖಾಲಿ ಖಾಲಿ, ವಿದೇಶಿದಲ್ಲಿ ಸಾಲದ ಶೂಲ, ಉತ್ಪಾದನೆ, ರಫ್ತು ಪಾತಾಳಕ್ಕೆ, ಆಮದು ಏರಿಕೆ. ಹಳಿ ತಪ್ಪಿರುವ ಪಾಕಿಸ್ತಾನದಲ್ಲಿ ಇದೀಗ ತೆರಿಗೆ ಹೆಚ್ಚಳ ಮಾಡಲಾಗಿದೆ.

ಇದರ ಪರಿಣಾಮ ಒಂದು ಲೀಟರ್ ಹಾಲಿನ ಬೆಲೆ 370 ರೂಪಾಯಿಗೆ ಏರಿಕೆಯಾಗಿದೆ. ಫ್ರಾನ್ಸ್, ಆಸ್ಟ್ರೇಲಿಯಾ ಸೇರಿದಂತೆ ಮುಂದುವರಿದ ದೇಶಗಳಿಗಿಂತ ಪಾಕಿಸ್ತಾನದಲ್ಲಿ ಹಾಲಿನ ದರ ದುಬಾರಿಯಾಗಿದೆ.

ಪಾಕಿಸ್ತಾನದಲ್ಲಿ ಪೆಟ್ರೋಲ್ ಬೆಲೆ 277 ರೂಪಾಯಿ ಪ್ರತಿ ಲೀಟರ್ಗೆ ಆದರೆ ಹಾಲಿನ ಬೆಲೆ 1.33 ಅಮೆರಿಕನ್ ಡಾಲರ್. ಪ್ಯಾರಿಸ್ನಲ್ಲಿ ಒಂದು ಲೀಟರ್ ಹಾಲಿನ ಬೆಲೆ 1.23 ಅಮೆರಿಕನ್ ಡಾಲರ್, ಆಸ್ಟ್ರೇಲಿಯಾ ಮೆಲ್ಬೋರ್ನ್‌ನಲ್ಲಿ 1.08 ಅಮೆರಿಕನ್ ಡಾಲರ್. ಕಳೆದ ವಾರ ಪಾಕಿಸ್ತಾನದಲ್ಲಿ ಹಾಲಿನ ಮೇಲೆ ಶೇಕಡಾ 18ರಷ್ಟು ತೆರಿಗೆ ಏರಿಕೆ ಮಾಡಲಾಗಿದೆ. ಪಾಕಿಸ್ತಾನ ಹಣಕಾಸು ಸಚಿವ ಮೊಹಮ್ಮದ್ ಔರಂಗಜೇಬ್ ಈ ಘೋಷಣೆ ಮಾಡಿದ್ದರು. ಇತ್ತ ಸಗಟು ಮಾರಕಟ್ಟೆ ದರ ಕೂಡ ಹೆಚ್ಚಳವಾಗಿದೆ. ಹೀಗಾಗಿ ಸರಿಸುಮಾರು ಶೇಕಡಾ 25 ರಷ್ಟು ದರದಲ್ಲಿ ಏರಿಕೆಯಾಗಿದೆ. ಇದರ ಪರಿಣಾಮ ಹಾಲು 370 ರೂಪಾಯಿಗೆ ತಲುಪಿದೆ.

## ಕದನ ವಿರಾಮ ಒಪ್ಪಂದ: ಹಿಜ್ಬುಲ್ಲಾ- ಹಮಾಸ್ ಮಾತುಕತೆ

**ಬೈರೂತ್:** ಹಿಜ್ಬುಲ್ಲಾ ಮುಖಂಡ ಸಯ್ಯದ್ ಹಸನ್ ನಸ್ರುಲ್ಲಾ ಮತ್ತು ಹಮಾಸ್ ಮುಖಂಡ ಖಲೀಲ್ ಅಲ್-ಹಯಾ ಗಾಝಾ ಪಟ್ಟಿಯಲ್ಲಿನ ಇತ್ತೀಚಿನ ಬೆಳವಣಿಗೆಗಳು ಹಾಗೂ ಕದನ ವಿರಾಮ ಮಾತುಕತೆಯ ಬಗ್ಗೆ ಚರ್ಚಿಸಿದ್ದಾರೆ ಎಂದು ಮೂಲಗಳು ಹೇಳಿವೆ.

**ಖತರ್, ಈಜಿಪ್ಟ್‌ನಲ್ಲಿ ಮಧ್ಯವರ್ತಿ ಸಹೋದರರನ್ನು ಭೇಟಿಯಾದ ಹಮಾಸ್ ರಾಜಕೀಯ ವಿಭಾಗದ ಮುಖ್ಯಸ್ಥ ಇಸ್ಮಾಯಿಲ್ ಹನಿಯೆಹ್**

ಲೆಬನಾನ್ ರಾಜಧಾನಿ ಬೈರೂತ್‌ನಲ್ಲಿ ನಡೆದ ಸಭೆಯಲ್ಲಿ ಇಬ್ಬರೂ ಗಾಝಾ ಪಟ್ಟಿಯಲ್ಲಿನ ಇತ್ತೀಚಿಗಿನ ಭದ್ರತೆ ಮತ್ತು ರಾಜಕೀಯ ಬೆಳವಣಿಗೆಗಳನ್ನು ಪರಿಶೀಲಿಸಿದರು. ಇತ್ತೀಚಿನ ದಿನಗಳಲ್ಲಿ ನಡೆಯುತ್ತಿರುವ ಮಾತುಕತೆ, ಮತ್ತು ಗಾಝಾ ಪಟ್ಟಿಯಲ್ಲಿರುವ ಫೆಲೆಸ್ತೀನೀಯರ ವಿರುದ್ಧದ ವಿಶ್ವಾಸಘಾತುಕ ಆಕ್ರಮಣವನ್ನು ಕೊನೆಗೊಳಿಸಲು ಪ್ರಸ್ತುತಪಡಿಸಿದ ಪ್ರಸ್ತಾವನೆಗಳ ಬಗ್ಗೆ ಚರ್ಚೆ ನಡೆಸಿದರು ಎಂದು ಇರಾನ್ ಬೆಂಬಲಿತ ಹಿಜ್ಬುಲ್ಲಾ ಸಶಸ್ತ್ರ ಹೋರಾಟಗಾರರ ಗುಂಪಿನ ಮೂಲಗಳು ಹೇಳಿಕೆ ನೀಡಿವೆ. ಗಾಝಾದಲ್ಲಿ ಕದನ ವಿರಾಮ ಜಾರಿಯಾದ ತಕ್ಷಣ ಲೆಬನಾನ್ನಲ್ಲಿಯೂ ಕದನ ವಿರಾಮ ಜಾರಿಯಾಗುತ್ತದೆ ಎಂದು ಹಿಜ್ಬುಲ್ಲಾ ಹೇಳಿದೆ. ಹಮಾಸ್‌ನ ರಾಜಕೀಯ ವಿಭಾಗದ ಮುಖ್ಯಸ್ಥ ಇಸ್ಮಾಯಿಲ್ ಹನಿಯೆಹ್ ಅವರು ಖತರ್ ಮತ್ತು ಈಜಿಪ್ಟ್‌ನ ಲ್ಲಿ ಮಧ್ಯವರ್ತಿ ಸಹೋದರರನ್ನು ಭೇಟಿಯಾಗಿ, ಕದನ ವಿರಾಮ ಒಪ್ಪಂದದ ಬಗ್ಗೆ ಹೊಸ ಪ್ರಸ್ತಾವನೆಯನ್ನು ಮುಂದಿರಿಸಿದ್ದರು ಎಂದು ಹಮಾಸ್ ಹೇಳಿದೆ.



# ರಾತ್ರಿ ಮೀಟಿಂಗ್‌ಗೆ ನೋ ಎಂದ ಬೈಡೆನ್!



**ವಾಷಿಂಗ್ಟನ್:** ಅಮೆರಿಕದ ಅಧ್ಯಕ್ಷ ಜೋ ಬೈಡನ್ ತಮಗೆ ಹೆಚ್ಚು ನಿದ್ರೆ ಬೇಕು, ರಾತ್ರಿ 8 ಗಂಟೆ ನಂತರ ಯಾವುದೇ ಮೀಟಿಂಗ್ ಆಯೋಜಿಸಬೇಡಿ ಎಂದು ಡೆಮಾಕ್ರೆಟಿಕ್ ಪಕ್ಷದ ಸಹೋದ್ಯೋಗಿಗಳಿಗೆ ಮನವಿ ಮಾಡಿಕೊಂಡಿದ್ದಾರೆ. ಅಮೆರಿಕ ಅಧ್ಯಕ್ಷರ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಅಧ್ಯಕ್ಷರೊಬ್ಬರು ಈ ರೀತಿ ಹೇಳುತ್ತಿದ್ದಾರೆ.

2024ರ ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಅಧ್ಯಕ್ಷೀಯ ಅಭ್ಯರ್ಥಿಗಳ ಸಂವಾದದ ವೇಳೆ ರಿಪಬ್ಲಿಕನ್ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಎದುರು ಭಾರೀ ಹಿನ್ನಡೆ ಅನುಭವಿಸಿದ ಬಳಿಕ ಜೋ ಬೈಡನ್ ಅವರನ್ನು ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿ ಸ್ಥಾನದಿಂದ ಕೆಳಗಿಳಿಸಬೇಕು ಎಂಬ ಆಗ್ರಹಗಳು ಕೇಳಿ ಬರುತ್ತಿವೆ.

ನ್ಯೂಯಾರ್ಕ್ ಟೈಮ್ಸ್‌ನಲ್ಲಿ ಜೋ ಬೈಡನ್ ಅವರ ಮನವಿಗೆ ಸಮಬಂಧಿಸಿದಂತೆ ಸಮಗ್ರ ವರದಿ ಪ್ರಕಟವಾಗಿದ್ದು, ಹಲವು ರಾಜ್ಯಗಳಲ್ಲಿ ಆಡಳಿತದಲ್ಲಿ ಇರುವ ಡೆಮಾಕ್ರೆಟಿಕ್ ಪಕ್ಷದ ಗವರ್ನರ್‌ಗಳು ತಮ್ಮ ಜೊತೆ ವೈಟ್ ಹೌಸ್ನಲ್ಲಿ ಸಭೆ ನಡೆಸಬೇಕೆಂದರೆ ರಾತ್ರಿ 8 ಗಂಟೆ ಒಳಗೆ ಮುಗಿಸಬೇಕು. ರಾತ್ರಿ 8 ರ ಬಳಿಕ ತಾವು ನಿದ್ರೆಗೆ ಜಾರಬೇಕಿದೆ, ತಮಗೆ ಹೆಚ್ಚು ನಿದ್ರೆ ಬೇಕಿದೆ, ತಮ್ಮ ಕಾರ್ಯಾವಧಿಯನ್ನು ಕಡಿಮೆ ಮಾಡಬೇಕಿದೆ ಎಂದು 81 ವರ್ಷದ ಜೋ ಬೈಡನ್ ತಾಕೀತು ಮಾಡಿರುವುದಾಗಿ ವರದಿಯಾಗಿದೆ.

ಈಗಾಗಲೇ ಡೆಮಾಕ್ರೆಟಿಕ್ ಪಕ್ಷದ ಹಲವು ಗವರ್ನರ್‌ಗಳು ಎರಡನೇ ಅವಧಿಗೆ ಜೋ ಬೈಡನ್ ಮರು ಆಯ್ಕೆ ಬಯಸಿರೋದನ್ನ ಪ್ರಶ್ನಿಸಿ ಡೆಮೊಕ್ರೆಟಿಕ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಬದಲಾಗಬೇಕು ಎಂದು ಭಾವನೆ ವ್ಯಕ್ತಪಡಿಸಿದ್ದಾರೆ.

# ಹತ್ರಾಸ್ ಕಾಲ್ತುಳಿತ ಪ್ರಕರಣ: ದೆಹಲಿ ಪೊಲೀಸರಿಗೆ ಶರಣಾದ ಪ್ರಮುಖ ಆರೋಪಿ



**ನವದೆಹಲಿ:** ಜುಲೈ 2 ರಂದು ಉತ್ತರ ಪ್ರದೇಶದ ಹತ್ರಾಸ್‌ನಲ್ಲಿ 121 ಜನರ ಸಾವಿಗೆ ಕಾರಣವಾದ ಕಾಲ್ತುಳಿತ ಪ್ರಕರಣದ ಪ್ರಮುಖ ಆರೋಪಿ ದೇವಪ್ರಕಾಶ್ ಮಧುಕರ್ ದೆಹಲಿಯಲ್ಲಿ ಪೊಲೀಸರಿಗೆ ಶರಣಾಗಿದ್ದಾನೆ. ಆತನನ್ನು ಉತ್ತರ ಪ್ರದೇಶ ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ಆರೋಪಿ ಪರ ವಕೀಲರು ತಿಳಿಸಿದ್ದಾರೆ.ಪೊಲೀಸರಿಗೆ ಶರಣಾದ ಮಧುಕರ್ ಸತ್ಸಂಗದ ಮುಖ್ಯ ಸೇವಾದಾರನಾಗಿದ್ದ. ಈತ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹತ್ರಾಸ್‌ನ ಸಿಕಂದರಾ ರಾವ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್‌ನಲ್ಲಿ ಹೆಸರಿಸಲಾದ ಏಕೈಕ ಆರೋಪಿಯಾಗಿದ್ದಾನೆ. ಆತ ದೆಹಲಿಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ. ಈ ವೇಳೆ ದೆಹಲಿಯ ಪೊಲೀಸರು, ಎಸ್‌ಐಟಿ ಮತ್ತು ಎಸ್ ಟಿಎಫ್‌ಗೆ ಕರೆ ಮಾಡಿ ಶರಣಾಗಿದ್ದಾನೆ ಎಂದು ಆತನ ಪರ ವಕೀಲರು ವೀಡಿಯೋ ಸಂದೇಶದ ಮೂಲಕ ತಿಳಿಸಿದ್ದಾರೆ. ಮಧುಕರ್ ಯಾವುದೇ ತಪ್ಪು ಮಾಡದ ಕಾರಣ ನಿರೀಕ್ಷಣಾ ಜಾಮೀನಿಗೆ ಅರ್ಜಿ ಸಲ್ಲಿಸುವುದಿಲ್ಲ. ಈ ಪ್ರಕರಣದಲ್ಲಿ ನಮ್ಮ ಅಪರಾಧವೇನು? ವಿಚಾರಣೆ ವೇಳೆ ಆತನಿಗಿರುವ ಹೃದಯ ಸಮಸ್ಯೆಯನ್ನು ಪೊಲೀಸರು ಪರಿಗಣನೆಗೆ ತೆಗೆದುಕೊಳ್ಳಬೇಕು. ಆತನಿಂದ ಏನು ತಪ್ಪಾಗಿಲ್ಲ ಎಂದು ಆರೋಪಿ ಪರ ವಕೀಲರು ಹೇಳಿಕೊಂಡಿದ್ದಾರೆ.

ಇದಕ್ಕೂ ಮುನ್ನ ಮಧುಕರ್ ಬಂಧನಕ್ಕೆ ಸಹಕಾರಿಯಾಗುವ ಮಾಹಿತಿ ನೀಡಿದವರಿಗೆ 1 ಲಕ್ಷ ರೂ. ಬಹುಮಾನ ನೀಡುವುದಾಗಿ ಉತ್ತರ ಪ್ರದೇಶ ಪೊಲೀಸರು ಘೋಷಿಸಿದ್ದರು. ಇನ್ನೂ ಈ ಪ್ರಕರಣ ಸಂಬಂಧ ಗುರುವಾರ ಭೋಲೆ ಬಾಬಾನ ಸತ್ಸಂಗದ ಸಂಘಟನಾ ಸಮಿತಿಯ ಸದಸ್ಯರಾಗಿದ್ದ ಇಬ್ಬರು ಮಹಿಳಾ ಸ್ವಯಂಸೇವಕರು ಸೇರಿದಂತೆ ಆರು ಜನರನ್ನು ಬಂಧಿಸಲಾಗಿತ್ತು.

## ಬಿಎಸ್ಪಿ ರಾಜ್ಯಾಧ್ಯಕ್ಷನ ಹತ್ಯೆ

**ತಮಿಳುನಾಡು:** ಬೈಕ್ ಮೇಲೆ ಬಂದ 6 ಜನ ದುಷ್ಕರ್ಮಿಗಳ ಗ್ಯಾಂಗ್ ಒಂದು ಬಿಎಸ್ಪಿಯ ರಾಜ್ಯಾಧ್ಯಕ್ಷ ಕೆ.ಆರ್ಮ್ ಸ್ಟ್ರಾಂಗ್ ಅವರನ್ನು ಬರ್ಬರವಾಗಿ ಹತ್ಯೆಗೈದಿದ್ದು, ರಾಜ್ಯದ ಜನ ಬೆಚ್ಚಿ ಬಿದ್ದಿದ್ದಾರೆ. ಇಂದು ಸಂಜೆ 7-30ರ ಸುಮಾರಿಗೆ ಕೆ.ಆರ್ಮ್ ಸ್ಟ್ರಾಂಗ್ ತಮ್ಮ ಮನೆಯ ಒಳಗೆ ಪ್ರವೇಶಿಸುತ್ತಿರುವ ವೇಳೆ ಪಾತಕಿಗಳು ದಾಳಿ ನಡೆಸಿದ್ದಾರೆ. ಚೆನ್ನೈನ ಪೆರಂಬುರ್ ನಲ್ಲಿರುವ ಅವರ ನಿವಾಸದ ಸದಾಯಪ್ಪನ್ ರಸ್ತೆಯ ಬಳಿ ಭೀಕರವಾಗಿ ಕೊಲೆ ಮಾಡಲಾಗಿದೆ. ಹಲ್ಲೆಯಿಂದ ಗಂಭೀರವಾಗಿ ಗಾಯಗೊಂಡು ಪ್ರಜ್ಞೆ ತಪ್ಪಿದ್ದ ಅವರನ್ನು ಖಾಸಗಿ ಆಸ್ಪತ್ರೆಗೆ ಸಾಗಿಸುವಷ್ಟರಲ್ಲೇ ಕೊನೆಯುಸಿರು ಚೆಲ್ಲಿದ್ದರು. ಚೆನ್ನೈ ಕಾರ್ಪೊರೇಷನ್ ನ ಕೌನ್ಸಿಲರ್ ಕೂಡ ಆಗಿದ್ದ ಆರ್ಮ್ ಸ್ಟ್ರಾಂಗ್ , ಶೋಷಿತರ ಧ್ವನಿಯಾಗಿ ಗುರುತಿಸಿಕೊಂಡಿದ್ದರು. ಇನ್ನು ದಾಳಿ ಏಕೆ ನಡೆಯಿತು ಎಂಬಿತ್ಯಾದಿ ಕುರಿತು ಕೊಳತ್ತೂರ್ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.



# ಕೌಲಲಾಂಪುರ ವಿಮಾನ ನಿಲ್ದಾಣದಲ್ಲಿ ಗ್ಯಾಸ್ ಸೋರಿಕೆ; 39 ಮಂದಿ ಅಸ್ವಸ್ಥ

**ಕೌಲಲಾಂಪುರ:** ಮಲೇಶ್ಯಾದ ಕೌಲಲಾಂಪುರ ಅಂತರ್‍ರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಗುರುವಾರ ಅನಿಲ ಸೋರಿಕೆಯಾಗಿ ಸುಮಾರು 39 ಮಂದಿ ಅಸ್ವಸ್ಥರಾಗಿರುವುದಾಗಿ ವರದಿಯಾಗಿದೆ. ವಿಮಾನ ಇಂಜಿನಿಯರಿಂಗ್ ವಿಭಾಗದಲ್ಲಿ ಅನಿಲ ಸೋರಿಕೆಯಾಗಿದೆ. ಆದರೆ ಯಾವುದೇ ಪ್ರಯಾಣಿಕರಿಗೆ ಸಮಸ್ಯೆಯಾಗಿಲ್ಲ ಮತ್ತು ವಿಮಾನ ಸಂಚಾರಕ್ಕೆ ಅಡಚಣೆಯಾಗಿಲ್ಲ ಎಂದು ವಿಮಾನ ನಿಲ್ದಾಣದ ಅಗ್ನಿಶಾಮಕ ಅಧಿಕಾರಿಗಳು ಹೇಳಿದ್ದಾರೆ. ವಿಮಾನ ನಿಲ್ದಾಣದ ದಕ್ಷಿಣ ಏರ್ಕ್ರಾಫ್ಟ್ ಇಂಜಿನಿಯರಿಂಗ್ ವಿಭಾಗದಲ್ಲಿ ಸ್ಥಳೀಯ ಸಮಯ 11.23 ಗಂಟೆಗೆ ರಾಸಾಯನಿಕ ಸೋರಿಕೆಯಾಗಿರುವ ಬಗ್ಗೆ ತುರ್ತು ಕರೆ ಬಂದಿದೆ. ಇಂಜಿನಿಯರಿಂಗ್ ವಿಭಾಗವು ಪ್ರಯಾಣಿಕರ ಟರ್ಮಿನಲ್ನಿಂದ ಪ್ರತ್ಯೇಕವಾಗಿದ್ದು ಇಲ್ಲಿ ಕಾರ್ಯ ನಿರ್ವಹಿಸುತ್ತಿದ್ದ 39 ಮಂದಿ ಅನಿಲ ಸೋರಿಕೆಯಿಂದ ಅಸ್ವಸ್ಥಗೊಂಡಿದ್ದು ಅವರನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಒದಗಿಸಲಾಗಿದೆ. ಇಲ್ಲಿ ಬಳಕೆಯಾಗದ ಟ್ಯಾಂಕ್ ಒಂದರಲ್ಲಿದ್ದ ಎಲ್ಪಿಜಿ ಅನಿಲ ಸೋರಿಕೆಯಾಗುತ್ತಿರುವುದನ್ನು ಪತ್ತೆಹಚ್ಚಿ ದುರಸ್ತಿ ಮಾಡಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

# ಆಗಸ್ಟ್‌ನಲ್ಲಿ ಮೋದಿ ಸರ್ಕಾರ ಪತನ- ಲಾಲು ಪ್ರಸಾದ್ ಯಾದವ್ ಭವಿಷ್ಯ



**ಪಾಟ್ನಾ:** ಆಗಸ್ಟ್ ತಿಂಗಳಲ್ಲಿ ನರೇಂದ್ರ ಮೋದಿ ಸರ್ಕಾರ ಪತನವಾಗಲಿದೆ ಎಂದು ರಾಷ್ಟ್ರೀಯ ಜನತಾ ದಳ ವರಿಷ್ಠ ಮತ್ತು ಬಿಹಾರದ ಮಾಜಿ ಮುಖ್ಯಮಂತ್ರಿ ಲಾಲು ಯಾದವ್ ಭವಿಷ್ಯ ನುಡಿದಿದ್ದಾರೆ.

ಪಕ್ಷದ 28ನೇ ಸಂಸ್ಥಾಪನಾ ದಿನದ ಆಚರಣೆಯ ವೇಳೆ ಪಾಟ್ನಾದ ಪಕ್ಷದ ಕಚೇರಿಯಲ್ಲಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ಪಕ್ಷದ ಕಾರ್ಯವೈಖರಿ ಬಗ್ಗೆ ಸಂತಸ ವ್ಯಕ್ತಪಡಿಸಿದರು. ಪಕ್ಷ ಇನ್ನಷ್ಟು ಎತ್ತರಕ್ಕೆ ಬೆಳೆಯುವ ವಿಶ್ವಾಸವಿದೆ ಎಂದರು. ಜೊತೆಗೆ ಕೇಂದ್ರದ ಮೋದಿ ಸರ್ಕಾರ ಅತ್ಯಂತ ದುರ್ಬಲವಾಗಿದ್ದು, ಆಗಸ್ಟ್‌ನಲ್ಲಿ ಮೋದಿ ಸರ್ಕಾರ ಪತನವಾಗಲಿದೆ ಎಂದು ಸ್ಫೋಟಕ ಹೇಳಿಕೆಯೊಂದನ್ನು ನೀಡಿದ್ದಾರೆ.ಇದೇ ವೇಳೆ ಆರ್‌ಜೆಡಿ ನಾಯಕ ಮತ್ತು ಮಾಜಿ ಉಪಮುಖ್ಯಮಂತ್ರಿ ತೇಜಸ್ವಿ ಯಾದವ್ , ಪಕ್ಷದ ಕಾರ್ಯಕರ್ತರನ್ನು ಅಭಿನಂದಿಸಿದರು. ನಮ್ಮ ಪಕ್ಷಕ್ಕೆ ಒಳ್ಳೆಯ ಮತ್ತು ಕೆಟ್ಟ ಸಮಯಗಳು ಇದ್ದವು. ನಮ್ಮ ಸಿದ್ಧಾಂತದಲ್ಲಿ ನಾವು ಎಂದಿಗೂ ರಾಜಿ ಮಾಡಿಕೊಂಡಿಲ್ಲ. ನಮ್ಮ ಹೋರಾಟವನ್ನು ಮುಂದುವರಿಸಿದೆವು. ಕೆಲವೊಮ್ಮೆ ನಾವು ಯಶಸ್ವಿಯಾಗಿದ್ದೇವೆ ಮತ್ತು ಕೆಲವೊಮ್ಮೆ ನಾವು ವಿಫಲರಾಗಿದ್ದೇವೆ. ಆದರೆ ನಮ್ಮ ಕಾರ್ಯಕರ್ತರು ದೃಢವಾಗಿ ಉಳಿದರು ಎಂದು ಹೇಳಿದರು.ಬಿಹಾರ ವಿಧಾನಸಭೆಯಲ್ಲಿ ಆರ್‌ಜೆಡಿ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಮೊದಲು ನಾವು ಜನತಾದಳದ ಭಾಗವಾಗಿದ್ದೆವು. ಈಗ ನಾವು ಬೇರ್ಪಟ್ಟಿದ್ದೇವೆ. ನಮ್ಮ ಪಕ್ಷ ಅಪ್ಪನ ಪಕ್ಷ. ಆರ್‌ಜೆಡಿ ಮತಗಳಲ್ಲಿ 9%ರಷ್ಟು ಏರಿಕೆ ದಾಖಲಾಗಿದ್ದರೆ, ಎನ್‌ಡಿಎ ಪಾಲು ಕಡಿಮೆಯಾಗಿದೆ ಎಂದರು.

## ಹತ್ರಾಸ್ ದುರಂತಕ್ಕೆ ರಷ್ಯಾ ಅಧ್ಯಕ್ಷ ಪುಟಿನ್ ಸಂತಾಪ!

**ಮಾಸ್ಕೋ:** ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಉತ್ತರ ಪ್ರದೇಶದ ಹತ್ರಾಸ್ ನಲ್ಲಿ ಸಂಭ್ರಮಿಸಿದ ಕಾಲ್ತುಳಿತದ ದುರಂತಕ್ಕೆ ಸಂತಾಪ ವ್ಯಕ್ತಪಡಿಸಿದ್ದಾರೆ. ಉತ್ತರ ಪ್ರದೇಶದ ಹತ್ರಾಸ್ ನಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದ ವೇಳೆ ಕಾಲ್ತುಳಿತ ಸಂಭವಿಸಿ 121ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿರುವ ವ್ಲಾದಿಮಿರ್ ಪುಟಿನ್, ಉತ್ತರಪ್ರದೇಶದ ದುರಂತದ ಬಗ್ಗೆ ನನ್ನ ಶೋಕವನ್ನು ಪ್ರಾಮಾಣಿಕವಾಗಿ ಸ್ವೀಕರಿಸಿ ಎಂದು ಸಂದೇಶ ಕಳುಹಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ರಷ್ಯಾ ಪ್ರವಾಸ ಕೈಗೊಳ್ಳಲಿದ್ದು, ಹಲವು ಮಹತ್ವದ ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆ ಇದೆ.



# ಮೊಬೈಲ್ ರೀಚಾರ್ಜ್ ದರ ಹೆಚ್ಚಳ: ವಿಪಕ್ಷಗಳ ಆಕ್ರೋಶ




**ದೆಹಲಿ:** ಮೂರು ಖಾಸಗಿ ಮೊಬೈಲ್ ಆಪರೇಟರ್ ಕಂಪನಿಗಳು ಕೂಡ ಸುಂಕವನ್ನು ಹೆಚ್ಚಿಸಿರುವುದನ್ನು ವಿರೋಧಿಸಿ ವಿರೋಧ ಪಕ್ಷಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಶುಕ್ರವಾರ ನರೇಂದ್ರ ಮೋದಿ ಸರ್ಕಾರವನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದಾರೆ. ಯಾವುದೇ ಮೇಲ್ವಿಚಾರಣೆ ಮತ್ತು ನಿಯಂತ್ರಣವಿಲ್ಲದೆ ಬರೋಬ್ಬರಿ ವಾರ್ಷಿಕವಾಗಿ 34,824 ಕೋಟಿ ರೂ.

ಶುಲ್ಕವನ್ನು ಹೆಚ್ಚಿಸಿರುವುದನ್ನು ಖಂಡಿಸಿದ್ದಾರೆ. ರಿಲಯನ್ಸ್ ಜಿಯೋ, ಏರ್ಟೆಲ್ ಮತ್ತು ವೊಡಾಫೋನ್ ಐಡಿಯಾ ಒಟ್ಟಾರೆಯಾಗಿ ಸರಾಸರಿ 15 ಪ್ರತಿಶತದಷ್ಟು ಸುಂಕವನ್ನು ಹೆಚ್ಚಿಸಿವೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೆವಾಲಾ ಆಕ್ಷೇಪಣೆ ವ್ಯಕ್ತಪಡಿಸಿದ್ದಾರೆ. ಈ ಹೆಚ್ಚಳವು ಗಣನೀಯ 109 ಕೋಟಿ ಚಂದಾದಾರರ ಮೇಲೆ ಪರಿಣಾಮ ಬೀರುತ್ತದೆ, ಇದು ಗ್ರಾಹಕರಿಗೆ ಗಮನಾರ್ಹ ಆರ್ಥಿಕ ಪರಿಣಾಮಗಳನ್ನು ಉಂಟು ಮಾಡುತ್ತದೆ.ಸಿಪಿಐ(ಎಂ) ಬೆಂಬಲಿತ ಸಿಐಟಿಯು ಈ ಕಳವಳಗಳನ್ನು ವ್ಯಕ್ತಪಡಿಸಿತ್ತು, ಇಂತಹ ಸುಂಕದ ಹೆಚ್ಚಳವು ನ್ಯಾಯಸಮ್ಮತವಲ್ಲ ಮತ್ತು ಸಾಮಾನ್ಯ ಜನರಿಗೆ ಅಸಮಾನವಾಗಿ ಹೊರೆಯಾಗುತ್ತದೆ ಎಂದು ಒತ್ತಿ ಹೇಳಿದ್ದಾರೆ. ಪಕ್ಷದ ಪ್ರಧಾನ ಕಾರ್ಯದರ್ಶಿ ತಪನ್ ಸೇನ್ ಸರ್ಕಾರವು ಬಿಎಸ್‌ಎನ್‌ಎಲ್ 4ಜಿ ಮತ್ತು 5ಜಿ ಸೇವೆಗಳಿಗೆ ತನ್ನ ಪರಿವರ್ತನೆಯನ್ನು ಸುಗಮಗೊಳಿಸದೆ BSNL ಗಿಂತ ಖಾಸಗಿ ಆಪರೇಟರ್‌ಗಳ ಕಡೆಗೆ ಒಲವು ತೋರುತ್ತಿದೆ ಎಂದು ಟೀಕಿಸಿದರು.

# ಆಸ್ಟ್ರೇಲಿಯಾ: ಸಂಸತ್ತಿನ ಛಾವಣಿಯ ಮೇಲೆ 'ಫ್ರೀ ಪ್ಯಾಲೆಸ್ಟೈನ್' ಫಲಕ!




**ಕ್ಯಾನ್ಬೆರಾ:** ಆಸ್ಟ್ರೇಲಿಯಾದಲ್ಲಿ ಇತ್ತೀಚೆಗೆ ಪ್ಯಾಲೇಸ್ಟಿನಿಯನ್ ಬೆಂಬಲಿತ ಪ್ರತಿಭಟನಾಕಾರರು ಸಂಸತ್ತಿನ ಛಾವಣಿಯ ಮೇಲೆ 'ಫ್ರೀ ಪ್ಯಾಲೆಸ್ಟೈನ್' ಎಂಬ ಫಲಕವನ್ನು ಹಾರಿಸಿದರು. ಆಸ್ಟ್ರೇಲಿಯಾದ ವೃತ್ತವಾಹಿನಿ 'ಎಬಿಸಿ' ನೀಡಿರುವ ಮಾಹಿತಿಯನುಸಾರ ಕಪ್ಪುಬಟ್ಟೆ ಧರಿಸಿರುವ ನಾಲ್ಕು ಜನರು ಶೀಘ್ರವಾಗಿ ಸಂಸತ್ತಿಗೆ ನುಗ್ಗಿದರು ಮತ್ತು ಛಾವಣಿಯ ಮೇಲೆ ಹೋಗಿ 'ಫ್ರೀ ಪ್ಯಾಲೆಸ್ತೀನ್' ಎಂದು ಕೂಗಲು ಪ್ರಾರಂಭಿಸಿದರು.

ಅವರ ಕೈಗಳಲ್ಲಿ 'ಫ್ರೀ ಪ್ಯಾಲೆಸ್ತೀನ್' ಎಂದು ಬರೆದಿರುವ ಫಲಕಗಳಿದ್ದವು. ಪ್ರತಿಭಟನಾಕಾರರು ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ ಮೇಲೆ ಇಸ್ರೇಲ್ಗೆ ಬೆಂಬಲ ನೀಡಿದ್ದಾರೆಂದು ಆರೋಪಿಸಿದರು. ಭದ್ರತಾ ಸಿಬ್ಬಂದಿ ಪ್ರತಿಭಟನಾಕಾರರನ್ನು ಸಂಸತ್ತಿನಿಂದ ಹೊರಗೆ ಕರೆದೊಯ್ದರು. ಕೆಲವು ದಿನಗಳ ಹಿಂದೆ, ಅಲ್ಲಿನ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರ ಸರಕಾರವು ಮುಸ್ಲಿಂ ಸಂಸದೆ ಫಾತಿಮಾ ಪೇಮನ್ ಅವರನ್ನು ಅವರ ಪಕ್ಷದಿಂದ ಅಮಾನತುಗೊಳಿಸಿತ್ತು. ಪ್ಯಾಲೆಸ್ತೀನ್ ಅನ್ನು ಸ್ವತಂತ್ರ ರಾಷ್ಟ್ರವೆಂದು ಗುರುತಿಸುವಂತೆ ಆಸ್ಟ್ರೇಲಿಯಾದ 'ಗ್ರೀನ್ ಪಾರ್ಟಿ' ಯು ಮಂಡಿಸಿದ ಪ್ರಸ್ತಾಪನೆಯನ್ನು ಫಾತಿಮಾ ಅವರು ಬೆಂಬಲಿಸಿದ್ದರು.




## ಬ್ರಿಟನ್‌ನ ನೂತನ ಪ್ರಧಾನ ಮಂತ್ರಿಯಾಗಿ ಸ್ಟಾರ್ಮರ್ ಆಯ್ಕೆ

**ಲಂಡನ್:** 14 ವರ್ಷಗಳ ಕನ್ಸರ್ವೇಟಿವ್ ಆಡಳಿತವನ್ನು ಕೊನೆಗೊಳಿಸಿದ ಲೇಬರ್ ಪಕ್ಷದ ಪ್ರಚಂಡ ವಿಜಯದ ನಂತರಕೀರ್ ಸ್ಟಾರ್ಮರ್ ಅವರು ಬ್ರಿಟನ್ನ ನೂತನ ಪ್ರಧಾನ ಮಂತ್ರಿಯಾಗಿ ಅಧಿಕಾರಕ್ಕೇರಿದ್ದಾರೆ. ಡೌನಿಂಗ್ ಸ್ಟ್ರೀಟ್ನ ಹೊರಗೆ ತನ್ನ ಮೊದಲ ಭಾಷಣದಲ್ಲಿ, ಸ್ಟಾರ್ಮರ್ ಮುಂದಿನ ಕೆಲಸದ ತುರ್ತುಸ್ಥಿತಿಯನ್ನು ಒತ್ತಿಹೇಳಿದ್ದು, ತಕ್ಷಣವೇ ಕಾರ್ಯ ಪ್ರಾರಂಭಿಸುವುದಾಗಿ ಪ್ರತಿಜ್ಞೆ ಮಾಡಿದರು. ರಿಷಿ ಸುನಕ್ ಅವರು ಚುನಾವಣಾ ಫಲಿತಾಂಶದ ನಂತರ ಪ್ರಧಾನಿ ಮತ್ತು ಕನ್ಸರ್ವೇಟಿವ್ ಪಕ್ಷದ ನಾಯಕ ಸ್ಥಾನಕ್ಕೆ ರಾಜೀನಾಮೆ ನೀಡಿದರು. ಕನ್ಸರ್ವೇಟಿವ್‌ಗಳಿಗೆ ದೊಡ್ಡ ಹಿನ್ನಡೆಯಲ್ಲಿ, ಮಾಜಿ ಪ್ರಧಾನಿ ಲಿಜ್ ಟ್ರಸ್ ಅವರು ಪಕ್ಷದ ಭದ್ರಕೋಟೆ ಸೌತ್ ವೆಸ್ಟ್ ನಾರ್ಫೋಕ್ನಿಂದ ಸೋತರು ಅವರು 2010 ರಿಂದ ಈ ಸ್ಥಾನವನ್ನು ಹೊಂದಿದ್ದಾರೆ. ''ಇಂದು ನಾವು ಮುಂದಿನ ಅಧ್ಯಾಯವನ್ನು ಪ್ರಾರಂಭಿಸುತ್ತೇವೆ. ಬದಲಾವಣೆಯ ಕೆಲಸವನ್ನು ಪ್ರಾರಂಭಿಸುತ್ತೇವೆ, ರಾಷ್ಟ್ರೀಯ ನವೀಕರಣದ ಧ್ಯೇಯ ಮತ್ತು ನಮ್ಮ ದೇಶವನ್ನು ಪುನರ್ನಿರ್ಮಿಸಲು ಪ್ರಾರಂಭಿಸುತ್ತೇವೆ'' ಎಂದು ಸಂಸತ್ತಿನಲ್ಲಿ ಬಹುಮತವನ್ನು ಪಡೆದುಕೊಂಡ ನಂತರ ಲಂಡನ್ನಲ್ಲಿ ವಿಜಯೋತ್ಸವದ ಭಾಷಣದಲ್ಲಿ ಸ್ಟಾರ್ಮರ್ ಹೇಳಿದ್ದಾರೆ.ಜುಲೈ 5 ರಂದು ನಡೆದ ರಾಷ್ಟ್ರೀಯ ಚುನಾವಣೆಯಲ್ಲಿ ಸೋಲೊಪ್ಪಿಕೊಂಡ ಬ್ರಿಟನ್ ಪ್ರಧಾನಿ ರಿಷಿ ಸುನಕ್ , ವಿರೋಧ ಪಕ್ಷ ಲೇಬರ್ ಪಾರ್ಟಿ ಗೆದ್ದಿದೆ ಎಂದು ಹೇಳಿದರು. ''ಲೇಬರ್ ಪಾರ್ಟಿ ಈ ಸಾರ್ವತ್ರಿಕ ಚುನಾವಣೆಯಲ್ಲಿ ಗೆದ್ದಿದೆ. ಅವರ ವಿಜಯಕ್ಕಾಗಿ ಅಭಿನಂದಿಸಲು ನಾನು ಸರ್ ಕೀರ್ ಸ್ಟಾರ್ಮರ್ ಅವರಿಗೆ ಕರೆ ಮಾಡಿದ್ದೇನೆ'' ಎಂದು ಉತ್ತರ ಇಂಗ್ಲೆಂಡ್‌ನಲ್ಲಿ ತಮ್ಮ ಸಂಸದೀಯ ಸ್ಥಾನವನ್ನು ಗೆದ್ದ ನಂತರ ಸುನಕ್ ಹೇಳಿದ್ದಾರೆ.

# ಬ್ರಿಟನ್ ಚುನಾವಣೆ: ಭಾರತೀಯ ಮೂಲದ ಶಿವಾನಿ ರಾಜಾ ಗೆಲುವು



**ಲಂಡನ್:** ಗುಜರಾತ್‌ನ ದಿಯು ಮೂಲದ ಶಿವಾನಿ ರಾಜಾ ಅವರು ಬ್ರಿಟನ್ನ ಸಾರ್ವತ್ರಿಕ ಚುನಾವಣೆಯಲ್ಲಿ ಲೀಸೆಸ್ಟರ್ ಪೂರ್ವದಿಂದ ಕನ್ಸರ್ವೇಟಿವ್ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದಾರೆ. 37 ವರ್ಷಗಳಲ್ಲಿ ಕಾರ್ಮಿಕೇತರ ಅಭ್ಯರ್ಥಿಯೊಬ್ಬರು ಇಲ್ಲಿ ಗೆದ್ದಿರುವುದು ಇದೇ ಮೊದಲು.

ಅವರು ಲಂಡನ್ ಮಾಜಿ ಉಪ ಮೇಯರ್ ಮತ್ತು ಇಂದೋರ್‌ನವರಾದ ರಾಜೇಶ್ ಅಗರ್ವಾಲ್ ವಿರುದ್ಧ ಸ್ಪರ್ಧಿಸಿದರು. ಶಿವಾನಿ ರಾಜಾ ಲೀಸೆಸ್ಟರ್ ಪೂರ್ವದಿಂದ ಮೊದಲ ಬಾರಿಗೆ ಸಂಸದ ಸ್ಥಾನಕ್ಕೆ ಸ್ಪರ್ಧಿಸಿ ಗೆಲುವು ಸಾಧಿಸಿದ್ದಾರೆ.

ತಮ್ಮ ಪ್ರಚಾರದ ಸಮಯದಲ್ಲಿ ಬ್ರಿಟಿಷ್ ಭಾರತೀಯ ಮತದಾರರನ್ನು ಸಕ್ರಿಯವಾಗಿ ತೊಡಗಿಸಿಕೊಂಡಿದ್ದ ಶಿವಾನಿ ಭಾರತದಲ್ಲಿರುವ ಬ್ರಿಟಿಷ್ ಮತದಾರರನ್ನು ವಿಶೇಷವಾಗಿ ದಿಯು ಮತ್ತು ಗುಜರಾತ್ನಿಂದ ಆನ್ಲೈನ್ ಮತದಾನದಲ್ಲಿ ಭಾಗವಹಿಸುವಂತೆ ಒತ್ತಾಯಿಸಿದ್ದರು.

ಶಿವಾನಿ ರಾಜಾ 14,526 ಮತಗಳನ್ನು ಪಡೆಯುವ ಮೂಲಕ ವಿಜಯ ಶಾಲಿಯಾಗಿದ್ದಾರೆ. ಲೇಬರ್ ಪಕ್ಷದ ರಾಜೇಶ್ ಅಗರವಾಲ್ 10,100 ಮತ್ತು ಲಿಬರಲ್ ಡೆಮಾಕ್ರಾಟ್ನ ಜುಫರ್ ಹಕ್ 6,329 ಮತಗಳೊಂದಿಗೆ ಮೂರನೇ ಸ್ಥಾನದಲ್ಲಿದ್ದಾರೆ. ಲೀಸೆಸ್ಟರ್ ಪೂರ್ವದ ಇಬ್ಬರು ಮಾಜಿ ಸಂಸದರಾದ ಕ್ಲೌಡಿಯಾ ವೆಬ್ ಮತ್ತು ಕೀತ್ ವಾಜ್ ಕ್ರಮವಾಗಿ ನಾಲ್ಕು ಮತ್ತು ಐದನೇ ಸ್ಥಾನ ಪಡೆದರು. ವಾಜ್ ಒನ್ ಲೀಸೆಸ್ಟರ್ ಪಕ್ಷವನ್ನು ಪ್ರತಿನಿಧಿಸಿ 3681 ಮತಗಳನ್ನು ಪಡೆದರೆ, ಕ್ಲೌಡಿಯಾ ವೆಬ್ಬೆ 5532 ಮತಗಳನ್ನು ಪಡೆಯುವ ಮೂಲಕ ಸ್ವತಂತ್ರವಾಗಿ ಸ್ಪರ್ಧಿಸಿದರು. ಇಲ್ಲಿ ಶೇ.61ರಷ್ಟು ಮತದಾನವಾಗಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸದ್ದು ಮಾಡುತ್ತಿದೆ 'ತೂಫಾನ್' ಸಿನಿಮಾದ ಫಸ್ಟ್ ಗ್ಲಿಂಪ್ಸ್



'ತೂಫಾನ್' ಕನ್ನಡ ಮತ್ತು ಹಿಂದಿ ಚಿತ್ರದ ಫಸ್ಟ್ ಗ್ಲಿಂಪ್ಸ್ ಬಿಡುಗಡೆಯಾಗಿದ್ದು, ಅಭಿಮಾನಿಗಳಿಂದ ಪ್ರಶಂಸೆ ವ್ಯಕ್ತವಾಗಿದೆ. ಕಲಾವಿದರ ಸಂಘದಲ್ಲಿ ತುಣುಕುಗಳ ಬಿಡುಗಡೆ ಸಮಾರಂಭವು ಅದ್ದೂರಿಯಾಗಿ ನಡೆಯಿತು. ಎಸ್.ಆರ್.ಮೂವೀಸ್ ಲಾಂಛನದಲ್ಲಿ ಬೆಳಗಾವಿ ಮೂಲದ ಕನ್ನಡ ಅಭಿಮಾನಿ ಷರೀಫ ಬೇಗಂ ನಡಾಫ್ ಬಂಡವಾಳ ಹೂಡುತ್ತಿದ್ದಾರೆ. ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡುತ್ತಿರುವುದು ಆರ್.ಚಂದ್ರಕಾಂತ್. ಹೊಸ ಪ್ರತಿಭೆ ರೋಶನ್ ಕಥೆ ಬರೆದು ನಾಯಕನಾಗಿ ಅಭಿನಯಿಸುತ್ತಿದ್ದಾರೆ. ಚಾಲೆಂಜಿಂಗ್ ಸ್ಟಾರ್ ದರ್ಶನ್ ಪರ ವಕೀಲ ನಾರಾಯಣಸ್ವಾಮಿ ಮತ್ತು ಮಿಲಿಟರಿ ನಿವೃತ್ತ ಅಧಿಕಾರಿಗಳು ಆಗಮಿಸಿ ತಂಡದ ಕೆಲಸವನ್ನು ಶ್ಲಾಘಿಸಿದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಾಹಿತಿ ಕವಿರಾಜ್, ತಮ್ಮ ಶಿಷ್ಯ ಆರ್.ಚಂದ್ರಕಾಂತ್ ನಿರ್ದೇಶನ ಮಾಡಿರುವುದು ಸಂತಸ ತಂದಿದೆ. ಲೈಟಿಂಗ್, ಮೇಕಿಂಗ್ ಎಲ್ಲವನ್ನು ದೊಡ್ಡ ಪರದೆ ಮೇಲೆ ನೋಡುವುದೇ ಚೆಂದ. ಬೇರೆ ಲೋಕ ಸೃಷ್ಟಿಸುವಂತ ಮಾತು ಕೇಳಿ ಬರುತ್ತಿದೆ. ಅದೇ ರೀತಿ ಇದು ಆಗಲಿ. ನಿರ್ದೇಶಕರಿಗೆ ದೊಡ್ಡ ಮಟ್ಟದ ಯಶಸ್ಸು ಸಿಗಲೆಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಆರ್. ಚಂದ್ರಕಾಂತ್, ಸಿನಿಮಾವು ನನ್ನದು ಅನ್ನುವುದಕ್ಕಿಂತ ರೋಷನ್ ಕನಸು ಎಂದು ಹೇಳಬೇಕು. ಅವರು ಕಥೆ ಹೇಳಿ ನಾನೇ ನಿರ್ದೇಶನ ಮಾಡಬೇಕೆಂದು ಕೋರಿಕೊಂಡರು. 1994ರಲ್ಲಿ ಮಗ ತಂದೆಗೋಸ್ಕರ ಸೇಡು ತೀರಿಸಿಕೊಳ್ಳುವ ಕಥೆ ಹೊಂದಿದೆ. ಶೇಕಡ 50ರಷ್ಟು ಚಿತ್ರೀಕರಣ ಮುಗಿದಿದೆ. ನಿರ್ಮಾಪಕರ ಒತ್ತಾಯದ ಮೇರೆಗೆ ಗ್ಲಿಂಪ್ಸ್ ತೋರಿಸಲಾಗಿದೆ. ಇದು ಟೀಸರ್, ಟ್ರೈಲರ್ ಅಲ್ಲ. ಇದೊಂದು ಪ್ಯಾನ್ ಇಂಡಿಯಾ ಸಿನಿಮಾದ 'ತೂಫಾನ್' ಸ್ಪಾರ್ಕ್ ಎನ್ನಬಹುದು. ನಮ್ಮ ಚಿತ್ರ ಹೇಗೆ ಬರುತ್ತಿದೆ, ಯಾವ ತರಹದಲ್ಲಿ ಇದೆ ಎಂಬುದನ್ನು ತೋರಿಸಲು ಇದನ್ನು ಸಿದ್ಧಪಡಿಸಲಾಗಿದೆ. ಹಿಂದೆ 'ಭೈರ್ಯ-07' ಹೆಸರು ಇತ್ತು. ಭೈರ್ಯ ನಾಯಕನ ಹೆಸರು ಆಗಿದ್ದು, ಬೇರೆ ತಿರುವು ಇರಲಿ ಅಂತ 'ತೂಫಾನ್' ಟೈಟಲ್ ಇಡಲಾಗಿದೆ. ಮುಖ್ಯ ಖಳನಾಯಕನಾಗಿ ಭೀಷ್ಮ ರಾಮಯ್ಯ ಉಳಿದಂತೆ ರಂಗಾಯಣ ರಘು, ಅಶ್ವಿನ್ ಹಾಸನ್, ಸೂರ್ಯಪ್ರವೀಣ್, ಅಯ್ಯಪ್ಪ ಶರ್ಮ, ಬಿ.ಸುರೇಶ್, ಉಗ್ರಂ ರವಿ ರೋಲ್‌ನ್ನು ಗೌಪ್ಯವಾಗಿಡಲಾಗಿದೆ. ಮುಂದೆ ಎಲ್ಲವನ್ನು ತಿಳಿಸುತ್ತೇನೆಂದು ಹೇಳಿದರು.

ನಾಯಕ ರೋಶನ್ ಮಾತನಾಡಿ, ಅದಕ್ಕೂ ಇದಕ್ಕೂ ಸಂಬಂಧವಿಲ್ಲ. ಕನ್ನಡ ಸಿನಿಮಾಗಳನ್ನು ನೋಡಲು ಜನರು ಚಿತ್ರಮಂದಿರಕ್ಕೆ ಬರುತ್ತಿಲ್ಲವೆಂಬ ಆಪಾದನೆ ಇದೆ. ಪ್ರತಿಭೆ ಇರುವ ಇಂತಹ ನಿರ್ದೇಶಕರಿಗೆ ಅವಕಾಶ ಕೊಡಬೇಕು. ನಾನು ಯಶ್ ಗರಡಿಯಲ್ಲಿ ಪಳಗಿದವನು. ಅವರು ಸಿನಿಮಾದ ತುಣುಕುಗಳನ್ನು ನೋಡಿಲ್ಲ. ಖಂಡಿತವಾಗಿಯೂ ಅವರಿಗೆ ತೋರಿಸುತ್ತೇನೆ. ಸಿನಿಮಾದ ಒನ್ ಲೈನ್ ಕಥೆ ನನ್ನದಾಗಿದ್ರೂ, ಅದಕ್ಕೆ ಸುಂದರವಾದ ಆಕಾರ ಕೊಡುತ್ತಿರುವುದು ನಿರ್ದೇಶಕರು ಎಂದು ಮಾತನಾಡಿದ್ದಾರೆ. ಮುಗ್ಧ ಹುಡುಗಿ, ಯಾರಿಗೂ ಹೆದರದ ಹಾಗೂ ಮಹಾರಾಜನ ಮಗಳು ಯುವರಾಣಿ ಹೀಗೆ ಮೂರು ಶೇಡ್‌ಗಳಲ್ಲಿ ಕಾಣಿಸಿಕೊಳ್ಳುತ್ತಿದ್ದೇನೆಂದು ನಾಯಕಿ ಅನುಷಾ ರೈ ಪಾತ್ರದ ಕುರಿತು ಹಂಚಿಕೊಂಡರು.

# ಬಬನ್: ಇದು ಕನ್ನಡದ ಮತ್ತೊಂದು ಪ್ಯಾನ್ ಇಂಡಿಯಾ ಚಿತ್ರ

ಕೆಜಿಎಫ್, ಕಾಂತಾರ ಚಿತ್ರಗಳ ಯಶಸ್ಸಿನ ನಂತರ ಪ್ಯಾನ್ ಇಂಡಿಯಾ ಸಿನಿಮಾ ನಿರ್ಮಾಣದತ್ತ ಬಹುತೇಕ ನಿರ್ಮಾಪಕರು ಒಲವು ತೋರುತ್ತಿದ್ದಾರೆ. ಅಂಥದ್ದೇ ಹೊಸ ಚಿತ್ರವೊಂದು ಇತ್ತೀಚೆಗೆ ಸೆಟ್ಟೇರಿದೆ. ಅದರ ಶೀರ್ಷಿಕೆ ಬಬನ್. ಚಿತ್ರದಲ್ಲಿ ಇದು ನಾಯಕನ ಹೆಸರು. ನೈಟ್ ಹುಡ್ ಪ್ರೊಡಕ್ಷನ್ಸ್ ಅಡಿ ಈ ಚಿತ್ರವನ್ನು ಮಾಲಾ ರಮೇಶ್ ಅವರು ಬಿಗ್ ಬಜೆಟ್ ನಲ್ಲಿ ನಿರ್ಮಿಸುತ್ತಿದ್ದಾರೆ.

ನಾಗರಭಾವಿಯ ಶ್ರೀ ವೆಂಕಟೇಶ್ವರ ವಿನಾಯಕ ದೇವಸ್ಥಾನದಲ್ಲಿ ಈ ಚಿತ್ರದ ಮುಹೂರ್ತ ಸಮಾರಂಭ ನೆರವೇರಿದ್ದು, ಆಷಾಢ ಕಳೆದ ನಂತರ ಆಗಸ್ಟ್ ನಲ್ಲಿ ಚಿತ್ರದ ಚಿತ್ರೀಕರಣ ಶುರುವಾಗಲಿದೆ.








ಕನ್ನಡ, ತೆಲುಗು ತಮಿಳು ಸೇರಿದಂತೆ 5 ಭಾಷೆಗಳಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರಕ್ಕೆ ಕುಶಾಲ್ ರಾಘವೇಂದ್ರ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಜೊತೆಗೆ ಚಿತ್ರದ ನಾಯಕನಾಗೂ ಕಾಣಿಸಿಕೊಳ್ಳುತ್ತಿದ್ದಾರೆ. ಚೆನ್ನೈನ ಇಂಡಿಯನ್ ಸ್ಕೂಲ್ ಆಫ್ ಡ್ರಾಮಾದಲ್ಲಿ ಅಭಿನಯ, ನಿರ್ದೇಶನ ಪಾಠ ಕಲಿತ ಕುಶಾಲ್, ಗಂಗೋತ್ರಿ, ಸಾಗುತ ದೂರ ಸೇರಿ ಹಲವಾರು ಕನ್ನಡ, ಹಿಂದಿ ಸೀರಿಯಲ್ ಗಳಲ್ಲಿ ಹಾಗೂ ಸಿನಿಮಾಗಳಲ್ಲೂ ಸಹ ಬಣ್ಣ ಹಚ್ಚಿದ್ದಾರೆ. ಇವರ ನಿರ್ದೇಶನದ ತಮಿಳು ಚಿತ್ರವಿನ್ನೂ ರಿಲೀಸಾಗಬೇಕಿದೆ. ತಮ್ಮ ಎರಡನೇ ಪ್ರಯತ್ನದಲ್ಲೇ ಪ್ಯಾನ್ ಇಂಡಿಯಾ ಬಬನ್ ಚಿತ್ರಕ್ಕೆ ಆ್ಯಕ್ಷನ್ ಕಟ್ ಹೇಳುತ್ತಿದ್ದಾರೆ.

ಇನ್ನು ಈ ಚಿತ್ರದ ನಾಯಕಿಯಾಗಿ ರಾಧಾ ಭಗವತಿ ಕಾಣಿಸಿಕೊಳ್ಳುತ್ತಿದ್ದು, ಇವರೂ ಸಹ ರಾಮಾಚಾರಿ, ಅಮೃತಧಾರೆ ಸೀರಿಯಲ್ ಅಲ್ಲದೆ ವಸಂತ ಕಾಲದ ಹೂಗಳು ಚಿತ್ರದಲ್ಲಿ ನಟಿಸಿದ್ದಾರೆ. ಬಹುಭಾಷೆಗಳಲ್ಲಿ ತಯಾರಾಗುತ್ತಿರುವ ಬಬನ್ ಚಿತ್ರಕ್ಕೆ ವೀರೇಶ್ ಎನ್.ಟಿ.ಎ. ಅವರ ಕ್ಯಾಮೆರಾವರ್ಕ್, ಶಾಜಹಾನ್ ಅವರ ಸಂಗೀತ ಸಂಯೋಜನೆ ಹಾಗೂ ಚಂದನ್ ಅವರ ಸಂಕಲನವಿದೆ.

# 'ಪುಷ್ಪ 2' ಹಾಡಿಗೆ ಸೊಂಟ ಬಳುಕಿಸಿದ ಆಶಿಕಾ ರಂಗನಾಥ್



ಬಹುನಿರೀಕ್ಷಿತ 'ಪುಷ್ಪ 2' ಸಿನಿಮಾದ ಹಾಡುಗಳು ಸಖತ್ ಸದ್ದು ಮಾಡುತ್ತಿವೆ. ಅದರಲ್ಲೂ ಇತ್ತೀಚೆಗೆ ರಿಲೀಸ್ ಆದ ಸೂಸೇನೆ ಎಂಬ ಹಾಡಿಗೆ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ಈ ಹಾಡಿಗೆ ನಟಿ ಆಶಿಕಾ ರಂಗನಾಥ್ ಕೂಡ ಹೆಜ್ಜೆ ಹಾಕಿದ್ದಾರೆ.

ಅಲ್ಲು ಅರ್ಜುನ್ ಮತ್ತು ರಶ್ಮಿಕಾ ಮಂದಣ್ಣ ನಟನೆಯ ಪುಷ್ಪ 2 ಸಿನಿಮಾ ಸೂಸೇನೆ ಸಾಂಗ್‌ಗೆ ಈಗಾಗಲೇ ಸಾಕಷ್ಟು ಜನ ರೀಲ್ಸ್ ಮಾಡುವ ಮೂಲಕ ಮೆಚ್ಚುಗೆ ಸೂಚಿಸಿದ್ದಾರೆ. ಇದರ ನಡುವೆ ಆಶಿಕಾ ಕೂಡ ಮಸ್ತ್ ಆಗಿ ಡ್ಯಾನ್ಸ್ ಮಾಡಿದ್ದಾರೆ. ಸೊಂಟ ಬಳುಕಿಸಿದ ಆಶಿಕಾಗೆ ಬಗೆ ಬಗೆಯ ಕಾಮೆಂಟ್ಸ್ ಹರಿದು ಬರುತ್ತಿವೆ.

ಅಂದಹಾಗೆ, ನಟಿ ಆಶಿಕಾ ಕೂಡ ಕನ್ನಡದ ಜೊತೆ ತೆಲುಗು, ತಮಿಳು ಸಿನಿಮಾಗಳಲ್ಲಿ ನಟಿಸುತ್ತಿದ್ದಾರೆ. ಅವರಿಗೂ ಉತ್ತಮ ಅವಕಾಶಗಳು ಅರಸಿ ಬರುತ್ತಿವೆ.



# ಇಂದು ಭಾರತ-ಝಿಂಬಾಬ್ವೆ ಮೊದಲ ಟಿ20 ಪಂದ್ಯ

ಭಾರತ ಮತ್ತು ಝಿಂಬಾಬ್ವೆ ನಡುವಣ ಟಿ20 ಸರಣಿಯು ಇಂದಿನಿಂದ ಶುರುವಾಗಲಿದೆ. ಹರಾರೆಯ ಸ್ಪೋರ್ಟ್ಸ್ ಕ್ಲಬ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯವು ಭಾರತೀಯ ಕಾಲಮಾನ ಸಂಜೆ 4.30 ರಿಂದ ಶುರುವಾಗಲಿದೆ. ಐದು ಪಂದ್ಯಗಳ ಈ ಸರಣಿಯಲ್ಲಿ ಟೀಮ್ ಇಂಡಿಯಾವನ್ನು ಯುವ ಆಟಗಾರ ಶುಭ್‌ಮನ್ ಗಿಲ್ ಮುನ್ನಡೆಸಲಿರುವುದು ವಿಶೇಷ.

**ಹಿರಿಯ ಆಟಗಾರರಿಗೆ ವಿಶ್ರಾಂತಿ:** ಟಿ20 ವಿಶ್ವಕಪ್ ತಂಡದಲ್ಲಿದ್ದ ಬಹುತೇಕ ಆಟಗಾರರಿಗೆ ವಿಶ್ರಾಂತಿ ನೀಡಲಾಗಿದ್ದು, ಹೀಗಾಗಿ ಝಿಂಬಾಬ್ವೆ ವಿರುದ್ಧದ ಸರಣಿಗೆ ಯಂಗ್ ಇಂಡಿಯಾವನ್ನು ಆಯ್ಕೆ ಮಾಡಲಾಗಿದೆ. ಅದರಂತೆ ಇದೇ ಮೊದಲ ಬಾರಿಗೆ ರಿಯಾನ್ ಪರಾಗ್, ಅಭಿಷೇಕ್ ಶರ್ಮಾ, ಹರ್ಷಿತ್ ರಾಣಾ ಭಾರತ ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

ಇನ್ನು ಟಿ20 ವಿಶ್ವಕಪ್ ತಂಡದಲ್ಲಿ ಮೀಸಲು ಆಟಗಾರರಾಗಿ ಕಾಣಿಸಿಕೊಂಡಿದ್ದ ರಿಂಕು ಸಿಂಗ್ ಹಾಗೂ ಖಲೀಲ್ ಅಹ್ಮದ್ ಈ ಸರಣಿಯಲ್ಲಿ ಕಣಕ್ಕಿಳಿಯುತ್ತಿದ್ದಾರೆ. ಹಾಗೆಯೇ ಮೂರನೇ ಪಂದ್ಯದ ವೇಳೆ ಸಂಜು ಸ್ಯಾಮ್ಸನ್, ಶಿವಂ ದುಬೆ ಹಾಗೂ ಯಶಸ್ವಿ ಜೈಸ್ವಾಲ್ ಭಾರತ ತಂಡವನ್ನು ಕೂಡಿಕೊಳ್ಳಲಿದ್ದಾರೆ.

ಇದಕ್ಕೂ ಮುನ್ನ ಈ ಮೂವರು ಸಂಪೂರ್ಣ ಸರಣಿಗೆ ಆಯ್ಕೆಯಾಗಿದ್ದರು. ಆದರೆ ಬಾರ್ಬಡೋಸ್‌ನಿಂದ ಭಾರತ ತಂಡ ತವರಿಗೆ ಮರಳು ವಿಳಂಬವಾಗಿದ್ದರಿಂದ ಈ ಮೂವರ ಬದಲಿಗೆ ಮೊದಲೆರಡು ಪಂದ್ಯಗಳಿಗೆ ಹರ್ಷಿತ್ ರಾಣಾ, ಸಾಯಿ ಸುದರ್ಶನ್ ಹಾಗೂ ಜಿತೇಶ್ ಶರ್ಮಾ ಅವರನ್ನು ಆಯ್ಕೆ ಮಾಡಲಾಗಿದೆ.







# ಕಳಪೆ ಫೀಲ್ಡಿಂಗ್, ಬೌಲಿಂಗ್‌ಗೆ ಸೋಲಿನ ಬೆಲೆ ತೆತ್ತ ಭಾರತ..!

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೂರು ಪಂದ್ಯಗಳ ಸರಣಿಯ ಮೊದಲ ಟಿ20 ಪಂದ್ಯದಲ್ಲಿ ದಕ್ಷಿಣ ಆಫ್ರಿಕಾದ ಮಹಿಳಾ ತಂಡ, ಭಾರತ ವನಿತಾ ಪಡೆಯನ್ನು 12 ರನ್‌ಗಳಿಂದ ಮಣಿಸುವ ಮೂಲಕ ಟಿ20 ಸರಣಿಯಲ್ಲಿ 1-0 ಅಂತರದ ಮುನ್ನಡೆ ಸಾಧಿಸಿದೆ. ಇದರೊಂದಿಗೆ ಭಾರತ ಪ್ರವಾಸದಲ್ಲಿ ದಕ್ಷಿಣ ಆಫ್ರಿಕಾ ತಂಡ ಮೊದಲ ಬಾರಿಗೆ ಗೆಲುವಿನ ಖಾತೆ ತೆರೆದಿದೆ. ಟಿ20 ಸರಣಿಗೂ ಮುನ್ನ ನಡೆದಿದ್ದ ಮೂರು ಪಂದ್ಯಗಳ ಏಕದಿನ ಸರಣಿ ಹಾಗೂ ಏಕೈಕ ಟೆಸ್ಟ್ ಪಂದ್ಯವನ್ನು ಭಾರತ ಕ್ಲೀನ್ ಸ್ವೀಪ್ ಮಾಡಿತ್ತು. ಟಿ20 ಸರಣಿಯಲ್ಲೂ ಭಾರತಕ್ಕೆ ಗೆಲುವಿನ ಶುಭಾರಂಭ ಮಾಡುವ ಅವಕಾಶವಿತ್ತು. ಆದರೆ ಕಳಪೆ ಫೀಲ್ಡಿಂಗ್ ಮತ್ತು ಬೌಲಿಂಗ್‌ನಿಂದಾಗಿ ತಂಡ ಸೋಲಿನ ಬೆಲೆ ತೆರಬೇಕಾಯಿತು.



**ಭಾರತದ ಕಳಪೆ ಫೀಲ್ಡಿಂಗ್:** ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣ ಆಫ್ರಿಕಾ ತಂಡಕ್ಕೆ ಉತ್ತಮ ಆರಂಭ ಲಭಿಸಿತು. ಆರಂಭಿಕರಾದ ನಾಯಕಿ ಲಾರಾ ವೊಲ್ವಾರ್ಡ್ಟ್ ಹಾಗೂ ತಜ್ಮಿನ್ ಬ್ರಿಟ್ಸ್ ಮೊದಲ ವಿಕೆಟ್‌ಗೆ 50 ರನ್‌ಗಳ ಜೊತೆಯಾಟ ನೀಡಿದರು. ಈ ಜೊತೆಯಾಟಕ್ಕೆ ಶ್ರೇಯಾಂಕ ಕೈಚೆಲ್ಲಿದ ಸುಲಭ ಕ್ಯಾಚ್ ಕೂಡ ಕಾರಣವಾಯಿತು. ವಾಸ್ತವವಾಗಿ 3ನೇ ಓವರ್‌ನಲ್ಲಿ ತಜ್ಮಿನ್ ಬ್ರಿಟ್ಸ್ ಸುಲಭ ಕ್ಯಾಚ್ ನೀಡಿದ್ದರು. ಆದರೆ ಬ್ಯಾಕ್ ವರ್ಡ್ ಪಾಯಿಂಟ್‌ನಲ್ಲಿ ನಿಂತಿದ್ದ ಶ್ರೇಯಾಂಕ ಸುಲಭ ಕ್ಯಾಚ್ ಚೆಲ್ಲಿದರು. ಜೀವದಾನದ ಲಾಭ ಪಡೆದ ತಜ್ಮಿನ್ ಬ್ರಿಟ್ಸ್ ಮ್ಯಾಚ್ ವಿನ್ನಿಂಗ್ ಇನ್ನಿಂಗ್ಸ್ ಆಡಿದರು. 33 ರನ್‌ಗಳಿಗೆ ನಾಯಕಿ ಲಾರಾ ವಿಕೆಟ್ ಒಪ್ಪಿಸಿದರೆ, ನಂತರ ಬಂದ ಮರಿಜಾನ್ನೆ ಕಪ್ ಕೂಡ 57 ರನ್‌ಗಳ ಸ್ಫೋಟಕ ಇನ್ನಿಂಗ್ಸ್ ಆಡಿದರು. 10ನೇ ಓವರ್‌ನಲ್ಲಿ ಸ್ಮೃತಿ ಕೈಚೆಲ್ಲಿದ ಕ್ಯಾಚ್ ಕೂಡ ಮರಿಜಾನ್ನೆ ಕಪ್ ಅರ್ಧಶತಕ ಬಾರಿಸಲು ಸಹಾಯಕವಾಯಿತು.

**81 ರನ್ ಚಚ್ಚಿದ ತಜ್ಮಿನ್ ಬ್ರಿಟ್ಸ್:** ಇದು ಸಾಲದೆಂಬಂತೆ 16 ನೇ ಓವರ್‌ನಲ್ಲಿ ತಜ್ಮಿನ್ ಬ್ರಿಟ್ಸ್ ಎರಡನೇ ಬಾರಿಗೆ ನೀಡಿದ ಸುಲಭ ಕ್ಯಾಚ್ ಅನ್ನು ವಿಕೆಟ್ ಕೀಪರ್ ರಿಚಾ ಘೋಷ್ ಕೈಚೆಲ್ಲಿದರು. ಇದು ತಂಡಕ್ಕೆ ತುಂಬಾ ದುಬಾರಿಯಾಯಿತು. ಕೊನೆಯಲ್ಲಿ ಉಗ್ರರೂಪ ತಾಳಿದ ತಜ್ಮಿನ್ ಬ್ರಿಟ್ಸ್ 56 ಎಸೆತಗಳಲ್ಲಿ 10 ಬೌಂಡರಿ ಹಾಗೂ 3 ಸಿಕ್ಸರ್ ಸಹಿತ 81 ರನ್‌ಗಳ ಸ್ಫೋಟಕ ಇನ್ನಿಂಗ್ಸ್ ಆಡಿದರು. ಹೀಗಾಗಿ ದಕ್ಷಿಣ ಆಫ್ರಿಕಾ ತಂಡ 20 ಓವರ್‌ಗಳಲ್ಲಿ ಬರೋಬ್ಬರಿ 189 ರನ್ ಕಲೆಹಾಕಿತು.

**ಭಾರತಕ್ಕೂ ಉತ್ತಮ ಆರಂಭ:** ಈ ಗುರಿ ಬೆನ್ನಟ್ಟಿದ ಭಾರತಕ್ಕೂ ಉತ್ತಮ ಆರಂಭ ಸಿಕ್ಕಿತು.ಸ್ಮೃತಿ ಮಂಧಾನ ಹಾಗೂ ಶಫಾಲಿ ವರ್ಮಾ ತಮ್ಮ ಸ್ಫೋಟಕ ಬ್ಯಾಟಿಂಗ್ ಮೂಲಕ ತಂಡಕ್ಕೆ ವೇಗದ ಆರಂಭ ನೀಡಿದರು. ಆದರೆ ಈ ಜೊತೆಯಾಟ ಶಫಾಲಿ ವಿಕೆಟ್ ಪತನದೊಂದಿಗೆ ಅಂತ್ಯಗೊಂಡಿತು. ಆದರೂ ಈ ಇಬ್ಬರು ಮೊದಲ ವಿಕೆಟ್‌ಗೆ 56 ರನ್‌ಗಳ ಜೊತೆಯಾಟ ನೀಡಿದರು. ಮೂರನೇ ಕ್ರಮಾಂಕದಲ್ಲಿ ಬಂದ ಹೇಮಲತಾ 14 ರನ್‌ಗಳಿಗೆ ತಮ್ಮ ಇನ್ನಿಂಗ್ಸ್ ಮುಗಿಸಿದಲ್ಲದೆ, ಹೆಚ್ಚು ಡಾಟ್ ಬಾಲ್‌ಗಳನ್ನು ಆಡುವ ಮೂಲಕ ಸ್ಮೃತಿಗೆ ಒತ್ತಡ ಹೆಚ್ಚಿಸಿದರು. ಹೀಗಾಗಿ ಹೊಡೆಯಲೇಬೇಕಾದ ಅನಿವಾರ್ಯತೆಯಿಂದ ಸಿಕ್ಸರ್ ಬಾರಿಸುವ ಯತ್ನದಲ್ಲಿ ಸ್ಮೃತಿ ಸ್ಟಂಪ್ ಔಟ್ ಆದರು. ಈ ವೇಳೆಗೆ ಸ್ಮೃತಿ 30 ಎಸೆತಗಳಲ್ಲಿ 7 ಬೌಂಡರಿ ಹಾಗೂ 2 ಸಿಕ್ಸರ್ ಸಹಾಯದಿಂದ 47 ರನ್‌ಗಳ ಕಾಣಿಕೆ ನೀಡಿದರು.

**ಗೆಲುವಿಗಾಗಿ ಹೋರಾಟ:** ಸ್ಮೃತಿ ವಿಕೆಟ್ ಪತನದ ನಂತರ ಜತೆಯಾದ ನಾಯಕಿ ಹರ್ಮನ್ ಪ್ರೀತ್ ಕೌರ್ ಹಾಗೂ ಜಮೀಮಾ ಕೊನೆಯವರೆಗೂ ಗೆಲುವಿಗಾಗಿ ಹೋರಾಡಿದರು. ಆದರೆ ಆಫ್ರಿಕಾ ನೀಡಿದ ಬೃಹತ್ ಮೊತ್ತವನ್ನು ಈ ಇಬ್ಬರಿಗೆ ಸಾಧಿಸಲು ಸಾಧ್ಯವಾಗಲಿಲ್ಲ. ಆದಾಗ್ಯೂ ಹೋರಾಟದ ಇನ್ನಿಂಗ್ಸ್ ಆಡಿದ ಈ ಇಬ್ಬರು 90 ರನ್‌ಗಳ ಜೊತೆಯಾಟವನ್ನಾಡಿದರು. ಈ ವೇಳೆ ಜಮೀಮಾ 30 ಎಸೆತಗಳಲ್ಲಿ 7 ಬೌಂಡರಿ ಹಾಗೂ 1 ಸಿಕ್ಸರ್ ಸಹಾಯದಿಂದ 53 ರನ್ ಬಾರಿಸಿದರೆ, ಹರ್ಮನ್‌ಪ್ರೀತ್ 29 ಎಸೆತಗಳಲ್ಲಿ 35 ರನ್ ಬಾರಿಸಿ ಅಜೇಯರಾಗಿ ಉಳಿದರು.

# ಸಿಎಂ ಪಾಳೆಯದ ಸಚಿವರಿಗೆ ಹೈಕಮಾಂಡ್ ಮಟ್ಟದಲ್ಲಿ ಟಕ್ಕರ್ ಕೊಟ್ಟ ಲಕ್ಷ್ಮೀ ಹೆಬ್ಬಾಳ್ಕರ್!

**ಬೆಂಗಳೂರು:** ಹೆಚ್ಚುವರಿ ಡಿಸಿಎಂ ಹುದ್ದೆ ಸೃಷ್ಟಿ ಕೂಗು, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಒತ್ತಡ ಇತ್ಯಾದಿ ವಿಚಾರಗಳಿಂದ ಕಾಂಗ್ರೆಸ್ ಒಳಬೇಗುದಿ ಹೆಚ್ಚಾಗುತ್ತಿರುವ ಬೆನ್ನಲ್ಲೇ ಆಂತರಿಕ ಸಂಘರ್ಷಕ್ಕೆ ಬ್ರೇಕ್ ಹಾಕಲು ಕಾಂಗ್ರೆಸ್ ಹೈಕಮಾಂಡ್ ಮುಂದಾಗಿದೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಸಹ ಬಹಿರಂಗ ಹೇಳಿಕೆಗಳನ್ನು ನೀಡದಂತೆ ಬೆಂಬಲಿಗರಿಗೆ ಸೂಚನೆ ನೀಡಿದ್ದರು. ನೋಟಿಸ್ ನೀಡುವ ಎಚ್ಚರಿಕೆನ್ನೂ ನೀಡಲಾಗಿತ್ತು. ಆದಾಗ್ಯೂ, ಕೆಲವು ನಾಯಕರು ಕಿಮ್ಮತ್ತೇ ನೀಡಿಲ್ಲ. ಈ ಮಧ್ಯೆ, ಸಿಎಂ ಸಿದ್ದರಾಮಯ್ಯ ಪಾಳೆಯದ ಸಚಿವರಿಗೆ ಹೈಕಮಾಂಡ್ ಮಟ್ಟದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಟಕ್ಕರ್ ಕೊಟ್ಟಿರುವುದು ತಿಳಿದುಬಂದಿದೆ.

ಹೆಚ್ಚುವರಿ ಡಿಸಿಎಂ, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವಿಚಾರದಲ್ಲಿ ಹೆಬ್ಬಾಳ್ಕರ್ ಟಕ್ಕರ್ ಕೊಟ್ಟಿದ್ದಾರೆ ಎನ್ನಲಾಗಿದೆ. ಸಿಎಂ ಆಗಿ ಸಿದ್ದರಾಮಯ್ಯ ಅವರೇ ಮುಂದುವರೆಯುತ್ತಾರೆ. ಎಲ್ಲಾ ಶಾಸಕರೂ ಸೇರಿ ಸಿದ್ದರಾಮಯ್ಯ ಅವರನ್ನ ಆಯ್ಕೆ ಮಾಡಿದ್ದಾರೆ ಎನ್ನುವ ವಾದಗಳಿಗೆ ಕೌಂಟರ್ ಎಂಬಂತೆ ಲಕ್ಷ್ಮೀ ಹೆಬ್ಬಾಳಕರ್ ಹೈಕಮಾಂಡ್ ಬಳಿ ಮನವಿ ಮಾಡಿದ್ದಾರೆ ಎನ್ನಲಾಗಿದೆ. ಹೈಕಮಾಂಡ್ ನಾಯಕರಾದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆಸಿ ವೇಣುಗೋಪಾಲ್‌ರನ್ನು ಲಕ್ಷ್ಮೀ ಹೆಬ್ಬಾಳಕರ್ ಭೇಟಿ ಮಾಡಿ ಬಂದಿದ್ದಾರೆ.

**ಹೈಕಮಾಂಡ್ ಬಳಿ ಹೆಬ್ಬಾಳ್ಕರ್ ಹೇಳಿದ್ದೇನು?:** ಸರ್ಕಾರದಲ್ಲಿ ಗೊಂದಲ ಸೃಷ್ಟಿಸುತ್ತಿರುವುದರ ಮೇಲೆ ಗಮನಹರಿಸಿ ಎಂದು ಹೈಕಮಾಂಡ್ ಅನ್ನು ಹೆಬ್ಬಾಳ್ಕರ್ ಒತ್ತಾಯಿಸಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಇಬ್ಬರೂ ನಮಗೆ ಮುಖ್ಯ. ಆದರೆ ಸರ್ಕಾರದಲ್ಲಿ ವಿನಾ ಕಾರಣ ಗೊಂದಲ ಸೃಷ್ಟಿ ಮಾಡಲಾಗುತ್ತಿದೆ. ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಇಬ್ಬರೂ ಕಾಂಗ್ರೆಸ್‌ನ ಪ್ರಭಾವಿ ನಾಯಕರು. ಒಬ್ಬರು ಮಾಸ್ ಲೀಡರ್ ಆದರೆ ಮತ್ತೊಬ್ಬರು ಸಂಘಟನಾ ಚತುರ. ಇಬ್ಬರೂ ಕೂಡ ಸರ್ಕಾರದಲ್ಲಿ ಸಮರ್ಥ ನಾಯಕರು ಎಂದು ಹೆಬ್ಬಾಳ್ಕರ್ ಹೇಳಿದ್ದಾರೆ.





ಕೆಲವರು ಗೊಂದಲ ಸೃಷ್ಟಿ ಮಾಡುವ ಕೆಲಸ ಮಾಡುತ್ತಿದ್ದಾರೆ. ಇಂತಹ ಗೊಂದಲಗಳು ಆಗದಂತೆ ಕಡಿವಾಣ ಹಾಕಿ ಎಂದು ಲಕ್ಷ್ಮೀ ಹೆಬ್ಬಾಳಕರ್ ಮನವಿ ಮಾಡಿದ್ದಾರೆ. ಈ ಮೂಲಕ ಸಿಎಂ ಪರವಾಗಿ ಬ್ಯಾಟಿಂಗ್ ಮಾಡುತ್ತಿರುವವರಿಗೆ ತಿರುಗೇಟು ನೀಡಿದ್ದಾರೆ ಎಂದು ವಿಶ್ಲೇಷಿಸಲಾಗುತ್ತಿದೆ.

ನಮಗೆ ಸಿಎಂ ಹಾಗೂ ಡಿಸಿಎಂ ಇಬ್ಬರೂ ಮುಖ್ಯ ಎನ್ನುವ ಮೂಲಕ ಇಬ್ಬರೂ ಸಮಾನರು ಎಂಬ ಅಭಿಪ್ರಾಯವನ್ನು ಲಕ್ಷ್ಮೀ ಹೆಬ್ಬಾಳಕರ್ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

## ಡಿ ಫ್ಯಾಕ್ಟರಿ ಬಂದ್ ಆಯ್ತು ಮುಡಾ ಫ್ಯಾಕ್ಟರಿ ಶುರುವಾಯ್ತು

# ಡಿಕೆಶಿ ಬುಡಕ್ಕೆ ತಂದಿಟ್ಟ ಕುಮಾರಸ್ವಾಮಿ

**ಮೈಸೂರು:** ಮುಖ್ಯಮಂತ್ರಿ ಖುರ್ಚಿ ಮೇಲೆ ಕಣ್ಣಿಟ್ಟವರಿಂದಲೇ ಮುಡಾ ಹಗರಣ ಬಯಲಿಗೆ ಬಂದಿದೆ ಎಂದು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ. ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಮಾತನಾಡಿದ ಅವರು, ಸಿಡಿ ಫ್ಯಾಕ್ಟರಿ ಈಗ ಬಂದ್ ಆಗಿದೆ. ಮುಡಾ ಫ್ಯಾಕ್ಟರಿ ಶುರುವಾಗಿದೆ. ಅವರ ಪಕ್ಷದ ಅಧ್ಯಕ್ಷರೇ ಮುಡಾ ಹಗರಣ ಹೊರತಂದಿದ್ದಾರೆ ಎಂದು ಪರೋಕ್ಷವಾಗಿ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಟೀಕೆ ಮಾಡಿದ್ದಾರೆ. ಇಷ್ಟು ದಿನ ಹೊರಗೆ ಬಾರದ ಹಗರಣ ಈಗ ಬಂದಿದ್ದು ಯಾಕೆ ಮತ್ತು ಹೇಗೆ? ಇದರ ಹಿಂದೆ ಸಿಎಂ ಕುರ್ಚಿ ಮೇಲೆ ಟವಲ್ ಹಾಕಿರುವವರ ಪಾತ್ರ ಇದೆ ಎಂದು ಅವರು ಟೀಕಿಸಿದ್ದಾರೆ.

**'ಕಾಂಗ್ರೆಸ್ ಕುಮ್ಮಕ್ಕಿನಿಂದಲೇ ಹಗರಣ ಬಯಲಿಗೆ':** ಬಿಜೆಪಿಯವರು ಹೋರಾಟ ಮಾಡುತ್ತಿದ್ದಾರೆ. ಆದರೆ ಹಗರಣ ಆಚೆ ಬರಲು ಕಾಂಗ್ರೆಸ್‌ನವರೇ ಒಳಗೆ ಕುಮ್ಮಕ್ಕು ಕೊಡುತ್ತಿದ್ದಾರೆ. ಈ ಬಗ್ಗೆ ನನಗೆ ಮಾಹಿತಿ ಇದೆ. ಸಿಎಂ ಸಿದ್ದರಾಮಯ್ಯ ಪತ್ನಿಗೆ ಆ ಜಾಗ ಹೇಗೆ ಬಂತು ಅಂತಲೂ ನನಗೆ ಗೊತ್ತಿದೆ. 62 ಕೋಟಿ ರೂ. ಪರಿಹಾರ ಕೇಳುವ ಸಿಎಂ ಸಿದ್ದರಾಮಯ್ಯ, ಭೂಮಿ ಕಳೆದುಕೊಂಡು ಬೀದಿಯಲ್ಲಿ ನಿಂತಿರುವ ರೈತರಿಗೂ ಪರಿಹಾರ ಕೊಡಿಸಲಿ ಎಂದು ಕುಮಾರಸ್ವಾಮಿ ಸವಾಲು ಹಾಕಿದರು.



ಕೇಂದ್ರ ಸಚಿವರಾದ ಬಳಿಕ ಮೊಲದ ಬಾರಿ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿದ ಕುಮಾರಸ್ವಾಮಿ ನಾಡದೇವತೆ ತಾಯಿ ಚಾಮುಂಡೇಶ್ವರಿ ದರ್ಶನ ಪಡೆದರು. ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿದರು.

ಇದೀಗ ಮಂಡ್ಯಕ್ಕೆ ತೆರಳುತ್ತಿರುವ ಕುಮಾರಸ್ವಾಮಿ ಜನತಾ ದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಅದಕ್ಕೂ ಮುನ್ನ ಮಂಡ್ಯದ ಕಾಳಿಕಾಂಬ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಲಿದ್ದಾರೆ. ನಂತರ ಗೆಲುವಿಗಾಗಿ ಕಟ್ಟಿದ್ದದ ಗಂಟನ್ನ ಬಿಚ್ಚಲಿದ್ದಾರೆ. ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಕುಮಾರಸ್ವಾಮಿ ಗೆಲವು ಸಾಧಿಸಲಿ ಎಂದು ಬಿಲ್ವ ಪತ್ರೆ ಮರಕ್ಕೆ ಹರಕೆ ಗಂಟು ಕಟ್ಟಲಾಗಿತ್ತು. ಇದೀಗ ಕುಮಾರಸ್ವಾಮಿ ಸಮ್ಮುಖದಲ್ಲಿ ಬಿಜೆಪಿ ಕಾರ್ಯಕರ್ತರು ಹರಕೆ ಗಂಟು ಬಿಚ್ಚಿಸಲಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com